23 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 23 | ಸಂಚಿಕೆ 332 | ನವದೆಹಲಿ | ಬೆಲೆ ₹10 | ಜೂನ್ 7 2026, ಭಾನುವಾರ

## ಒಳಪುಟಗಳಲ್ಲಿ

ಕೇಂದ್ರ ಸಚಿವ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ ಸಿಜೆಪಿ ಪ್ರತಿಭಟನೆ - ಪು.4

ಮರ ವಿಜ್ಞಾನ-ತಂತ್ರಜ್ಞಾನ ಸಂಸ್ಥೆ ಜತೆ ರಸ್ತೆಬದಿ ಮರಗಳ ವೈಜ್ಞಾನಿಕ ಪರೀಕ್ಷೆಗೆ ಯೋಜನೆ - ಪು.5

ಹತ್ತು ಸಾವಿರ ಲಾರಿಗಳನ್ನು ಹೊಂದಿರುವ ಎಆರ್‌ಟಿಒ ಕಚೇರಿ: ಹಲವು ಸೌಲಭ್ಯಗಳ ಕೊರತೆ - ಪು.6

ಕೈಗಾರಿಕಾ ಅಭಿವೃದ್ಧಿಗೆ ಒತ್ತು: ಎಫ್‌ಕೆಸಿಸಿಐ ಅಧ್ಯಕ್ಷರಿಗೆ ಮನವಿ ಸಲ್ಲಿಸಿದ ಬಳ್ಳಾರಿ ವಾಣಿಜ್ಯ, ಕೈಗಾರಿಕಾ ಸಂಸ್ಥೆ - ಪು.7

# ರಾಜ್ಯದ ಪ್ರಗತಿಗೆ ಅಡಿಪಾಯ ಹಾಕಿದ್ದೇ ದೇವರಾಜ ಅರಸು



## ಭೂಸುಧಾರಣಾ ಕಾಯ್ದೆ ದೇಶಕ್ಕೆ ಮಾದರಿ: ಸಿಎಂ. ಡಿ.ಕೆ. ಶಿವಕುಮಾರ್

**ಬೆಂಗಳೂರು, ಜೂ.6: ದೇವರಾಜ ಅರಸು ಅವರು ನಮ್ಮ ರಾಜ್ಯದ ಪ್ರಗತಿಗೆ ಅಡಿಪಾಯ ಹಾಕಿದ್ದಾರೆ. 100 ವರ್ಷವಾದರೂ ಸಾಧನೆಗಳ ಮೂಲಕ ಅವರು ಜೀವಂತವಾಗಿರುತ್ತಾರೆ ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು.**

ವಿಧಾನಸೌಧದಲ್ಲಿ ಹಿರಿಯ ಮುತ್ಸದ್ದಿ ದೇವರಾಜು ಅರಸು ಪುಣ್ಯಸ್ಮರಣೆ ಅಂಗವಾಗಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದ ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಅವರು, ದೇವರಾಜ ಅರಸು ನಮ್ಮನ್ನು ಅಗಲಿ 45 ವರ್ಷಗಳಾಗಿವೆ. ನಾನು ವಿದ್ಯಾರ್ಥಿ ನಾಯಕನಾಗಿದ್ದಾಗ ಅವರ ಭಾಷಣಗಳನ್ನು ಕೇಳಿದ್ದೇನೆ. ಅವರು ರಾಜೀನಾಮೆ ಕೊಟ್ಟಾಗ ಮಾಡಿದ ಕೊನೇ ಭಾಷಣ ನನ್ನ ಕಿವಿಯಲ್ಲಿ ಹಾಗೆ ಉಳಿದಿದೆ. ಅವರು ಯಾವ ಭಾವನೆಯೊಂದಿಗೆ ರಾಜಕಾರಣ, ಅಧಿಕಾರ ನಡೆಸಿದ್ದರು ಎಂದು ಅವರು ಹೇಳಿದ್ದರು. ಇಂದಿರಾ ಗಾಂಧಿ ಅವರ ಮಾರ್ಗದರ್ಶನದಲ್ಲಿ ಅರಸು ನಾಯಕತ್ವದಲ್ಲಿ 'ಉಳುವವನಿಗೆ ಭೂಮಿ ನೀಡಬೇಕು' ಎಂದು ತಂದ ಭೂ ಸುಧಾರಣಾ ಕಾಯ್ದೆ ದೇಶಕ್ಕೆ ಒಂದು ಮಾದರಿ. ಅದೊಂದು ಕ್ರಾಂತಿ. ಅರಸು ಅವರೊಬ್ಬ ಧೀಮಂತ ನಾಯಕ. ಅವರು ಎಲ್ಲಾ ಜನಾಂಗದವರನ್ನು ಬೆಳೆಸಿ, ಹಿಂದುಳಿದ ವರ್ಗಗಳ ನಾಯಕರ ಬಗ್ಗೆ ವಿಶೇಷ ಕಾಳಜಿ ಹೊಂದಿದ್ದರು. ಹಿಂದುಳಿದವರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಹಾಗೂ ರಾಜಕೀಯವಾಗಿ ಬೆಳೆಸಲು ಅವರು ಕ್ರಮ ಕೈಗೊಂಡರು. ಎಂದು ಸ್ಮರಿಸಿದರು.

ಅಂದಿನ ಕಾಲದಲ್ಲಿ ಎಲೆಕ್ಟ್ರಾನಿಕ್ ಸಿಟಿಗೆ ಅಡಿಪಾಯ ಹಾಕಿದ ಧೀಮಂತ ನಾಯಕ. ರೈತರು ಮಾತ್ರವಲ್ಲ ಎಲ್ಲ ಕ್ಷೇತ್ರದ ಅಭಿವೃದ್ಧಿಗೆ ಕಾರಣರಾಗಿದ್ದರು. ಅವರು ಕೊಡುಗೆಯನ್ನು ನಾವು ಉಳಿಸಿ ಬೆಳೆಸಿಕೊಂಡು ಹೋಗುತ್ತಿದ್ದೇವೆ. ನಾನು ಮುಖ್ಯಮಂತ್ರಿಯಾಗಿ ಅಧಿಕಾರ ತೆಗೆದುಕೊಂಡ ಬಳಿಕ ಎಲ್ಲಾ ನಾಯಕರಿಗೆ ನಮನ ಅರ್ಪಿಸಿದ್ದೆ, ಇಂದು ಅರಸು ಅವರನ್ನು ಸ್ಮರಿಸುತ್ತಿದ್ದೇವೆ. ಅವರ ಮಾರ್ಗದರ್ಶನದಲ್ಲಿ ನಾವೆಲ್ಲರೂ ಹೆಜ್ಜೆ ಹಾಕೋಣ ಎಂದು ಸಿಎಂ ಡಿಕೆಶಿ ತಿಳಿಸಿದರು.

### ರಾಜಕಾರಣ ಮಾಡದೆ, ಜನಹಿತಕ್ಕಾಗಿ ಕೆಲಸ ಮಾಡೋಣ

ರಾಜಕೀಯ ಘರ್ಷಣೆಯಲ್ಲಿ ತೊಡಗುವ ಬದಲು ಅಭಿವೃದ್ಧಿಗಾಗಿ ಎರಡೂ ಕಡೆಯವರು ಒಟ್ಟಾಗಿ ಕೆಲಸ ಮಾಡಬೇಕು ಎಂದು ಸಿಎಂ ಡಿ.ಕೆ.ಶಿವಕುಮಾರ್ ಕಿವಿಮಾತು ಹೇಳಿದರು. ಸರ್ಕಾರದ ಬಗ್ಗೆ ಹೆಚ್ಚುತ್ತಿರುವ ಸಾರ್ವಜನಿಕ ಅಸಮಾಧಾನದಿಂದಾಗಿ ಕರ್ನಾಟಕದಲ್ಲಿ ಕಾಂಗ್ರೆಸ್ ಮುಖ್ಯಮಂತ್ರಿಯನ್ನು ಬದಲಾಯಿಸ ಬೇಕಾಯಿತು ಎಂಬ ಪ್ರಧಾನಿ ಮೋದಿ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ನಡುವೆ ಸಹಕಾರದ ಅಗತ್ಯವನ್ನು ಒತ್ತಿ ಹೇಳಿದರು. ಅವರು ನನಗೆ ಶುಭ ಹಾರೈಸಿದ್ದಾರೆ, ಮತ್ತು ಅದಕ್ಕಾಗಿ ನಾನು ಅವರಿಗೆ ಧನ್ಯವಾದ ಹೇಳುತ್ತೇನೆ. ನಾನು ಹೋಗಿ ಅವರನ್ನು ಭೇಟಿಯಾಗುತ್ತೇನೆ. ನಾವು ರಾಜಕೀಯ ಮಾಡಬಾರದು ಮತ್ತು ಅವರು ಕೂಡ ರಾಜಕೀಯ ಮಾಡಬಾರದು. ಅಭಿವೃದ್ಧಿ ವಿಷಯಗಳಲ್ಲಿ ಪರಸ್ಪರ ಸಹಕರಿಸೋಣ ಎಂದು ತಿಳಿಸಿದರು. ರಾಜ್ಯದ ಹಿತಾಸಕ್ತಿ ಆದ್ಯತೆಯಾಗಿ ಉಳಿಯುತ್ತವೆ ಮತ್ತು ರಾಜ್ಯದ ಪ್ರಮುಖ ಅಭಿವೃದ್ಧಿ ಯೋಜನೆಗಳು ಮತ್ತು ಕಲ್ಯಾಣ ಉಪಕ್ರಮಗಳಿಗೆ ಕೇಂದ್ರದ ಬೆಂಬಲ ಪಡೆಯುವುದಾಗಿ ಸೂಚಿಸಿದರು.

# ಫಲಿಸಿದ ಸುರ್ಜೇವಾಲ ಸಂಧಾನ: ರಾಮಲಿಂಗಾರೆಡ್ಡಿ ರಾಜೀನಾಮೆ ವಾಪಸ್



ಬೆಂಗಳೂರು, ಜೂ.6: ರಾಮಲಿಂಗಾ ರೆಡ್ಡಿ ಅವರ ಅನುಭವ, ಜಾಣ್ಮೆ ಕಾಂಗ್ರೆಸ್ ಪಕ್ಷಕ್ಕೆ ಅಮೂಲ್ಯವಾದುದು. ಅವರು ಕಾಂಗ್ರೆಸ್ ಪಕ್ಷದ ಆಸ್ತಿ. ಅವರು ತಮ್ಮ ರಾಜಿನಾಮೆಯನ್ನು ಹಿಂಪಡೆದಿದ್ದಾರೆ ಎಂದು ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೆವಾಲ ಅವರು ತಿಳಿಸಿದರು. ಕೆಪಿಸಿಸಿ ಕಚೇರಿಯಲ್ಲಿ ಮಾಧ್ಯಮಗಳನ್ನು ಉದ್ದೇಶಿಸಿ ಸುರ್ಜೆವಾಲ ಅವರು ಶನಿವಾರ ಮಾತನಾಡಿದರು.

ನಮ್ಮ ಪಕ್ಷದ ಹಿರಿಯ ನಾಯಕರಾದ ರಾಮಲಿಂಗಾರೆಡ್ಡಿ ಅವರ ಬಗ್ಗೆ ಕೆಲವು ಮಾಧ್ಯಮಗಳು ಹಾಗೂ ಬಿಜೆಪಿ ನಾಯಕರು ಊಹಾಪೋಹ ಹರಡುತ್ತಿದ್ದಾರೆ. ರಾಮಲಿಂಗಾರೆಡ್ಡಿ ಅವರು ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್ ಅವರ ಜೊತೆಗೆ ಎನ್‌ಎಸ್ ಯುಐ ಸಮಯದಿಂದಲೂ ಕೆಲಸ ಮಾಡಿದ್ದಾರೆ. 1973ರಿಂದ ಅವರು ಕಾಂಗ್ರೆಸ್ ಪಕ್ಷಕ್ಕಾಗಿ ದುಡಿಯುತ್ತಿದ್ದಾರೆ. ನಮ್ಮ ಪಕ್ಷದ ಕೆಲವು ನಾಯಕರು ಆಗ ಇನ್ನು ಹುಟ್ಟೇ ಇರಲಿಲ್ಲ. ಅವರು 1989ರಿಂದ ಕಾಂಗ್ರೆಸ್ ಪಕ್ಷದ ಶಾಸಕರಾಗಿದ್ದಾರೆ. 8 ಬಾರಿ ಶಾಸಕರಾಗಿ, ಹಲವು ಬಾರಿ ಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ? ಎಂದು ತಿಳಿಸಿದರು.

ರಾಮಲಿಂಗಾ ರೆಡ್ಡಿ ಅವರು ಸಿಎಂ ಡಿ.ಕೆ. ಶಿವಕುಮಾರ್ ಅವರು, ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್ ಹಾಗೂ ರಾಜ್ಯಾದ್ಯಂತ ಲಕ್ಷಾಂತರ ಕಾರ್ಯಕರ್ತರ ಜೊತೆಗೆ ಅವಿನಾಭಾವ ಸಂಬಂಧ ಹೊಂದಿದ್ದಾರೆ. ಮಾಧ್ಯಮಗಳು ಅವರ ರಾಜಿನಾಮೆ ಸುದ್ದಿಯನ್ನು ಪ್ರಕಟಿಸಿದಾಗ, ನಾನು ಸೇರಿದಂತೆ ಶಿವಕುಮಾರ್, ಹರಿಪ್ರಸಾದ್ ಹಾಗೂ ಸಿದ್ದರಾಮಯ್ಯ ಅವರು ರಾಮಲಿಂಗಾ ರೆಡ್ಡಿ ಅವರೊಂದಿಗೆ ಚರ್ಚೆ ಮಾಡಿದ್ದೆವು. ಕೆಲವು ತಪ್ಪು ಸಂವಹನದಿಂದಾಗಿ ರಾಮಲಿಂಗಾರೆಡ್ಡಿ ಅವರು ನಮ್ಮನ್ನು ಮತ್ತೊಮ್ಮೆ ಭೇಟಿ ಮಾಡಿದ್ದರು. ಅವರು ತಮ್ಮ ರಾಜೀನಾಮೆ ಹಿಂಪಡೆದಿರುವ ಬಗ್ಗೆ ಈಗಾಗಲೇ ನಿಮಗೆ ಮಾಹಿತಿ ನೀಡಿದ್ದಾರೆ. ಅವರು ಮುಂದೆಯೂ ಕಾಂಗ್ರೆಸ್ ಪಕ್ಷದ ನಿಷ್ಠಾವಂತ ಸೈನಿಕನಾಗಿ ಹಾಗೂ ಸಚಿವರಾಗಿ ಕಾರ್ಯ ನಿರ್ವಹಿಸಲಿದ್ದಾರೆ ಎಂದು ಸ್ಪಷ್ಟಪಡಿಸಿದರು.

### ಅಧಿಕಾರ ಹಸ್ತಾಂತರ ಸುಗಮ: ಬಿಜೆಪಿಗೆ ನಿರಾಸೆ

ಕಾಂಗ್ರೆಸ್ ಪಕ್ಷದಲ್ಲಿ ಅಧಿಕಾರ ಹಸ್ತಾಂತರ ಸುಗಮವಾಗಿ ಸಾಗಿರುವುದರಿಂದ ಆಘಾತಕ್ಕೆ ಒಳಗಾಗಿರುವ ಬಿಜೆಪಿ, ಈ ಪ್ರಕರಣದಿಂದ ರಾಜಕೀಯ ಲಾಭ ಪಡೆಯುವ ನಿರೀಕ್ಷೆಯಲ್ಲಿತ್ತು. ಈ ಕಾರಣಕ್ಕೆ ಅವರು ವಿಕೆಟ್ ಬೀಳುತ್ತಿದೆ ಎಂದೆಲ್ಲಾ ಮಾತನಾಡಿದ್ದರು. ಆದರೆ ಅವರಿಗೆ ಈಗ ನಿರಾಸೆಯಾಗಿದೆ. ವಿಜಯೇಂದ್ರ ಹಾಗೂ ಅಶೋಕ್ ಅವರೇ ನೀವು ಜನರ ಮುಂದೆ ನಿರಂತರವಾಗಿ ಕ್ಲೀನ್ ಬೋಲ್ಡ್ ಆಗಲಿದ್ದೀರಿ. ಜನರ ವಿಶ್ವಾಸ ಗಳಿಸಬೇಕಾದರೆ, ಪ್ರಾಮಾಣಿಕತೆ, ಬದ್ಧತೆ, ಜನರ ಸೇವೆ ಮಾಡಬೇಕು. ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳ ಮೂಲಕ ಅವುಗಳನ್ನು ಮಾಡಿಕೊಂಡು ಬಂದಿದೆ ಎಂದು ತಿಳಿಸಿದರು. ಕೋಟ್ಯಂತರ ಜನರು ಗ್ಯಾರಂಟಿ ಯೋಜನೆ ಫಲಾನುಭವಿಗಳಾಗಿದ್ದಾರೆ. ಈಗ ಕಾಂಗ್ರೆಸ್ ಸರ್ಕಾರ ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಣೆ ಮಾಡುತ್ತಿದೆ. 1.24 ಕೋಟಿ ಮಹಿಳೆಯರು ಪ್ರತಿ ತಿಂಗಳು ಗೃಹಲಕ್ಷ್ಮಿ ಯೋಜನೆ ಮೂಲಕ 2 ಸಾವಿರ ಪಡೆಯುತ್ತಿದ್ದಾರೆ. ರಾಜ್ಯದಲ್ಲಿ 1.64 ಕೋಟಿ ಮನೆಗಳು 200 ಯೂನಿಟ್ ವರೆಗೂ ಉಚಿತ ವಿದ್ಯುತ್ ಪಡೆಯುತ್ತಿವೆ. 4.49 ಕೋಟಿ ಜನರು ಅನ್ನಭಾಗ್ಯ ಯೋಜನೆ ಮೂಲಕ ಪ್ರತಿ ತಿಂಗಳು 10 ಕೆ.ಜಿ ಅಕ್ಕಿ ಪಡೆಯುತ್ತಿದ್ದಾರೆ. ಲಕ್ಷಾಂತರ ನಿರುದ್ಯೋಗಿ ಯುವಕರು ನಿರುದ್ಯೋಗ ಭತ್ಯೆ ಪಡೆಯುತ್ತಿದ್ದಾರೆ. ಇದು ಕಾಂಗ್ರೆಸ್ ಸರ್ಕಾರದ ಸಾಧನೆಗಳು ಎಂದು ವಿವರಿಸಿದರು. ರಾಜ್ಯ ಬಿಜೆಪಿ ನಾಯಕರು ತಮ್ಮ ಆಂತರಿಕ ಕಚ್ಚಾಟದ ಬಿಡುವಿನ ವೇಳೆಯಲ್ಲಿ ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳನ್ನು ಟೀಕೆ ಮಾಡುತ್ತಿದ್ದಾರೆ ಎಂದು ಹರಿಹಾಯ್ದರು.

### ರಾಜೀನಾಮೆ ಬಗೆಹರಿದ ವಿಷಯ: ಸಿಎಂ

**ರಾಮಲಿಂಗಾರೆಡ್ಡಿ ಅವರು ನನ್ನ ಸ್ನೇಹಿತರು, ಅವರೊಂದಿಗೆ ಮಾತನಾಡಿದ್ದು, ಎಲ್ಲಾ ಸಮಸ್ಯೆ ಬಗೆಹರಿಸಲಾಗಿದೆ. ಯಾವುದೇ ಕಾರಣಕ್ಕೂ ಅವರ ರಾಜಿನಾಮೆ ಅಂಗೀಕರಿಸುವುದಿಲ್ಲ ಎಂದು ಸಿಎಂ ಡಿ.ಕೆ. ಶಿವಕುಮಾರ್ ಹೇಳಿದರು. ಸುದ್ದಿಗಾರರ ಜೊತೆ ಮಾತನಾಡಿದ ಅವರು, ಅನಗತ್ಯವಾಗಿ ತಲೆಕೆಡಿಸಿಕೊಂಡು ಏನೇನೋ ಸುದ್ದಿ ಮಾಡಬೇಡಿ. ಅವರು ರಾಜೀನಾಮೆಯನ್ನು ವಾಟ್ಸಪ್‌ನಲ್ಲಿ ಕಳಿಸಿಕೊಟ್ಟಿದ್ದು ನಿಜ. ಈಗ ಆ ವಿಚಾರ ಬಗೆಹರಿಸಲಾಗಿದೆ ಎಂದು ಮಾಧ್ಯಮಗಳಿಗೆ ತಿಳಿಸಿದರು.**



### ರಾಮಲಿಂಗಾರೆಡ್ಡಿ ಅಸಮಾಧಾನ ಶಮನ

**ಬೆಂಗಳೂರು, ಜೂ.6:** ಖಾತೆ ಹಂಚಿಕೆ ವಿಷಯವಾಗಿ ಡಿಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಉಂಟಾಗಿದ್ದ ಗೊಂದಲ, ಭಿನ್ನಮತ ಶಮನಗೊಂಡಂತಿದೆ. ಜಲಸಂಪನ್ಮೂಲ ಖಾತೆ ನೀಡಿದ್ದಕ್ಕೆ ಅಸಮಾಧಾನ ವ್ಯಕ್ತಪಡಿಸಿ ರಾಜೀನಾಮೆ ನೀಡಿದ್ದ ಸಚಿವ ರಾಮಲಿಂಗಾರೆಡ್ಡಿ ಕಾಂಗ್ರೆಸ್ ಹೈಕಮಾಂಡ್ ನಾಯಕರ ಮನವೊಲಿಕೆ, ಸಂಧಾನದ ಬಳಿಕ ರಾಜಿನಾಮೆ ವಾಪಸ್ ಪಡೆದಿದ್ದಾರೆ. ಹೈಕಮಾಂಡ್ ನಾಯಕ ರಣದೀಪ್ ಸುರ್ಜೆವಾಲಾ ಅವರೊಂದಿಗಿನ ಸಭೆ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿರುವ ರಾಮಲಿಂಗಾ ರೆಡ್ಡಿ, ನಾನು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೆ, ಆದರೆ ಮುಖ್ಯಮಂತ್ರಿಗಳು ರಾಜೀನಾಮೆ ಸ್ವೀಕರಿಸುವುದಿಲ್ಲ ಎಂದು ಹೇಳಿದ್ದಾರೆ, ರಾಜೀನಾಮೆ ಅಂಗೀಕಾರ ಮಾಡಲ್ಲ ಎಂದರೆ ತಿರಸ್ಕೃತ ಎಂದು ಅರ್ಥ. ಸಿಎಂ ಜೊತೆ ಮಾತನಾಡಿದ್ದೇನೆ. ಖಾತೆ ವಿಷಯವನ್ನು ಮುಖ್ಯಮಂತ್ರಿಗಳು ಹಾಗೂ ಹೈಕಮಾಂಡ್ ನಾಯಕರು ನೋಡಿಕೊಳ್ಳುತ್ತಾರೆ ಎಂದು ಹೇಳಿದ್ದಾರೆ. ಎಲ್ಲಾ ಗೊಂದಲಗಳೂ ಬಗೆಹರಿದಿವೆ ಎಂದು ಸಚಿವರು ಇದೇ ವೇಳೆ ತಿಳಿಸಿದ್ದಾರೆ.

# ನಾರ್ವೆ ಚೆಸ್ ಪ್ರಶಸ್ತಿ ಗೆದ್ದು ಇತಿಹಾಸ ನಿರ್ಮಿಸಿದ ಗ್ರ್ಯಾಂಡ್‌ಮಾಸ್ಟರ್ ಪ್ರಜ್ಞಾನಂದ



**ಓಸ್ಲೋ, ಜೂ.6:** ನಾರ್ವೆ ಚೆಸ್-2026 ಟೂರ್ನಿಯಲ್ಲಿ ಪ್ರಶಸ್ತಿ ಗೆದ್ದಿರುವ ಭಾರತದ ಗ್ರ್ಯಾಂಡ್ ಮಾಸ್ಟರ್ ಆರ್. ಪ್ರಜ್ಞಾನಂದ ಹೊಸ ಇತಿಹಾಸ ನಿರ್ಮಿಸಿದ್ದಾರೆ. ಚೆನ್ನೈ ಮೂಲದ 20 ವರ್ಷದ ಆರ್. ಪ್ರಜ್ಞಾನಂದ ಜರ್ಮನಿಯ ವಿನ್ಸೆಂಟ್ ಕೀಮರ್ ವಿರುದ್ಧ ಅಂತಿಮ ಸುತ್ತಿನಲ್ಲಿ ಜಯ ದಾಖಲಿಸಿದ್ದಾರೆ. ಈ ಮೂಲಕ ಪ್ರತಿಷ್ಠಿತ ನಾರ್ವೆ ಚೆಸ್ ಪ್ರಶಸ್ತಿ ಮುಡಿಗೇರಿಸಿಕೊಂಡ ಮೊದಲ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ.

ದಿನದ ಆರಂಭದಲ್ಲಿ 15 ಅಂಕಗಳೊಂದಿಗೆ ಮೂರನೇ ಸ್ಥಾನದಲ್ಲಿದ್ದ ಅವರು, ಬಳಿಕ ಉತ್ತಮ ಪ್ರದರ್ಶನ ನೀಡಿ ಒಟ್ಟು 18 ಅಂಕಗಳೊಂದಿಗೆ ಅಗ್ರಸ್ಥಾನಕ್ಕೇರಿದರು. ಭಾರತದ ಚೆಸ್ ದಂತಕಥೆ ವಿಶ್ವನಾಥನ್ ಆನಂದ್ ಮತ್ತು ವಿಶ್ವ ಚೆಸ್ ಹಾಲಿ ಚಾಂಪಿಯನ್ ಡಿ. ಗುಕೇಶ್ ಅವರನ್ನ ಹಿಂದಿಕ್ಕಿ ಪ್ರಜ್ಞಾನಂದ ಈ ಸಾಧನೆ ಮಾಡಿದ್ದಾರೆ. ಟೂರ್ನಿಯ ಆರಂಭದಲ್ಲಿ ಪ್ರಜ್ಞಾನಂದ ಅವರು 6 ಇತರೆ ಪ್ರಮುಖ ಆಟಗಾರರ ಎದುರು ನಿಧಾನಗತಿಯಲ್ಲಿ ಮುನ್ನಡೆ ಪಡೆದಿದ್ದರು. ಆದರೆ, ದ್ವಿತೀಯಾರ್ಧದಲ್ಲಿ ಉತ್ತಮ ಪ್ರದರ್ಶನ ನೀಡಿ ಎಲ್ಲರ ಗಮನ ಸೆಳೆದರು. ನಾರ್ವೆ ಚೆಸ್‌ನಲ್ಲಿ 7 ಬಾರಿ ಚಾಂಪಿಯನ್ ಆಗಿರುವ ಮತ್ತು ವಿಶ್ವದ ನಂ.1 ಚೆಸ್ ಆಟಗಾರ ಮ್ಯಾಗ್ನಸ್ ಕಾರ್ಲ್‌ಸನ್ ಅವರನ್ನು 2 ಬಾರಿ ಸೋಲಿಸುವ ಮೂಲಕ ಪ್ರಜ್ಞಾನಂದ ಮೇಲುಗೈ ಸಾಧಿಸಿದ್ದರು. ಅಂತಿಮ ಸುತ್ತಿನಲ್ಲಿ ಗುಕೇಶ್ ಪ್ರಶಸ್ತಿ ಗೆಲ್ಲುವ ರೇಸ್‌ನಿಂದ ಹೊರಬಿದ್ದಾಗ ಪ್ರಜ್ಞಾನಂದ ಅವರು ಚಾಂಪಿಯನ್ ಆಗಿ ಹೊರಹೊಮ್ಮಿ ಭಾರತದ ಕೀರ್ತಿಪತಾಕೆ ಹಾರಿಸಿದ್ದಾರೆ.

ಅಂತಿಮ ಸುತ್ತಿಗೂ ಮುನ್ನ 15.5 ಅಂಕಗಳೊಂದಿಗೆ ಅಗ್ರ ಸ್ಥಾನದಲ್ಲಿದ್ದ ಅಮೆರಿಕದ ಗ್ರ್ಯಾಂಡ್ ಮಾಸ್ಟರ್ ವೆಸ್ಲಿ ಸೊ ಫ್ರಾನ್ಸ್‌ನ ಅಲಿರೇಝಾ ಫೀರೋಝ್ಝಾ ವಿರುದ್ಧದ ಪಂದ್ಯದಲ್ಲಿ ಸಮಬಲ ಕಾಯ್ದುಕೊಂಡರು. ಇದರಿಂದಾಗಿ ಈ ಪಂದ್ಯ ಟೈ ಬ್ರೇಕರ್ ಹಂತಕ್ಕೆ ತಲುಪಿತು. ಈ ಅವಕಾಶ ಪ್ರಜ್ಞಾನಂದ ಅವರಿಗೆ ವರವಾಗಿ ಪರಿಣಮಿಸಿತು. ಅಂತಿಮವಾಗಿ ಕೀಮರ್ ವಿರುದ್ಧ ಗೆದ್ದು ಅಂಕಪಟ್ಟಿಯಲ್ಲಿ ಅಗ್ರ ಸ್ಥಾನಕ್ಕೇರಿದರು. ಟೈ-ಬ್ರೇಕರ್ ಪಂದ್ಯದಲ್ಲಿ ವೆಸ್ಲಿ ಸೊ ಗೆದ್ದ ಹೊರತಾಗಿಯೂ, ಅವರಿಗೆ ಸಿಕ್ಕಿದ್ದು ಕೇವಲ 1.5 ಅಂಕಗಳು ಮಾತ್ರ. ಈ ಮೂಲಕ ಅವರ ಒಟ್ಟು ಅಂಕಗಳು 17ಕ್ಕೆ ತಲುಪಿತು. ಇತ್ತ ಅಂತಿಮ ಸುತ್ತು ಪ್ರವೇಶಿಸಿದ್ದ ಅಲಿರೇಝಾ 15.5 ಅಂಕಗಳೊಂದಿಗೆ ಮೂರನೇ ಸ್ಥಾನಕ್ಕೆ ತೃಪ್ತಿಪಟ್ಟುಕೊಂಡರು. ಇನ್ನೂ ಹಾಲಿ ಚಾಂಪಿಯನ್ ಗುಕೇಶ್ ತಮ್ಮ ನಿರಾಶದಾಯಕ ಪ್ರದರ್ಶನದಿಂದ ಅವರು ಪ್ರಶಸ್ತಿ ಗೆಲ್ಲುವ ರೇಸ್‌ನಿಂದ ಹೊರಬಿದ್ದರು.



### ಪ್ರಧಾನಿ ಮೋದಿ ಅಭಿನಂದನೆ

ಭಾರತೀಯ ಚೆಸ್ ಪ್ರತಿಭೆ ಆರ್ ಪ್ರಜ್ಞಾನಂದ ಅವರ ಇತ್ತೀಚಿನ ಅಂತರರಾಷ್ಟ್ರೀಯ ಯಶಸ್ಸಿಗೆ ಪ್ರಧಾನಿ ನರೇಂದ್ರ ಮೋದಿ ಶನಿವಾರ ಅಭಿನಂದನೆ ಸಲ್ಲಿಸಿದ್ದಾರೆ, ಈ ಸಾಧನೆಯು ಜಾಗತಿಕ ವೇದಿಕೆಯಲ್ಲಿ ಯುವ ಗ್ರ್ಯಾಂಡ್‌ಮಾಸ್ಟರ್ ಅವರ ನಿರಂತರ ಶ್ರೇಷ್ಠತೆಯನ್ನು ಎತ್ತಿ ತೋರಿಸುವ ಗಮನಾರ್ಹ ಮೈಲಿಗಲ್ಲು ಎಂದು ಬಣ್ಣಿಸಿದ್ದಾರೆ. "ಈ ಗಮನಾರ್ಹ ಸಾಧನೆಗಾಗಿ ಪ್ರಜ್ಞಾನಂದ ಅವರಿಗೆ ಅಭಿನಂದನೆಗಳು! ಇದು ನಿಜಕ್ಕೂ ಅವರ ಮುಂದುವರಿದ ಶ್ರೇಷ್ಠತೆಯನ್ನು ಎತ್ತಿ ತೋರಿಸುವ ಅದ್ಭುತ ಮೈಲಿಗಲ್ಲು. ಅವರ ಭವಿಷ್ಯದ ಪ್ರಯತ್ನಗಳಿಗೆ ನನ್ನ ಶುಭಾಶಯ" ಎಂದು ಮೋದಿ ಹೇಳಿದರು.

## ರಾಜ್ಯಸಭೆ, ಪರಿಷತ್ ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಗಳಿಂದ ನಾಮಪತ್ರ ಸಲ್ಲಿಕೆ

**ಬೆಂಗಳೂರು ಜೂ.6:** ಈ ತಿಂಗಳ 18ರಂದು ರಾಜ್ಯ ವಿಧಾನ ಪರಿಷತ್ತಿನ ಏಳು ಸ್ಥಾನಗಳಿಗೆ ನಡೆಯಲಿರುವ ಚುನಾವಣೆಗೆ ಕಾಂಗ್ರೆಸ್ ಅಭ್ಯರ್ಥಿಯಾಗಿ ಕೆಪಿಸಿಸಿ ಅಧ್ಯಕ್ಷ ಬಿಕೆ ಹರಿಪ್ರಸಾದ್ ಶನಿವಾರ ತಮ್ಮ ನಾಮಪತ್ರ ಸಲ್ಲಿಸಿದರು ವಿಧಾನ ಪರಿಷತ್ ಚುನಾವಣೆಯ ಚುನಾವಣಾ ಅಧಿಕಾರಿಯಾಗಿರುವ ವಿಧಾನಸಭೆಯ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ಅವರಿಗೆ ಬಿ.ಕೆ. ಹರಿಪ್ರಸಾದ್ ಶುಕ್ರವಾರ ನಾಮಪತ್ರ ಸಲ್ಲಿಸಿದರು. ವಿಧಾನಸಭೆಯಿಂದ ರಾಜ್ಯಸಭೆಗೆ ನಡೆಯುವ ಚುನಾವಣೆಗೆ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ, ಮನ್ಸೂರ್ ಅಲಿಖಾನ್ ಮತ್ತು ಪವನ್ ಖೇರಾ ಹಾಗೂ ಪಕ್ಷೇತರ ಅಭ್ಯರ್ಥಿಯಾಗಿ ಭೋಜಣ್ಣ ಸೋಮಯ್ಯ ಅವರು ನಾಮಪತ್ರ ಸಲ್ಲಿಸಿದರು.

## ಮರುಭೂಮಿಯಲ್ಲಿ ಬಾಯಾರಿಕೆಯಿಂದ ನರಳಿ 49 ಮಂದಿ ದಾರುಣ ಸಾವು

**ನೈಜರ್, ಜೂ.6:** ಪಶ್ಚಿಮ ಆಫ್ರಿಕಾದ ನೈಜರ್‌ನ ಸಹಾರಾ ಮರುಭೂಮಿಯಲ್ಲಿ ಹೃದಯವಿದ್ರಾವಕ ಘಟನೆ ನಡೆದಿದೆ. ಈದ್ ಅಲ್-ಅಧಾ ಆಚರಿಸಲು ಮನೆಗೆ ಮರಳುತ್ತಿದ್ದ ನಲವತ್ತೊಂಬತ್ತು ಜನರು ಬಾಯಾರಿಕೆಯಿಂದಾಗಿ ನರಳಿ ಸಾವನ್ನಪ್ಪಿದರು. ಸುಡುವ ಶಾಖದ ನಡುವೆ ಮರುಭೂಮಿಯ ಮಧ್ಯದಲ್ಲಿ ಟ್ರಕ್ ಕೆಟ್ಟು ನಿಂತಿದ್ದು ಈ ಪ್ರಯಾಣಿಕರಿಗೆ ಮಾರಕವಾಗಿದೆ. ನೈಜರ್‌ನ ಅಗಾಡೆಜ್ ಪ್ರಾಂತ್ಯದ ಅಧಿಕಾರಿಗಳ ಪ್ರಕಾರ, ಪುರುಷರು ಕುಟುಂಬಗಳೊಂದಿಗೆ ಈದ್ ಆಚರಿಸಲು ಮಾಲಿಯಿಂದ ನೈಜರ್‌ಗೆ ಹಿಂತಿರುಗುತ್ತಿದ್ದರು. ಪ್ರಯಾಣದ ಸಮಯದಲ್ಲಿ, ಅವರ ಟ್ರಕ್ ಅಸ್ಮಾಕಾದಿಂದ ಸುಮಾರು 80 ಕಿಲೋಮೀಟರ್ ದೂರದಲ್ಲಿ ಇದ್ದಕ್ಕಿದ್ದಂತೆ ಕೆಟ್ಟುಹೋಯಿತು. ಚಾಲಕ, ಅವರ ಸಹಾಯಕರು ಮತ್ತು ಪ್ರಯಾಣಿಕರು ಟ್ರಕ್ ಅನ್ನು ದುರಸ್ತಿ ಮಾಡಲು ತೀವ್ರವಾಗಿ ಪ್ರಯತ್ನಿಸಿದರು. ಆದರೆ ವಿಫಲರಾದರು.

### ಸಹಾರಾದಲ್ಲಿ ದುರಂತ

### 50 ಕಿ.ಮೀ. ನಡೆದು ಬದುಕುಳಿದ ಇಬ್ಬರು



ತಮ್ಮ ಬಳಿಯಿದ್ದ ನೀರು ಸಹ ಖಾಲಿಯಾಯಿತು. ಪ್ರಯಾಣಿಕರು ಸುಡುವ ಬಿಸಿಲು ಮತ್ತು ತೀವ್ರ ತಾಪಮಾನದಲ್ಲಿ ಸಿಲುಕಿಕೊಂಡರು. ನೀರು ಸಿಗದೆ 49 ಜನರು ಒಬ್ಬೊಬ್ಬರಾಗಿ ಮೃತಪಟ್ಟಿದ್ದಾರೆ. ಇಬ್ಬರು ಪವಾಡಸದೃಶವಾಗಿ ಬದುಕುಳಿದಿದ್ದಾರೆ. ತಮ್ಮ ಜೀವಗಳನ್ನು ಉಳಿಸಿಕೊಳ್ಳಲು, ಅವರು ಸುಡುವ ಶಾಖದಲ್ಲಿ ಸುಮಾರು 50 ಕಿಲೋಮೀಟರ್ ನಡೆದುಕೊಂಡು ಹೋದರು. ಅವರು ಮೊದಲು ನೀರಿನ ಮೂಲವನ್ನು ತಲುಪಿದರು. ನಂತರ ಅಸ್ಸಾಮಕಾ ಪಟ್ಟಣವನ್ನು ತಲುಪಿ ಈ ಭಯಾನಕ ಘಟನೆಯ ಬಗ್ಗೆ ಅಧಿಕಾರಿಗಳಿಗೆ ತಿಳಿಸಿದರು. ಮಾಹಿತಿ ಪಡೆದ ನಂತರ, ಗವರ್ನರ್ ಜನರಲ್ ಇಬ್ರಾಹಿಂ ಬುಲಾಮಾ ಇಸಾ ನೇತೃತ್ವದ ತಂಡವು ಸ್ಥಳಕ್ಕೆ ಆಗಮಿಸಿತ್ತು. ಆದರೆ ದುರದೃಷ್ಟವಶಾತ್ ಟ್ರಕ್ ಅಕ್ಕಪಕ್ಕ ಹೆಣಗಳ ರಾಶಿ ನೋಡಿ ಕಂಗಾಲಾದರು. ರಕ್ಷಣಾ ಕಾರ್ಯಕರ್ತರು ಸಾಮೂಹಿಕ ಸಮಾಧಿ ಮಾಡಿದರು. ಮಾಲಿಯ ತಲ್ಲಾಂಡೇಕ್ ಪಟ್ಟಣದಿಂದ ಹೊರಟ ಟ್ರಕ್ ಹಲವಾರು ದಿನಗಳವರೆಗೆ ಮರುಭೂಮಿಯಲ್ಲಿ ಸಂಚರಿಸಿತು.

ಸಹಾರಾದ ಈ ಭಾಗವು ಅದರ ಒರಟಾದ ಭೂಪ್ರದೇಶ ಮತ್ತು ದಾಖಲೆಯ ತಾಪಮಾನಕ್ಕೆ ಹೆಸರುವಾಸಿಯಾಗಿದೆ. ಅಲ್ಲಿ ಸಣ್ಣ ತಾಂತ್ರಿಕ ದೋಷವೂ ಸಹ ಸಾವಿಗೆ ಕಾರಣವಾಗಬಹುದು.

# ಆರೋಗ್ಯ ಸಚಿವ ನಡ್ಡಾ - ಎಐಸಿಸಿ ಅಧ್ಯಕ್ಷ ಖರ್ಗೆ ನಡುವೆ ತೀವ್ರಗೊಂಡ ವಾಕ್ಸಮರ

### ಆರೋಗ್ಯ ಮತ್ತು ಪೌಷ್ಟಿಕಾಂಶ ಬಗೆಗಿನ ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆ-6 ವರದಿ ಕುರಿತು ಜಟಾಪಟಿ



**ನವದೆಹಲಿ, ಜೂ.6:** ಇತ್ತೀಚಿನ ರಾಷ್ಟ್ರೀಯ ಕುಟುಂಬ ಆರೋಗ್ಯ ಸಮೀಕ್ಷೆಯ (ಎನ್‌ಎಫ್‌ಎಚ್‌ಎಸ್-6) ವರದಿಗಳ ಕುರಿತಾದ ರಾಜಕೀಯ ಚರ್ಚೆಯು ತೀವ್ರಗೊಂಡಿದೆ. ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಟೀಕೆಗಳನ್ನು ತಿರಸ್ಕರಿಸಿರುವ ಆರೋಗ್ಯ ಸಚಿವ ಜೆ.ಪಿ. ನಡ್ಡಾ, ಈ ಸಮೀಕ್ಷೆಯು ಕಳೆದ ದಶಕದಲ್ಲಿ ಹಲವು ಪ್ರಮುಖ ಆರೋಗ್ಯ ಸೂಚಕಗಳಲ್ಲಿ ಆಗಿರುವ ಸುಧಾರಣೆಗಳನ್ನು ಪ್ರತಿಬಿಂಬಿಸುತ್ತದೆ ಎಂದು ವಾದಿಸಿದ್ದಾರೆ.

ಎನ್‌ಎಫ್‌ಎಚ್‌ಎಸ್-6 ಮತ್ತು ಹಿಂದಿನ ಸಮೀಕ್ಷೆಗಳ ವರದಿಗಳನ್ನು ಉಲ್ಲೇಖಿಸಿ, ಆರೋಗ್ಯ ಮತ್ತು ಪೌಷ್ಠಿಕಾಂಶದ ಸವಾಲುಗಳನ್ನು ಮೋದಿ ಸರ್ಕಾರ ನಿಭಾಯಿಸುತ್ತಿರುವ ರೀತಿಯನ್ನು ಖರ್ಗೆ ಪ್ರಶ್ನಿಸಿದ ನಂತರ ಈ ಇಬ್ಬರು ನಾಯಕರ ನಡುವೆ ವಾಕ್ಸಮರ ಆರಂಭವಾಯಿತು.

ಸಾಮಾಜಿಕ ಮಾಧ್ಯಮ 'ಎಕ್ಸ್'ನಲ್ಲಿ ಈ ಬಗ್ಗೆ ಮಾಹಿತಿ ಹಂಚಿಕೊಂಡಿದ್ದ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಜನಸಂಖ್ಯೆಯ ದೊಡ್ಡ ಭಾಗದಲ್ಲಿ, ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳಲ್ಲಿ ಅಪೌಷ್ಠಿಕತೆ ಮತ್ತು ರಕ್ತಹೀನತೆ (ಅನೀಮಿಯಾ) ಮುಂದುವರೆದಿದೆ ಎಂದು ಆರೋಪಿಸಿದ್ದರು. ಐದರಲ್ಲಿ ಒಬ್ಬ ಮಗು ತೀವ್ರ ಅಪೌಷ್ಟಿಕತೆಯಿಂದ ಬಳಲುತ್ತಿದ್ದು, ಸುಮಾರು ಮೂರನೇ ಒಂದು ಭಾಗದಷ್ಟು ಮಕ್ಕಳು ಕಡಿಮೆ ತೂಕ ಹೊಂದಿದ್ದಾರೆ ಮತ್ತು 6ರಿಂದ 23 ತಿಂಗಳ ವಯಸ್ಸಿನ ಶೇಕಡಾ 84 ಕ್ಕಿಂತ ಹೆಚ್ಚು ಮಕ್ಕಳಿಗೆ ಸಾಕಷ್ಟು ಪೌಷ್ಠಿಕಾಂಶ ಸಿಗುತ್ತಿಲ್ಲ ಎಂದು ಪ್ರತಿಪಾದಿಸಿದ್ದರು.


ಮಹಿಳೆಯರಲ್ಲಿ ರಕ್ತಹೀನತೆಯ ಪ್ರಮಾಣ ಹೆಚ್ಚಿರುವುದನ್ನು ಎತ್ತಿತೋರಿಸಿದ ಖರ್ಗೆ, 15 ರಿಂದ 49 ವರ್ಷ ವಯಸ್ಸಿನ ಶೇಕಡಾ 57 ರಷ್ಟು ಮಹಿಳೆಯರು ರಕ್ತಹೀನತೆಯಿಂದ ಬಳಲುತ್ತಿದ್ದಾರೆ ಮತ್ತು ಐದರಲ್ಲಿ ಒಬ್ಬ ಮಹಿಳೆ ಅಪೌಷ್ಠಿಕತೆಯಿಂದ ಕೂಡಿದ್ದಾರೆ ಎಂಬ NFHS-5 ರ ಅಂಕಿ-ಅಂಶಗಳನ್ನು ಉಲ್ಲೇಖಿಸಿದ್ದರು. ಅಲ್ಲದೆ, ಸರ್ಕಾರವು ತನ್ನ ವೈಫಲ್ಯಗಳನ್ನು ಮುಚ್ಚಿಡಲು ಪ್ರಮುಖ ದತ್ತಾಂಶಗಳನ್ನು (ಡೇಟಾ) ಉದ್ದೇಶಪೂರ್ವಕವಾಗಿ ಮರೆಮಾಡುತ್ತಿದೆ ಎಂದು ಆರೋಪಿಸಿದ್ದರು.

ಇದಕ್ಕೆ ಶನಿವಾರ ಪ್ರತಿಕ್ರಿಯಿಸಿದ ಜೆ.ಪಿ. ನಡ್ಡಾ, ಕಾಂಗ್ರೆಸ್ ನಾಯಕರು ಸಮೀಕ್ಷೆಯ ವರದಿಗಳನ್ನು ತಮಗೆ ಬೇಕಾದಂತೆ ಆಯ್ದುಕೊಂಡು ವ್ಯಾಖ್ಯಾನಿಸುತ್ತಿದ್ದಾರೆ ಎಂದು ಆರೋಪಿಸಿದರು. 'ಎಕ್ಸ್' ನಲ್ಲಿ ಸರಣಿ ಪೋಸ್ಟ್‌ಗಳನ್ನು ಹಂಚಿಕೊಂಡ ಆರೋಗ್ಯ ಸಚಿವರು, ಹಿಂದಿನ ಸಮೀಕ್ಷೆಗಳಿಗೆ ಹೋಲಿಸಿದರೆ ಈ ವರದಿಯಲ್ಲಿ ತಾಯಿ ಮತ್ತು ಮಕ್ಕಳ ಆರೋಗ್ಯ ರಕ್ಷಣೆಯ ಸೂಚಕಗಳಲ್ಲಿ ಗಮನಾರ್ಹ ಸುಧಾರಣೆ ಕಂಡುಬಂದಿದೆ ಎಂದು ಹೇಳಿದರು.

ನಡ್ಡಾ ಅವರ ಪ್ರಕಾರ, 2005-06 ರಲ್ಲಿ ನಡೆದ ಎನ್‌ಎಫ್‌ಎಚ್‌ಎಸ್-3ಗೆ ಹೋಲಿಸಿದರೆ ಮೊದಲ ತ್ರೈಮಾಸಿಕದ ಗರ್ಭಧಾರಣೆಯ ನೋಂದಣಿ, ಆಸ್ಪತ್ರೆಗಳಲ್ಲಿ ಹೆರಿಗೆಗಳು (ಇನ್‌ಸ್ಟಿಟ್ಯೂಷನಲ್ ಡೆಲಿವರಿ) ಮತ್ತು ಪರಿಣಿತ ಆರೋಗ್ಯ ಸಿಬ್ಬಂದಿಯ ಸಮ್ಮುಖದಲ್ಲಿ ನಡೆಯುವ ಹೆರಿಗೆಗಳ ಸಂಖ್ಯೆ ಗಣನೀಯವಾಗಿ ಹೆಚ್ಚಾಗಿದೆ. ಪೂರ್ಣ ಪ್ರಮಾಣದ ಲಸಿಕಾಕರಣದ ವ್ಯಾಪ್ತಿಯು ಶೇ. 87.1ಕ್ಕೆ ಏರಿದೆ, ಆರೋಗ್ಯ ವಿಮಾ ಸೌಲಭ್ಯದ ವ್ಯಾಪ್ತಿಯು ಶೇ. 4.9 ರಿಂದ ಶೇ. 60.2ಕ್ಕೆ ಜಿಗಿದಿದೆ ಮತ್ತು ಮುಟ್ಟಿನ ಸಂದರ್ಭದಲ್ಲಿ ನೈರ್ಮಲ್ಯದ ರಕ್ಷಣಾ ವಿಧಾನಗಳ ಬಳಕೆ ಶೇ.79.2ಕ್ಕೆ ತಲುಪಿದೆ ಎಂಬುದನ್ನು ಆರೋಗ್ಯ ಸಚಿವರು ತಮ್ಮ ಪೋಸ್ಟ್‌ನಲ್ಲಿ ಹೈಲೈಟ್ ಮಾಡಿದ್ದಾರೆ. ಇದಲ್ಲದೆ, ಎರಡು ದಶಕಗಳ ಹಿಂದಿನ ದತ್ತಾಂಶಕ್ಕೆ ಹೋಲಿಸಿದರೆ ಮಕ್ಕಳಲ್ಲಿ ಕಂಡುಬರುವ ಕುಂಠಿತ ಬೆಳವಣಿಗೆಯ (ಸ್ಟಂಟಿಂಗ್) ಪ್ರಮಾಣವು ಶೇ. 48 ರಿಂದ ಶೇ. 29.3ಕ್ಕೆ ಇಳಿಕೆಯಾಗಿದೆ ಎಂದು ಅವರು ಗಮನಿಸಿದರು.

ಆರೋಗ್ಯ ರಕ್ಷಣೆ, ಪೌಷ್ಠಿಕಾಂಶ, ನೈರ್ಮಲ್ಯ ಮತ್ತು ಕಲ್ಯಾಣ ಕಾರ್ಯಕ್ರಮಗಳಲ್ಲಿ ಮಾಡಿದ ಹೂಡಿಕೆಗಳೇ ಈ ಬದಲಾವಣೆಗಳಿಗೆ ಕಾರಣ ಎಂದು ತಿಳಿಸಿದ್ದಾರೆ.

## ನಿತ್ಯ ಪಂಚಾಂಗ 7.06.2026 ಭಾನುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ಉತ್ತರಾಯಣ–ವಸಂತ/ಗ್ರೀಷ್ಮ ಋತು, ಚಾಂದ್ರಮಾನ, ವೈಶಾಖ ಅಧಿಕ ಜ್ಯೇಷ್ಠ ಮಾಸ

ಅಧಿಕ ಜ್ಯೇಷ್ಠ ಬಹುಳ, ಸಪ್ತಮಿ, ಶತಭಿಷ ನಕ್ಷತ್ರ,

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ವಾರ | ರಾಹುಕಾಲ | ಯಮಗಂಡ | ಗುಳಿಕಕಾಲ |
| ಭಾನು | ಸ.5.04–6.33 | 12.00–1.30 | 3.00–4.00 |
| ಸೋಮ | ಬೆ.7.20–9.04 | 10.30–12.00 | 1.30–12.00 |
| ಮಂಗಳ | ಮ.3.25–4.59 | 9.00–10.30 | 12.00–1.30 |
| ಬುಧ | ಮ.12.16–1.50 | 7.30–9.00 | 10.30–12.00 |
| ಗುರು | ಮ.1.50–3.29 | 6.00–7.30 | 9.00–10.30 |
| ಶುಕ್ರ | ಬೆ.10.42–12.16 | 3.00–4.30 | 7.30–9.00 |
| ಶನಿ | ಬೆ.9.07–10.41 | 1.30–3.00 | 6.00–7.30 |

# ತುಮಕೂರಿನಲ್ಲಿ ಶೀಘ್ರವೇ ರೈಲ್ವೆ ಕಂಟೈನರ್ ಕಾರ್ಪೊರೇಷನ್ ಆರಂಭ: ವಿ ಸೋಮಣ್ಣ




**ಬೆಂಗಳೂರು, ಜೂ.6:** ವಿಕಾಸಿತ ಭಾರತ 20 47 ಗುರಿ ಸಾಧನೆಯಲ್ಲಿ ಸೂಕ್ಷ್ಮ ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳ ಎಂಎಸ್‌ಎಂಇ ಪಾತ್ರ ಅತ್ಯಂತ ಮಹತ್ವದ್ದಾಗಿದ್ದು, ದೇಶದ ಆರ್ಥಿಕ ವ್ಯವಸ್ಥೆಗೆ ಕೈಗಾರಿಕೆಗಳೆ ಬೆನ್ನೆಲುಬು ಎಂದು ರೈಲ್ವೆ ಮತ್ತು ಜಲಶಕ್ತಿ ರಾಜ್ಯ ಸಚಿವ ವಿ.ಸೋಮಣ್ಣ ಹೇಳಿದರು.

ನಗರದ ಹೆಗ್ಗೆರೆಯ ಎಚ್‌ಎಂ ಗಂಗಾಧರಯ್ಯ ಸ್ಮಾರಕ ಭವನದಲ್ಲಿ ಎಫ್‌ಕೆಸಿಸಿಐ ಮತ್ತು ತುಮಕೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯು ಆಯೋಜಿಸಿದ್ದ ರಾಜ್ಯಮಟ್ಟದ ವಾಣಿಜ್ಯ ಮತ್ತು ಕೈಗಾರಿಕೆ ಸಂಘ ಸಂಸ್ಥೆಗಳ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು ಆರ್ಥಿಕ ಬೆಳವಣಿಗೆಯ ಎಂಜಿನ್ ಆಗಿ ಭಾರತೀಯ ರೈಲ್ವೆ ಅಭೂತಪೂರ್ವ ಆಧುನಿಕರಣಕ್ಕೆ ಒಳಗಾಗುತ್ತಿದೆ, ರೈಲ್ವೆ ಮೂಲಸೌಕರ್ಯ ವಿಸ್ತರಣೆ, ನಿಲ್ದಾಣಗಳ ಪುನರ್ ಅಭಿವೃದ್ಧಿ, ಸರಕು ಸಾಗಣೆ ಕಾರಿಡಾರ್ ಮತ್ತು ಸುಧಾರಿತ ಸಂಪರ್ಕ ವ್ಯವಸ್ಥೆಗಳು, ವ್ಯಾಪಾರ, ವಾಣಿಜ್ಯಕ್ಕೆ ಹೊಸ ಅವಕಾಶಗಳನ್ನು ಸೃಷ್ಟಿಸುತ್ತಿವೆ . ಸರಕುಗಳ ಸಮಸ್ತ ಸಾಗಾಣಿಕೆ ರೈಲ್ವೆ ಸರಕು ಸೇವೆಗಳನ್ನು ಬಳಸಿಕೊಳ್ಳಲು ಕೈಗಾರಿಕೆಗಳನ್ನು ಪ್ರೋತ್ಸಾಹಿಸಬೇಕಿದೆ.

ಪ್ರಧಾನಿ ನರೇಂದ್ರ ಮೋದಿ ಅವರ ವಿಕಸಿತ ಭಾರತ 2047 ಪರಿಕಲ್ಪನೆಯಂತೆ ದೇಶದ ಕೊನೆಯ ವ್ಯಕ್ತಿಗೂ ಅಭಿವೃದ್ಧಿಯ ಫಲ ತಲುಪುವಂತಾಗಬೇಕು. ಎಂಎಸ್‌ಎಂಇ ಕ್ಷೇತ್ರದ ಮೂಲಕ ಕೇಂದ್ರ ಸರ್ಕಾರ ಹಲವಾರು ಪ್ರೋತ್ಸಾಹಕ ಯೋಜನೆಗಳನ್ನು ಜಾರಿಗೊಳಿಸಿದ್ದು, ಉದ್ಯಮ ಆರಂಭಿಸುವ ಯುವಕರಿಗೆ ಹೆಚ್ಚಿನ ಅವಕಾಶಗಳು ದೊರೆಯುತ್ತಿವೆ. ಸಾಮಾನ್ಯ ಕುಟುಂಬಗಳ ಯುವಕರು ಕೂಡ ಕೈಗಾರಿಕೆಗಳನ್ನು ಸ್ಥಾಪಿಸಿ ಸ್ವಾವಲಂಬಿಗಳಾಗಲು ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ. ಈ ನಿಟ್ಟಿನಲ್ಲಿ ರೈಲ್ವೆ ಇಲಾಖೆಯು ತುಮಕೂರಿನಲ್ಲಿ ರೈಲ್ವೆ ಕಂಟೇನರ್ ಕಾರ್ಪೊರೇಷನ್ ಶೀಘ್ರದಲ್ಲೇ ಪ್ರಾರಂಭಿಸುತ್ತೇವೆ ಎಂದು ಹೇಳಿದರು.

ತುಮಕೂರು ಕೈಗಾರಿಕಾ ಕ್ಷೇತ್ರದಲ್ಲಿ ವೇಗವಾಗಿ ಮುನ್ನಡೆಯುತ್ತಿದ್ದು, ಬೆಂಗಳೂರಿನ ಕೈಗಾರಿಕೆಗಳು ಮತ್ತು ಹೂಡಿಕೆದಾರರು ತುಮಕೂರಿನತ್ತ ಗಮನ ಹರಿಸಬೇಕಾಗಿದೆ. ವಸಂತ ನರಸಾಪುರ ಕೈಗಾರಿಕಾ ಪ್ರದೇಶವು ರಾಜ್ಯದ ಅತಿದೊಡ್ಡ ಕೇಂದ್ರಗಳಲ್ಲಿ ಕೈಗಾರಿಕಾ ಕೇಂದ್ರಗಳಲ್ಲಿ ಒಂದಾಗಿ ರೂಪುಗೊಳ್ಳುತ್ತಿದ್ದು ಈಗಾಗಲೇ ಸಾವಿರಾರು ಎಕರೆ ಪ್ರದೇಶದಲ್ಲಿ ಕೈಗಾರಿಕೆಗಳು ಸ್ಥಾಪನೆಯಾಗಿದೆ. ಬೆಂಗಳೂರು ತುಮಕೂರು ಹಾಗೂ ಚೆನ್ನೈ ಸಂಪರ್ಕದ ಅಭಿವೃದ್ಧಿಯಿಂದ ಕೈಗಾರಿಕಾ ಹೂಡಿಕೆಗಳಿಗೆ ಹೊಸ ಅವಕಾಶಗಳು ಸೃಷ್ಟಿಯಾಗಲಿವೆ ಉದ್ಯಮಿಗಳು ತಮ್ಮ ಕಾರ್ಖಾನೆಗಳ ಬೆಳವಣಿಗೆಗಳ ಜೊತೆ ಸ್ಥಳೀಯ ಜನರೊಂದಿಗೆ ಉತ್ತಮ ಬಾಂಧವ್ಯ ಬೆಳೆಸುತ್ತಿರುವುದು ಶ್ಲಾಘನೀಯ.

ಕೈಗಾರಿಕಾ ಮತ್ತು ವಾಣಿಜ್ಯ ಸಂಸ್ಥೆಗಳು ಅಭಿವೃದ್ಧಿಯ ಪ್ರಮುಖ ಶಕ್ತಿಗಳಾಗಿ ಕಾರ್ಯ ನಿರ್ವಹಿಸುತ್ತಿದೆ. ಕೈಗಾರಿಕಾ ಕ್ಷೇತ್ರ ದೇಶದ ಆರ್ಥಿಕ ವ್ಯವಸ್ಥೆಯ ಬೆನ್ನೆಲುಬಾಗಿದ್ದು ಎಫ್‌ಕೆಸಿಸಿಐ, ಚೇಂಬರ್ ಆಫ್ ಕಾಮರ್ಸ್ ಹಾಗೂ ಇತರೆ ಸಂಘ ಸಂಸ್ಥೆಗಳು ಉದ್ಯಮಿಗಳ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡುತ್ತಿವೆ. ಕೈಗಾರಿಕೆಗಳು ನೀರು ಉಳಿಸುವ ತಂತ್ರಜ್ಞಾನಗಳನ್ನು ಅಳವಡಿಸಿಕೊಳ್ಳಬೇಕು ಮತ್ತು ಮರುಬಳಕೆಯನ್ನು ಉತ್ತೇಜಿಸಬೇಕು ಪ್ರಮುಖ ನಗರಗಳನ್ನು ಅಂದರೆ 2ನೇ ಮತ್ತು 3ನೇ ಸ್ತರದ ನಗರಗಳು ಹಾಗೂ ಜಿಲ್ಲಾ ಕೇಂದ್ರಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ. ಸಮಗ್ರ ಬೆಳವಣಿಗೆಗೆ ಸರ್ಕಾರ ಉದ್ಯಮ ಸಂಘಗಳು ಮತ್ತು ಉದ್ಯಮಿಗಳು ಒಟ್ಟಾಗಿ ಕೆಲಸ ಮಾಡಬೇಕು ಎಂದು ಕರೆ ನೀಡಿದರು.

ಆರ್ಥಿಕ ಅಭಿವೃದ್ಧಿ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಕೊಡುಗೆ ನೀಡುತ್ತಿರುವ ಎಫ್‌ಕೆಸಿಸಿಐ ಮತ್ತು ಜಿಲ್ಲಾ ಚೇಂಬರ್ ಅನ್ನು ಶ್ಲಾಘಿಸಿದರು. ಎಫ್‌ಕೆಸಿಸಿಐನ ಅಧ್ಯಕ್ಷೆ ಉಮಾರೆಡ್ಡಿ ಮಾತನಾಡಿ ನಮ್ಮ ಮಹಾಸಂಸ್ಥೆಯು ಪ್ರತಿವರ್ಷ ಒಂದೊಂದು ಜಿಲ್ಲೆಯಲ್ಲಿ ರಾಜ್ಯಮಟ್ಟದ ವಾಣಿಜ್ಯ ಮತ್ತು ಕೈಗಾರಿಕೆ ಸಂಸ್ಥೆಗಳ ಸಮ್ಮೇಳನವನ್ನು ಆಯೋಜಿಸುತ್ತಿದ್ದು ಈ ಬಾರಿ ತುಮಕೂರಿನಲ್ಲಿ ಆಯೋಜಿಸಿದ್ದೇವೆ. ಈ ಸಮ್ಮೇಳನದಲ್ಲಿ ಜಿಲ್ಲೆಗಳಲ್ಲಿ ಪ್ರಸ್ತುತ ಎದುರಿಸುತ್ತಿರುವ ವಾಣಿಜ್ಯ ಕೈಗಾರಿಕಾ ಸಮಸ್ಯೆಗಳ ಬಗ್ಗೆ ಚರ್ಚಿಸಿ ಪರಿಹಾರ ಕಂಡುಕೊಳ್ಳಲು ಈ ಸಮ್ಮೇಳನ ವೇದಿಕೆಯಾಗಿದೆ.

ರಾಜ್ಯದಲ್ಲಿ 38 ಲಕ್ಷ ಎಂಎಸ್‌ಎಂಇ ಉದ್ಯಮಗಳಿದ್ದು ಇವು ಲಕ್ಷಾಂತರ ಜನರಿಗೆ ಉದ್ಯೋಗ ನೀಡುವ ಜೊತೆಗೆ ಸಾವಿರಾರು ಕೋಟಿ ವಹಿವಾಟು ನಡೆಸುತ್ತಿವೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಎಂ ಎಸ್ ಎಮ್ ಇ ಉದ್ಯಮಶೀಲತಾ ನೀತಿಯನ್ನು ತರಬೇಕು ಎಂದು ಆಗ್ರಹ ಪಡಿಸಿದರು.

ಕಾರ್ಯಕ್ರಮದಲ್ಲಿ ಟಿಡಿಸಿಸಿಐನ ಅಧ್ಯಕ್ಷ ಪಾಂಡುರಂಗ ಕುರಂದವಾಡ, ಶಾಸಕರಾದ ಜಿ.ಬಿ.ಜ್ಯೋತಿ ಗಣೇಶ್, ಎಫ್‌ಕೆಸಿಸಿಐನ ಹಿರಿಯ ಉಪಾಧ್ಯಕ್ಷ ಟಿ.ಸಾಯಿ ರಾಮ್‌ಪ್ರಸಾದ್, ಉಪಾಧ್ಯಕ್ಷ ಬಿ.ಪಿ.ಶಶಿಧರ್, ನಿಕಟಪೂರ್ವ ಅಧ್ಯಕ್ಷ ಎಂಜಿ ಬಾಲಕೃಷ್ಣ, ಜಿಲ್ಲಾ ಸಮನ್ವಯ ಸಮಿತಿ ಛೇರ್ಮನ್ ಸುಜ್ಞಾನ ಹಿರೇಮಠ್, ಮಾಜಿ ಅಧ್ಯಕ್ಷ ಹಾಗೂ ಸಲಹೆಗಾರ ಆರ್.ಶಿವಕುಮಾರ್ ಹಾಗೂ ಟಿಡಿಸಿಸಿ ಪದಾಧಿಕಾರಿಗಳು ಮತ್ತು ಮುಂತಾದ ಗಣ್ಯರು ಉಪಸ್ಥಿತರಿದ್ದರು.

## ಸಮಾಜ ಕಲ್ಯಾಣ ಖಾತೆಗೆ ಕೆ.ಎಚ್.ಮುನಿಯಪ್ಪ - ಸತೀಶ್ ಜಾರಕಿಹೊಳಿ ನಡುವೆ ಪೈಪೋಟಿ





**ಬೆಂಗಳೂರು, ಜೂ.5:** ಖಾತೆಗಾಗಿ ರಾಮಲಿಂಗಾರೆಡ್ಡಿ, ಕೆ.ಎಚ್.ಮುನಿಯಪ್ಪ ಬಳಿಕ ಮತ್ತೊಬ್ಬ ಸಚಿವರು ಸಿಡಿಮಿಡಿಗೊಳ್ಳುತ್ತಿದ್ದು, ಸಮಾಜ ಕಲ್ಯಾಣ ಖಾತೆಗಾಗಿ ಸತೀಶ್ ಜಾರಕಿಹೊಳಿ ಪಟ್ಟುಹಿಡಿದಿದ್ದಾರೆ. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಪರಮಾಪ್ತರಾಗಿರುವ ಜಾರಕಿಹೊಳಿ ಲೋಕೋಪಯೋಗಿ ಖಾತೆ ಜೊತೆಗೆ ಅಥವಾ ಬದಲಾಗಿ ಸಮಾಜಕಲ್ಯಾಣ ಖಾತೆ ನೀಡುವಂತೆ ಒತ್ತಡ ಹೇರಿದ್ದು, ಕಾಂಗ್ರೆಸ್‌ಗೆ ಇದು ಬಿಸಿತುಪ್ಪವಾಗಿ ಪರಿಣಮಿಸಿದೆ. ಮತ್ತೊಂದೆಡೆ ಇದೇ ಖಾತೆ ಮೇಲೆ ಸಚಿವ ಕೆ.ಎಚ್. ಮುನಿಯಪ್ಪ ಕೂಡ ಕಣ್ಣಿಟ್ಟಿದ್ದಾರೆ. ನಮಗೂ ಅದೇ ಖಾತೆ ಬೇಕೆಂದು ಸತೀಶ್ ಜಾರಕಿಹೊಳಿ, ಹೈಕಮಾಂಡ್ ಅವರ ಮುಂದೆ ಒತ್ತಡ ಹೇರಿರುವುದಾಗಿ ತಿಳಿದು ಬಂದಿದೆ.

ಸಮಾಜ ಕಲ್ಯಾಣ ಇಲಾಖೆ ಕರ್ನಾಟಕದಲ್ಲಿ ಅತ್ಯಂತ ಪ್ರಭಾವಿ ಖಾತೆಯಾಗಿದೆ. ಸುಮಾರು 42 ಸಾವಿರ ಕೋಟಿ ರೂ.ಗಳಷ್ಟು ಅನುದಾನ ಬೇರೆ ಇಲಾಖೆಗಳ ಮೂಲಕ ಖರ್ಚಾಗುತ್ತಿದೆ. ಎಸ್‌ಇಪಿ–ಟಿಎಸ್‌ಪಿ ಹಿನ್ನೆಲೆಯಲ್ಲಿ ಶೋಷಿತ ಸಮುದಾಯಗಳ ಅಭಿವೃದ್ಧಿಗೆ ಹೆಚ್ಚಿನ ಹಣಕಾಸು ನೆರವು ದೊರೆಯುತ್ತಿದೆ. ಜೊತೆಗೆ ಅತ್ಯಂತ ಪ್ರಭಾವ ಶಾಲಿಯಾಗಿ ಕೆಲಸ ಮಾಡಲು ಅವಕಾಶಗಳಿವೆ. ಇದಕ್ಕಾಗಿಯೇ ಕೆ.ಎಚ್.ಮುನಿಯಪ್ಪ ಸೇರಿದಂತೆ ಹಲವಾರು ಮಂದಿ ಸಮಾಜ ಕಲ್ಯಾಣ ಇಲಾಖೆ ಮೇಲೆ ಕಣ್ಣಿಟ್ಟಿದ್ದಾರೆ. ಸಂಪುಟದಲ್ಲಿ ಇನ್ನೂ 20 ಸ್ಥಾನಗಳು ಖಾಲಿಯಿದ್ದು, ವಿಸ್ತರಣೆಯ ಬಳಿಕ ಸಂಪುಟ ಸೇರಲಿರುವ ಪ್ರಭಾವಿಯೊಬ್ಬರಿಗೆ ಸಮಾಜ ಕಲ್ಯಾಣ ಖಾತೆ ನೀಡಲು ಕಾಯ್ದಿರಿಸಲಾಗಿದೆ.

ಆದರೆ ಇದನ್ನು ಒಪ್ಪದ ಸತೀಶ್ ಜಾರಕಿಹೊಳಿ, ಕೆ.ಎಚ್.ಮುನಿಯಪ್ಪ ಮತ್ತಿತರರು ಶೋಷಿತ ಸಮುದಾಯದ ಹಿನ್ನೆಲೆಯಿಂದ ಬಂದವರಿಗೆ ಖಾತೆ ನೀಡಬೇಕೆಂದು ಪಟ್ಟು ಹಿಡಿದಿದ್ದಾರೆ. ಈವರೆಗೂ ಬಹಿರಂಗವಾಗಿ ಎಲ್ಲಿಯೂ ಹೇಳಿಕೆ ನೀಡದ ಸತೀಶ್ ಜಾರಕಿಹೊಳಿ, ಆಂತರಿಕವಾಗಿ ವರಿಷ್ಠರನ್ನು ಭೇಟಿ ಮಾಡಿ ಒತ್ತಾಯ ಮಂಡಿಸಿರುವುದಾಗಿ ಮೂಲಗಳು ತಿಳಿಸಿವೆ.



ತುಮಕೂರು ಜಿಲ್ಲೆಯ ನೊಣವಿನಕೆರೆ ಬುರುಡೆಘಟ್ಟದ ಮಲ್ಲಘಟ್ಟ ಕೆರೆ ಕಾಮಗಾರಿಯನ್ನು ಸಿಎಂ ಡಿ.ಕೆ ಶಿವಕುಮಾರ್ ಅವರು ಶನಿವಾರ ಪರಿಶೀಲಿಸಿದರು. ನಂತರ ಕಾಡಸಿದ್ದೇಶ್ವರ ಮಠದಲ್ಲಿ ಗಂಗಾಧರೇಶ್ವರ ದೇಗುಲದಲ್ಲಿ ಪೂಜೆ ಸಲ್ಲಿಸಿದರು. ಮಠದ ಡಾ. ಕರಿವೃಷಭ ದೇಶೀಕೇಂದ್ರ ಶಿವಯೋಗೀಶ್ವರ ಸ್ವಾಮೀಜಿ ಅವರಿಂದ ಆಶೀರ್ವಾದ ಪಡೆದರು.



ಸಿಂದಗಿಯ ಡಾ. ಪ್ರಭುಸಾರಂಗದೇವ ಶಿವಾಚಾರ್ಯರು, ಸೊಲ್ಲಾಪುರದ ಶ್ರೀಕಂಠ ಶಿವಾಚಾರ್ಯರು, ಹುಕ್ಕೇರಿಯ ಚಂದ್ರಶೇಖರ ಶಿವಾಚಾರ್ಯರು, ಶಿವಗಂಗೆಯ ಡಾ.ಮಲಯ ಶಾಂತಮುನಿ ಶಿವಾಚಾರ್ಯರು, ಬೆಂಗಳೂರಿನ ಡಾ ಮಹಾಂತಲಿಂಗ ಶಿವಾಚಾರ್ಯರು, ಶಹಾಪುರದ ಸೂಗೂರೇಶ್ವರ ಶಿವಾಚಾರ್ಯರು ಸಿಎಂ ಡಿ ಕೆ ಶಿವಕುಮಾರ್ ಅವರನ್ನು ಸದಾಶಿವನಗರ ನಿವಾಸದಲ್ಲಿ ಶನಿವಾರ ಭೇಟಿ ಮಾಡಿ ಆಶೀರ್ವದಿಸಿದರು. ಸಚಿವ ಈಶ್ವರ್ ಖಂಡ್ರೆ, ಶಾಸಕ ವಿಜಯಾನಂದ ಕಾಶಪ್ಪನವರ ಇದ್ದರು.

## ಪ್ರಕೃತಿಯ ಸಮತೋಲನ ರಕ್ಷಣೆಗೆ ಎಚ್ಚರದಿಂದ ಕಾರ್ಯ ನಿರ್ವಹಿಸಬೇಕಿದೆ



**ಅರಣ್ಯ ಇಲಾಖೆ ಅಧಿಕಾರಿಗಳಿಗೆ ಸಚಿವ ಈಶ್ವರ ಖಂಡ್ರೆ ಸಲಹೆ**

**ಬೆಂಗಳೂರು, ಜೂ.6:** ಅರಣ್ಯ, ಪ್ರಕೃತಿ, ಪರಿಸರ ಉಳಿಯದಿದ್ದರೆ ಮಾನವ ಕುಲವೇ ಉಳಿಯಲು ಸಾಧ್ಯವಿಲ್ಲ. ಹೀಗಾಗಿ ಅರಣ್ಯಾಧಿಕಾರಿಗಳು ಮತ್ತು ಸಿಬ್ಬಂದಿ ಈ ಜವಾಬ್ದಾರಿಯನ್ನು ಶುದ್ಧ ಅಂತಃಕರಣದಿಂದ ಮಾಡಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ಹೇಳಿದ್ದಾರೆ.

ವಿವಿಧ ವಲಯ ಅರಣ್ಯಾಧಿಕಾರಿಗಳಿಂದ ಗೌರವವಂದನೆ ಹಾಗೂ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಪ್ರಕೃತಿಯಲ್ಲಿ ಸಮತೋಲನ ಕಾಪಾಡಲು, ವನ್ಯಜೀವಿ ಸಂರಕ್ಷಣೆ, ಅರಣ್ಯ ಮತ್ತು ಜೀವವೈವಿಧ್ಯ ಸಂರಕ್ಷಣೆಯ ಹೊಣೆ ಹೊತ್ತಿರುವ ನೀವು ಎಚ್ಚರ ತಪ್ಪದಂತೆ ಕಾರ್ಯ ನಿರ್ವಹಿಸಬೇಕು ಎಂದು ತಿಳಿಸಿದರು. ಈಗ ಅರಣ್ಯ ಖಾತೆ ಸಚಿವನಲ್ಲದಿದ್ದರೂ ನನ್ನ ಮೇಲೆ ಅಭಿಮಾನವಿಟ್ಟು ಅಭಿನಂದಿಸಲು ಆಗಮಿಸಿರುವ ತಮ್ಮೆಲ್ಲರ ಅಭಿಮಾನದಿಂದ ಹೃದಯ ತುಂಬಿಬಂದಿದೆ. ನೀವು ಪ್ರಾಮಾಣಿಕತೆಯಿಂದ, ದಕ್ಷತೆಯಿಂದ ಅರಣ್ಯ, ವನ್ಯಜೀವಿ ಸಂರಕ್ಷಣೆ ಮಾಡಿದರೆ ಅದುವೇ ನೀವು ನನಗೆ ತೋರುವ ಅಭಿಮಾನ ಎಂದು ತಿಳಿಸಿದರು.

ಇರುವುದೊಂದೇ ಭೂಮಿ, ಇದನ್ನು ಜತನವಾಗಿ ಕಾಪಾಡಿ ಮುಂದಿನ ಪೀಳಿಗೆಗೆ ಹಸ್ತಾಂತರಿಸುವ ಜವಾಬ್ದಾರಿ ನಮ್ಮ ಮೇಲಿದೆ. ಇಂದು ಅರಣ್ಯ, ಹಸಿರುಹೊದಿಕೆ ಉಳಿದಿದೆ ಎಂದರೆ ಅದಕ್ಕೆ ಗಸ್ತು ನಡೆಸುವ, ವನ್ಯಜೀವಿ ಹಿಮ್ಮೆಟ್ಟಿಸುವ ಮುಂಚೂಣಿ ಸಿಬ್ಬಂದಿ ಮತ್ತು ಅಧಿಕಾರಿಗಳ ಶ್ರಮವೇ ಕಾರಣ ಎಂದರು. ನೀವೆಲ್ಲರೂ ನಿಮ್ಮ ನಿಮ್ಮ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಿ, ಸರ್ಕಾರಕ್ಕೆ ಮತ್ತು ನನಗೆ ಉತ್ತಮ ಹೆಸರು ತಂದಿದ್ದೀರಿ. ನೀವು ಮುಂದೆಯೂ ನಿಮ್ಮ ಜವಾಬ್ದಾರಿಯನ್ನು ದಕ್ಷತೆ, ಪ್ರಾಮಾಣಿಕತೆಯಿಂದ ಮಾಡಿ. ನಿಮಗೆ ಆತ್ಮತೃಪ್ತಿ ಲಭಿಸುತ್ತದೆ ಎಂದರು.

### ಶೈಕ್ಷಣಿಕ ವರ್ಷಾರಂಭ, ಕೃಷಿ ಚಟುವಟಿಕೆ ಉಸ್ತುವಾರಿಗೆ ಸಚಿವರೇ ಇಲ್ಲ

## ಖಾತೆ ಹಂಚಿಕೆ ಪ್ರಹಸನ, ರಾಜ್ಯದ ಕಾಂಗ್ರೆಸ್ ಸರ್ಕಾರದ ಆದ್ಯತೆ ಈಗ ಬಹಿರಂಗ: ಆರ್.ಅಶೋಕ್ ಟೀಕೆ

**ಬೆಂಗಳೂರು, ಜೂ.6:** ರಾಜ್ಯದಲ್ಲಿ ಶಾಲೆಗಳು ಜೂನ್ ತಿಂಗಳಿಂದ ಶುರುವಾಗಿವೆ. ಮತ್ತೊಂದೆಡೆ ರೈತರು ಮುಂಗಾರು ಹಂಗಾಮಿನ ಬಿತ್ತನೆ ಮಾಡಿದ್ದಾರೆ. ಕೃಷಿ ಚಟುವಟಿಕೆಗಳು ಗರಿಗೆದರಿದೆ. ಇಂತಹ ಸಮಯದಲ್ಲಿ ಶಿಕ್ಷಣ ಹಾಗೂ ಕೃಷಿ ಖಾತೆಗೆ ಸಚಿವರೇ ಇಲ್ಲದಾಗಿದೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸರ್ಕಾರದ ಖಾತೆ ಹಂಚಿಕೆ ಪ್ರಹಸನ, ಕಾಂಗ್ರೆಸ್ ಪಕ್ಷದ ನಿಜವಾದ ಆದ್ಯತೆಗಳೇನು ಅನ್ನುವುದನ್ನು ರಾಜ್ಯದ ಜನರ ಮುಂದೆ ಸಂಪೂರ್ಣವಾಗಿ ಬೆತ್ತಲು ಮಾಡಿದೆ!ಎಂದು ವಿಪಕ್ಷ ನಾಯಕ ಆರ್. ಅಶೋಕ್ ಟೀಕಾಪ್ರಹಾರ ನಡೆಸಿದ್ದಾರೆ.



ಈ ಬಗ್ಗೆ ತಮ್ಮ ಎಕ್ಸ್ ಖಾತೆಯಲ್ಲಿ ಶನಿವಾರ ಮಾಹಿತಿ ಹಂಚಿಕೊಂಡಿರುವ ಅವರು, ಒಂದು ಕಡೆ ಮುಂಗಾರು ಬಿತ್ತನೆಗೆ ರೈತರು ಸಿದ್ಧತೆ ನಡೆಸಿದ್ದಾರೆ. ಇಂತಹ ಮಹತ್ವದ ಸಂದರ್ಭದಲ್ಲಿ ರಾಜ್ಯಕ್ಕೆ ಪೂರ್ಣಾವಧಿ ಕೃಷಿ ಸಚಿವರೇ ಇಲ್ಲ. ಬಿತ್ತನೆ ಬೀಜಗಳ ಲಭ್ಯತೆ, ರಸಗೊಬ್ಬರಗಳ ಪೂರೈಕೆ, ಬೆಳೆ ಸಾಲ, ಬೆಳೆ ವಿಮೆ, ಮಳೆ ಪರಿಸ್ಥಿತಿಯ ಅವಲೋಕನ, ಇವೆಲ್ಲದರ ಬಗ್ಗೆ ಕಾಳಜಿ ವಹಿಸಬೇಕಾದ ಕೃಷಿ ಇಲಾಖೆ ಈಗ ಸಚಿವರಿಲ್ಲದೆ ಅನಾಥವಾಗಿದೆ ಎಂದಿದ್ದಾರೆ.

ಇನ್ನೊಂದೆಡೆ ಹೊಸ ಶೈಕ್ಷಣಿಕ ವರ್ಷ ಆರಂಭವಾಗಿದೆ. ಸಾವಿರಾರು ಸರ್ಕಾರಿ ಶಾಲೆಗಳಲ್ಲಿ ಮಳೆ ಬಂದರೆ ಸೋರುವ ಕೊಠಡಿಗಳು, ಕುಸಿಯುವ ಗೋಡೆಗಳು ದುರಸ್ತಿಗಾಗಿ ಕಾಯುತ್ತಿವೆ, ಶೌಚಾಲಯಗಳ ಕೊರತೆ ಹಾಗೇ ಇವೆ. ಲಕ್ಷಾಂತರ ವಿದ್ಯಾರ್ಥಿಗಳಿಗೆ ಪಠ್ಯಪುಸ್ತಕ, ಸಮವಸ್ತ್ರ ವಿತರಣೆ, ಶಿಕ್ಷಕರ ಕೊರತೆ ನೀಗಿಸುವ ನೂರಾರು ತುರ್ತು ಸವಾಲುಗಳಿ ಬೆಟ್ಟದಷ್ಟಿವೆ. ಆದರೆ ರಾಜ್ಯಕ್ಕೆ ಒಬ್ಬ ಶಿಕ್ಷಣ ಸಚಿವರೇ ಗತಿಯಿಲ್ಲ ಎಂದು ರಾಜ್ಯ ರಾಜಕೀಯದ ಸದ್ಯದ ಪರಿಸ್ಥಿತಿ ವಿವರಿಸಿದ್ದಾರೆ.

**ಹಣ ಹೊಡೆಯಲು ಅನುಕೂಲವಾಗಿರುವ ಖಾತೆಗೆ ಪೈಪೋಟಿ**

ಕಾಂಗ್ರೆಸ್ ನಾಯಕರ ಕಣ್ಣಿರುವುದು ಕೇವಲ ಲೂಟಿ ಹೊಡೆಯುವ ಖಾತೆಗಳ ಮೇಲೆ ಮಾತ್ರ! ರೈತರು, ವಿದ್ಯಾರ್ಥಿಗಳ ಕಷ್ಟ ಇವರಿಗೆ ಬೇಕಾಗಿಲ್ಲ. ಸಾವಿರಾರು ಕೋಟಿ ರೂಪಾಯಿಗಳ ಸಂಪನ್ಮೂಲ, ಗುತ್ತಿಗೆ ಮತ್ತು ಕಮೀಷನ್ ದಂಧೆಗೆ ಅನುಕೂಲವಾಗುವ ಖಾತೆಗಳಿಗಾಗಿ ಮಾತ್ರ ಕಾಂಗ್ರೆಸ್ ನಾಯಕರ ನಡುವೆ ರಣಹದ್ದುಗಳಂತೆ ಭಾರೀ ಪೈಪೋಟಿ ನಡೆಯುತ್ತಿದೆ. ಸಿಎಂ ಡಿ.ಕೆ.ಶಿವಕುಮಾರ್ ಅವರೇ ಇದೇನಾ ನಿಮ್ಮ ಜನಪರ ಆಡಳಿತ ಎಂದು ಅಶೋಕ್ ಖಾರವಾಗಿ ಪ್ರಶ್ನಿಸಿದ್ದಾರೆ. ಬೆಂಗಳೂರು ಅಭಿವೃದ್ಧಿ ಖಾತೆಯನ್ನು ಕಾಂಗ್ರೆಸ್ ಹೈಕಮಾಂಡ್ ಒಬ್ಬ ಸಮರ್ಥ ಸಚಿವರಿಗೆ ಕೊಟ್ಟಿದೆ ಎಂದು ಡಂಗುರ ಸಾರುತ್ತಾರೆ. ಆದರೆ ನಗರದ ಯೋಜನೆ ಮತ್ತು ಅಭಿವೃದ್ಧಿಗೆ ಅತ್ಯಂತ ಮಹತ್ವವಾಗಿರುವ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಮತ್ತು ಬಿಎಂಆರ್‌ಡಿಎ ಎನ್ನುವ ಮುಖ್ಯಮಂತ್ರಿಗಳೇ ತಮ್ಮ ಬಳಿಯೇ ಇಟ್ಟುಕೊಂಡಿದ್ದಾರೆ. ಹಾಗಿದ್ದರೆ ಸಚಿವರ ಬಳಿ ಉಳಿದಿರುವುದು ಏನು ಈ ಸರ್ಕಾರದಲ್ಲಿ ಬೆಂಗಳೂರು ಅಭಿವೃದ್ಧಿ ಸಚಿವರು ಆಟಕ್ಕುಂಟು ಲೆಕ್ಕಕ್ಕಿಲ್ಲ ಎನ್ನುವಂತಾಗಿದೆ ಎಂದು ಲೇವಡಿ ಮಾಡಿದರು.

**ಜನರಿಂದ ತಕ್ಕಪಾಠ ನೂರರಷ್ಟು ಗ್ಯಾರಂಟಿ**

ಕಳೆದ ಹಲವು ವಾರಗಳಿಂದ ಇಡೀ ರಾಜ್ಯದ ಆಡಳಿತ ಯಂತ್ರ ಸಂಪೂರ್ಣ ಸ್ಥಗಿತಗೊಂಡಿದೆ. ಕಾಂಗ್ರೆಸ್‌ನ ಒಳಜಗಳ, ಅಧಿಕಾರದ ಕಿತ್ತಾಟ ಮತ್ತು ಹುದ್ದೆಗಳ ಹಂಚಿಕೆಯ ರಾಜಕಾರಣಕ್ಕೆ ರಾಜ್ಯದ ಜನತೆ ಬಲಿಯಾಗುತ್ತಿದ್ದಾರೆ. ಈ ಸರ್ಕಾರದ ಮೊದಲ ಆದ್ಯತೆ ರೈತನಲ್ಲ, ವಿದ್ಯಾರ್ಥಿಯಲ್ಲ, ಜನಸಾಮಾನ್ಯರಲ್ಲ ರಾಜ್ಯದ ಅಭಿವೃದ್ಧಿಯೂ ಅಲ್ಲ. ಈ ಸರ್ಕಾರದ ಪ್ರಥಮ ಆದ್ಯತೆ, ಅಧಿಕಾರ, ಸಂಪನ್ಮೂಲ ಮತ್ತು ಲೂಟಿ ಹೊಡೆಯುವುದಾಗಿದೆ. ಈ ಲಜ್ಜೆಗೆಟ್ಟ ಅಧಿಕಾರ ದಾಹವನ್ನು ಸೂಕ್ಷ್ಮವಾಗಿ ಗಮನಿಸುತ್ತಿರುವ ಕರ್ನಾಟಕದ ಜನತೆ ಮುಂಬರುವ ಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ತಕ್ಕ ಪಾಠ ಕಲಿಸುವುದು ಮಾತ್ರ ನೂರಕ್ಕೆ ನೂರು ಪರ್ಸೆಂಟ್ ಗ್ಯಾರಂಟಿ ಎಂದು ಭವಿಷ್ಯ ನುಡಿದರು.

## ಪೋಕ್ಸೋ, ಕ್ರಿಮಿನಲ್ಸ್, ಜೈಲುವಾಸಿಗಳನ್ನು ಪಕ್ಷದ ಅಧ್ಯಕ್ಷರನ್ನಾಗಿ ಮಾಡುವ ಕೆಟ್ಟ ಪರಂಪರೆ ಕಾಂಗ್ರೆಸ್‌ನಲ್ಲಿ ಇಲ್ಲ: ಬಿ.ಕೆ. ಹರಿಪ್ರಸಾದ್



**ಬೆಂಗಳೂರು, ಜೂ. 5:** ಕಾಂಗ್ರೆಸ್ ಪಕ್ಷದಲ್ಲಿ ಪೇಮೆಂಟ್ ಕೊಟ್ಟು ಅಧ್ಯಕ್ಷರಾಗುವ ರೂಢಿಯೂ ಇಲ್ಲ, ಕೊಲೆ ಕೇಸಿನಲ್ಲಿ ಗಡಿಪಾರಾದವರು, ಪೋಕ್ಸೋ ಆರೋಪಿಗಳು, ಕ್ರಿಮಿನಲ್ಸ್ ಹಾಗೂ ಜೈಲುವಾಸಿಗಳನ್ನು ಅಧ್ಯಕ್ಷರನ್ನಾಗಿ ಮಾಡುವ ಕೆಟ್ಟ ಪರಂಪರೆಯೂ ಇಲ್ಲ ಎಂದು ನಿಯೋಜಿತ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಬಿಜೆಪಿ ವಿರುದ್ಧ ಹರಿಹಾಯ್ದಿದ್ದಾರೆ. ಈ ಕುರಿತು ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಪಂಚಾಯ್ತಿ ಚುನಾವಣೆಯಲ್ಲೂ ಸ್ಪರ್ಧಿಸದ ಪ್ರಧಾನಿ ನರೇಂದ್ರ ಮೋದಿ ಅವರನ್ನು ಗುಜರಾತಿನಲ್ಲಿ ಮುಖ್ಯಮಂತ್ರಿ ಮಾಡಿದವರು ಯಾರು, ಯಾವ ಜನರಿಂದ ಆಯ್ಕೆಯಾಗಿ ಮುಖ್ಯಮಂತ್ರಿಯಾಗಿದ್ದರು ಎನ್ನುವ ಇತಿಹಾಸವಾದರೂ ಬಿಜೆಪಿಗೆ ನೆನಪಿದೆಯೇ ಎಂದು ಪ್ರಶ್ನಿಸಿದ್ದಾರೆ.

ಯಾವ ಚುನಾವಣೆಯನ್ನೂ ನಡೆಸದೇ, ಕನಿಷ್ಠ ಪಕ್ಷ ಆರ್.ಎಸ್.ಎಸ್. ಸಂಘಟನೆ ಸಂಘ ಪರಿವಾರದಲ್ಲೇ ಚುನಾವಣೆ ಎದುರಿಸದ ಮೋಹನ್ ಭಾಗವತ್‌ಗೆ ಯಾವ ಜನರು ಆಯ್ಕೆ ಮಾಡಿದ್ದಾರೆ. ಜೀಗಳನ್ನು ಚುನಾವಣಾ ಚಾಣಕ್ಯ ಎಂದು "ಹುಜೂರ್" ಎನ್ನುವ ರಾಜ್ಯ ಬಿಜೆಪಿ ಪಕ್ಷ ಕರ್ನಾಟಕದಲ್ಲಿ ಎಂದೂ ಸ್ವಂತ ಬಲದಲ್ಲಿ ಅಧಿಕಾರಕ್ಕೆ ಬಂದಿಲ್ಲ, ಬರುವುದೂ ಇಲ್ಲ ಎಂದು ಹೇಳಿದ್ದಾರೆ.

ಬಿಜೆಪಿಯ ಪಾಕಿಸ್ತಾನದ ಮೇಲಿನ ಪ್ರೀತಿಯಂತೂ ನಿನ್ನೆ ಮೊನ್ನೆಯದಲ್ಲ ಅದಕ್ಕೆ ಬಹುದೊಡ್ಡ ಇತಿಹಾಸವೇ ಇದೆ. ದ್ವಿರಾಷ್ಟ್ರ ಸಿದ್ಧಾಂತದ ಪ್ರತಿಪಾದಿಸಿದ ಸಾವರ್ಕರ್‌ರಿಂದ ಹಿಡಿದು ಇಂದಿನ ರಸಬಾಳೆ, ಹೊಸಬಾಳೆಯ "ಪಾಕಿಸ್ತಾನದೊಂದಿಗೆ ಮಾತುಕತೆಯ ಬಾಗಿಲು ಮುಚ್ಚಬಾರದು" ಎನ್ನುವವರೆಗೂ ಮುಂದುವರೆಯುತ್ತಲೇ ಇದೆ. ಆರ್‌ಎಸ್‌ಎಸ್ ಮತ್ತು ಬಿಜೆಪಿ ಪ್ರತಿಪಾದಿಸುವ ನಕಲಿ ಹಿಂದೂತ್ವವನ್ನು ವಿರೋಧಿಸುತ್ತಲೇ ಇದ್ದೇನೆ, ವಿರೋಧಿಸುತ್ತಲೇ ಇರುತ್ತೇನೆ. ನಕಲಿ ದೇಶಪ್ರೇಮಿಗಳ ಆಟ ಇನ್ನೂ ರಾಜ್ಯದಲ್ಲಿ ನಡೆಯುವುದಿಲ್ಲ ಎಂದು ಬಿ.ಕೆ. ಹರಿಪ್ರಸಾದ್ ಟೀಕಿಸಿದ್ದಾರೆ.

# ರಾಜ್ಯದ ಹಣಕಾಸಿನ ಸ್ಥಿತಿ ಕುರಿತು ಸಿಎಂ ಶ್ವೇತಪತ್ರ ಹೊರಡಿಸಲಿ: ಬೊಮ್ಮಾಯಿ ಒತ್ತಾಯ

### ರಾಜ್ಯದ ಆರ್ಥಿಕ ಪರಿಸ್ಥಿತಿ ದುಸ್ಥಿತಿಯಲ್ಲಿದೆ: ಬಸವರಾಜ ಬೊಮ್ಮಾಯಿ

**ಹಾವೇರಿ(ಶಿಗ್ಗಾವಿ), ಜೂ.6:** ರಾಜ್ಯದ ಆರ್ಥಿಕ ಪರಿಸ್ಥಿತಿ ದುಸ್ಥಿತಿಯಲ್ಲಿದ್ದು, ಹಿಂದಿನ ಸಿಎಂ ಸಿದ್ದರಾಮಯ್ಯ ಅವರು ಬಿಟ್ಟು ಹೋದ ಹಣಕಾಸಿನ ಸ್ಥಿತಿ ಕುರಿತು ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಶ್ವೇತ ಪತ್ರ ಹೊರಡಿಸಲಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.

ಶನಿವಾರ ಶಿಗ್ಗಾವಿಯಲ್ಲಿ ಸುದ್ದಿಗಾರ ರೊಂದಿಗೆ ಮಾತನಾಡಿದ ಅವರು, ಉತ್ತರ ಕರ್ನಾಟಕ ಗುತ್ತಿಗೆದಾರರ 23 ಸಾವಿರ ಕೋಟಿ ಬಿಲ್ಲು ಬಾಕಿ ಪಾವತಿಸಲು ಶಾಸಕ, ಸಚಿವ, ಅಧಿಕಾರಿಗಳಿಂದ ಭ್ರಷ್ಟಾಚಾರದ ಕಿರುಕುಳ ಆರೋಪಗಳು ಕೇಳು ಬರುತ್ತಿದೆ. ಇದನ್ನು ಹೇಗೆ ಸರಿಪಡಿಸಲಿದ್ದಾರೆ? ಕಾನೂನು ಬಿಟ್ಟು ಕೆಲಸ ಮಾಡಬೇಡಿ ಎಂದು ಹೇಳುವ ಬದಲು, ವ್ಯವಸ್ಥೆ ಬಿಟ್ಟು ಹೋಗಬೇಡಿ ಎಂದು ಹೇಳಿದ ನೂತನ ಸಿಎಂ ಡಿ.ಕೆ. ಶಿವಕುಮಾರ ಅವರ ವ್ಯವಸ್ಥೆ ಏನು ಎಂದು ಬೊಮ್ಮಾಯಿ ಪ್ರಶ್ನಿಸಿದರು.

**ಹಣಕಾಸು ಸುಧಾರಣೆ ಚಿಂತನೆ ಇಲ್ಲ**

ರಾಜ್ಯ ಹಣಕಾಸು ದುಸ್ಥಿತಿ ದೊಡ್ಡ ಪ್ರಮಾಣದಲ್ಲಿದೆ. ಆದರೆ, ಸುಧಾರಿಸುವ ಚಿಂತನೆ ಈವರೆಗೂ ಸಿಎಂ., ಡಿಸಿಎಂ ಅವರಿಗಿಲ್ಲ. ಡಿಕೆಶಿ ಅವರಿಗೆ ಶ್ವೇತಪತ್ರ ಕೊಟ್ಟು ಹಿಂದಿನ ಸಿಎಂ ಸಿದ್ದರಾಮಯ್ಯ ಅವರು ಬಿಟ್ಟು ಹೋದ ಹಣಕಾಸಿನ ಸ್ಥಿತಿ ಕುರಿತು ಎಷ್ಟು ಸಾಲ, ಎಲ್ಲಲ್ಲಿ ಮಾಡಿದ್ದಾರೆ. ಎಲ್ಲಲ್ಲಿ ಉಪಯೋಗ ಆಗಿದೆ? ಬಂಡವಾಳದ ಹೂಡಿಕೆಯಲ್ಲಿ ಆಗಿದೆಯೇ? ಅಥವಾ ನಿತ್ಯ ಸಂಬಳ, ಪಿಂಚಣಿ, ಸಾಲ ಮರುಪಾವತಿಗೆ ಆಗಿದೆಯೇ? ಗ್ಯಾರಂಟಿಗಳಿಗೆಷ್ಟೇ ಉಪಯೋಗ ಆಗಿದೆಯಾ? ಶೇ. 90 ಕ್ಕಿಂತ ಹೆಚ್ಚು ನಿಗದಿತ ವೆಚ್ಚ ಆಗಿದೆ. ಅದು ಒಳ್ಳೇಯದು ಆದರೆ, ಅಭಿವೃದ್ಧಿಗೆ ನಯಾ ಪೈಸೆ ಕೊಟ್ಟಿಲ್ಲ. ಆದರೆ, 4.5 ಲಕ್ಷ ಕೋಟಿ ಬಜೆಟ್ ಮಾಡಿದ್ದಾರೆ. ಅದರ ಶೇ.90 ರಷ್ಟು ಬದ್ಧತಾ ವೆಚ್ಚಕ್ಕೆ ಹೋಗುತ್ತಿದೆ. ಯಾವ ಅಭಿವೃದ್ಧಿ ಕಾರ್ಯಕ್ಕೆ ಹೋಗುತ್ತಿಲ್ಲ ಇಂತಹ ಪರಿಸ್ಥಿತಿಯಲ್ಲಿ ಕರ್ನಾಟಕವನ್ನು ಯಾವ ರೀತಿ ಮುನ್ನಡಿಸುತ್ತಾರೆ ಸಿಎಂ ಶಿವಕುಮಾರ ಸಾರ್ವಜನಿಕವಾಗಿ ತಿಳಿಸಬೇಕು ಅದು ಅವರ ಜವಾಬ್ದಾರಿ ಎಂದು ತಿಳಿಸಿದ ಬೊಮ್ಮಾಯಿ, ನಾನು ಸಿಎಂ. ಆಗಿ ಅಧಿಕಾರ ವಹಿಸಿಕೊಂಡ ಕೋವಿಡ್ ವೇಳೆಯಲ್ಲಿ ಹಣಕಾಸಿನ ಸಮಸ್ಯೆಯಿದ್ದರೂ ಸರಿಯಾದ ಆರ್ಥಿಕ ನಿರ್ವಹಣೆ ಮಾಡಿ, ಸೋರಿಕೆ ತಡೆದು, ಅನಾವಶ್ಯಕ ವೆಚ್ಚಗಳನ್ನು ಕಡಿಮೆ ಮಾಡಿ ಕೆಲಸ ಮಾಡಿದ್ದೇವೆ ಇಂತ ಧೈರ್ಯ ಮಾಡುತ್ತಾರಾ ಎಂದು ಪ್ರಶ್ನಿಸಿದರು.

**ರೈತರ ಬಗ್ಗೆ ಅಸಡ್ಡೆ**

ವಿಷ್ಯದಲ್ಲಿ ರಾಜ್ಯ ಸರಕಾರದಿಂದ ಜನಪರ ಕಾರ್ಯಕ್ರಮಗಳನ್ನು ನಿರೀಕ್ಷಿಸಲು ಸಾಧ್ಯವಿಲ್ಲ. ಸರಕಾರದಲ್ಲಿ ಅದೇ ವ್ಯವಸ್ಥೆ, ಗುದ್ದಾಟ ಇದೆ. ಪ್ರತಿ ಜಿಲ್ಲೆಯಲ್ಲಿ ಒಂದೊಂದು ಸಮಸ್ಯೆ ಇದೆ. ಉತ್ತರ ಕರ್ನಾಟಕ ಭಾಗದಲ್ಲಿ ನೀರಾವರಿ ಸಮಸ್ಯೆ ಇದೆ. ರೈತರಿಗೆ ನೀರು ಕೊಡುವ ಜಲಸಂಪನ್ಮೂಲ ಖಾತೆ. ಇದನ್ನು ನಿರ್ವಹಿಸಲು ರಾಮಲಿಂಗಾರೆಡ್ಡಿ ಒಪ್ಪುತ್ತಿಲ್ಲ ಇದು ಒಳ್ಳೇಯ ಲಕ್ಷಣವಲ್ಲ. ಪ್ರಾರಂಭವೂ ಅಲ್ಲ. ಕಾಂಗ್ರೆಸ್ಸಿಗರಿಗೆ ರೈತರ ಬಗ್ಗೆ ತೋರುತ್ತಿರುವ ಆಸಡ್ಡೆ ಎಂದು ಬೊಮ್ಮಾಯಿ ಆರೋಪಿಸಿದರು.

**ರೈತರ ನೆರವಿಗೆ ಬರಲಿ**

ಮೊದಲು ಸಚಿವ ಸಂಪುಟದಲ್ಲಿ ರೈತರ ಬಿತ್ತನೆ ಬೀಜ, ಗೊಬ್ಬರ ಬಗ್ಗೆ ವ್ಯವಸ್ಥೆ ಬಗ್ಗೆ ಚರ್ಚಿಸುವ ನಿರೀಕ್ಷೆ ಹುಸಿಯಾಗಿದೆ. ಅಲ್ಲಲ್ಲಿ ಬೀಜ, ಗೊಬ್ಬರ ಕೊರತೆ ಕಾಣುತ್ತಿದೆ. ವ್ಯಾಪಾರಿಗಳು ಈಗಾಗಲೇ ದಾಸ್ತಾನು ಮಾಡಿಕೊಂಡು ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿದ್ದಾರೆ. ಸರಕಾರ ರೈತರ ನೆರವಿಗೆ ಬರಬೇಕು. ಸಮರ್ಪಕವಾದ ನಿರ್ವಹಣೆ ಮಾಡಬೇಕು. ಇಲ್ಲಿವರೆಗೂ ಕೃಷಿ ಖಾತೆ ಯಾರಿಗೂ ತ್ವರಿತವಾಗಿ ಕೊಟ್ಟು ನಿರ್ವಹಣೆ ಮಾಡಲು ಸರಕಾರ ಮುಂದಾಗಬೇಕು ಎಂದು ಬೊಮ್ಮಾಯಿ ಆಗ್ರಹಿಸಿದರು.

**ಬದಲಾವಣೆ ಚರ್ಚೆ ಇಲ್ಲ**

ಬಿಜೆಪಿಯಲ್ಲಿ ನಾಯಕತ್ವ ಬದಲಾವಣೆ ಕುರಿತು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ಅವರು, ಮುಖ್ಯಮಂತ್ರಿ ಬದಲಾವಣೆಯಾಗಿದೆ ಎಂಬ ಕಾರಣಕ್ಕೆ ವಿರೋಧ ಪಕ್ಷದ ನಾಯಕರ ಮತ್ತು ರಾಜ್ಯಾಧ್ಯಕ್ಷರ ಬದಲಾವಣೆ ವಿಚಾರ, ಪಕ್ಷದ ಮುಂದೆ ಚರ್ಚೆಯಾಗಲಿ, ಸೂಚನೆಯಾಗಲಿ ಯಾವುದು ಇಲ್ಲ. ಅಂತಹ ಪ್ರಸಂಗವೂ ಇಲ್ಲ ಎಂದು ಸ್ಪಷ್ಟಪಡಿಸಿದರು.

ಪಕ್ಷದ ಸಂಘಟನೆ ದೃಷ್ಟಿಯಿಂದ ಒಂದಿಷ್ಟು ಬದಲಾವಣೆ ಇದೆ ಹೊರತು, ಅಂತ ದೊಡ್ಡ ಬದಲಾವಣೆ ಇಲ್ಲ. ಈಗಾಗಲೇ ವಿಭಾಗವಾರು ಸಂಘಟನೆ ಎಸ್‌ಐಆರ್ ಬಗ್ಗೆ ಹೆಚ್ಚಿನ ಗಮನ ಕೊಟ್ಟು ಹಿಂದುಳಿದ ವರ್ಗ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಹೆಚ್ಚು ಸಾಮಾಜಿಕ ನ್ಯಾಯ ನೀಡಲು ತಿರ್ಮಾನಿಸಿದ್ದಾಗಿ ತಿಳಿಸಿದರು.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಪಶ್ಚಿಮ ಏಷ್ಯಾದ ಉದ್ವಿಗ್ನತೆ ನಡುವೆ ಭಾರತದ ಆರ್ಥಿಕತೆ ರಕ್ಷಿಸಲು ಮೋದಿ ನಿರ್ಣಾಯಕ ನಿರ್ಧಾರ



**ನವದೆಹಲಿ, ಜೂ.6:** ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಗಳಿಂದ ಉಂಟಾಗುವ ಆರ್ಥಿಕ ಸವಾಲುಗಳನ್ನು ಪರಿಹರಿಸಲು ಪ್ರಧಾನಿ ನರೇಂದ್ರ ಮೋದಿ ಶನಿವಾರ ಪ್ರಧಾನಿಯವರ ಆರ್ಥಿಕ ಸಲಹಾ ಮಂಡಳಿಯೊಂದಿಗೆ ಉನ್ನತ ಮಟ್ಟದ ಸಭೆ ನಡೆಸಿದರು. ಜಾಗತಿಕ ಅಡೆತಡೆಗಳಿಂದ ಭಾರತದ ಆರ್ಥಿಕತೆಯನ್ನು ರಕ್ಷಿಸುವುದು, ಪೂರೈಕೆ ಸರಪಳಿ ದುರ್ಬಲತೆಗಳನ್ನು ನಿರ್ವಹಿಸುವುದು ಮತ್ತು ದೇಶದ ಶೇ. 7.7ರ ದೃಢವಾದ GDP ಬೆಳವಣಿಗೆಯನ್ನು ಉಳಿಸಿಕೊಳ್ಳುವ ಬಗ್ಗೆ ಚರ್ಚೆಗಳು ಕೇಂದ್ರೀಕರಿಸಿದವು. "ಜಾಗತಿಕ ಭೂದೃಶ್ಯವು ಅಸ್ಥಿರವಾಗಿದೆ, ಆದರೆ ಭಾರತವು ತನ್ನ ಆವೇಗವನ್ನು ಮುಂದುವರಿಸಬೇಕು" ಎಂದು ಮೋದಿ ಹೇಳಿದರು, ಭೌಗೋಳಿಕ ರಾಜಕೀಯ ಅನಿಶ್ಚಿತತೆಗಳ ನಡುವೆ ಸ್ಥಿತಿಸ್ಥಾಪಕತ್ವದ ಮಹತ್ವವನ್ನು ಒತ್ತಿ ಹೇಳಿದರು. ಕೌನ್ಸಿಲ್‌ನ ಚರ್ಚೆಗಳು ವ್ಯಾಪಾರ ಮಾರ್ಗಗಳು, ಇಂಧನ ಮಾರುಕಟ್ಟೆಗಳು ಮತ್ತು ಹಣದುಬ್ಬರ ಒತ್ತಡಗಳ ಮೇಲೆ ಪಶ್ಚಿಮ ಏಷ್ಯಾ ಸಂಘರ್ಷದ ಪ್ರಭಾವದ ವಿವರವಾದ ಮೌಲ್ಯಮಾಪನವನ್ನು ಒಳಗೊಂಡಿವೆ, ವಿಶೇಷವಾಗಿ ಇತ್ತೀಚಿನ ಭಾರತೀಯ ರಿಸರ್ವ್ ಬ್ಯಾಂಕ್ ನೀತಿ ನಿರ್ಧಾರಗಳ ನಂತರ ಗ್ರಾಹಕ ಬೆಲೆ ಸೂಚ್ಯಂಕ ಹಣದುಬ್ಬರ ಮುನ್ಸೂಚನೆಗಳು 5.9% ರ ಸಮೀಪದಲ್ಲಿವೆ. ಜೂನ್ 5 ರಂದು ಬಿಡುಗಡೆಯಾದ ಅಧಿಕೃತ ದತ್ತಾಂಶವು ಭಾರತದ ಆರ್ಥಿಕ ಬಲವನ್ನು ಎತ್ತಿ ತೋರಿಸಿದೆ, 2025–26 ರ ಹಣಕಾಸು ವರ್ಷದ ನಾಲ್ಕನೇ ತ್ರೈಮಾಸಿಕದಲ್ಲಿ ನೈಜ ಜಿಡಿಪಿ ವರ್ಷದಿಂದ ವರ್ಷಕ್ಕೆ 7.8% ರಷ್ಟು ಬೆಳೆಯುವ ನಿರೀಕ್ಷೆಯಿದೆ ಮತ್ತು ಪೂರ್ಣ ವರ್ಷದ ಬೆಳವಣಿಗೆಯನ್ನು 7.7% ಎಂದು ಅಂದಾಜಿಸಲಾಗಿದೆ. 4 ನೇ ತ್ರೈಮಾಸಿಕದ ನೈಜ ಜಿಡಿಪಿ ರೂ 87.77 ಲಕ್ಷ ಕೋಟಿ ಎಂದು ಅಂದಾಜಿಸಲಾಗಿದೆ, ಇದು ಹಿಂದಿನ ವರ್ಷದ ರೂ 81.40 ಲಕ್ಷ ಕೋಟಿಗಳಿಂದ ಹೆಚ್ಚಾಗಿದೆ, ಆದರೆ ನಾಮಮಾತ್ರ ಜಿಡಿಪಿ 9.1% ರಷ್ಟು ಏರಿಕೆಯಾಗಿ ರೂ 94.65 ಲಕ್ಷ ಕೋಟಿಗಳಿಗೆ ತಲುಪಿದೆ. ಪೂರ್ಣ ಹಣಕಾಸು ವರ್ಷಕ್ಕೆ, ನೈಜ ಜಿಡಿಪಿ ರೂ 323.12 ಲಕ್ಷ ಕೋಟಿಗಳೆಂದು ಅಂದಾಜಿಸಲಾಗಿದೆ, ಇದು 7.7% ಹೆಚ್ಚಳವನ್ನು ಸೂಚಿಸುತ್ತದೆ, ಇದು ಪ್ರಾಥಮಿಕವಾಗಿ ದ್ವಿತೀಯ ಮತ್ತು ತೃತೀಯ ವಲಯಗಳಲ್ಲಿನ ಗಮನಾರ್ಹ ವಿಸ್ತರಣೆಗಳಿಂದ ನಡೆಸಲ್ಪಡುತ್ತದೆ. ಜಾಗತಿಕ ಏರಿಳಿತದ ನಡುವೆ ಭಾರತೀಯ ಮಾರುಕಟ್ಟೆಗಳನ್ನು ಆಕರ್ಷಕವಾಗಿಡುವ ಗುರಿಯನ್ನು ಹೊಂದಿರುವ ಸರ್ಕಾರಿ ಭದ್ರತಾ ಬಾಂಡ್‌ಗಳ ಮೇಲೆ ತೆರಿಗೆ ಪ್ರೋತ್ಸಾಹಕಗಳನ್ನು ನೀಡುವ ಮೂಲಕ ಭಾಗವಹಿಸುವವರು ಹೂಡಿಕೆಯನ್ನು ಆಕರ್ಷಿಸುವ ಕ್ರಮಗಳನ್ನು ಸಹ ಅನ್ವೇಷಿಸಿದ್ದಾರೆ. ವ್ಯಾಪಾರ ಮಾಡುವ ಸುಲಭತೆಯನ್ನು ಹೆಚ್ಚಿಸುವ ಮತ್ತು ಜೀವನಮಟ್ಟವನ್ನು ಸುಧಾರಿಸುವ ಸುಧಾರಣೆಗಳಿಗೆ ಸರ್ಕಾರ ಆದ್ಯತೆ ನೀಡುವುದನ್ನು ಮುಂದುವರಿಸಿದೆ, ದೀರ್ಘಾವಧಿಯ ರಚನಾತ್ಮಕ ತಂತ್ರಗಳೊಂದಿಗೆ ತಕ್ಷಣದ ಬಿಕ್ಕಟ್ಟು ನಿರ್ವಹಣೆಯನ್ನು ಸಂಯೋಜಿಸುತ್ತದೆ. ಜಾಗತಿಕ ಆರ್ಥಿಕ ಬೆಳವಣಿಗೆ ಅಸಮಾನವಾಗಿ ಮತ್ತು ಭೌಗೋಳಿಕ ರಾಜಕೀಯ ಉದ್ವಿಗ್ನತೆ ಮುಂದುವರಿದಂತೆ, ಮೋದಿ ಆಡಳಿತದ ಪೂರ್ವಭಾವಿ ವಿಧಾನವು ಬಾಹ್ಯ ಅಪಾಯಗಳಿಗೆ ಒಡ್ಡಿಕೊಳ್ಳುವುದನ್ನು ಕಡಿಮೆ ಮಾಡುವಾಗ ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಗಳಲ್ಲಿ ಒಂದಾಗಿ ಭಾರತದ ಸ್ಥಾನವನ್ನು ಕಾಯ್ದುಕೊಳ್ಳಲು ಪ್ರಯತ್ನಿಸುತ್ತದೆ.



ನವದೆಹಲಿಯಲ್ಲಿ ಶನಿವಾರ ನಡೆದ 'ಯೂತ್ ಫಾರ್ ವಿಕಸಿತ ಭಾರತ – ಮೈ ಭಾರತ್ ಯುವ ಸಮಾವೇಶ' ಕಾರ್ಯಕ್ರಮದಲ್ಲಿ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಹಾಗೂ ಯುವಜನ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಭಾಗವಹಿಸಿದ್ದರು.



ತುಮಕೂರಿನ ಕೆರೆಗೋಡಿ–ರಂಗಾಪುರದ ಮಠದಲ್ಲಿ ನೂತನ 'ಮಹಾಮನೆ' ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿದ ಕೇಂದ್ರ ಸಚಿವ ವಿ.ಸೋಮಣ್ಣ ಗುರು ಪರದೇಶಿಕೇಂದ್ರ ಮಹಾಸ್ವಾಮೀಜಿಯವರ ಆಶೀರ್ವಾದ ಪಡೆದರು

# ನೀಟ್ ಮರುಪರೀಕ್ಷೆ ಪ್ರಶ್ನೆಪತ್ರಿಕೆ ಸೋರಿಕೆ ಸುಳ್ಳು: ಎನ್‌ಟಿಎ ಸ್ಪಷ್ಟನೆ

**ಅಭ್ಯರ್ಥಿಗಳಿಗೆ ನ್ಯಾಯಯುತ ಪರೀಕ್ಷೆಗಾಗಿ ಎಲ್ಲ ಕ್ರಮ ಕೈಗೊಳ್ಳಲಾಗಿದೆ**

**ವದಂತಿ ಹರಡುವವರ ವಿರುದ್ಧ ಕಠಿಣ ಕ್ರಮದ ಎಚ್ಚರಿಕೆ**

**ನವದೆಹಲಿ, ಜೂ.6:** ನೀಟ್ ಯುಜಿ–2026 ಮರುಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆ ಅಥವಾ ಮಾರಾಟದ ಬಗ್ಗೆ ಸಾಮಾಜಿಕ ಮಾಧ್ಯಮಗಳಲ್ಲಿ ಹರಡುತ್ತಿರುವ ಸುದ್ದಿಗಳನ್ನು ರಾಷ್ಟ್ರೀಯ ಪರೀಕ್ಷಾ ಸಂಸ್ಥೆ (ಎನ್‌ಟಿಎ) ಶನಿವಾರ ತಳ್ಳಿಹಾಕಿದೆ. ಇಂತಹ ಸುದ್ದಿಗಳನ್ನು ಸುಳ್ಳು ಮತ್ತು ಮೋಸದ ಹೇಳಿಕೆಗಳು ಎಂದಿರುವ ಎನ್‌ಟಿಎ ಸುಳ್ಳು ಸುದ್ದಿ ಹರಡುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಸಿದೆ.

ಈ ಬಗ್ಗೆ ಎಕ್ಸ್‌ನಲ್ಲಿ ಹೇಳಿಕೆ ಬಿಡುಗಡೆ ಮಾಡಿರುವ ಎನ್‌ಟಿಎ, ನೀಟ್–ಯುಜಿ 2026 ಮರುಪರೀಕ್ಷಾ ಪತ್ರಿಕೆಯ "ಸೋರಿಕೆ", ಅಥವಾ "ಮಾರಾಟ" ಎಂದು ಹೇಳುವ ಸಂದೇಶಗಳು ವಿದ್ಯಾರ್ಥಿಗಳು ಮತ್ತು ಪೋಷಕರನ್ನು ದಾರಿತಪ್ಪಿಸುವ ಉದ್ದೇಶ ಹೊಂದಿವೆ. ಇವು ಸುಳ್ಳು, ಮೋಸದ ಮತ್ತು ದಾರಿತಪ್ಪಿಸುವ ಉದ್ದೇಶವನ್ನು ಹೊಂದಿವೆ. ನಕಲಿ ಪ್ರಶ್ನೆ ಪತ್ರಿಕೆಗಳನ್ನು ಮಾರಾಟ ಮಾಡುವ ಮೂಲಕ ಅಭ್ಯರ್ಥಿಗಳು ಮತ್ತು ಅವರ ಕುಟುಂಬಗಳ ಆತಂಕವನ್ನು ಬಳಸಿಕೊಳ್ಳಲು ಪ್ರಯತ್ನಿಸುವ "ಸಂಘಟಿತ ವಂಚನೆ ದಂಧೆಗಳು" ಇಂತಹ ವಿಷಯವನ್ನು ಪ್ರಸಾರ ಮಾಡುತ್ತಿವೆ. ನಕಲಿ ಪ್ರಶ್ನೆಪತ್ರಿಕೆಗಳನ್ನು ಮಾರಾಟ ಮಾಡುವ ಮೂಲಕ ಹಣ ಸುಲಿಗೆ ಮಾಡುವ ಉದ್ದೇಶ ಇದರ ಹಿಂದಿದೆ ಎಂದು ಎನ್‌ಟಿಎ ಹೇಳಿದೆ.

ಪರೀಕ್ಷಾ ಪ್ರಕ್ರಿಯೆ ಸಮಗ್ರತೆಯು ಸಂಪೂರ್ಣವಾಗಿ ಅಖಂಡವಾಗಿದೆ ಮತ್ತು ಎಲ್ಲಾ ಅಭ್ಯರ್ಥಿಗಳಿಗೆ ನ್ಯಾಯಯುತ ಮತ್ತು ಸುರಕ್ಷಿತ ಪರೀಕ್ಷೆಯನ್ನು ಖಚಿತಪಡಿಸಿಕೊಳ್ಳಲು ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳಲಾಗಿದೆ" ಎಂದು ಸಂಸ್ಥೆ ಹೇಳಿದೆ. ಸುಳ್ಳು ಸುದ್ದಿಗಳ ಬಗ್ಗೆ ಕಾನೂನು ಜಾರಿ ಮತ್ತು ಸೈಬರ್–ಅಪರಾಧ ಅಧಿಕಾರಿಗಳಿಗೆ ಔಪಚಾರಿಕ ದೂರು ಸಲ್ಲಿಸುತ್ತಿರುವುದಾಗಿ ಸಂಸ್ಥೆ ತಿಳಿಸಿದೆ.

ಅಭ್ಯರ್ಥಿಗಳು ಮತ್ತು ಪೋಷಕರು ಇಂಥಹ ಸುಳ್ಳು ಸುದ್ದಿಗಳಿಗೆ ಕಿವಿಗೊಡಬಾರದು ಅಥವಾ ಇಂಥಹ ಸಂದೇಶಗಳನ್ನು ಫಾರ್ವರ್ಡ್ ಮಾಡಬಾರದು ಮತ್ತು ಈ "ವಂಚನೆಯ ಮನವಿಗಳಿಗೆ" ಬಲಿಯಾಗಬಾರದು ಎಂದು ಎನ್‌ಟಿಎ ಕರೆ ನೀಡಿದೆ. ಸಂಸ್ಥೆಯ ಪರಿಶೀಲಿಸಿದ ಚಾನೆಲ್‌ಳ ಮೂಲಕ ಹೊರಡಿಸಲಾದ ಅಧಿಕೃತ ಸಂವಹನಗಳನ್ನು ಮಾತ್ರ ಅವಲಂಬಿಸುವಂತೆಯೂ ವಿದ್ಯಾರ್ಥಿಗಳಿಗೆ NTA ಹೇಳಿದೆ.

# ಸಾಂವಿಧಾನಿಕ ಚೌಕಟ್ಟು ಮೀರುವವರ ವಿರುದ್ಧ ಮುಲಾಜಿಲ್ಲದೆ ಕ್ರಮ

**ಕಟ್ಟುನಿಟ್ಟಿನ ಕ್ರಮಕೈಗೊಳ್ಳುವಂತೆ ಅಧಿಕಾರಿಗಳಿಗೆ ಸಚಿವ ಪ್ರಿಯಾಂಕ್ ಖರ್ಗೆ ಸೂಚನೆ**



ಬೆಂಗಳೂರು, ಜೂ.6: ರಾಜ್ಯ ಪೊಲೀಸ್ ಮಹಾನಿರ್ದೇಶಕರ ವ್ಯಾಪ್ತಿಯಲ್ಲಿ ಬರುವ ಆರು ಕಮೀಷನರೇಟ್‌ಗಳ ಸ್ಥಿತಿಗತಿಗಳ ಕುರಿತು ಚರ್ಚಿಸಿ, ಸಾಂವಿಧಾನಿಕ ಚೌಕಟ್ಟನ್ನು ಮೀರುವ ವ್ಯಕ್ತಿ ಮತ್ತು ಪ್ರಕರಣಗಳ ವಿರುದ್ಧ ಯಾವುದೇ ರಾಜಿ ಇಲ್ಲದೆ ಕ್ರಮ ಜರುಗಿಸಬೇಕು' ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ, ಹಿರಿಯ ಪೊಲೀಸ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ನಗರದ ನೃಪತುಂಗ ರಸ್ತೆಯಲ್ಲಿನ ರಾಜ್ಯ ಪೊಲೀಸ್ ಮಹಾನಿರ್ದೇಶಕರ ಕಚೇರಿಯಲ್ಲಿ ಡಿಜಿ–ಐಜಿಪಿ ಡಾ.ಎಂ.ಎ.ಸಲೀಂ ಸಹಿತ ಹಿರಿಯ ಅಧಿಕಾರಿಗಳೊಂದಿಗೆ ಗೃಹ ಇಲಾಖೆಯ ಕುರಿತು ಶನಿವಾರ ಮಾಹಿತಿ, ವಿನಿಮಯದ ಔಪಚಾರಿಕ ಸಭೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.

ಈ ಸಭೆಯಲ್ಲಿ ರಾಜ್ಯದ ಅಪರಾಧ ಪ್ರಕರಣಗಳು, ಸಿಬ್ಬಂದಿ ನೇಮಕಾತಿ, ಕಾನೂನು ಸುವ್ಯವಸ್ಥೆ, ಮಾದಕ ವಸ್ತುಗಳ ನಿಯಂತ್ರಣ ಮುಂತಾದ ವಿಷಯಗಳ ಕುರಿತಂತೆ ವಿಸ್ತೃತ ಚರ್ಚೆ ನಡೆಸಲಾಯಿತು. ಕಮೀಷನರೇಟ್ ವ್ಯಾಪ್ತಿಯಲ್ಲಿನ 16 ಯೂನಿಟ್‌ಗಳ ಸ್ಥಿತಿಗತಿಗಳ ಕುರಿತು ಪ್ರತಿದಿನ 3 ಯೂನಿಟ್‌ಗಳ ವಸ್ತುಸ್ಥಿತಿ ಪರಿಶೀಲನೆ ಮಾಡಿ ವರದಿ ನೀಡಬೇಕು ಎಂದು ನಿರ್ದೇಶಿಸಲಾಯಿತು ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

ನನಗೆ ಗೃಹ ಇಲಾಖೆಯಂತಹ ದೊಡ್ಡ ಜವಾಬ್ದಾರಿ ವಹಿಸಲಾಗಿದೆ. ಪೊಲೀಸ್ ಇಲಾಖೆ ಬಗ್ಗೆ ಸಂಪೂರ್ಣ ಮಾಹಿತಿ ಪಡೆಯುತ್ತಿದ್ದೇನೆ. ಹಿಂದಿನ ಗೃಹ ಸಚಿವರಾಗಿದ್ದ ಡಾ.ಜಿ.ಪರಮೇಶ್ವರ್ ಕೈಗೊಂಡ ಕಾರ್ಯಕ್ರಮಗಳು ಯಾವುವು?, ಹೇಗೆ ಮುಂದುವರೆಸಬೇಕು ಎಂಬುದರ ಬಗ್ಗೆ ಪೊಲೀಸ್ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿದ್ದೇನೆ ಎಂದು ಪ್ರಿಯಾಂಕ್ ಖರ್ಗೆ ತಿಳಿಸಿದರು. ಸಭೆಯಲ್ಲಿ ಡಿಜಿ–ಐಜಿಪಿ ಡಾ.ಎಂ.ಎ.ಸಲೀಂ ಸೇರಿದಂತೆ ಇಲಾಖೆಯ ಎಲ್ಲ ಹಿರಿಯ ಐಪಿಎಸ್ ಅಧಿಕಾರಿಗಳು ಉಪಸ್ಥಿತರಿದ್ದರು.

**ದ್ವೇಷಭಾಷಣ: ನಿರ್ದಾಕ್ಷಿಣ್ಯ ಕ್ರಮ**

ಮಾದಕ ವಸ್ತುಗಳ (ಡ್ರಗ್) ಮಾಫಿಯಾ, ಮಹಿಳೆಯರ ಸುರಕ್ಷತೆ, ಸಂಚಾರ ನಿಯಂತ್ರಣಕ್ಕೆ ಕೈಗೊಂಡ ಕ್ರಮಗಳ ಬಗ್ಗೆ ಹಾಗೂ ಕೆಲ ಸಲಹೆ, ಸೂಚನೆ ನೀಡಿದ್ದೇನೆ. ಕಾನೂನು ಎಲ್ಲರಿಗೂ ಒಂದೇ. ಯಾರೇ ಇದ್ದರೂ ಕಾನೂನಿನ ಚೌಕಟ್ಟು ಮೀರಿದರೆ ಕ್ರಮ ಕೈಗೊಳ್ಳುವುದು ನಿಶ್ಚಿತ. ಸಾಮಾಜಿಕ ಜಾಲತಾಣದಲ್ಲಿ ದ್ವೇಷ ಹುಟ್ಟಿಸುವ ರೀತಿ ಭಾಷಣ ಮಾಡಿದರೆ ಅಂತವರ ವಿರುದ್ಧ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳುತ್ತೇವೆ. ಸರಕಾರಕ್ಕೆ ಮುಜುಗರವಾಗುವಂತಹ ನಡವಳಿಕೆಗಳನ್ನು ಸಹಿಸುವುದಿಲ್ಲ' ಎಂದು ಪ್ರಿಯಾಂಕ್ ಖರ್ಗೆ ಎಚ್ಚರಿಕೆ ನೀಡಿದರು.

ರೌಡಿ ನಿಗ್ರಹ ಪಡೆ ರಚನೆಗೆ ನೀಲನಕ್ಷೆ ಸಿದ್ಧ

ತಾಲೂಕು ಮಟ್ಟದಲ್ಲಿ ರೌಡಿ ನಿಗ್ರಹ ಪಡೆ ರಚಿಸುವ ಸಂಬಂಧ ಈಗಾಗಲೇ ನೀಲಿನಕ್ಷೆ ಸಿದ್ಧಪಡಿಸಲಾಗಿದೆ. ಮುಂದಿನ ದಿನದಲ್ಲಿ ಇದರ ಬಗ್ಗೆ ವಿವರವಾಗಿ ಹೇಳುತ್ತೇನೆ' ಎಂದು ಪ್ರಿಯಾಂಕ್ ಖರ್ಗೆ ಪ್ರತಿಕ್ರಿಯಿಸಿದರು.

# ರಾಜ್ಯಪಾಲರ ಭಾಷಣದಲ್ಲಿ ಬೇರೆ ಸರ್ಕಾರದ ಟೀಕೆ ಸಲ್ಲ: ರಾಜೇಂದ್ರ ಅರಳೇಕರ್ ಪ್ರತಿಪಾದನೆ




**ಬೆಂಗಳೂರಿನಲ್ಲಿ 'ಸಂಸತ್ತಿನ ಹಕ್ಕು ಬಾಧ್ಯತಾ ನೋಟಗಳು' ಕೃತಿ ಬಿಡುಗಡೆ ಸಮಾರಂಭದಲ್ಲಿ ಕೇರಳ – ತಮಿಳುನಾಡು ರಾಜ್ಯಪಾಲರ ಸ್ಪಷ್ಟ ನುಡಿ**

ಬೆಂಗಳೂರು : ಹೊಸ ಸರ್ಕಾರ ರಚನೆ ಮತ್ತು ವರ್ಷದ ಮೊದಲ ನಡೆಯುವ ವಿಧಾನಮಂಡಲದ ಜಂಟಿ ಅಧಿವೇಶನದಲ್ಲಿ ರಾಜ್ಯಪಾಲರ ಭಾಷಣ ಆಯಾ ರಾಜ್ಯಗಳ ಮುಂದಿನ ಒಂದು ವರ್ಷದಲ್ಲಿ ಹಮ್ಮಿಕೊಳ್ಳುವ ಅಭಿವೃದ್ಧಿ ಯೋಜನೆಗಳ ದಿಕ್ಸೂಚಿ ಭಾಷಣವಾಗಬೇಕೇ ವಿನಾ ಮತ್ತೊಂದು ರಾಜ್ಯ ಇಲ್ಲವೇ ಕೇಂದ್ರ ಸರ್ಕಾರವನ್ನು ಟೀಕಿಸುವಂತಿರಬಾರದು ಎಂದು ಕೇರಳಂ ಮತ್ತು ತಮಿಳುನಾಡು ರಾಜ್ಯಪಾಲ ರಾಜೇಂದ್ರ ಅರಳೇಕರ್ ಅಭಿಪ್ರಾಯ ಪಟ್ಟಿದ್ದಾರೆ.

ಶನಿವಾರ ಸರ್ಕಾರಿ ನೌಕರರ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ವಿಧಾನ ಪರಿಷತ್? ನಿವೃತ್ತ ಕಾರ್ಯದರ್ಶಿ ಧ್ರುವಕುಮಾರ್? ರಚಿಸಿರುವ ''ಸಂಸತ್ತಿನ ಹಕ್ಕು ಬಾಧ್ಯತಾ ನೋಟಗಳು'' ಎಂಬ ಪುಸ್ತಕ ಲೋಕಾರ್ಪಣೆ ಮಾಡಿ ಅವರು ಮಾತನಾಡಿದರು.

ರಾಜ್ಯಗಳಲ್ಲಿ ಹೊಸ ಸರ್ಕಾರಗಳು ರಚನೆಯಾದ ಸಂದರ್ಭ ಮತ್ತು ಪ್ರತಿ ವರ್ಷದ ಆರಂಭದಲ್ಲಿ ನಡೆಯುವ ಜಂಟಿ ಅಧಿವೇಶನದಲ್ಲಿ, ಆ ರಾಜ್ಯವು ಮುಂದಿನ ಒಂದು ವರ್ಷದಲ್ಲಿ ಜನಪರ ಯೋಜನೆಗಳನ್ನು ಹಮ್ಮಿಕೊಳ್ಳುವ ಕುರಿತಂತೆ ಮಾಹಿತಿಯನ್ನು ನೀಡುವಂತಿರಬೇಕು. ಆದರೆ, ಪ್ರಸ್ತುತ ಕೇಂದ್ರ ಸರ್ಕಾರ ಇಲ್ಲವೇ ನೆರೆ ರಾಜ್ಯಗಳ ವಿರುದ್ಧವಾಗಿ ಟೀಕಿಸುವ ಕಾರ್ಯ ನಡೆಯುತ್ತಿದೆ. ಇದು ಬದಲಾಗಬೇಕಾದ ಅಗತ್ಯವಿದೆ ಎಂದು ತಿಳಿಸಿದರು.

ರಾಜ್ಯಪಾಲರ ಭಾಷಣವು ಸರ್ಕಾರದ ಯೋಜನೆಗಳನ್ನು ವಿವರಿಸಬೇಕು ಎಂಬುದಾಗಿ ಸಂವಿಧಾನದಲ್ಲಿ ತಿಳಿಸಲಾಗಿದೆ. ಶಾಸನ ಸಭೆಗಳ ಮುಖ್ಯ ಉದ್ದೇಶವೇ ಅಭಿವೃದ್ಧಿಯ ಕುರಿತು ಚರ್ಚಿಸುವುದಾಗಿದೆ. ಒಂದು ಸರ್ಕಾರ ಮತ್ತೊಂದು ಸರ್ಕಾರದೊಂದಿಗೆ ಉತ್ತಮ ಸಂಬಂಧಗಳನ್ನು ಹೊಂದಿರಬೇಕು. ಆದರೆ, ಪ್ರಸ್ತುತ ಅದಕ್ಕೆ ತದ್ವಿರುದ್ಧವಾಗಿ ನಡೆಯುತ್ತಿದೆ ಎಂದು ಅರಳೇಕರ್ ನುಡಿದರು.

ಒಂದು ವೇಳೆ ಮತ್ತೊಂದು ಸರ್ಕಾರವನ್ನು ಟೀಕಿಸಬೇಕು ಎಂದಾದರೆ ರಾಜಕೀಯ ಪಕ್ಷಗಳ ವೇದಿಕೆಗಳಲ್ಲಿ ಅದನ್ನು ಮಾಡಬಹುದು. ಅದಕ್ಕೆ ಬದಲಾಗಿ ಶಾಸನ ರಚನಾ ಸಭೆಯಲ್ಲಿ ಆ ಕಾರ್ಯ ಮಾಡುವುದಕ್ಕೆ ಅವಕಾಶವಿಲ್ಲ ಎಂದರು.

ಸಂಖ್ಯಾಬಲ ಇದ್ದರಷ್ಟೇ ಸರ್ಕಾರ ರಚನೆಗೆ ಅವಕಾಶ :

ರಾಜ್ಯ ಸರ್ಕಾರ ರಚನೆ ಮಾಡುವುದಕ್ಕಾಗಿ ಅಗತ್ಯ ಸಂಖ್ಯಾಬಲ ಇದೆ ಎಂಬ ಅಂಶದ ಬಗ್ಗೆ ರಾಜ್ಯಪಾಲರಿಗೆ ಭರವಸೆಯಿದ್ದಾಗ ಮಾತ್ರ ಸರ್ಕಾರ ರಚನೆಗೆ ಅವಕಾಶ ನೀಡಬೇಕು ಎಂದು ಎಸ್?.ಆರ್?.ಬೊಮ್ಮಾಯಿ ಪ್ರಕರಣದಲ್ಲಿ ಸ್ಪಷ್ಟವಾಗಿ ತಿಳಿಸಲಾಗಿದೆ. ಕರ್ನಾಟಕ, ಮಹಾರಾಷ್ಟ್ರ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಸಂಖ್ಯಾಬಲವಿಲ್ಲದಿದ್ದರೂ, ಸರ್ಕಾರ ರಚನೆಗೆ ಅನುಮತಿ ನೀಡಲಾಗಿತ್ತು. ಬಳಿಕ ಕೆಲವೇ ದಿನಗಳಲ್ಲಿ ಸರ್ಕಾರ ಬಿದ್ದಿತ್ತು. ಅದೇ ರೀತಿ ತಮಿಳುನಾಡಿನಲ್ಲಿ ಇತ್ತೀಚೆಗೆ ನಡೆದ ಚುನಾವಣೆಯಲ್ಲಿ ಅತಿ ಹೆಚ್ಚು ಸಂಖ್ಯೆ ಹೊಂದಿರುವ ಪಕ್ಷಕ್ಕೆ ಅಧಿಕಾರ ರಚನೆಗೆ ಅವಕಾಶ ನೀಡಬೇಕು ಎಂಬ ಮನವಿ ಇತ್ತು. ಇದನ್ನು ತಿರಸ್ಕರಿಸಿ ಸಂಪೂರ್ಣ ಸಂಖ್ಯಾಬಲದೊಂದಿಗೆ ಮತ್ತು ಬೆಂಬಲಿತ ಪಕ್ಷಗಳ ಪತ್ರದೊಂದಿಗೆ ಬರುವುದಕ್ಕೆ ಸೂಚನೆ ನೀಡಿದ್ದೆ. ಈ ಅಭಿಪ್ರಾಯದ ಕುರಿತಂತೆ ಹಲವು ಟೀಕೆಗಳು ಬಂದಿದ್ದವು. ಅದಕ್ಕೆ ತಲೆಕೆಡಿಸಿಕೊಳ್ಳಲಿಲ್ಲ. ನಾವೆಲ್ಲರೂ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿದ್ದು, ಅದನ್ನು ತಪ್ಪದೇ ಪಾಲಿಸಬೇಕು ಎಂದು ರಾಜ್ಯಪಾಲರು ತಿಳಿಸಿದರು.

ಜನಪ್ರತಿನಿಧಿಗಳಿಗೆ ಶಿಕ್ಷಣ ಅತ್ಯಗತ್ಯ : ನಮ್ಮನ್ನಾಳುವುದಕ್ಕಾಗಿ ನಾವು ಆಯ್ಕೆ ಮಾಡುವ ಹಲವು ಜನಪ್ರತಿನಿಧಿಗಳಿಗೆ ಕನಿಷ್ಠ ಓದುವುದು ಮತ್ತು ಬರೆಯುವುದಕ್ಕೂ ಬರುವುದಿಲ್ಲ. ನಮ್ಮನ್ನು ಶಾಸನ ಸಭೆಗಳಲ್ಲಿ ಪ್ರತಿನಿಧಿಸುವವರಿಗೆ ಕನಿಷ್ಠ ಶೈಕ್ಷಣಿಗೆ ಅರ್ಹತೆ ಖಂಡಿತವಾಗಿಯೂ ಇರಬೇಕಲ್ಲವೇ. ಕಾರು ಚಾಲಕನಿಗೆ ಅರ್ಹತೆ ಇದೆ. ನಮ್ಮ ಕಚೇರಿಯ ಜವಾನನಿಗೂ ಶೈಕ್ಷಣಿಕ ಅರ್ಹತೆ ಕೇಳುತ್ತೇವೆ. ಆದರೆ, ನಮ್ಮ ಜನಪ್ರತಿನಿಧಿಗಳಿಗೆ ಅದು ಬೇಡವೇ? ಆದರೂ ನಮ್ಮ ಜನ ಏಕೆ ಪ್ರಶ್ನಿಸುತ್ತಿಲ್ಲ ಎಂದು ಅರಳೇ ಕರ್ ಪ್ರಶ್ನಿಸಿದರು.

ಕಾರ್ಯಕ್ರಮದಲ್ಲಿ ಪುಸ್ತಕದ ಲೇಖಕ ಧ್ರುವಕುಮಾರ್, ಕನ್ನಡಪ್ರಭ ಪ್ರಧಾನ ಸಂಪಾದಕ ರವಿ ಹೆಗಡೆ, ಸುಪ್ರೀಂಕೋರ್ಟ್ ನ್ಯಾಯವಾದಿ ಕೆ.ವಿ.ಧನಂಜಯ್? ಮತ್ತಿತರರಿದ್ದರು.

# ಸಂದರ್ಭಕ್ಕೆ ತಕ್ಕಂತೆ ಅವಕಾಶ ಸೃಷ್ಟಿ ಕೆ.ಎನ್. ರಾಜಣ್ಣ ಮಾರ್ಮಿಕ ನುಡಿ

**ಬೆಂಗಳೂರು, ಜೂ.6:** ಸಚಿವ ರಾಮಲಿಂಗಾರೆಡ್ಡಿ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿರುವುದು ಟ್ರಬಲ್ ಶೂಟರ್ ಹಾಗೂ ನೂತನ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್‌ಗೇ ಈಗ ಟ್ರಬಲ್ ಶುರುವಾಗಿದೆಯೇ ಎಂಬ ಚರ್ಚೆ ಆರಂಭವಾಗಿದೆ. ಈ ವಿಚಾರವಾಗಿ ಮಾತನಾಡಿರುವ ಶಾಸಕ ಕೆ.ಎನ್ ರಾಜಣ್ಣ, ಯಾವುದೇ ಹುದ್ದೆ ಅಥವಾ ಖಾತೆಯು ಯಾರ ವೈಯಕ್ತಿಕ ಆಸ್ತಿಯಲ್ಲ, ಬದಲಾಗುತ್ತಿರುವ ಸಂದರ್ಭಗಳಿಗೆ ಅನುಗುಣವಾಗಿ ಅವಕಾಶಗಳು ಉದ್ಭವಿಸುತ್ತವೆ. ನಾಯಕರು ಅವುಗಳನ್ನು ಉಪಯೋಗಿಸಿಕೊಂಡು, ಜನರಿಗಾಗಿ ಕೆಲಸ ಮಾಡಲು ತಮ್ಮ ಸಾಮರ್ಥ್ಯಗಳನ್ನು ಬಳಸಿಕೊಳ್ಳಬೇಕು ಎಂದು ಹೇಳಿದ್ದಾರೆ.



ಇಂಧನ ಕ್ಷೇತ್ರದಲ್ಲಿ ದ್ವಿಪಕ್ಷೀಯ ಸಹಕಾರವನ್ನು ಬಲಪಡಿಸುವ ಕುರಿತು ಚರ್ಚಿಸಲು ಭೂತಾನಿನ ಪ್ರಧಾನಿ ತ್ಸೆರಿಂಗ್ ಟೋಬ್ಗೆ ಅವರು ಕೇಂದ್ರದ ವಿದ್ಯುತ್ ಸಚಿವಾಲಯದ ಕಾರ್ಯದರ್ಶಿ ಪಂಕಜ್ ಅಗರ್ವಾಲ್ ಅವರನ್ನು ಭಾರತೀಯ ನಿಯೋಗದೊಂದಿಗೆ ಭೇಟಿಯಾದರು.

# ಜರ್ಮನ್ ಕಂಪನಿ ಉದ್ಯೋಗಕ್ಕೆ ಜಿಟಿಟಿಸಿ ವಿದ್ಯಾರ್ಥಿಗಳು

## ಜರ್ಮನಿಯ ಅಸ್ ಬಿಲ್ಡಿಂಗ್ (ದ್ವಿಮುಖ ವೃತ್ತಿಪರ ತರಬೇತಿ) ಕಾರ್ಯಕ್ರಮದಡಿ ಆಯ್ಕೆ

**ಬೆಂಗಳೂರು, ಜೂ. 6:** ಕರ್ನಾಟಕ ಮತ್ತು ಜರ್ಮನಿ ನಡುವೆ ಕೌಶಲ್ಯಪೂರ್ಣ ಸಹಕಾರ ಸಂಬಂಧ ವೃದ್ಧಿಸಲು ಮಹತ್ವದ ಹೆಜ್ಜೆ ಇಡಲಾಗಿದೆ. ಈ ನಿಟ್ಟಿನಲ್ಲಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದ (ಜಿಟಿಟಿಸಿ) ಐವರು ವಿದ್ಯಾರ್ಥಿಗಳನ್ನು ಜರ್ಮನಿಯ ಡಸೆಲ್‌ಡರ್ಫ್‌ನ ಪ್ರಮುಖ ಸಾರ್ವಜನಿಕ ಸಾರಿಗೆ ಸಂಸ್ಥೆಯಾದ ರೈನ್‌ಬಾನ್ ಎಜಿ ಉದ್ಯೋಗಕ್ಕೆ ಆಯ್ಕೆ ಮಾಡಿಕೊಂಡಿರುವುದು ಗಮನಾರ್ಹವಾಗಿದೆ.



ಸೆಪ್ಟೆಂಬರ್ 2026ರಿಂದ ಆರಂಭವಾಗುವ ಜರ್ಮನ್ ಅಸ್ ಬಿಲ್ಡಿಂಗ್ (ದ್ವಿಮುಖ ವೃತ್ತಿಪರ ತರಬೇತಿ) ಕಾರ್ಯಕ್ರಮದಡಿ ಉದ್ಯೋಗಕ್ಕೆ ಆಯ್ಕೆ ಮಾಡಿಕೊಳ್ಳಲಾಗಿದೆ. ವಿಕಾಸಸೌಧದಲ್ಲಿ ನಡೆದ ಸಮಾರಂಭದಲ್ಲಿ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್, ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ರೈನ್‌ಬಾನ್ ಎಜಿ ನೀಡಿದ ಒಪ್ಪಿತ ಪತ್ರಗಳನ್ನು (ಎಲ್‌ಒಐ) ಐದೂ ಅಭ್ಯರ್ಥಿಗಳಿಗೆ ಹಸ್ತಾಂತರಿಸಿ ದರು. ಜಾಗತಿಕವಾಗಿ ಮಾನ್ಯತೆ ಪಡೆದ ಜರ್ಮನ್ ವೃತ್ತಿಪರ ಶಿಕ್ಷಣ ಪದ್ಧತಿಯಾದ ಅಸ್‌ಬಿಲ್ಡುಂಗ್, ರಚನಾತ್ಮಕ ತರಗತಿ ಬೋಧನೆ ಮತ್ತು ಪ್ರಾಯೋಗಿಕ ಕಾರ್ಯಸ್ಥಳ ತರಬೇತಿಯನ್ನು ಒದಗಿಸುತ್ತದೆ. ಅಂತರರಾಷ್ಟ್ರೀಯ ಮಾನ್ಯತೆಯ ಪ್ರಮಾಣಪತ್ರವನ್ನೂ ನೀಡುತ್ತದೆ. ಈಗ ಆಯ್ಕೆಯಾದ ಜಿಟಿಟಿಸಿ ಅಭ್ಯರ್ಥಿಗಳು ಡಸೆಲ್ಡಾರ್ಫ್‌ನ ರೈನ್‌ಬಾನ್ ಎಜಿಯಲ್ಲಿ ತರಬೇತಿ ಪಡೆದು, ವಿಶ್ವ ದರ್ಜೆಯ ಕೈಗಾರಿಕಾ ಅನುಭವ ಮತ್ತು ಔಪಚಾರಿಕ ಜರ್ಮನ್ ಪ್ರಮಾಣೀಕರಣ ಪಡೆಯಲಿದ್ದಾರೆ.

**ರಾಜ್ಯಕ್ಕೆ ಹೆಮ್ಮೆಯ ಕ್ಷಣ: ಸಚಿವ ಡಾ. ಪಾಟೀಲ್**

ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಡಾ. ಪಾಟೀಲ್, "ಇದು ರಾಜ್ಯಕ್ಕೆ ಹೆಮ್ಮೆಯ ಕ್ಷಣ. ನಮ್ಮ ಯುವಕರು ವಿಶ್ವದ ಅತ್ಯುತ್ತಮರೊಂದಿಗೆ ಸ್ಪರ್ಧಿಸುವ ಪ್ರತಿಭೆ ಮತ್ತು ಶಿಸ್ತನ್ನು ಹೊಂದಿದ್ದಾರೆ. ಇಂತಹ ಅಂತರರಾಷ್ಟ್ರೀಯ ಪಾಲುದಾರಿಕೆಗಳ ಮೂಲಕ ಕೌಶಲ್ಯಪೂರ್ಣ ಯುವಕ–ಯುವತಿಯರಿಗೆ ಜಾಗತಿಕ ಅವಕಾಶಗಳನ್ನು ಒದಗಿಸಲು ನಮ್ಮ ಸರ್ಕಾರ ಬದ್ಧವಾಗಿದೆ. ಇದು ಸುದೀರ್ಘ ಪ್ರಯಾಣದ ಆರಂಭ ಮಾತ್ರ ಎಂದರು.

ಕೌಶಲ್ಯಾಭಿವೃದ್ಧಿ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸುಬೋಧ್ ಯಾದವ್ ಮಾತನಾಡಿ, "ರೈನ್‌ಬಾನ್ ಎಜಿಯೊಂದಿಗಿನ ಸಹಯೋಗ ಕರ್ನಾಟಕದ ಕೌಶಲ್ಯಪೂರ್ಣ ಯುವಜನರಿಗೆ ಅರ್ಥಪೂರ್ಣ ಜಾಗತಿಕ ಉದ್ಯೋಗ ಮಾರ್ಗಗಳನ್ನು ತೆರೆಯುವಲ್ಲಿ ಮಹತ್ವದ ಮೈಲಿಗಲ್ಲು ಆಗಲಿದೆ. ಮುಂಬರುವ ವರ್ಷಗಳಲ್ಲಿ ರಾಜ್ಯದಾದ್ಯಂತ ಇನ್ನಷ್ಟು ಅಭ್ಯರ್ಥಿಗಳಿಗೆ ಈ ಮಾದರಿಯ ಪ್ರಯೋಜನ ತಲುಪಿಸಲು ನಾವು ಶ್ರಮಿಸುತ್ತೇವೆ" ಎಂದು ತಿಳಿಸಿದರು.

ಜಿಟಿಟಿಸಿ ವ್ಯವಸ್ಥಾಪಕ ನಿರ್ದೇಶಕ ಸಿದ್ದಲಿಂಗಪ್ಪ ಪೂಜಾರಿ ಸೇರಿದಂತೆ ಹಲವರು ಅಧಿಕಾರಿಗಳು, ಗಣ್ಯರು ಉಪಸ್ಥಿತರಿದ್ದರು.

# ವಿದೇಶಿ ಬಂಡವಾಳ ಸೆಳೆಯಲು ತೆರಿಗೆ ವಿನಾಯಿತಿ ಸುಗ್ರೀವಾಜ್ಞೆ

**ನವದೆಹಲಿ, ಜೂ.6:** ಊರು ಕೊಳ್ಳೆ ಹೊಡೆದ ಮೇಲೆ ಕೋಟೆ ಬಾಗಿಲು ಹಾಕಿದರು ಎಂಬ ನಾಣ್ಣುಡಿಯಂತೆ ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ಸಾರ್ವಕಾಲಿಕ ಕುಸಿತ ಕಂಡು ಪಾತಾಳ ತಲುಪಿದ ಬಳಿಕ, ಕೇಂದ್ರ ಸರ್ಕಾರ ತಡವಾಗಿ ಎಚ್ಚೆತ್ತುಕೊಂಡಿದೆ.

ದೇಶದ ಆರ್ಥಿಕತೆಯಿಂದ ಲಕ್ಷಾಂತರ ಕೋಟಿ ರೂಪಾಯಿಗಳ ವಿದೇಶಿ ಬಂಡವಾಳ ಈಗಾಗಲೇ ಸಂಪೂರ್ಣವಾಗಿ ಗುಳೆಯೆದ್ದ ಬಳಿಕ, ಆ ಬಂಡವಾಳವನ್ನು ಮರಳಿ ಸೆಳೆಯಲು ತೆರಿಗೆ ವಿನಾಯಿತಿ ನೀಡುವ ಸುಗ್ರೀವಾಜ್ಞೆಯನ್ನು ಸರ್ಕಾರ ಹೊರಡಿಸಿದೆ. ಆದರೆ, ಕಾಲ ಮಿಂಚಿದ ಮೇಲೆ ಕೈಗೊಂಡಿರುವ ಸರ್ಕಾರದ ಈ ವಿಳಂಬ ನೀತಿಯು ಆರ್ಥಿಕ ವಲಯದಲ್ಲಿ ತೀವ್ರ ಟೀಕೆಗೆ ಗುರಿಯಾಗಿದೆ.

ಕಳೆದೆರಡು ವರ್ಷಗಳಿಂದ ರೂಪಾಯಿ ಮೌಲ್ಯವು ಸತತವಾಗಿ ಕುಸಿಯುತ್ತಿದ್ದರೂ ಕೇಂದ್ರದ ಮೋದಿ ಸರ್ಕಾರ ಮಾತ್ರ ಪ್ರೇಕ್ಷಕನಂತೆ ಮೌನ ವಹಿಸಿತ್ತು. ಇದರ ನೇರ ಪರಿಣಾಮವಾಗಿ ದೇಶದಲ್ಲಿ ಆಮದು ವೆಚ್ಚ ದುಬಾರಿಯಾಗಿ, ಪೆಟ್ರೋಲ್, ಡೀಸೆಲ್ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿ ಹಣದುಬ್ಬರ ಮಿತಿಮೀರಿತು. ಕಚ್ಚಾತೈಲದ ಆಮದು ವೆಚ್ಚ ಹೆಚ್ಚಾಗಿ ಆರ್ಥಿಕ ಹೊರೆ ದುಪ್ಪಟ್ಟಾಯಿತು. ಸಾಮಾನ್ಯ ಜನರ ಬದುಕು ಮೂರಾಬಟ್ಟೆಯಾಗಿ, ದೇಶದ ಆರ್ಥಿಕತೆಗೆ ಅಪಾರ ಹಾನಿ ಸಂಭವಿಸಿದ




ಮೇಲೆ ಇದೀಗ ತೆರಿಗೆ ರಿಯಾಯಿತಿಯ ಮೊರೆ ಹೋಗಿರುವುದು ಸರ್ಕಾರದ ಆರ್ಥಿಕ ದೂರದೃಷ್ಟಿಯ ಕೊರತೆಯನ್ನು ಎತ್ತಿ ತೋರಿಸುತ್ತಿದೆ.

ವಿದೇಶಿ ಸಾಂಸ್ಥಿಕ ಹೂಡಿಕೆದಾರರು ಏಕಾಏಕಿ ಒಂದೇ ದಿನದಲ್ಲಿ ಬಂಡವಾಳ ಹಿಂಪಡೆದಿಲ್ಲ. ಜಾಗತಿಕ ಮಾರುಕಟ್ಟೆಯ ಬದಲಾವಣೆಗಳು ಹಾಗೂ ಅಮೆರಿಕದ ಫೆಡರಲ್ ರಿಸರ್ವ್ ಬಡ್ಡಿದರ ಏರಿಕೆಯ ಮುನ್ಸೂಚನೆ ಇದ್ದರೂ, ಸರ್ಕಾರ ಸಕಾಲದಲ್ಲಿ ಹೂಡಿಕೆದಾರರ ವಿಶ್ವಾಸ ಉಳಿಸಿಕೊಳ್ಳಲು ಮುಂದಾಗಲಿಲ್ಲ. ಬದಲಿಗೆ, ಕಣ್ಣೆದುರಲ್ಲೇ ಲಕ್ಷಾಂತರ ಕೋಟಿ ರೂಪಾಯಿಗಳ ಬೃಹತ್ ಬಂಡವಾಳ ದೇಶದಿಂದ ದಿನೇ ದಿನೇ ಹೊರಹರಿಯುತ್ತಿದ್ದರೂ ನಿರ್ಲಕ್ಷ್ಯ ವಹಿಸಲಾಯಿತು. ಈಗ ಆರ್ಥಿಕತೆ ಹಳ್ಳ ಹಿಡಿದ ಮೇಲೆ, ಅದೇ ಬಂಡವಾಳವನ್ನು ಮರಳಿ ತರಲು ತೆರಿಗೆ ಕಡಿತದ ಕೆಂಪು ಹಾಸು ಹಾಸುತ್ತಿರುವುದು ವಿಪರ್ಯಾಸವೇ ಸರಿ.

ಇನ್ನೊಂದೆಡೆ, ರೂಪಾಯಿ ಪತನವನ್ನು ತಡೆಯಲು ಭಾರತೀಯ ರಿಸರ್ವ್ ಬ್ಯಾಂಕ್ ತನ್ನ ವಿದೇಶಿ ವಿನಿಮಯ ಮೀಸಲು ನಿಧಿಯಿಂದ ಸಾವಿರಾರು ಕೋಟಿ ಡಾಲರ್‌ಗಳನ್ನು ಮಾರುಕಟ್ಟೆಗೆ ಸುರಿದು ಅಕ್ಷರಶಃ ಕೈಸುಟ್ಟುಕೊಂಡಿದೆ. ದೇಶದ ಬೊಕ್ಕಸಕ್ಕೆ ಭಾರಿ ನಷ್ಟವಾದರೂ ಕುಸಿತ ತಡೆಯಲು ಸಾಧ್ಯವಾಗಲಿಲ್ಲ. ಆರ್‌ಬಿಐನ ಎಲ್ಲಾ ಪ್ರಯತ್ನಗಳು ವಿಫಲವಾಗಿ, ಮೀಸಲು ನಿಧಿ ಕರಗಿದ ನಂತರ, ಅಂತಿಮವಾಗಿ ಬೇರೆ ದಾರಿಯಿಲ್ಲದೆ ಸರ್ಕಾರ ಈ ಸುಗ್ರೀವಾಜ್ಞೆಯ ಮೊರೆ ಹೋಗಿದ್ದು, ಇದು ರೋಗಿ ಸತ್ತ ಮೇಲೆ ವೈದ್ಯ ಬಂದಂತೆ ಆಗಿದೆ.

ಹಲವು ಆರ್ಥಿಕ ತಜ್ಞರು ಸರ್ಕಾರದ ಈ ವಿಳಂಬ ಧೋರಣೆಯನ್ನು ಕಟುವಾಗಿ ಟೀಕಿಸಿದ್ದಾರೆ. ಈಗ ನೀಡಿರುವ ತೆರಿಗೆ ರಿಯಾಯಿತಿಗಳನ್ನು ಕನಿಷ್ಠ ಆರು ತಿಂಗಳ ಮುಂಚೆಯೇ ನೀಡಿದ್ದರೆ ಬಂಡವಾಳ ಹೊರಹೋಗುವುದನ್ನೇ ತಡೆಯಬಹುದಿತ್ತು ಎಂಬುದು ತಜ್ಞರ ಸ್ಪಷ್ಟ ಅಭಿಪ್ರಾಯ. ಹೊಸ ಸುಗ್ರೀವಾಜ್ಞೆಯಿಂದಾಗಿ ಭವಿಷ್ಯದಲ್ಲಿ ವಿದೇಶಿ ಬಂಡವಾಳ ಮರಳಿ ಬರಬಹುದಾದರೂ, ಅಷ್ಟರಲ್ಲಾಗಲೇ ದೇಶದ ಆರ್ಥಿಕತೆ, ರೂಪಾಯಿ ಮೌಲ್ಯ ಮತ್ತು ವಿದೇಶಿ ವಿನಿಮಯ ಮೀಸಲು ನಿಧಿಗೆ ಆಗಿರುವ ಬೃಹತ್ ಹಾನಿಯನ್ನು ಸರಿಪಡಿಸಲು ಬಹಳಷ್ಟು ವರ್ಷಗಳೇ ಬೇಕಾಗಲಿದೆ ಎಂಬುದು ಸದ್ಯದ ಕಟು ವಾಸ್ತವ.

# ಅಣ್ಣಾಮಲೈ ಬಳಿಕ 14ಕ್ಕೂ ಹೆಚ್ಚು ನಾಯಕರು ಬಿಜೆಪಿಗೆ ವಿದಾಯ





**ಚೆನ್ನೈ, ಜೂ. 6:** ತಮಿಳುನಾಡು ಬಿಜೆಪಿ ಮಾಜಿ ರಾಜ್ಯಾಧ್ಯಕ್ಷ ಕೆ. ಅಣ್ಣಾಮಲೈ ಅವರ ರಾಜೀನಾಮೆಯ ಬೆನ್ನಲ್ಲೇ ರಾಜ್ಯ ಬಿಜೆಪಿಯಲ್ಲಿ ಭಿನ್ನಮತ ಸ್ಫೋಟಗೊಂಡಿದೆ. ಪಕ್ಷದ ರಾಜ್ಯ ಉಪಾಧ್ಯಕ್ಷ ಕರು ನಾಗರಾಜನ್, ರಾಜ್ಯ ಕಾರ್ಯದರ್ಶಿ ಸುಮತಿ ವೆಂಕಟೇಶ್ ಸೇರಿದಂತೆ 14ಕ್ಕೂ ಹೆಚ್ಚು ಪ್ರಮುಖ ಪದಾಧಿಕಾರಿಗಳು ತಮ್ಮ ಸ್ಥಾನಗಳಿಗೆ ರಾಜೀನಾಮೆ ನೀಡಿದ್ದು, ತಮಿಳುನಾಡು ಬಿಜೆಪಿಯಲ್ಲಿ ಆಂತರಿಕ ಬಿಕ್ಕಟ್ಟು ತೀವ್ರಗೊಂಡಿದೆ.

ಅಣ್ಣಾಮಲೈ ಅವರು ಬಿಜೆಪಿಯ ಪ್ರಾಥಮಿಕ ಸದಸ್ಯತ್ವಕ್ಕೆ ಅಧಿಕೃತವಾಗಿ ರಾಜೀನಾಮೆ ನೀಡಿ, ಹೊಸ ರಾಜಕೀಯ ಚಳವಳಿಯನ್ನು ಘೋಷಿಸಿದ ಕೆಲವೇ ಗಂಟೆಗಳಲ್ಲಿ ಈ ಸರಣಿ ರಾಜೀನಾಮೆ ಪ್ರಕ್ರಿಯೆ ನಡೆದಿದೆ. ತಮಿಳುನಾಡು ಕುರಿತಾದ ತಮ್ಮ ದೃಷ್ಟಿಕೋನ ಮತ್ತು ಪಕ್ಷದ ವರಿಷ್ಠರ ನಿಲುವುಗಳು ಹೊಂದಾಣಿಕೆ ಯಾಗುತ್ತಿಲ್ಲ ಎಂದು ಅಣ್ಣಾಮಲೈ ಪಕ್ಷ ತೊರೆದಿದ್ದರು.

ಅಣ್ಣಾಮಲೈ, ತಾವು ಪಕ್ಷ ಬಿಡುವ ನಿರ್ಧಾರವನ್ನು 2025ರ ಡಿಸೆಂಬರ್‌ನಲ್ಲೇ ವರಿಷ್ಠರಿಗೆ ತಿಳಿಸಿದ್ದಾಗಿ ಬಹಿರಂಗಪಡಿಸಿದ್ದಾರೆ. ಆದರೆ, ವಿಧಾನಸಭಾ ಚುನಾವಣೆಯ ಪ್ರಚಾರ ಮುಗಿಯು ವವರೆಗೆ ಪಕ್ಷದಲ್ಲೇ ಮುಂದುವರಿ ಯುವಂತೆ ಹೈಕಮಾಂಡ್ ವಿನಂತಿಸಿತ್ತು ಎಂದು ಅವರು ಹೇಳಿದ್ದಾರೆ.

ನನ್ನ ರಾಜಕೀಯ ಗುರಿಗಳು ದೊಡ್ಡದಾಗಿವೆ. ಸಮಾಜದ ಎಲ್ಲಾ ವರ್ಗದ ಜನರನ್ನು ಒಟ್ಟಿಗೆ ಕೊಂಡೊಯ್ಯುವ ಹೊಸ, ಎಲ್ಲರನ್ನೂ ಒಳಗೊಳ್ಳುವ ವೇದಿಕೆಯ ಅಗತ್ಯವಿದೆ ಎಂದು ಹೇಳಿರುವ ಅಣ್ಣಾಮಲೈ, ಶೀಘ್ರದಲ್ಲೇ ಹೊಸ ರಾಜಕೀಯ ಪಕ್ಷವನ್ನು ಸ್ಥಾಪಿಸಿ ಮುಂದಿನ ಚುನಾವಣೆ ಎದುರಿಸುವುದಾಗಿ ಪ್ರಕಟಿಸಿದ್ದಾರೆ.

ಅಣ್ಣಾಮಲೈ ನಿರ್ಧಾರವನ್ನು ಅವರ ಬೆಂಬಲಿಗರು ಪಟಾಕಿ ಸಿಡಿಸಿ, ಸಿಹಿ ಹಂಚಿ ಸಂಭ್ರಮಿಸಿದ್ದಾರೆ. ಆದರೆ, ಹಾಲಿ ತಮಿಳುನಾಡು ಬಿಜೆಪಿ ಅಧ್ಯಕ್ಷ ನೈನಾರ್ ನಾಗೇಂದ್ರನ್ ಈ ಬೆಳವಣಿಗೆಯನ್ನು ತಳ್ಳಿಹಾಕಿದ್ದಾರೆ. ಬಿಜೆಪಿ ಸಿದ್ಧಾಂತದ ಆಧಾರದ ಮೇಲೆ ನಡೆಯುವ ಸಂಸ್ಥೆ. ಅಣ್ಣಾಮಲೈ ರಾಜೀನಾಮೆಯಿಂದ ಪಕ್ಷಕ್ಕೆ ಯಾವುದೇ ಹಿನ್ನಡೆಯಾಗುವುದಿಲ್ಲ. ಪ್ರಜಾಪ್ರಭುತ್ವದಲ್ಲಿ ಯಾರು ಬೇಕಾದರೂ ಹೊಸ ಪಕ್ಷ ಕಟ್ಟಬಹುದು ಎಂದು ನಾಗೇಂದ್ರನ್ ಪ್ರತಿಕ್ರಿಯಿಸಿದ್ದಾರೆ.

2026ರ ವಿಧಾನಸಭಾ ಚುನಾವಣೆಗೂ ಮುನ್ನ ಬಿಜೆಪಿ–ಎಐಎಡಿಎಂಕೆ ಮೈತ್ರಿ ಮರುಸ್ಥಾಪನೆಯಾದ ನಂತರ ಅಣ್ಣಾಮಲೈ ಅವರನ್ನು ರಾಜ್ಯಾಧ್ಯಕ್ಷ ಸ್ಥಾನದಿಂದ ಕೆಳಗಿಳಿಸಲಾಗಿತ್ತು. ಎಐಎಡಿಎಂಕೆ ನಾಯಕರ ವಿರುದ್ಧ ಅಣ್ಣಾಮಲೈ ಮಾಡಿದ್ದ ಕೆಲವು ವಿವಾದಾತ್ಮಕ ಹೇಳಿಕೆಗಳಿಂದಾಗಿ ಉಭಯ ನಾಯಕರ ನಡುವಿನ ಸಂಬಂಧ ಹಳಸಿತ್ತು.

ಈಗ ಕರು ನಾಗರಾಜನ್ ಸೇರಿದಂತೆ ಹಲವು ಪ್ರಮುಖ ಪದಾಧಿಕಾರಿಗಳು ಹೊರಬಂದಿರುವುದು, ಮುಂಬರುವ ದಿನಗಳಲ್ಲಿ ಇನ್ನು ಹಲವು ನಾಯಕರು ಮತ್ತು ಕಾರ್ಯಕರ್ತರು ಅಣ್ಣಾಮಲೈ ಕಟ್ಟಲಿರುವ ಹೊಸ ಪಕ್ಷದ ಕಡೆಗೆ ಮುಖ ಮಾಡಲಿದ್ದಾರೆ ಎನ್ನಲಾಗುತ್ತಿದೆ.



ದಮನ್‌ನಲ್ಲಿ ಶುಕ್ರವಾರ ನಮೋ ವಿಮಾನ ನಿಲ್ದಾಣದ ಹೊಸ ಟರ್ಮಿನಲ್ ಕಟ್ಟಡದ ಉದ್ಘಾಟನೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿಯಾಗಿದ್ದರು.

# ಕೇಂದ್ರ ಸಚಿವ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ ಸಿಜೆಪಿ ಪ್ರತಿಭಟನೆ

**ನವದೆಹಲಿ, ಜೂ.6:** ನೀಟ್ ಸೇರಿದಂತೆ ಪರೀಕ್ಷಾ ಅಕ್ರಮಗಳ ಹಿನ್ನೆಲೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ ದೆಹಲಿಯ ಜಂತರ್ ಮಂತರ್‌ನಲ್ಲಿ ಕಾಕ್ರೋಚ್ ಜನತಾ ಪಕ್ಷ ಕರೆದ ಪ್ರತಿಭಟನೆಯಲ್ಲಿ ಬೆಂಬಲಿಗರೊಂದಿಗೆ ಪಕ್ಷದ ಸ್ಥಾಪಕ ಅಭಿಜೀತ್ ದಿಪ್ಕೆ ಭಾಗಿಯಾದರು.

ಯುವಕರು, ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ನೂರಾರು ಜನರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದಾರೆ. ಪ್ರತಿಭಟನಾಕಾರರು ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆಗೆ ಒತ್ತಾಯಿಸಿ ಘೋಷಣೆಗಳನ್ನು ಕೂಗಿದರು.

ಶನಿವಾರ ಬೆಳಗ್ಗೆ ದೆಹಲಿಗೆ ಆಗಮಿಸಿದ ದಿಪ್ಕೆ, ಶಿಸ್ತು ಕಾಪಾಡುವಂತೆ ಮತ್ತು ಶಾಂತಿಯುತ ಪ್ರತಿಭಟನೆಯಲ್ಲಿ ಭಾಗವಹಿಸುವಂತೆ ಒತ್ತಾಯಿಸಿದ್ದರು. ಇದಕ್ಕೂ ಮೊದಲು ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ದೀಪ್ಕೆ, ಜಂತರ್‌ಮಂತರ್‌ನಲ್ಲಿ ಬೆಂಬಲಿಗರನ್ನು ಭೇಟಿಯಾಗುತ್ತಿರುವುದಕ್ಕೆ ಉತ್ಸಾಹ ವ್ಯಕ್ತಪಡಿಸಿದ್ದರು.

ಪ್ರತಿಭಟನೆಯಲ್ಲಿ ಭಾಗವಹಿಸುವವರು ಒಂದು ಪುಸ್ತಕ ಮತ್ತು ರಾಷ್ಟ್ರಧ್ವಜವನ್ನು ತರಬೇಕೆಂದು ಕರೆ ನೀಡಿದ್ದರು. ಇದಲ್ಲದೆ ಕರ್ತವ್ಯನಿರತ ಪೊಲೀಸರಿಗೆ ಕೃತಜ್ಞತೆಯ ಸಂಕೇತವಾಗಿ ಹೂವುಗಳನ್ನು ನೀಡುವಂತೆ ಅವರು ಮನವಿ ಮಾಡಿದ್ದರು. ಈ ಚಳವಳಿಯನ್ನು ಪ್ರೀತಿ ಮತ್ತು ಶಾಂತಿಯ ಮಾರ್ಗದಲ್ಲಿ ಮುನ್ನಡೆಸಬೇಕು ಎಂದು ಹೇಳಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ವಾಂಗ್ ಚುಕ್, ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಬೇಡಿಕೆ ಕೇವಲ ಆರಂಭ ಅಷ್ಟೇ. ಶಿಕ್ಷಣ ವ್ಯವಸ್ಥೆಯನ್ನು ಸುಧಾರಿಸುವುದು ದೊಡ್ಡ ಗುರಿಯಾಗಿದೆ ಎಂದು ಹೇಳಿದರು. ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಬೇಡಿಕೆ ಕೇವಲ ಆರಂಭ ಅಷ್ಟೇ. ಶಿಕ್ಷಣ ವ್ಯವಸ್ಥೆಯನ್ನು ಒಟ್ಟಾರೆಯಾಗಿ ಸುಧಾರಿಸುವುದು ನಮ್ಮ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಪರೀಕ್ಷಾ ಅಕ್ರಮ ಮತ್ತು ಪ್ರಶ್ನೆಪತ್ರಿಕೆ ಸೋರಿಕೆ ಪ್ರಮುಖ ಸಮಸ್ಯೆಗಳಾಗಿವೆ. ಎಲ್ಲರಿಗೂ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ಗುಣಮಟ್ಟದ ಶಿಕ್ಷಣವನ್ನು ಖಚಿತಪಡಿಸಿಕೊಳ್ಳಲು




ಇಡೀ ವ್ಯವಸ್ಥೆಗೆ ಸಮಗ್ರ ಸುಧಾರಣೆಗಳ ಅಗತ್ಯವಿದೆ" ಎಂದು ಅವರು ಹೇಳಿದರು.

### ಆರು ಮಂದಿ ಬಂಧನ

ಪ್ರತಿಭಟನೆಯ ಸಂದರ್ಭದಲ್ಲಿ ಎರಡು ಗುಂಪುಗಳ ನಡುವಿನ ಸಂಭವನೀಯ ಘರ್ಷಣೆ ತಡೆಗಟ್ಟಲು ದೆಹಲಿ ಪೊಲೀಸರು ಶನಿವಾರ ಆರು ಜನರನ್ನು ಬಂಧಿಸಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಆನ್‌ಲೈನ್ ಅಭಿಯಾನದ ಬೆಂಬಲಿಗರು ಮತ್ತು ವಿರೋಧಿಗಳ ನಡುವೆ ಸಂಘರ್ಷ ಭುಗಿಲೇಳುವ ಸಾಧ್ಯತೆಯ ಬಗ್ಗೆ ಪೊಲೀಸರಿಗೆ ಮಾಹಿತಿ ಬಂದ ನಂತರ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡಲು ಮುನ್ನೆಚ್ಚರಿಕೆ ಕ್ರಮವಾಗಿ ಆರು ಮಂದಿಯನ್ನು ಬಂಧಿಸಲಾಗಿದೆ. ಯಾವುದೇ ಕಾನೂನು ಮತ್ತು ಸುವ್ಯವಸ್ಥೆಗೆ ಭಂಗ ಇಲ್ಲದಂತೆ ಪ್ರತಿಭಟನೆ ಶಾಂತಿಯುತವಾಗಿ ಮುಕ್ತಾಯಗೊಳ್ಳಿಸುವ ನಿಟ್ಟಿನಲ್ಲಿ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

### ರಾಜೀನಾಮೆ ಬೇಡಿಕೆ ಕೇವಲ ಆರಂಭ ಅಷ್ಟೇ: ಸೋನಮ್ ವಾಂಗ್‌ಚುಕ್

**ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ರಾಜೀನಾಮೆ ಬೇಡಿಕೆ ಕೇವಲ ಆರಂಭ ಅಷ್ಟೇ. ಶಿಕ್ಷಣ ವ್ಯವಸ್ಥೆಯನ್ನು ಸುಧಾರಿಸುವುದು ದೊಡ್ಡ ಗುರಿಯಾಗಿದೆ ಎಂದು ಲಡಾಖ್‌ನ ಪರಿಸರ ಹೋರಾಟಗಾರ ಸೋನಮ್ ವಾಂಗ್ ಚುಕ್ ಹೇಳಿದರು. ದೆಹಲಿಯ ಜಂತರ್ ಮಂತರ್‌ನಲ್ಲಿ ನಡೆಯುತ್ತಿರುವ ಕಾಕ್ರೋಚ್ ಜನತಾ ಪಕ್ಷದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದ ಅವರು ಮಾತನಾಡಿ, ಪರೀಕ್ಷಾ ಅಕ್ರಮಗಳು ಮತ್ತು ಪ್ರಶ್ನೆಪತ್ರಿಕೆ ಸೋರಿಕೆಗಳು ಪ್ರಮುಖ ಸಮಸ್ಯೆಗಳಾಗಿವೆ. ಎಲ್ಲರಿಗೂ ಪಾರದರ್ಶಕತೆ, ಹೊಣೆಗಾರಿಕೆ ಮತ್ತು ಗುಣಮಟ್ಟದ ಶಿಕ್ಷಣವನ್ನು ಖಚಿತಪಡಿಸಿಕೊಳ್ಳಲು ಇಡೀ ವ್ಯವಸ್ಥೆಗೆ ಸಮಗ್ರ ಸುಧಾರಣೆಗಳ ಅಗತ್ಯವಿದೆ" ಎಂದು ಅವರು ಹೇಳಿದರು.**

# ದೀದಿ ಮಾತಿಗೆ ಕವಡೆ ಕಾಸಿನ ಕಿಮ್ಮತ್ತಿಲ್ಲ: 8 ಶಾಸಕರು, 6 ಸಂಸದರಷ್ಟೇ ಸಭೆಗೆ ಹಾಜರು

**ಕೋಲ್ಕತ್ತಾ, ಜೂ.6:** ಪಶ್ಚಿಮ ಬಂಗಾಳದ ತೃಣಮೂಲ ಕಾಂಗ್ರೆಸ್ ಪಕ್ಷದಲ್ಲಿ ರಾಜಕೀಯ ಬಿಕ್ಕಟ್ಟು ಮುಂದುವರಿದಿದೆ. ಮಾಜಿ ಸಿಎಂ ಮಮತಾ ಬ್ಯಾನರ್ಜಿ ಅವರು ಕರೆದಿದ್ದ ಸಭೆಗೆ ಪ್ರಮುಖ ಶಾಸಕರು ಮತ್ತು ಸಂಸದರು ಗೈರಾಗಿರುವುದೇ ಇದಕ್ಕೆ ಸಾಕ್ಷಿಯಾಗಿದೆ. ಮಮತಾ ಬ್ಯಾನರ್ಜಿಯವರು ಶುಕ್ರವಾರ 2ನೇ ಬಾರಿಗೆ ತಮ್ಮ ನಿವಾಸದಲ್ಲಿ ಶಾಸಕರ ಹಾಗೂ ಸಂಸದರ ಸಭೆ ಕರೆದಿದ್ದರು. ಈ ಸಭೆಯಲ್ಲಿ 8 ಶಾಸಕರು ಮತ್ತು 6 ಸಂಸದರು ಮಾತ್ರ ಭಾಗಿಯಾಗಿದ್ದು, ಪಕ್ಷದೊಳಗಿನ ಆಂತರಿಕ ಬಿರುಕು ಮತ್ತಷ್ಟು ತೀವ್ರಗೊಂಡಿದೆ. ಟಿಎಂಸಿ ಪಶ್ಚಿಮ ಬಂಗಾಳದಲ್ಲಿ 80 ಶಾಸಕರು ಮತ್ತು 42 ಸಂಸದರನ್ನು ಹೊಂದಿದೆ. ಆದರೆ ಟಿಎಂಸಿಯ ಸುಪ್ರೀಂ ನಾಯಕಿಯ ಸಭೆಗೆ ಬಹುತೇಕ ಶಾಸಕರು, ಸಂಸದರು ಗೈರುಹಾಜರಾಗಿದ್ದು, ತಾನೇ ಕಟ್ಟಿ ಬೆಳಸಿದ ಪಕ್ಷದಲ್ಲಿ ದೀದಿ ಮೂಲೆಗುಂಪಾಗುತ್ತಿದ್ದಾರಾ ಅನ್ನೋ ಪ್ರಶ್ನೆಗಳು ಮೂಡಿವೆ. ಸಭೆಯಲ್ಲಿ ಶಾಸಕರಾದ ಬೀನಾ ಮಂಡಲ್, ಅಶಿಮಾ ಪಾತ್ರ, ಮದನ್‌ಮಿತ್ರ, ಕುನಾಲ್ ಘೋಷ್, ಫಿರ್ಹಾದ್ ಹಕೀಮ್, ಸೋಭಾಂದೇಬ್ ಚಟ್ಟೋಪಾಧ್ಯಾಯ, ಬಿಮನ್ ಬ್ಯಾನರ್ಜಿ ಮತ್ತು ಅಶೋಕ್ ಕುಮಾರ್ ದೇಬ್, ಸಂಸದರಾದ ಡೋಲಾ ಸೇನ್, ಮಾಲಾ ರಾಯ್, ಕಲ್ಯಾಣ್ ಬ್ಯಾನರ್ಜಿ, ಅಭಿಷೇಕ್ ಬ್ಯಾನರ್ಜಿ, ಡೆರಿಕ್ ಒಬ್ರಿಯಾನ್ ಮತ್ತು ಸುದೀಪ್ ಬಂದೋಪಾಧ್ಯಾಯ ಭಾಗಿಯಾಗಿದ್ದರು. ಪಕ್ಷದ ಈ ಎಲ್ಲಾ ಬೆಳವಣಿಗೆಗಳನ್ನು ಗಮನಿಸಿದರೆ ಟಿಎಂಸಿ ಇಬ್ಭಾಗವಾಗುತ್ತ ಸಾಗುತ್ತಿರುವುದು ಬಹುತೇಕ ಸ್ಪಷ್ಟವಾಗಿದೆ. ಆದರೆ ಈ ಸಭೆಗೆ ಎಲ್ಲಾ ಶಾಸಕರನ್ನು ಆಹ್ವಾನಿಸಿರಲಿಲ್ಲ. ಇದು ರಾಷ್ಟ್ರೀಯ ಕಾರ್ಯಕಾರಿ ಸಮಿತಿ ಸಭೆಯಾಗಿತ್ತು. ಇದರಲ್ಲಿ ಸಂಸದರಾದ ಮಹುವಾ ಮೊಯಿತ್ರಾ, ಸುಷ್ಮಿತಾ ದೇವ್, ಮುಕುಲ್ ಸಂಗ್ಮಾ ಮತ್ತು ರಾಜೇಶ್ ತ್ರಿಪಾಠಿ ಅವರಂತಹ ಅನೇಕರು ಭಾಗಿಯಾಗಿದ್ದರು ಎಂದು ಟಿಎಂಸಿ ಪಕ್ಷ ತಿಳಿಸಿದೆ.

**ವಿಭಜನೆಯತ್ತ ಟಿಎಂಸಿ ಪಕ್ಷ:** ಟಿಎಂಸಿ ಪಕ್ಷದ ಉಚ್ಚಾಟಿತ ಶಾಸಕ ಋತುಬ್ರತಾ ಬ್ಯಾನರ್ಜಿ ವಿಪಕ್ಷ ನಾಯಕರಾಗಲು ಬೆಂಬಲ ಘೋಷಿಸಿ ಸ್ಪೀಕರ್ ರತೀಂದ್ರ ಬೋಸ್ ಅವರನ್ನು ಭೇಟಿಯಾಗಿದ್ದರು. ಬಳಿಕ ಸ್ಪೀಕರ್ ಉಚ್ಚಾಟಿತ ಶಾಸಕರ ಬೆಂಬಲಿಗ ಬಣವನ್ನು ವಿಪಕ್ಷವಾಗಿ ಮಾನ್ಯಗೊಳಿಸಿದ್ದರು. ನಂತರ ಬಂಡಾಯ ಶಾಸಕರು ನಮ್ಮದೇ ಅಸಲಿ ಟಿಎಂಸಿ ಎಂದು ಘೋಷಿಸಿಕೊಂಡಿದ್ದರು. ಇದು ದೀದಿಯ ಟಿಎಂಸಿ ಪಕ್ಷ ವಿಭಜನೆಗೊಳ್ಳುವಲ್ಲಿ ಬಹುಮುಖ್ಯವಾದ ಪಾತ್ರ ವಹಿಸಿತ್ತು.

ಸಂಸತ್ತಿನಲ್ಲೂ ಟಿಎಂಸಿ ಇಬ್ಭಾಗವಾಗುವ ಮುನ್ಸೂಚನೆಯಿದ್ದು, ಸುಮಾರು 20ಕ್ಕೂ ಹೆಚ್ಚು ಸಂಸದರು ಈಗಾಗಲೇ ಬಂಡಾಯ ಗುಂಪಿನ ಶಾಸಕರ ಸಂಪರ್ಕದಲ್ಲಿದ್ದಾರೆ. ಹಲವರು ಮಮತಾ ಬ್ಯಾನರ್ಜಿ ನೇತೃತ್ವದ ಟಿಎಂಸಿ ಪಕ್ಷದ ಬಗ್ಗೆ ಬಹಿರಂಗವಾಗಿ ಅಸಮಧಾನ ವ್ಯಕ್ತಪಡಿಸಿದ್ದು, ಪಕ್ಷ ತೊರೆದು ಬಿಜೆಪಿ ಸೇರಲು ನಿರ್ಧರಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.

# ಪ್ರತಿಭಟನೆ ಲಘುವಾಗಿ ಪರಿಗಣಿಸಬೇಡಿ: ಕೇಂದ್ರಕ್ಕೆ ಉದ್ಧವ್ ಠಾಕ್ರೆ ಎಚ್ಚರಿಕೆ

**ಮುಂಬೈ, ಜೂ.6:** ಪರೀಕ್ಷೆಗೆ ಸಂಬಂಧಿಸಿದ ಲೋಪಗಳಿಗಾಗಿ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರ ರಾಜೀನಾಮೆಗೆ ಒತ್ತಾಯಿಸಿ ನವದೆಹಲಿಯ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸುತ್ತಿರುವ ಯುವಕರ ಪ್ರತಿಭಟನೆಯನ್ನು ಕೇಂದ್ರ ಸರ್ಕಾರ ಲಘುವಾಗಿ ಪರಿಗಣಿಸಬಾರದು ಎಂದು ಶಿವಸೇನೆ–ಯುಬಿಟಿ ಮುಖ್ಯಸ್ಥ ಉದ್ಧವ್ ಠಾಕ್ರೆ ಎಚ್ಚರಿಸಿದ್ದಾರೆ. ಉದ್ದವ್‌ಠಾಕ್ರೆ ಅವರ ಸಂದೇಶವನ್ನು ತಮ್ಮ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿರುವ ಶಿವಸೇನೆ–



ಯುಬಿಟಿ ನಾಯಕ ಸಂಜಯ್ ರಾವತ್, ಯುವಕರು ದೇಶದ ಭವಿಷ್ಯ ಮತ್ತು ಅವರು ಸುಡುವ ಬಿಸಿಲಿನಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ. ಅವರಿಗೆ ನ್ಯಾಯವನ್ನು ನಿರಾಕರಿಸುವುದು ಮತ್ತು ಅವರನ್ನು ಕಾಕ್ರೋಚ್ ಎಂದು ಸಂಬೋಧಿಸುವುದು ಅನುಚಿತ ಎಂದಿದ್ದಾರೆ. ನೀಟ್ ಪತ್ರಿಕೆ ಸೋರಿಕೆ ಲಕ್ಷಾಂತರ ಯುವಕರ ಜೀವನವನ್ನು ನಾಶಮಾಡಿದೆ. ಹೀಗಾಗಿ ಅವರು ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಮಹಾರಾಷ್ಟ್ರದ ಮಾಜಿ ಮುಖ್ಯಮಂತ್ರಿ ಹೇಳಿದ್ದಾರೆ. ಸರ್ಕಾರ ಯುವಕರ ಧ್ವನಿಯನ್ನು ಕೇಳಬೇಕು ಮತ್ತು ಕಾಕ್ರೋಚ್ ಜನತಾ ಪಾರ್ಟಿಯನ್ನು ಕಡೆಗಣಿಸಬಾರದು. ಜಂತರ್ ಮಂತರ್‌ನಲ್ಲಿ ಪ್ರತಿಭಟನಾಕಾರರು ನೀಡಿದ ಸೂಚನೆಯಾಗಿದೆ ಎಂದು ಠಾಕ್ರೆ ತಿಳಿಸಿದ್ದಾರೆ ಎಂದಿದ್ದಾರೆ.

# ಕಾವ್ಯಾಂ ವ್ಹಾಳೊ 15 ಕೊಂಕಣಿ ಕವಿಗೋಷ್ಠಿ

**ಮುಂಬಯಿ, ಜೂ.6:** ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ ವತಿಯಿಂದ, ಅಕಾಡೆಮಿ ಸಭಾಂಗಣದಲ್ಲಿ ಶನಿವಾರ ಕಾವ್ಯಾಂ ವ್ಹಾಳೊ–15 ಶೀರ್ಷಿಕೆಯಡಿ ಕವಿಗೋಷ್ಠಿ ನಡೆಯಿತು, ಅಕಾಡೆಮಿ ಅಧ್ಯಕ್ಷರಾದ ಜೋಕಿಂ ಸ್ಟ್ಯಾನಿ ಆಲ್ವಾರಿಸ್‌ರವರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದರು. ಇವರು ಪ್ರಾಸ್ತಾವಿಕವಾಗಿ ಮಾತಾನಾಡಿ, ಕೊಂಕಣಿ ಸಂಗೀತ ಕ್ಷೇತ್ರದಲ್ಲಿ, ಸಾಹಿತ್ಯ ಕ್ಷೇತ್ರದಲ್ಲಿ, ನಾಟಕ ಕ್ಷೇತ್ರದಲ್ಲಿ ಹಾಗೂ ಇತರ ಸಾಂಸ್ಕೃತಿಕ ಮತ್ತು ಶೈಕ್ಷಣಿಕ ಕ್ಷೇತ್ರದಲ್ಲಿ ಕೊಂಕಣಿ ಸಮುದಾಯದ ವ್ಯಕ್ತಿಗಳನ್ನು ಗುರುತಿಸಿ, ಅವರ ಕಾರ್ಯ ಕ್ಷೇತ್ರದಲ್ಲಿ ಅವರು ಮಾಡಿದ ಸಾಧನೆಗಾಗಿ ಸನ್ಮಾನಿಸುವ ಕೆಲಸವನ್ನು ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ ಮಾಡುತ್ತಿದೆ ಎಂದು ಹರ್ಷವ್ಯಕ್ತಪಡಿಸಿ ಹಾಜರಿರುವ ಎಲ್ಲರನ್ನೂ ಸ್ವಾಗತಿಸಿದರು.

ಮುಖ್ಯ ಅತಿಥಿಗಳಾದ ಸಂತ ಅಲೋಶಿಯಸ್ (ಪರಿಗಣಿತ ವಿಶ್ವವಿದ್ಯಾಲಯ), ಮಂಗಳೂರು ಇಲ್ಲಿನ ಅಸಿಸ್ಟೆಂಟ್ ಪ್ರೊಫೆಸರ್ ಡಾ. ವಿಜಯಲಕ್ಷ್ಮೀ ನಾಯಕ್‌ರವರು ಮಾತಾನಾಡಿ, ಕೊಂಕಣಿ ಒಂದು ಮಹಾನ್ ಭಾಷೆ. ಭಾರತದ ಪ್ರಮುಖ ಧರ್ಮಗಳಾದ ಹಿಂದು, ಮುಸ್ಲಿಂ, ಕ್ರೈಸ್ತ ಸಮುದಾಯಗಳ ಜನರು ಮಾತಾನಾಡುವ ಭಾಷೆ. ಐದು ಲಿಪಿಗಳಲ್ಲಿ ಬರೆಯುವ ಭಾಷೆಯಾಗಿದೆ. ಹಾಗಾಗಿ ಕೊಂಕಣಿ ಭಾಷೆಯು ಬಹಳಷ್ಟು ಅನನ್ಯತೆಯನ್ನು ಹೊಂದಿರುವ ಭಾಷೆಯಾಗಿ ಉಳಿದಿದೆ.




ಕೊಂಕಣಿಯು ಭಾರತದ ಸಂವಿಧಾನದ 8 ನೇ ಪರಿಚ್ಛೇದದಲ್ಲಿದ್ದು, ಭಾರತದ ಅಧಿಕೃತವಾಗಿ ಮಾನ್ಯತೆ ಪಡೆದ ಭಾಷೆಯಾಗಿರುವುದು ಇದಕ್ಕೆ ಸಾಕ್ಷಿಯಾಗಿದೆ ಎಂದು ಕೊಂಕಣಿಯ ಶ್ರೀಮಂತಿಕೆಯನ್ನು ಕೊಂಡಾಡಿದರು.

ಕೊಂಕಣಿ ಅಕಾಡೆಮಿ ಸನ್ಮಾನವನ್ನು ಸ್ವೀಕರಿಸಿ ಮಾತಾನಾಡಿದ ಡೆಪ್ಯೂಟಿ ಚೀಫ್ ಟ್ರಾಫಿಕ್ ವಾರ್ಡನ್ ಆಗಿರುವ ಫ್ರಾನ್ಸಿಸ್ ಮ್ಯಾಕ್ಸಿಮ್ ಮೊರಾಸ್ ಇವರು "ಜಾತಿ ಧರ್ಮ ಮನೆಯಲ್ಲಿರಲಿ, ದೇವರು ಹೃದಯದಲ್ಲಿರಲಿ, ಈ ಜೀವ ಈ ಭೂಮಿಗೆ ಬೆಳಕಾಗಿರಲಿ" ಎಂದು ಕಾರ್ಯಕ್ರಮಕ್ಕೆ ಶುಭಕೋರಿ,

ಈ ಲೋಕದಲ್ಲಿ ಜನಿಸಿದ ಮೇಲೆ ಸಮಾಜಕ್ಕೆ ಯಾವುದಾದರೂ ಒಂದು ಒಳ್ಳೆಯ ಕೆಲಸವನ್ನು ಮಾಡಿ, ಬೇರೆಯವರಿಗೆ ಉಪಕಾರಿಯಾಗಿರಬೇಕೆಂದು ಕರೆಕೊಟ್ಟರು.

ಖ್ಯಾತ ಕವಯಿತ್ರಿಯಾದ ಫೆಲ್ಸಿ ಲೋಬೊ ದೆರೆಬಯ್ಲುವರು ಕವಿಗೋಷ್ಠಿಯನ್ನು ನಡೆಸಿ, ಕವಿ, ಕವಿತೆಗಳ ಬಗ್ಗೆ ಸವಿಸ್ತಾರ ವಿವರಗಳನ್ನು ನೀಡಿದರು. ವಲೇರಿಯನ್ ಮೊರಾಸ್ ತಾಕೊಡೆ, ಸ್ಮಿತಾ ಶೆಣೈ, ರೆಮಿ ಕಾಟಿಪಳ್ಳ, ಡಾ.ಫ್ಲಾವಿಯಾ ಕ್ಯಾಸ್ತೆಲಿನೊ, ಅನಿಲ್ ಜೆ. ಕುವೆಲ್ಲೊ, ರಾಧಿಕ ಪೈ, ಪೆದ್ರು ಪ್ರಭು ತಾಕೊಡೆ, ಮರ್ಲಿನ್ ಮಸ್ಕರೇನ್ಹಸ್, ಅಲ್ರೀಶಾ ರೊಡ್ರಿಗಸ್ ಮತ್ತು ಲವೀನ ದಾಂತಿ ಇವರು ತಮ್ಮ ಕವಿತೆಗಳನ್ನು ವಾಚಿಸಿದರು. ಅಕಾಡೆಮಿ ಸದಸ್ಯರಾದ ಸಪ್ನಾ ಮೇ ಕ್ರಾಸ್ತಾರವರು ಕಾರ್ಯಕ್ರಮವನ್ನು ನಿರೂಪಿಸಿ,ವಂದಿಸಿದರು. ಸದಸ್ಯರಾದ ನವೀನ್ ಲೋಬೊ ಉಪಸ್ಥಿತರಿದ್ದರು.

# ಕೇರಳದಲ್ಲಿ ಮುಂಗಾರು ಅಬ್ಬರ: ಮಳೆಗೆ ರಸ್ತೆಗಳು ಜಲಾವೃತ, 5 ಜಿಲ್ಲೆಗೆ ರೆಡ್ ಅಲರ್ಟ್ ಘೋಷಣೆ

**ತಿರುವನಂತಪುರಂ, ಜೂ.6:** ಎರಡು ದಿನಗಳ ಹಿಂದಷ್ಟೇ ಕೇರಳಕ್ಕೆ ಪ್ರವೇಶ ಮಾಡಿದ್ದ ನೈಋತ್ಯ ಮಾನ್ಸೂನ್ ಮಾರುತಗಳು ಭಾರಿ ಅವಾಂತರ ಸೃಷ್ಟಿ ಮಾಡಿದ್ದು, ರಾತ್ರಿಯಿಡೀ ಸುರಿದ ಮಳೆಯಿಂದಾಗಿ ರಸ್ತೆಗಳು ಜವಲಾವೃತವಾಗಿ ಹತ್ತಾರು ಮರಗಳು ಧರೆಗುರುಳಿದಿವೆ.

ಕೇರಳದ ವಿವಿಧ ಭಾಗಗಳಲ್ಲಿ ಶುಕ್ರವಾರ ರಾತ್ರಿ ಸುರಿದ ಭಾರೀ ಮಳೆ ಶನಿವಾರ ಬೆಳಗ್ಗೆಯೂ ಮುಂದುವರಿದಿದ್ದು, ಅನೇಕ ಕಡೆಗಳಲ್ಲಿ ರಸ್ತೆಗಳು ಜಲಾವೃತಗೊಂಡಿವೆ. ಮರಗಳು ಧರೆಗೆ ಉರುಳಿದ್ದು, ಮನೆಗಳಿಗೆ ಹಾನಿಯಾಗಿದೆ.

ಪರಿಣಾಮವಾಗಿ ರಾಜ್ಯದ ಹಲವು ಪ್ರದೇಶಗಳಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿದೆ. ತ್ರಿಶೂರ್ ಜಿಲ್ಲೆಯ ಮನಲೂರು ಪ್ರದೇಶದಲ್ಲಿ ತಾತ್ಕಾಲಿಕ ಶೆಡ್‌ವೊಂದರ ಮೇಲೆ ಮರ ಬಿದ್ದ ಪರಿಣಾಮ, ಅದರ ಕೆಳಗೆ ಮಲಗಿದ್ದ 29 ವರ್ಷದ ಯುವಕ ಮೃತಪಟ್ಟಿದ್ದಾನೆ ಎಂದು ಅಗ್ನಿಶಾಮಕ ಮತ್ತು ರಕ್ಷಣಾ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಭಾರತೀಯ ಹವಾಮಾನ ಇಲಾಖೆ ಶನಿವಾರದಂದು ಮಲಪ್ಪುರಂ, ಕೋಯಿಕ್ಕೋಡ್, ವಯನಾಡು, ಕಣ್ಣೂರು ಮತ್ತು ಕಾಸರಗೋಡು ಜಿಲ್ಲೆಗಳಿಗೆ ರೆಡ್ ಅಲರ್ಟ್ ಘೋಷಿಸಿದೆ. ಇದರ ಜೊತೆಗೆ ಪತ್ತನಂತಿಟ್ಟ, ಕೊಟ್ಟಯಂ, ಎರ್ನಾಕುಲಂ, ಇಡುಕ್ಕಿ, ತ್ರಿಶೂರ್ ಮತ್ತು ಪಾಲಕ್ಕಾಡು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್, ಉಳಿದ ಮೂರು ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ನೀಡಲಾಗಿದೆ.

ಐಎಂಡಿ ಪ್ರಕಾರ, ರೆಡ್ ಅಲರ್ಟ್ ಹಿನ್ನೆಲೆಯಲ್ಲಿ ವಯನಾಡು, ಕೋಯಿಕೋಡ್ ಮತ್ತು ಕಾಸರಗೋಡು ಜಿಲ್ಲೆಗಳಲ್ಲಿ ಪ್ರವಾಸಿ ಟ್ರೆಕ್ಕಿಂಗ್ ತಾಣಗಳಿಗೆ



ಪ್ರವೇಶವನ್ನು ನಿಷೇಧಿಸಲಾಗಿದೆ. ಅಲ್ಲದೆ, ಗುಡ್ಡಗಾಡು ಪ್ರದೇಶಗಳಲ್ಲಿ ರಾತ್ರಿ ಸಂಚಾರ ಹಾಗೂ ಕಲ್ಲುಗಣಿ ಚಟುವಟಿಕೆಗಳ ಮೇಲೂ ನಿರ್ಬಂಧ ಹೇರಲಾಗಿದೆ. ಇದಲ್ಲದೆ, ವಯನಾಡು, ಕಣ್ಣೂರು ಹಾಗೂ ಕಾಸರಗೋಡು ಜಿಲ್ಲೆಗಳ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಿಗೆ ಶನಿವಾರ ರಜೆ ಘೋಷಿಸಲಾಗಿದೆ. ಭಾರತೀಯ ಹವಾಮಾನ ಇಲಾಖೆ ಮಾಹಿತಿ ಪ್ರಕಾರ, ನೈಋತ್ಯ ಮುಂಗಾರು ಈಗಾಗಲೇ ಮಧ್ಯ–ಪಶ್ಚಿಮ ಮತ್ತು ಮಧ್ಯ–ಪೂರ್ವ ಅರಬ್ಬಿ ಸಮುದ್ರದ ಬಹುತೇಕ ಭಾಗಗಳಿಗೆ, ಹಾಗೆಯೇ ಗೋವಾ, ಕರ್ನಾಟಕ, ಮಹಾರಾಷ್ಟ್ರ, ಆಂಧ್ರಪ್ರದೇಶ ಮತ್ತು ತಮಿಳುನಾಡಿನ ಕೆಲವು ಭಾಗಗಳಿಗೆ ವ್ಯಾಪಿಸಿದೆ.

### ಜೂನ್ 10ರವರೆಗೆ ಭಾರಿ ಮಳೆ

ಉತ್ತರ ಕೇರಳದ ಮೇಲಿರುವ ಚಂಡಮಾರುತೀಯ ವಾಯುಭಾರ ಕುಸಿತದ ಪರಿಣಾಮವಾಗಿ ಜೂನ್ 6ರಂದು ಕಾಸರಗೋಡು, ಕಣ್ಣೂರು, ಕೋಝಿಕೋಡ್, ವಯನಾಡು ಹಾಗೂ ಮಲಪ್ಪುರಂ ಜಿಲ್ಲೆಗಳಲ್ಲಿ ಅತಿ ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ಐಎಂಡಿ ತಿಳಿಸಿದೆ. ಜೊತೆಗೆ ಜೂನ್ 6ರಿಂದ 9ರವರೆಗೆ ಕೇರಳ ಹಾಗೂ ಮಾಹೆ ಪ್ರದೇಶಗಳಲ್ಲಿ ಭಾರೀದಿಂದ ಅತಿ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಜೂನ್ 6ರಿಂದ 10ರವರೆಗೆ ರಾಜ್ಯದ ಬಹುತೇಕ ಭಾಗಗಳಲ್ಲಿ ವ್ಯಾಪಕ ಮಳೆಯೊಂದಿಗೆ ಗುಡುಗು–ಮಿಂಚು ಹಾಗೂ ಗಂಟೆಗೆ 40ರಿಂದ 50 ಕಿಲೋಮೀಟರ್ ವೇಗದಲ್ಲಿ ಬಲವಾದ ಗಾಳಿ ಬೀಸುವ ಸಾಧ್ಯತೆಯೂ ಇದೆ ಎಂದು ಇಲಾಖೆ ತಿಳಿಸಿದೆ. ಇದೇ ವೇಳೆ, ಕೇರಳ–ಲಕ್ಷದ್ವೀಪ–ಕರ್ನಾಟಕ ಕರಾವಳಿ ಪ್ರದೇಶಗಳಲ್ಲಿ ಗಂಟೆಗೆ 40ರಿಂದ 60 ಕಿಲೋಮೀಟರ್ ವೇಗದಲ್ಲಿ ಬಲವಾದ ಗಾಳಿ ಬೀಸುವ ಸಾಧ್ಯತೆ ಇರುವುದರಿಂದ ಜೂನ್ 6ರಿಂದ 9ರವರೆಗೆ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಐಎಂಡಿ ಎಚ್ಚರಿಕೆ ನೀಡಿದೆ.

### ಸಿಇಟಿಯಲ್ಲಿ 2,92,782 ವಿದ್ಯಾರ್ಥಿಗಳು ಅರ್ಹ: ಡಾ. ಶರಣಪ್ರಕಾಶ ಪಾಟೀಲ್

# ತನಿಷಾ ಪ್ರಥಮ, ಸೃಜನ್ ದ್ವಿತೀಯ, ನಿನಾದ್ 3ನೇ ರ್‍ಯಾಂಕ್

**ಬೆಂಗಳೂರು, ಜೂ.6:** ಇಂಜಿನಿಯರಿಂಗ್ ಸೇರಿದಂತೆ ವಿವಿಧ ವೃತ್ತಿಪರ ಪದವಿ ಕೋರ್ಸ್‌ಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರ ನಡೆಸಿದ್ದ ಸಾಮಾನ್ಯ ಪ್ರವೇಶ ಪರೀಕ್ಷೆ (ಸಿಇಟಿ)ಯ ಫಲಿತಾಂಶ ಪ್ರಕಟಗೊಂಡಿದೆ. ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ ಫಲಿತಾಂಶವನ್ನು ಪ್ರಕಟಿಸಿದ್ದಾರೆ.

ಈ ಬಾರಿ ಸಿಇಟಿಗೆ 3,30,646 ಲಕ್ಷ ವಿದ್ಯಾರ್ಥಿಗಳು ಅರ್ಜಿ ಸಲ್ಲಿಕೆ ಮಾಡಿದ್ದು, ಈ ಪೈಕಿ 3,09,014 ವಿದ್ಯಾರ್ಥಿಗಳು ಪರೀಕ್ಷೆ ಹಾಜರಾಗಿದ್ದರು. 2,92,782 ವಿದ್ಯಾರ್ಥಿಗಳು ಎಲಿಜಿಬಿಲಿಟಿ (ಅರ್ಹತೆ) ಪಡೆದಿದ್ದಾರೆ. ಇಂಜಿನಿಯರಿಂಗ್ ವಿಭಾಗದಲ್ಲಿ ಬೆಂಗಳೂರಿನ ಆರ್.ವಿ. ಪಿಯು ಕಾಲೇಜು ವಿದ್ಯಾರ್ಥಿನಿ ತನೀಶಾ ಕಾರ್ತಿಕ್ 99.44 ಶೇ. ಅಂಕಗಳೊಂದಿಗೆ ಪ್ರಥಮ ರ್‍ಯಾಂಕ್ ಗಳಿಸಿದ್ದಾರೆ. ಬೆಂಗಳೂರಿನ ಕೆಎಂಡಬ್ಲ್ಯುಎ ಪಿಯು ಕಾಲೇಜು ವಿದ್ಯಾರ್ಥಿ ಸೃಜನ್ ಬಿ.ಎಸ್. ದ್ವಿತೀಯ ರ್‍ಯಾಂಕ್ ಗಳಿಸಿದ್ದಾರೆ. ಬೆಂಗಳೂರಿನ ಆರ್.ವಿ. ಪಿಯು ಕಾಲೇಜು ವಿದ್ಯಾರ್ಥಿ ನಿನಾದ್ ವಸಿಷ್ಠ ತೃತೀಯ ರ್‍ಯಾಂಕ್ ಗಳಿಸಿದ್ದಾರೆ. ಮಂಗಳೂರಿನ ಟಿ.ಎಲ್.ಸಿ. ಪಿಯು ಕಾಲೇಜು ವಿದ್ಯಾರ್ಥಿಗಳಾದ ಇರಾ ಜೈನ್ 4ನೇ, ರಿಶೋನ್ ಫೆರ್ನಾಂಡಿಸ್ 5ನೇ, ಅಬ್ಬಿ ಸಣ್ಣಯ್ಯ 8ನೇ ರ್‍ಯಾಂಕ್ ಗಳಿಸಿದ್ದಾರೆ.

ಬೆಳ್ತಂಗಡಿ ಗುರುವಾಯನಕೆರೆಯ ವಿದ್ವತ್ ಪಿಯು ಕಾಲೇಜು ವಿದ್ಯಾರ್ಥಿ ಚಿನ್ಮಯ್ ಜಿ.ಕೆ. 7ನೇ ರ್‍ಯಾಂಕ್ ಗಳಿಸಿದ್ದಾರೆ. ಪಶು ವೈದ್ಯಕೀಯ ವಿಭಾಗದಲ್ಲಿ ಬೆಂಗಳೂರಿನ ಬಿಎಎಸ್‌ಇ ಕಾಲೇಜು ವಿದ್ಯಾರ್ಥಿನಿ ನಯನಾ ಗೋಪಿ ಪ್ರಥಮ, ದಾವಣಗೆರೆಯ ಎಂ.ವಿ. ಪಿಯು ಕಾಲೇಜು ವಿದ್ಯಾರ್ಥಿನಿ ಅಮೂಲ್ಯ ಎಸ್. ದ್ವಿತೀಯ ಹಾಗೂ ಬೆಂಗಳೂರಿನ ಆರ್.ವಿ. ಪಿಯು ಕಾಲೇಜು ವಿದ್ಯಾರ್ಥಿ ರಿತ್ವಿಕ್ ಕುಮಾರ್ ತೃತೀಯ ರ್‍ಯಾಂಕ್ ಪಡೆದಿದ್ದಾರೆ.

ಕೃಷಿ ವಿಭಾಗದಲ್ಲಿ ಬೆಂಗಳೂರಿನ ಆರ್.ವಿ. ಪಿಯು ಕಾಲೇಜು ವಿದ್ಯಾರ್ಥಿ ನಿನಾದ್ ವಸಿಷ್ಠ ಪ್ರಥಮ, ಧಾರವಾಡದ ಅರ್ಜುನ್ ಪಿಯು ಕಾಲೇಜು ವಿದ್ಯಾರ್ಥಿ ಅನ್ಮೋಲ್ ಪ್ರಭು ದ್ವಿತೀಯ ಹಾಗೂ ಮಂಗಳೂರಿನ ಎಕ್ಸ್‌ಪರ್ಟ್ ಪಿಯು ಕಾಲೇಜು ವಿದ್ಯಾರ್ಥಿ ಸಮಯ್ ಎ.ಎಸ್. ತೃತೀಯ ರ್‍ಯಾಂಕ್ ಗಳಿಸಿದ್ದಾರೆ. ನರ್ಸಿಂಗ್ ವಿಭಾಗದಲ್ಲಿ ನಯನಾ ಗೋಪಿ ಪ್ರಥಮ, ಅಮೂಲ್ಯ ಎಸ್. ದ್ವಿತೀಯ ಹಾಗೂ ರಿತ್ವಿಕ್ ಕುಮಾರ್ ತೃತೀಯ ರ್‍ಯಾಂಕ್ ಗಳಿಸಿದ್ದಾರೆ. ಯೋಗ ಮತ್ತು ನ್ಯಾಚುರೋಪತಿ ವಿಭಾಗದಲ್ಲಿ ನಯನಾ ಗೋಪಿ ಪ್ರಥಮ, ಅಮೂಲ್ಯ ಎಸ್. ದ್ವಿತೀಯ ಮತ್ತು ಸುಚಿತಾ ಎಂ. ತೃತೀಯ ರ್‍ಯಾಂಕ್ ಗಳಿಸಿದ್ದಾರೆ.ಬಿ. ಫಾರ್ಮಾ ವಿಭಾಗದಲ್ಲಿ ನಯನಾ ಗೋಪಿ ಪ್ರಥಮ, ಅಮೂಲ್ಯ ಎಸ್. ದ್ವಿತೀಯ ಮತ್ತು ಸುಚಿತಾ ಎಂ. ತೃತೀಯ ರ್‍ಯಾಂಕ್ ಗಳಿಸಿದ್ದಾರೆ.ಫಾರ್ಮಾ ಡಿ. ವಿಭಾಗ ದಲ್ಲಿ ನಯನಾ ಗೋಪಿ ಪ್ರಥಮ, ಅಮೂಲ್ಯ ಎಸ್. ದ್ವಿತೀಯ ಮತ್ತು ಸುಚಿತಾ ಎಂ. ತೃತೀಯ ರ್‍ಯಾಂಕ್ ಗಳಿಸಿದ್ದಾರೆ.ಇಂದು ಅಪರಾಹ್ನ 2 ಗಂಟೆಯ ನಂತರ ಅಭ್ಯರ್ಥಿಗಳು ಆನ್ ಲೈನ್ ಮೂಲಕ ತಮ್ಮ ಅಂಕಪಟ್ಟಿ ಮತ್ತು ರ?ಯಾಂಕ್ ಅನ್ನು ವೀಕ್ಷಿಸಬಹುದು ಎಂದು ಕೆಇಎ ಕಾರ್ಯನಿರ್ವಾಹಕ ನಿರ್ದೇಶಕ ಎಚ್. ಪ್ರಸನ್ನ ತಿಳಿಸಿದ್ದಾರೆ. https://keaonline.karnataka.gov.in/ugcet_2026_results/ CxÀªÁ https://cetonline.karnataka.gov.in/kea/ನಲ್ಲಿ ಫಲಿತಾಂಶವನ್ನು ವೀಕ್ಷಿಸಬಹುದು.

### ವಿವಾದಗಳ ನಡುವೆಯೂ ಫಲಿತಾಂಶ

ಈ ಬಾರಿಯ ಸಿಇಟಿ ಪರೀಕ್ಷೆ ವೇಳೆ ಕೆಲವು ಕೇಂದ್ರಗಳಲ್ಲಿ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಘಟನೆ ರಾಜ್ಯಾದ್ಯಂತ ಭಾರಿ ಚರ್ಚೆಗೆ ಕಾರಣವಾಗಿತ್ತು. ಈ ಪ್ರಕರಣ ರಾಜಕೀಯ ಆರೋಪ–ಪ್ರತ್ಯಾರೋಪಕ್ಕೂ ಕಾರಣವಾಗಿದ್ದು, ನಿರ್ದೇಶನದ ಮೇರೆಗೆ ಮೂವರು ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿತ್ತು. ಪರೀಕ್ಷೆಗೆ ಹಾಜರಾಗಲು ಸಾಧ್ಯವಾಗದ ಕೆಲ ವಿದ್ಯಾರ್ಥಿಗಳಿಗೆ ಮರುಪರೀಕ್ಷೆಯನ್ನೂ ನಡೆಸಲಾಗಿತ್ತು. ಮೇ ತಿಂಗಳ ಕೊನೆಯ ವಾರದಲ್ಲೇ ಫಲಿತಾಂಶ ಪ್ರಕಟವಾಗಬೇಕಿದ್ದರೂ, ಆಡಳಿತಾತಕ ಬೆಳವಣಿಗೆಗಳು ಹಾಗೂ ಸರ್ಕಾರದ ಮಟ್ಟದ ಬದಲಾವಣೆಗಳ ಹಿನ್ನೆಲೆಯಲ್ಲಿ ಫಲಿತಾಂಶ ಪ್ರಕಟಣೆ ವಿಳಂಬವಾಗಿತ್ತು. ಪಾರದರ್ಶಕ ಪರೀಕ್ಷಾ ವ್ಯವಸ್ಥೆ, ತಂತ್ರಜ್ಞಾನ ಬಳಕೆ ಹಾಗೂ ವಿವಾದಗಳ ನಡುವೆಯೂ ಸಿಇಟಿ–2026 ಫಲಿತಾಂಶ ಪ್ರಕಟವಾಗಿದ್ದು, ಈಗ ವಿದ್ಯಾರ್ಥಿಗಳ ಗಮನ ಕೌನ್ಸೆಲಿಂಗ್ ಹಾಗೂ ಸೀಟು ಹಂಚಿಕೆ ಪ್ರಕ್ರಿಯೆಯತ್ತ ನೆಟ್ಟಿದೆ.



ಮುಂಗಾರು ರಾಜ್ಯ ಪ್ರವೇಶಿಸುತ್ತಿದ್ದಂತೆ, ಶನಿವಾರ ಚಿಕ್ಕಮಗಳೂರು ನಗರದಲ್ಲಿ ಮಳೆಯಾಯಿತು.

### ಶ್ರೀ ಚುಂಚಶ್ರೀ ಬಳಗದಿಂದ ಯುಪಿಎಸ್‌ಸಿಯ 11 ಸಾಧಕರಿಗೆ ಸನ್ಮಾನ

# ಅಧಿಕಾರಿಗಳು ಹಂಸಪಕ್ಷಿಯಂತೆ ಶಾಂತಚಿತ್ತದಿಂದ ಜನಸೇವೆ ಮಾಡಲಿ: ಡಾ.ನಿರ್ಮಲಾನಂದ ಸ್ವಾಮೀಜಿ

**ಬೆಂಗಳೂರು, ಜೂ. 6:** ಅತ್ಯಂತ ಪ್ರತಿಷ್ಠಿತ, ಸ್ಪರ್ಧಾತ್ಮಕವಾದ ಯುಪಿಎಸ್‌ಸಿ ಪರೀಕ್ಷೆಯಲ್ಲಿ ಯಶಸ್ಸು ಸಾಧಿಸುವುದು ಪ್ರತಿಯೊಬ್ಬ ಅಭ್ಯರ್ಥಿಯ ಕನಸು. ಸಾಧನೆಯ ಹಿಂದೆ ವರ್ಷಗಳ ಪರಿಶ್ರಮ, ನಿರಂತರ ಅಧ್ಯಯನ ಅಡಗಿರುತ್ತದೆ. ಅಧಿಕಾರಿಗಳು ಹಂಸ ಪಕ್ಷಿಯಂತೆ ಶಾಂತಚಿತ್ತತೆಯಿಂದ ಸದಾ ಜನರ ಸೇವೆ ಮಾಡಬೇಕು ಎಂದು ಆದಿಚುಂಚನಗಿರಿ ಮಹಾ ಸಂಸ್ಥಾನದ ಪೀಠಾಧಿಪತಿ ಡಾ. ನಿರ್ಮಲಾನಂದ ಸ್ವಾಮೀಜಿ ಕರೆ ನೀಡಿದ್ದಾರೆ.

ನಗರದ ಚುಂಚಶ್ರೀ ಬಳಗದಿಂದ ವಿಜಯನಗರದ ಆದಿಚುಂಚನಗಿರಿ ಸಮುದಾಯ ಭವನದಲ್ಲಿ 2025–26ನೇ ಸಾಲಿಗೆ ಯುಪಿಎಸ್ಸಿ ಪರೀಕ್ಷೆಯಲ್ಲಿ ಆಯ್ಕೆಯಾದ ಐಎಎಸ್, ಐಪಿಎಸ್, ಐಎಫ್ಎಸ್, ಐಆರ್‌ಎಸ್‌ನ 11 ಸಾಧಕರನ್ನು ಅಭಿನಂದಿಸಿ ಮಾತನಾಡಿದ ಅವರು, ಹಂಸಪಕ್ಷಿ ಸದಾ ನೀರಿನಲ್ಲಿ ತೇಲುತ್ತಿರುವಂತೆ ನಮಗೆ ಬಾಹ್ಯ ನೋಟದಲ್ಲಿ ಕಾಣಿಸುತ್ತದೆ. ಆದರೆ ಆಳದಲ್ಲಿ ಪಕ್ಷಿಯ ಕಾಲುಗಳು ನಿರಂತರವಾಗಿ ಚಲಿಸುತ್ತಿರುತ್ತದೆ. ಅದೇ ರೀತಿ ನೂತನ ಅಧಿಕಾರಿಗಳು ಸಮಾಜದ ಧ್ವನಿಯಾಗಿ, ಜೊತೆಗೆ ಸಮಾಜದ ಋಣ ತೀರಿಸುವ ಕೆಲಸ ಮಾಡಬೇಕು ಎಂದರು.

ವಿದ್ಯೆ ನಮಗೆ ವಿನಯ ಕೊಡುತ್ತದೆ. ಜ್ಞಾನದ ಜೊತೆ ಸಂಸ್ಕಾರವೂ ಸೇರಬೇಕು. ಮಾನವೀಯ ಮೌಲ್ಯಗಳನ್ನು ಬೆಳೆಸಿಕೊಂಡಾಗ ಮಾತ್ರ ನಿಜವಾದ ಯಶಸ್ಸು ಸಾರ್ಥಕವಾಗುತ್ತದೆ. ಶತಮಾನಗಳ ಕಾಲ ಹಿರಿಯರು ನಮಗೆ ತುಂಬಿರುವ ಮೌಲ್ಯಗಳನ್ನು ಅಧಿಕಾರಿಗಳು ಅಳವಡಿಸಿಕೊಳ್ಳಬೇಕು. ಅಭಿವೃದ್ಧಿಗೆ ಆದ್ಯತೆ ನೀಡಿದಾಗ ಮಾತ್ರ ಆಡಳಿತದ ನಿಜವಾದ ಉದ್ದೇಶ ನೆರವೇರುತ್ತದೆ ಎಂದು ಡಾ. ನಿರ್ಮಲಾನಂದ ಸ್ವಾಮೀಜಿ ಹೇಳಿದರು.



**ಸಮಯ ವ್ಯರ್ಥ ಮಾಡುವವರಿಗೆ ಯಶಸ್ಸು ಸಿಗಲ್ಲ: ಚೆಲುವರಾಯಸ್ವಾಮಿ**

ಮಾಜಿ ಸಚಿವ ಚಲುವರಾಯ ಸ್ವಾಮಿ ಮಾತನಾಡಿ, ಯುವ ಸಮೂಹ ಸಾಮಾಜಿಕ ಮಾಧ್ಯಮದಿಂದ ಹಾಳಾಗುತ್ತಿದೆ. ಮೊಬೈಲ್‌ನಲ್ಲಿ ರೀಲ್ಸ್ ಗಳನ್ನು ರೋಲ್ ಮಾಡುವ ಬೆರಳುಗಳು ದೇಶವನ್ನು ಬದಲಿಸುವುದಿಲ್ಲ. ಪುಸ್ತಕದ ಪುಟಗಳನ್ನು ತಿರುವುದರಿಂದ ದೇಶದ ಭವಿಷ್ಯ ನಿರ್ಮಾಣವಾಗುತ್ತದೆ. ಸಮಯ ವ್ಯರ್ಥ ಮಾಡುವವರಿಗೆ ಯಶಸ್ಸು ಸಿಗುವುದಿಲ್ಲ. ಸಮಯವನ್ನು ಗೌರವಿಸುವವರಿಗೆ ಭವಿಷ್ಯದಲ್ಲಿ ಯಶಸ್ಸು ತಲೆಬಾಗುತ್ತದೆ. ಯಶಸ್ಸು ಅದೃಷ್ಟವಲ್ಲ. ಅದು ನಿರಂತರ ಪ್ರಯತ್ನದ ಪ್ರತಿಫಲ. ಕನಸು ಕಂಡು ಗೆಲುವಿನ ಗುರಿ ಬೆನ್ನತ್ತಿದರೆ ಯಶಸ್ಸು ಕಟ್ಟಿಟ್ಟ ಬುತ್ತಿ ಎಂದರು.

ವಿಶ್ವ ಒಕ್ಕಲಿಗರ ಮಹಾ ಸಂಸ್ಥಾನದ ಡಾ. ನಿಶ್ಚಲಾನಂದನಾಥ ಸ್ವಾಮೀಜಿ, ಚುಂಚಶ್ರೀ ಬಳಗದ ಅಧ್ಯಕ್ಷರು ಮತ್ತು ನಿವೃತ್ತ ಐಎಫ್ಎಸ್ ಡಾ.ಗಾ.ನಂ. ಶ್ರೀಕಂಠಯ್ಯ ಮಾತನಾಡಿದರು.

ಆದಿಚುಂಚನಗಿರಿ ಮಠದ ಸೌಮ್ಯನಾಥ ಸ್ವಾಮೀಜಿ, ರಾಜ್ಯಸಭೆ ಸದಸ್ಯ ಜಿ.ಸಿ. ಚಂದ್ರಶೇಖರ್, ಶಾಸಕರಾದ ಎಚ್.ಸಿ. ಬಾಲಕೃಷ್ಣ, ಎಚ್.ಡಿ. ರಂಗನಾಥ್, ಪ್ರಿಯಾಕೃಷ್ಣ, ಶರತ್ ಬಚ್ಚೇಗೌಡ, ಡಿಜಿಪಿ ಎಂ.ಎನ್. ಅನುಚೇತ್ ಉಪಸ್ಥಿತರಿದ್ದರು.

### ಸಿಎಂ ಆಪ್ತ ಕಾರ್ಯದರ್ಶಿಯಾಗಿ ರಾಜೇಂದ್ರಪ್ರಸಾದ್ ನೇಮಕ

**ಬೆಂಗಳೂರು, ಜೂ.6:** ಹಿರಿಯ ಕೆ.ಎ.ಎಸ್ ಅಧಿಕಾರಿ ಡಾ. ಎಂ.ಎನ್. ರಾಜೇಂದ್ರ ಪ್ರಸಾದ್ ಅವರನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ಆಪ್ತ ಕಾರ್ಯದರ್ಶಿಯನ್ನಾಗಿ ನೇಮಕಗೊಳಿಸಿ ಸರಕಾರ ಅಧಿಕೃತ ಆದೇಶ ಹೊರಡಿಸಿದೆ. ಸಿಬ್ಬಂದಿ



ಮತ್ತು ಆಡಳಿತ ಸುಧಾರಣಾ ಇಲಾಖೆ ಈ ಕುರಿತು ಅಧಿಕೃತ ಅಧಿಸೂಚನೆಯನ್ನು ಹೊರಡಿಸಿದೆ."ಸಾರ್ವಜನಿಕ ಮತ್ತು ಆಡಳಿತಾತ್ಮಕ ಹಿತದೃಷ್ಟಿಯಿಂದ ಕೆ.ಎ.ಎಸ್ (ಸೂಪರ್ ಟೈಂ ಸ್ಕೇಲ್) ಅಧಿಕಾರಿ ಡಾ. ರಾಜೇಂದ್ರ ಪ್ರಸಾದ್ ಎಂ.ಎನ್ ಅವರನ್ನು ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ ಹುದ್ದೆಗೆ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಥವಾ ಮುಖ್ಯಮಂತ್ರಿಗಳ ಪದಾವಧಿಯ ವರೆಗೆ ನೇಮಿಸಲಾಗಿದ ಎಂದು


### ಪೊಲೀಸ್ ನೇಮಕಾತಿ: ಆ.2ರಂದು ಪರೀಕ್ಷೆ

# ಅರ್ಜಿ ಸಲ್ಲಿಸಲು ನಾಳೆ ಕೊನೆಯ ದಿನಾಂಕ

**ಬೆಂಗಳೂರು, ಜೂ.6:** ಪೊಲೀಸ್ ಇಲಾಖೆ ಹೊಸ ನೇಮಕಾತಿ ಅಧಿಸೂಚನೆ ಪ್ರಕಟಿಸಿದ್ದು, ಸಿವಿಲ್ ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಆಹ್ವಾನಿಸಿದೆ. ಸರ್ಕಾರದ ಅಧಿಸೂಚನೆಯ ಪ್ರಕಾರ, ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗಿದ್ದು, ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ ಜೂನ್ 8, 2026 ಎಂದು ನಿಗದಿಪಡಿಸಲಾಗಿದೆ. ಪರೀಕ್ಷೆ ಆಗಸ್ಟ್ 2, 2026 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 12.00ರವರೆಗೆ ನಡೆಯಲಿದೆ.

ಈ ಪರೀಕ್ಷೆಯಲ್ಲಿ ಸಾಮಾನ್ಯ ಜ್ಞಾನ, ಭಾರತ ಸಂವಿಧಾನ, ಸ್ವಾತಂತ್ರ್ಯ ಚಳವಳಿ, ಕರ್ನಾಟಕದ ಇತಿಹಾಸ, ಭೂಗೋಳ, ಅರ್ಥಶಾಸ್ತ್ರ, ಸಂಸ್ಕೃತಿ ಮತ್ತು ಸಾಹಿತ್ಯ ವಿಷಯಗಳ ಪ್ರಶ್ನೆಗಳು ಇರಲಿವೆ. ಒಟ್ಟು 100 ಪ್ರಶ್ನೆಗಳು, 100 ಅಂಕಗಳು ಮತ್ತು 90 ನಿಮಿಷಗಳ ಅವಧಿ ನಿಗದಿಯಾಗಿದೆ. ತಪ್ಪು ಉತ್ತರಕ್ಕೆ 0.25 ಅಂಕಗಳ ನಕಾರಾತ್ಮಕ ಮೌಲ್ಯಮಾಪನ ಅನ್ವಯವಾಗಲಿದೆ.

ಅಭ್ಯರ್ಥಿಗಳು ದೇಹದಾರ್ಢ್ಯತೆ ಮತ್ತು ಸಹನಶಕ್ತಿ ಪರೀಕ್ಷೆಗಳಲ್ಲಿ ಭಾಗವಹಿಸಬೇಕಾಗಿದ್ದು, ಪುರುಷ ಅಭ್ಯರ್ಥಿಗಳಿಗೆ ಕನಿಷ್ಠ ಎತ್ತರ 168



ಸೆಂ.ಮೀ. ಮತ್ತು ಮಹಿಳಾ ಅಭ್ಯರ್ಥಿಗಳಿಗೆ 157 ಸೆಂ.ಮೀ. ಇರಬೇಕು. ಪುರುಷರು 1600 ಮೀಟರ್ ಓಟವನ್ನು 6 ನಿಮಿಷ 30 ಸೆಕೆಂಡಿನೊಳಗೆ ಪೂರ್ಣಗೊಳಿಸ 'ಬೇಕು. ಎತ್ತರ ಜಂಪ್ ಕನಿಷ್ಠ 1.20 ಮೀಟರ್ ಮತ್ತು ಅಡ್ಡ ಜಂಪ್ 3.80 ಮೀಟರ್ ಇರಬೇಕು. ಮಹಿಳಾ ಅಭ್ಯರ್ಥಿಗಳಿಗೆ ಎತ್ತರ ಜಂಪ್ 0.90 ಮೀಟರ್ ಮತ್ತು ಅಡ್ಡ ಜಂಪ್ 2.50 ಮೀಟರ್ ಇರಬೇಕು.ಪರೀಕ್ಷಾ ಶುಲ್ಕದಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 750 ರೂ. ಪಾವತಿಸಬೇಕಾಗಿದ್ದು, ಪಂಗು, ಪರಿಷ್ಕೃತ ಜಾತಿ ಮತ್ತು ಮಹಿಳಾ ಅಭ್ಯರ್ಥಿಗಳಿಗೆ 500 ರೂ. ನಿಗದಿಯಾಗಿದೆ. ನೇಮಕಗೊಂಡ ಅಭ್ಯರ್ಥಿಗಳಿಗೆ ಎರಡು ವರ್ಷಗಳ ತರಬೇತಿ ನೀಡಲಾಗುತ್ತದೆ.

ತರಬೇತಿ ಪೂರ್ಣಗೊಂಡ ನಂತರ ಕಾಯಂ ನೇಮಕಾತಿ ನಡೆಯಲಿದ್ದು, ವೇತನ ಶ್ರೇಣಿ 37,500 ರೂ. ನಿಂದ 76,100 ರೂ. ನಿಗದಿಯಾಗಿದೆ.

ಅಭ್ಯರ್ಥಿಗಳು ತಮ್ಮ ಅರ್ಜಿಯೊಂದಿಗೆ ಇತ್ತೀಚಿನ ಫೋಟೋ ಮತ್ತು ಸಹಿಯನ್ನು ಜೆಪಿಜಿ ರೂಪದಲ್ಲಿ ಅಪ್‌ಲೋಡ್ ಮಾಡಬೇಕಾಗಿದ್ದು, ಫೋಟೋ 50 ಕೆಬಿಯಿಂದ 200ಕೆಬಿ ಹಾಗೂ ಸಹಿ 50ಕೆಬಿಯಿಂದ 70 ಕೆಬಿ ಗಾತ್ರದೊಳಗೆ ಇರಬೇಕು. ಅರ್ಜಿ ಸಲ್ಲಿಸುವಾಗ ಪಾಸ್‌ಪೋರ್ಟ್, ಚಾಲನಾ ಪರವಾನಗಿ, ಪ್ಯಾನ್ ಕಾರ್ಡ್, ಬ್ಯಾಂಕ್ ಪಾಸ್‌ಬುಕ್, ಸೇವಾ ಗುರುತಿನ ಚೀಟಿ, ಜಾತಿ ಪ್ರಮಾಣ ಪತ್ರ, ನಿವೃತ್ತ ಸೈನಿಕರ ಪಿಂಚಣಿ ಪುಸ್ತಕ ಅಥವಾ ಆಧಾರ್ ಕಾರ್ಡ್ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು. ಅಭ್ಯರ್ಥಿಗಳ ಆಯ್ಕೆ ಪ್ರಕ್ರಿಯೆ ಸಂಪೂರ್ಣವಾಗಿ ಪಾರದರ್ಶಕವಾಗಿದ್ದು, ಅರ್ಹ ಅಭ್ಯರ್ಥಿಗಳನ್ನು ಪಟ್ಟಿಮಾಡುವ ಮಾಡುವ ಪ್ರಕ್ರಿಯೆ 1:5 ಅನುಪಾತದಲ್ಲಿ ನಡೆಯಲಿದೆ. ಆಯ್ಕೆಯಾದ ಅಭ್ಯರ್ಥಿಗಳು ದೇಹದಾರ್ಢ್ಯತೆ ಮತ್ತು ಸಹನಶಕ್ತಿ ಪರೀಕ್ಷೆಗಳಲ್ಲಿ ಭಾಗವಹಿಸಬೇಕಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು ಮಾರಾಟ ಕೇಂದ್ರದ ದೂರವಾಣಿ ಸಂಖ್ಯೆ 080–23460460 (ಬೆಳಗ್ಗೆ 10.00 ರಿಂದ ಸಂಜೆ 6.00ರವರೆಗೆ) ಸಂಪರ್ಕಿಸಬಹುದು.

### ಅಪಾಯಕಾರಿ ಮರಗಳನ್ನು ಗುರುತಿಸಲು ಜಿಬಿಎ ಚಿಂತನೆ

# ಮರ ವಿಜ್ಞಾನ–ತಂತ್ರಜ್ಞಾನ ಸಂಸ್ಥೆ ಜತೆ ರಸ್ತೆಬದಿ ಮರಗಳ ವೈಜ್ಞಾನಿಕ ಪರೀಕ್ಷೆಗೆ ಯೋಜನೆ


**ಬೆಂಗಳೂರು, ಜೂ.6:** ಗ್ರೇಟರ್‌ಬೆಂಗಳೂರು ಪ್ರಾಧಿಕಾರ (ಜಿಬಿಎ) ವ್ಯಾಪ್ತಿಯಲ್ಲಿ ಮೇಲ್ನೋಟಕ್ಕೆ ಆರೋಗ್ಯವಿದ್ದಂತೆ ಕಂಡು ಬಂದ ಮರಗಳು ಕೂಡ ಇತ್ತೀಚೆಗೆ ಸುರಿದ ಮಳೆ ಗಾಳಿಗೆ ನೆಲಕ್ಕುರುಳಿವೆ. ಇದನ್ನು ಗಂಭೀರವಾಗಿ ಪರಿಗಣಿಸಿರುವ ಜಿಬಿಎ ಅರಣ್ಯ ಇಲಾಖೆ ಹಿರಿಯ ಅಧಿಕಾರಿಗಳು, ಇದೀಗ ಇನ್‌ಸ್ಟಿಟ್ಯೂಟ್ ಆಫ್ ವುಡ್ ಸೈನ್ಸ್ ಆಂಡ್ ಟೆಕ್ನಾಲಜಿ (ಐಡಬ್ಲ್ಯೂಎಸ್‌ಟಿ) ಸಂಸ್ಥೆ ಜತೆಗೂಡಿ ರಸ್ತೆಬದಿ ಮರಗಳನ್ನು ವೈಜ್ಞಾನಿಕ ಪರೀಕ್ಷೆಗೆ ಒಳಪಡಿಸಿ, ಅಪಾಯಕಾರಿ ಮರಗಳನ್ನು ಗುರುತಿಸಲು ಯೋಚಿಸಿದ್ದಾರೆ.

ಮರಗಳ ಸದ್ಯದ ಬೇರುಗಳ ಸ್ಥಿತಿ, ಒಳಗಿನ ಕೊಳೆ, ರೋಗಗಳಿಂದ ಉಂಟಾಗುವ ದುರ್ಬಲತೆ ಸೇರಿದಂತೆ ಇನ್ನಿತರ ಅಂಶಗಳನ್ನುಸಂಪೂರ್ಣವಾಗಿ ಕಲೆ ಹಾಕಿ ಮರಗಳ ಸುರಕ್ಷತೆಯನ್ನು ಅರಿತುಕೊಳ್ಳುವತ್ತ ಚಿಂತನೆ ನಡೆಸಿದೆ. ಜಿಬಿಎ ವ್ಯಾಪ್ತಿಯ 5 ನಗರ ಪಾಲಿಕೆಗಳಲ್ಲಿ ಪೈಲೆಟ್ ಯೋಜನೆ ಜಾರಿಗೆ ಬರುವ ನಿರೀಕ್ಷೆಯಿದೆ. ಈ ಸಂಬಂಧ ಜಿಬಿಎ ಅರಣ್ಯ ವಿಭಾಗದ ಅಧಿಕಾರಿಗಳು ಜಿಬಿಎಗೆ ಪ್ರಸ್ತಾವನೆ ಸಲ್ಲಿಸುವ ನಿರೀಕ್ಷೆಯಿದ್ದು, ಈ ನಿಟ್ಟಿನಲ್ಲಿ ಕಾರ್ಯಗಳ ಸದ್ದಿಲ್ಲದೆ ನಡೆದಿದೆ ಎಂದು ಜಿಬಿಎ ಮೂಲಗಳು ತಿಳಿಸಿವೆ.

ಮರ ನಿರ್ವಹಣೆಗೆ ಸ್ಟ್ಯಾಂಡರ್ಡ್ ಆಪರೇಟಿಂಗ್ ಪ್ರೊಸೀಜರ್‌ಗಳು (ಎಸ್‌ಒಪಿಎಸ್) ರೂಪಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ. ರಾಜಧಾನಿ ಬೆಂಗಳೂರಿನಲ್ಲಿ ಇತ್ತೀಚೆಗೆ ಗಾಳಿ ಸಹಿತ ಮಳೆಗೆ ಆರೋಗ್ಯವಾಗಿದ್ದಂತೆ ಕಂಡು ಬಂದ ಹಲವಾರು ಮರಗಳು ಧರೆಗುರುಳಿವೆ.

ಈ ಹಿನ್ನೆಲೆಯಲ್ಲಿ ವೈಜ್ಞಾನಿಕ ಪರೀಕ್ಷೆ ಮೂಲಕ ಅಪಾಯಕಾರಿ ಮರಗಳನ್ನು ಪತ್ತೆ ಹಚ್ಚುವ ಹಿನ್ನೆಲೆಯಲ್ಲಿ ಐಡಬ್ಲ್ಯೂಎಸ್‌ಟಿ ಸಂಸ್ಥೆ ಮುಂದಾಗಿದೆ. ಈ ಪ್ರಸ್ತಾವಿತ ಯೋಜನೆಗೆ ಜಿಬಿಎ ಅನುಮೋದನೆ ನೀಡಿದರೆ 5 ಪಾಲಿಕೆಗಳ ವ್ಯಾಪ್ತಿಯಲ್ಲಿ ಪ್ರಾಯೋಗಿಕವಾಗಿ ಜಾರಿಗೆ ತರಲಾಗುವುದು ಎಂದು ಜಿಬಿಎ ಉಪ ಅರಣ್ಯ ಸಂರಕ್ಷಣಾಧಿಕಾರಿ ಸುದರ್ಶನ್ ಜಿ.ಕೆ. ಹೇಳಿದ್ದಾರೆ.

**ಪ್ರತಿ ಪಾಲಿಕೆಗಳಲ್ಲಿ 300 ಮರಗಳ ಪರೀಕ್ಷೆ:** 5 ನಗರ ಪಾಲಿಕೆ ವ್ಯಾಪ್ತಿಯಲ್ಲಿ ಮರಗಳ ಆರೋಗ್ಯ ಪರೀಕ್ಷೆ ಬಗ್ಗೆ ಆಲೋಚನೆ ನಡೆಸಲಾಗಿದೆ. ಪ್ರತಿ ಪಾಲಿಕೆ ವ್ಯಾಪ್ತಿಯಲ್ಲಿ ರಸ್ತೆ ಬದಿ 300 ಮರಗಳ ವೈಜ್ಞಾನಿಕ ಪರಿಶೀಲನೆ ನಡೆಸುವ ಚಿಂತನೆ ನಡೆಸಲಾಗಿದೆ. ಮಧ್ಯಮ ಅಥವಾ ಹೆಚ್ಚಿನ ಅಪಾಯ ಹೊಂದಿರುವ ಮರಗಳ ಗುರುತಿಸುವಿ ಕಾರ್ಯ ವೈಜ್ಞಾನಿಕವಾಗಿ ನಡೆಯವ ನಿರೀಕ್ಷೆಯಿದೆ. ಮರಗಳ ಒಳಭಾಗದ ಆರೋಗ್ಯ ಪರೀಕ್ಷೆಗೆ ರೆಸಿಸ್ಟೋಗ್ರಾಫ್, ಸೋನಿಕ್ ಟೊಮೋಗ್ರಫಿ, ಎಲೆಕ್ಟ್ರಿಕಲ್ ರೆಸಿಸ್ಟನ್ಸ್ ಟೊಮೋಗ್ರಫಿ ಮತ್ತು ಟ್ರೀ–ಮೋಶನ್ ಸೆನ್ಸರ್‌ಗಳು ಮುಂತಾದ ಅತ್ಯಾಧುನಿಕ



ತಂತ್ರಜ್ಞಾನಗಳನ್ನು ಬಳಕೆ ಮಾಡಲಾಗುವುದು. ಮರಕ್ಕೆ ಹಾನಿಯಾಗದ ತಂತ್ರಜ್ಞಾನಗಳ ಬಳಕೆ ಮಾಡಲಾಗುವುದು ಎಂದು ಜಿಬಿಎ ಅರಣ್ಯ ವಿಭಾಗದ ಅಧಿಕಾರಿಗಳು ತಿಳಿಸಿದ್ದಾರೆ.

4.4 ಕೋಟಿ ರೂ. ಪ್ರಸ್ತಾವನೆ ಸಲ್ಲಿಸಿದ ವುಡ್ ಸೈನ್ಸ್ ಸಂಸ್ಥೆ ನಗರದಲ್ಲಿ ಅಪಾಯಕಾರಿ ಮರಗಳ ಗುರುತಿಸುವಿಕೆ ನಿಟ್ಟಿನಲ್ಲಿ ಇನ್‌ಸ್ಟಿಟ್ಯೂಟ್ ಆಫ್ ವುಡ್ ಸೈನ್ಸ್ ಆಯಂಡ್ ಟೆಕ್ನಾಲಜಿ (ಐಡಬ್ಲ್ಯೂಎಸ್‌ಟಿ) ಸಂಸ್ಥೆಯು ಈಗಾಗಲೇ ಜಿಬಿಎ ಅರಣ್ಯ ವಿಭಾಗದ ಹಿರಿಯ ಅಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಿದೆ. 5 ನಗರ ಪಾಲಿಕೆಯಲ್ಲಿ ಮೌಲ್ಯ ಮಾಪನ ಮಾಡಲು ಸುಮಾರು 4.4 ಕೋಟಿ ರೂ. ಅಂದಾಜಿಸಿದೆ ಎಂದು ಹಿರಿಯ ಅಧಿಕಾರಿಗಳು ತಿಳಿಸಿದ್ದಾರೆ.

**ರಾಜಧಾನಿಯ ಶೇ.90ಕ್ಕೂ ಹೆಚ್ಚು ಮರಗಳು**

**ಸುರಕ್ಷಿತವಲ್ಲ:** ರಾಜಧಾನಿಯ ರಸ್ತೆ ಬದಿಯಲ್ಲಿರುವ ಶೇ.90ಕ್ಕೂ ಹೆಚ್ಚು ಮರಗಳಿಗೆ ಸುರಕ್ಷತೆಯಿಲ್ಲ. ವಿವಿಧ ಅಭಿವೃದ್ಧಿ ಕಾರ್ಯಗಳು ಈ ಮರಗಳಿಗೆ ಕಂಟಕವಾಗಿದೆ. ಮರದ ಒಳಭಾಗದಲ್ಲಿ ಉಂಟಾಗುವ ಕೊಳೆ, ಶಿಲೀಂಧ್ರಗಳಿಂದ ಉಂಟಾಗುವ ಹಾನಿ ಅಷ್ಟೇ ಅಲ್ಲ, ವೈಜ್ಞಾನಿಕವಲ್ಲದ ರೀತಿಯ ಕೊಂಬೆ ಕತ್ತರಿಸುವಿಕೆ ಅಪಾಯಕ್ಕೆ ನೂಕಲಿದೆ. ಮರದ ಬುಡವನ್ನು ಕಾಂಕ್ರೀಟ್‌ನಿಂದ ಮುಚ್ಚುವುದು, ಚರಂಡಿ ಮತ್ತು ಪಾದಚಾರಿ ಮಾರ್ಗ ನಿರ್ಮಾಣದ ವೇಳೆ ಬೇರುಗಳಿಗೆ ಹಾನಿಗಳು ಮರಗಳು ಉರುಳಲು ಪ್ರಮುಖ ಕಾರಣಗಳಾಗಿವೆ. ಇದರ ಬಗ್ಗೆ ಕೂಡ ಜಿಬಿಎ ಅರಣ್ಯ ವಿಭಾಗದ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು ಎಂದು ಟ್ರೀ (ಮರ) ಡಾಕ್ಟರ್‌ವಿಜಯ್ ನಿಶಾಂತ್ ಹೇಳುತ್ತಾರೆ.

# ಕೆಐಎ ಪರಿಸರ ಸುಸ್ಥಿರತೆ ಕ್ರಮ ದೇಶಕ್ಕೆ ಮಾದರಿ: ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್

**ಬೆಂಗಳೂರು, ಜೂ.6:** 2026ರ ವಿಶ್ವ ಪರಿಸರ ದಿನಾಚರಣೆಯನ್ನು "ಇನ್‌ಸ್ಪೈರ್ ಬೈ ನೇಚರ್, ಫಾರ್ ಕ್ಲೈಮೇಟ್ – ಫಾರ್ ಅವರ್ ಫ್ಯೂಚರ್" ಎಂಬ ಘೋಷ ವಾಕ್ಯದೊಂದಿಗೆ ಆಚರಿಸಲಾಗುತ್ತಿದ್ದು, ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಪರಿಸರ ಸುಸ್ಥಿರತೆ ಕ್ರಮಗಳ ದೇಶಕ್ಕೆ ಮಾದರಿಯಾಗಿದೆ ಎಂದು ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಶ್ಲಾಘಿಸಿದ್ದಾರೆ.

ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕೈಗೊಳ್ಳಲಾಗಿರುವ ಜಲ ನಿರ್ವಹಣೆ ಮತ್ತು ಪರಿಸರ ಸಂರಕ್ಷಣೆಯ ಯಶೋಗಾಥೆಯು ದೇಶಕ್ಕೇ ಮಾದರಿಯಾಗಿದೆ ಎಂದು ಅವರು ಪ್ರಶಂಶಿಸಿದ್ದಾರೆ.

ಬೆಂಗಳೂರು ವಿಮಾನ ನಿಲ್ದಾಣ ತನ್ನ ದೈನಂದಿನ ಕಾರ್ಯ ಚಟುವಟಿಕೆಗಳಲ್ಲಿ ಜನರು ಭೂಮಿ ಮತ್ತು ಲಾಭ ಎಂಬ ಸಮತೋಲಿತ ವಿಧಾನವನ್ನು ಅಳವಡಿಸಿಕೊಂಡು ಜವಾಬ್ದಾರಿಯುತ ಬೆಳವಣಿಗೆಯನ್ನು ಸಾಧಿಸಿರುವುದು ದೇಶಕ್ಕೆ ಹೆಮ್ಮೆ ತಂದಿದೆ.

**ಪರಿಸರ ಸುಸ್ಥಿರತೆಯ ಪ್ರಮುಖ ಮೈಲಿಗಲ್ಲುಗಳು:**–ಜಲ ಸಂರಕ್ಷಣೆಯಲ್ಲಿ ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣವು 2.36 ರ ಜಲ ಧನಾತ್ಮಕ ಸೂಚ್ಯಂಕವನ್ನು ಸಾಧಿಸಿದೆ. ಅಂದರೆ, ತಾನು ಬಳಸುವ ನೀರಿಗಿಂತ ಎರಡು ಪಟ್ಟು ಹೆಚ್ಚು ನೀರನ್ನು ಮರುಪೂರೈಸುತ್ತಿದೆ. ಸದ್ಯ ವಿಮಾನ ನಿಲ್ದಾಣವು ತನ್ನ ಕುಡಿಯುವ ನೀರಿನ ಅಗತ್ಯತೆಯ ಸುಮಾರು ಮೂರರಲ್ಲಿ ಎರಡು ಭಾಗವನ್ನು ಆಂತರಿಕ ಮಳೆನೀರು ಸಂಗ್ರಹ ವ್ಯವಸ್ಥೆಯ ಮೂಲಕವೇ ಪೂರೈಸಿಕೊಳ್ಳುತ್ತಿದೆ ಎಂದಿದ್ದಾರೆ.

**ಏಷ್ಯಾದಲ್ಲೇ ಮೊದಲು – ನೆಟ್ ಝೀರೋ ಕಾರ್ಬನ್**

ಏಷ್ಯಾದಲ್ಲಿಯೇ ಮೊದಲ ಬಾರಿಗೆ ನೆಟ್ ಝೀರೋ ಹಸಿರುಮನೆ ಅನಿಲ ಹೊರಸೂಸುವಿಕೆಯನ್ನು ಸಾಧಿಸಿದ ಹೆಗ್ಗಳಿಕೆಗೆ ಬೆಂಗಳೂರು ವಿಮಾನ ನಿಲ್ದಾಣ ಪಾತ್ರವಾಗಿದೆ. 2030ರ ಗುರಿಗಿಂತ ಏಳು ವರ್ಷ ಮುಂಚಿತವಾಗಿಯೇ ತನ್ನ ಹೊರಸೂಸುವಿಕೆಯಲ್ಲಿ ಶೇ. 95.6ರಷ್ಟು ಕಡಿತವನ್ನು ದಾಖಲಿಸಿದೆ. ಇದಲ್ಲದೆ, Airports Council International (ACI) ನಿಂದ ಅತ್ಯುನ್ನತ Level



5 Carbon Accreditation ಮಾನ್ಯತೆಯನ್ನು ಪಡೆದಿದೆ. ಭಾರತದಲ್ಲೇ ಮೊದಲ ಬಾರಿಗೆ 'Taskforce on Nature-related Financial Disclosures (TNFD)' ಅನ್ನು ಅಳವಡಿಸಿಕೊಂಡಿರುವ ಈ ವಿಮಾನ ನಿಲ್ದಾಣವು 5.18ರ ಜೀವವೈವಿಧ್ಯ ಸೂಚ್ಯಂಕವನ್ನು ಹೊಂದಿದೆ. ತನ್ನದೇ ಆದ ಸಮಗ್ರ ಘನತ್ಯಾಜ್ಯ ನಿರ್ವಹಣಾ ಕೇಂದ್ರದ ಮೂಲಕ ಲ್ಯಾಂಡ್‌ಫಿಲ್‌ಗೆ ಶೂನ್ಯ ತ್ಯಾಜ್ಯ ಗುರಿಯನ್ನು ತಲುಪಿದೆ. ಇಂತಹ ವೈಜ್ಞಾನಿಕ ಮತ್ತು ಸುಸ್ಥಿರ ಮಾದರಿಗಳನ್ನು ಇತರ ಸಂಸ್ಥೆಗಳೂ ಅಳವಡಿಸಿಕೊಂಡರೆ ದೇಶ ಹಾಗೂ ರಾಜ್ಯದಲ್ಲಿ ನೀರು, ವಿದ್ಯುತ್ ಕೊರತೆಯನ್ನು ನೀಗಿಸಬಹುದು ಮತ್ತು ಜೀವವೈವಿಧ್ಯತೆಯನ್ನು ಕಾಪಾಡಬಹುದು ಎಂದು ಮುಖ್ಯಕಾರ್ಯದರ್ಶಿ ಶಾಲಿನಿ ರಜನೀಶ್ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# ಆನ್‌ಲೈನ್ ಪೋಕರ್ ವೆಬ್‌ಸೈಟ್ ಮಾಹಿತಿ ಬಳಸಿ ಕೋಟ್ಯಂತರ ವಸೂಲಿ: ಇ.ಡಿ. ಆರೋಪ

**ಬೆಂಗಳೂರು, ಜೂ.6:** ಹ್ಯಾಕರ್ ಶ್ರೀಕೃಷ್ಣ ಅಲಿಯಾಸ್ ಶ್ರೀಕಿ ಪ್ರಕರಣದ ತನಿಖೆಯಲ್ಲಿ ಮತ್ತಷ್ಟು ಸ್ಫೋಟಕ ಮಾಹಿತಿಗಳು ಬಹಿರಂಗಗೊಂಡಿದೆ. ನಗರದ ಉದ್ಯಮಿ ಸುನೀಶ್ ಹೆಗ್ಡೆ ಅವರು ಹ್ಯಾಕ್ ಮಾಡಲಾದ ಆನ್‌ಲೈನ್ ಪೋಕರ್ ವೆಬ್‌ಸೈಟ್‌ಗಳ ಮಾಹಿತಿಯನ್ನು ಬಳಸಿಕೊಂಡು ಕೋಟ್ಯಂತರ ರೂಪಾಯಿ ವಸೂಲಿ ನಡೆಸಿದ್ದರು ಎಂದು ಜಾರಿ ನಿರ್ದೇಶನಾಲಯ ಆರೋಪಿಸಿದೆ.

2017ರಿಂದಲೇ ಸುನೀಶ್ ಹೆಗ್ಡೆ ನಗದು, ಬ್ಯಾಂಕ್ ವರ್ಗಾವಣೆ ಮತ್ತು ಕ್ಯಾಸಿನೊ ಚಿಪ್‌ಗಳ ರೂಪದಲ್ಲಿ ಅಕ್ರಮ ಹಣ ಪಡೆದಿದ್ದಾರೆ. ವಿಚಾರಣೆ ವೇಳೆ ಶ್ರೀಕಿ, ಪೋಕರ್‌ಸ್ಟೇಂಟ್ ಸೇರಿದಂತೆ ಹಲವು ಆನ್‌ಲೈನ್ ಪೋಕರ್ ವೆಬ್‌ಸೈಟ್‌ಗಳನ್ನು ಹ್ಯಾಕ್ ಮಾಡಿದ್ದಾಗಿ ಹೇಳಿದ್ದಾನೆ. ಹ್ಯಾಕ್ ಮಾಡಿದ ಡೇಟಾಬೇಸ್‌ಗಳನ್ನು ಸುನೀಶ್ ಹೆಗ್ಡೆ ತನ್ನ ಪೋಕರ್ ವ್ಯವಹಾರಕ್ಕೆ ಬಳಸಿಕೊಂಡು 6 ಕೋಟಿ ರೂಪಾಯಿ ಗಳಿಕೆ ಮಾಡಿದ್ದಾನೆ ಎಂದು ನೀಡಿದ್ದಾನೆಂದು ಇಡಿ ತಿಳಿಸಿದೆ.

ಇನ್ನೊಂದು ಪ್ರಮುಖ ಆರೋಪವೆಂದರೆ, ಜನಪ್ರಿಯ ಪೋಕರ್‌ಬಾಜಿ ವೆಬ್‌ಸೈಟ್‌ನ್ನು ಕೂಡ ಸುನೀಶ್ ಹೆಗ್ಡೆಯ ಸೂಚನೆಯ ಮೇರೆಗೆ ಶ್ರೀಕಿ ಹ್ಯಾಕ್ ಮಾಡಿದ್ದಾನೆ ಎನ್ನಲಾಗಿದೆ. ಸುನೀಶ್ ಹೆಗ್ಡೆ ವೆಬ್‌ಸೈಟ್ ಮಾಲೀಕರನ್ನು ಸಂಪರ್ಕಿಸಿ ಸಮಸ್ಯೆ ಸರಿಪಡಿಸುವುದಾಗಿ ಹೇಳಿ 2 ಕೋಟಿ ರೂಪಾಯಿ ಪಡೆದಿದ್ದಾನೆ. ಇದನ್ನು "ಸುಲಿಗೆಯ ಆಟ" ಎಂದು ಶ್ರೀಕಿ ತನಿಖಾಧಿಕಾರಿಗಳಿಗೆ ಹೇಳಿದ್ದಾನೆ ಎಂದು ವರದಿಯಾಗಿದೆ.

ಪೋಕರ್‌ಬಾಜಿ ಮಾಲೀಕರಿಂದ ನಗದು ಹಣದ ಜೊತೆಗೆ ಸುಮಾರು 20 ಲಕ್ಷ ರೂ. ಮೌಲ್ಯದ ಕ್ಯಾಸಿನೊ ಚಿಪ್‌ಗಳನ್ನು ಹೆಗ್ಡೆ ಪಡೆದಿದ್ದಾನೆ ಎನ್ನಲಾಗಿದೆ. ಈ ಚಿಪ್‌ಗಳನ್ನು ಶ್ರೀಕಿ ಮತ್ತು ಆತನ ಸಹಚರರು ವಿದೇಶಿ ಕ್ಯಾಸಿನೊಗಳಲ್ಲಿ ಬಳಸಿದ್ದರು ಎಂದು ಇಡಿ ಹೇಳಿದೆ. ಅಶೋಕ್‌ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಮತ್ತೊಂದು ಪ್ರಕರಣದಲ್ಲಿ 28 ಲಕ್ಷ ರೂ. ಹಣವನ್ನು ಹೆಗ್ಡೆ ಖಾತೆಗೆ ವರ್ಗಾಯಿಸಿರುವ ಮಾಹಿತಿ ಪತ್ತೆಯಾಗಿದೆ. ಸಿಐಡಿ ನಡೆಸಿದ ವಿಧಿವಿಜ್ಞಾನ ಲೆಕ್ಕಪರಿಶೋಧನೆಯಲ್ಲಿ, ರಾಬಿನ್ ಖಂಡೇಲ್‌ವಾಲ್ ಮೂಲಕ 20 ಲಕ್ಷ ರೂ. ಗೋವಾದ ಕ್ಯಾಸಿನೊ ನಡೆಸುವ ಡೆಲ್ಟಾ ಕಾರ್ಪ್ ಲಿ. ಖಾತೆಗೆ ವರ್ಗಾವಣೆಗೊಂಡಿದ್ದು, ನಂತರ ಅದು ಹೆಗ್ಡೆ ಖಾತೆಗೆ ಜಮೆಯಾಗಿರುವುದು ಪತ್ತೆಯಾಗಿದೆ. ಈ ಹಣವನ್ನು ಜೂಜಾಟಕ್ಕಾಗಿ ಬಳಸಲಾಗಿದೆ ಎಂದು ಆರೋಪಿಸಲಾಗಿದೆ.

2026ರ ಏಪ್ರಿಲ್‌ನಲ್ಲಿ ಸುನೀಶ್ ಹೆಗ್ಡೆ ನಿವಾಸದ ಮೇಲೆ ನಡೆಸಿದ ಶೋಧದ ವೇಳೆ 9.25 ಲಕ್ಷ ರೂ. ನಗದು ಮತ್ತು ಮೊಬೈಲ್ ಫೋನ್ ವಶಪಡಿಸಿಕೊಳ್ಳಲಾಗಿತ್ತು.

ತನಿಖೆಯಲ್ಲಿ ಅವರು Binance ಕ್ರಿಪ್ಟೋ ವ್ಯಾಲೆಟ್ ಬಳಸಿದ್ದು, 1 ಲಕ್ಷಕ್ಕೂ ಹೆಚ್ಚು USDT (ಸ್ಟೇಬಲ್‌ಕಾಯಿನ್) ವಹಿವಾಟು ನಡೆಸಿರುವುದು ಬೆಳಕಿಗೆ ಬಂದಿದೆ.ಈ ನಡುವೆ ತಾನು ಯಾವುದೇ ಕ್ರಿಪ್ಟೋಕರೆನ್ಸಿ ಖಾತೆ ಹೊಂದಿಲ್ಲ ಮತ್ತು ಕ್ರಿಪ್ಟೋ ಆಸ್ತಿಗಳೊಂದಿಗೆ ಯಾವುದೇ ಸಂಬಂಧವಿಲ್ಲ ಎಂದು ಸುನೀಶ್ ಹೆಗ್ಡೆ ಹೇಳಿದ್ದಾನೆ. ಆದರೆ, ವಶಪಡಿಸಿಕೊಂಡ ಸಾಕ್ಷ್ಯಗಳು ಮತ್ತು ಬ್ಯಾಂಕ್ ದಾಖಲೆಗಳು ಈತನ ಹೇಳಿಕೆಗೆ ವಿರುದ್ಧವಾಗಿವೆ ಎಂದು ಇಡಿ ತಿಳಿಸಿದೆ.

ಏತನ್ಮಧ್ಯೆ ವಿದೇಶಗಳಿಂದ ಡಾರ್ಕ್ ವೆಬ್ ಮೂಲಕ ನಿಷೇಧಿತ ಮಾದಕ ವಸ್ತುಗಳನ್ನು ಖರೀದಿಸಿದ ಆರೋಪಕ್ಕೂ ಸುನೀಶ್ ಹೆಗ್ಡೆ ಗುರಿಯಾಗಿದ್ದಾನೆ. ಅಪರಾಧದ ಆದಾಯ ಹಾಗೂ ವರ್ಚುವಲ್ ಡಿಜಿಟಲ್ ಆಸ್ತಿಗಳನ್ನು ಬಳಸಿಕೊಂಡು

### ರಾಜ್ಯದಲ್ಲಿ ಉಗ್ರರ ಕಾರ್ಯಜಾಲ, ಸ್ಲೀಪರ್‌ಸೆಲ್ ಸಕ್ರಿಯ

# ಶಂಕಿತರ ವಿಚಾರಣೆ ವೇಳೆ ಆತಂಕಕಾರಿ ವಿಷಯ ಬಹಿರಂಗ

**ಬೆಂಗಳೂರು, ಜೂ.6:** ರಾಜ್ಯದಲ್ಲಿ ವಿದೇಶಿ ಉಗ್ರರ ನೆಟ್‌ವರ್ಕ್ ಮತ್ತು ಸ್ಲೀಪರ್ ಸೆಲ್‌ಗಳು ಸಕ್ರಿಯವಾಗಿರುವ ಆತಂಕಕಾರಿ ವಿಚಾರ ಬೆಳಕಿಗೆ ಬಂದಿದೆ. ಪಾಕ್ ಉಗ್ರರ ಜೊತೆ ಸಂಪರ್ಕ ಹೊಂದಿದ ಇಬ್ಬರು ಶಂಕಿತ ಉಗ್ರರನ್ನು ತುಮಕೂರು ನಗರ ಠಾಣೆ ಪೊಲೀಸರು ಬಂಧಿಸಿ ವಿಚಾರಣೆ ನಡೆಸಿದಾಗ ಈ ಮಾಹಿತಿ ಹೊರ ಬಿದ್ದಿದೆ.

ತುಮಕೂರಿನ ಶ್ರೀರಾಮನಗರ ನಿವಾಸಿ ಅಲ್ಲಾಬಕ್ಷ್ ಮತ್ತು ದಾವಣಗೆರೆಯ ಬೀಡಿ ಲೇಔಟ್ ನಿವಾಸಿ ಜಮೀರ್‌ಖಾನ್‌ನನ್ನು ಕೇಂದ್ರ ತನಿಖಾ ಏಜೆನ್ಸಿಗಳ ಸಹಾಯದಿಂದ ತುಮಕೂರು ನಗರ ಠಾಣೆ ಪೊಲೀಸರು ಕಾರ್ಯಾಚರಣೆ ನಡೆಸಿ ಬಂಧಿಸಿದ್ದರು.

ಶಂಕಿತರ ಮೊಬೈಲ್‌ಗಳು, ಕಂಪ್ಯೂಟರ್‌ಗಳು, ಇನ್ನಿತರ ಎಲೆಕ್ಟ್ರಾನಿಕ್ಸ್ ಸಾಧನಗಳನ್ನು ವಶಪಡಿಸಿಕೊಂಡಿದ್ದಾರೆ. ಈ ಬಂಧಿತ ಶಂಕಿತ ಇಬ್ಬರು ಉಗ್ರರು ಪೊಲೀಸರ ವಶದಲ್ಲಿದ್ದು, ವಿಚಾರಣೆ ನಡೆಯುತ್ತಿದೆ.

ಆನ್‌ಲೈನ್ ಸಂವಹನ, ದಾಖಲೆಗಳು, ಡಿಜಿಟಲ್ ಸಾಕ್ಷ್ಯಗಳನ್ನು ತನಿಖಾ ತಂಡಗಳು ಪರಿಶೀಲಿಸುತ್ತಿದ್ದು, ತನಿಖೆ ನಂತರ ಮತ್ತಷ್ಟು ಮಾಹಿತಿಗಳು ಹೊರ ಬೀಳುವ ನಿರೀಕ್ಷೆಯಿದೆ.ಇವರ ಹಿಂದೆ ಒಂದು ದೊಡ್ಡ ಸ್ಲೀಪರ್ ಸೆಲ್ ನೆಟ್‌ವರ್ಕ್ ಇದೆ ಎಂದು ಪೊಲೀಸರು ಶಂಕಿಸಿದ್ದಾರೆ.

ಈ ಇಬ್ಬರು ಪಾಕಿಸ್ತಾನದ ಶಂಕಿತ ಉಗ್ರರ ಜೊತೆ ಸಂಪರ್ಕದಲ್ಲಿದ್ದರು. ಇದನ್ನು ಕೇಂದ್ರ ಗುಪ್ತದಳ ಪತ್ತೆಹಚ್ಚಿದೆ.ಕೇಂದ್ರ ಗುಪ್ತದಳ ಈ ಇಬ್ಬರು ಶಂಕಿತರ ಚಲನವಲನಗಳ ಮೇಲೆ ನಿಗಾ ವಹಿಸಿತ್ತು. ಖಚಿತ ಮಾಹಿತಿ ಮೇರೆಗೆ ರಾಜ್ಯ ಗುಪ್ತದಳ ಸಂಪರ್ಕಿಸಿತು. ನಂತರ ತುಮಕೂರು ನಗರ ಪೊಲೀಸರು ಸಂಪರ್ಕಿಸಿ ಮಾಹಿತಿ ಪಡೆದುಕೊಂಡರು.

ತದ ನಂತರದಲ್ಲಿ ಎಲ್ಲರೂ ಒಟ್ಟಾಗಿ ಸೇರಿ ಈ ಇಬ್ಬರು ಶಂಕಿತ ಉಗ್ರರನ್ನು ಬಂಧಿಸಿದ್ದು, ಹೆಚ್ಚಿನ ಮಾಹಿತಿ ಕಲೆ ಹಾಕುತ್ತಿದ್ದಾರೆ.ಈ ಇಬ್ಬರು ಪಾಕಿಸ್ತಾನದ ಶಂಕಿತ ಉಗ್ರ ರಾಣಾ ಜೊತೆ ಸಾಮಾಜಿಕ ಜಾಲ ತಾಣಗಳ ಮೂಲಕ ಸಂಪರ್ಕದಲ್ಲಿದ್ದು, ದೇಶದಲ್ಲಿ ವಿಧ್ವಂಸಕ ಕೃತ್ಯ ನಡೆಸಲು ಸಂಚು ರೂಪಿಸುತ್ತಿದ್ದರು ಎಂಬುವುದು ತಿಳಿದು ಬಂದಿದೆ.

# ವಿದ್ಯಾರ್ಥಿಗಳಲ್ಲಿ ಉತ್ಸಾಹ ಮನೋಭಾವನೆಯಿಂದ ಸಾಧನೆ



**ಅಂಕೋಲಾ, ಜೂ.6–** ವಿದ್ಯಾರ್ಥಿಗಳು ಪಠ್ಯ ಮತ್ತು ಪಠ್ಯೇತರ ಚಟುವಟಿಕೆಗಳಲ್ಲಿ ಉತ್ಸಾಹದಿಂದ ಭಾಗವಹಿಸಬೇಕು. ಸೋಲು ಗೆಲುವುಗಳು ಮುಖ್ಯವಲ್ಲ. ಭಾಗವಹಿಸುವಿಕೆ ಮುಖ್ಯವಾಗಿರುತ್ತದೆ ಎಂದು ಹಿರಿಯ ನ್ಯಾಯವಾದಿ ವಿ. ಎಸ್. ನಾಯಕ ಹೇಳಿದರು.

ಪಟ್ಟಣದ ಗೋಖಲೆ ಸೆಂಟಿನರಿ ಕಾಲೇಜಿನಲ್ಲಿ ಶುಕ್ರವಾರ ಏರ್ಪಡಿಸಲಾಗಿದ್ದ ವಾರ್ಷಿಕ ಸ್ನೇಹ ಸಮ್ಮೇಲನದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ನಾಟಿ ವೈದ್ಯ ಹನುಮಂತ ಬಿ. ಗೌಡ ಮಾತನಾಡಿ, ಉತ್ತರ ಕನ್ನಡ ಜಿಲ್ಲೆಯು ಅಪೂರ್ವ ವನ ಔಷಧಿ ಸಸ್ಯಗಳನ್ನು ಹೊಂದಿದೆ. ಅವುಗಳ ಮಹತ್ವವನ್ನು ಅರಿತುಕೊಳ್ಳಬೇಕು ಹಾಗೂ ಅವುಗಳ ರಕ್ಷಣೆ ಭವಿಷ್ಯದ ದೃಷ್ಟಿಯಿಂದ ಅಗತ್ಯವಿರುತ್ತದೆ ಎಂದರು.

ಭಾವನಾ ನಾಯಕ ನಿರೂಪಿಸಿದರು. ಡಾ. ಅಶ್ವಿನ ಆರ್. ವಂದಿಸಿದರು. ಇದೇ ಸಂದರ್ಭದಲ್ಲಿ ವಿ.ಎಸ್.ನಾಯಕ, ಹನುಮಂತ ಗೌಡ ಮತ್ತು ವಿದ್ಯಾರ್ಥಿ ಬಿ. ನಾಗರಾಜ, ಉರಗ ರಕ್ಷಕ ಗಗನ್ ಮಹೇಶ ನಾಯ್ಕ, ಭಾರತೀಯ ಸೇನಾ ಪಡೆಗೆ ಆಯ್ಕೆಯಾಗಿರುವ ಸೂರಜ ಗೌಡ ಇವರನ್ನು ಸನ್ಮಾನಿಸಿದರು.

## ಕನಕಪುರಕ್ಕೆ ಇಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಭೇಟಿ


# ತವರು ಕ್ಷೇತ್ರದಲ್ಲಿ ಅಭಿಮಾನಿಗಳು, ಕಾಂಗ್ರೆಸ್ ಕಾರ್ಯಕರ್ತರಲ್ಲಿ ಸಂಭ್ರಮ

**ಕನಕಪುರ, ಜೂ.6:** ಮುಖ್ಯಮಂತ್ರಿಯಾಗಿ ಪ್ರಮಾಣ ಸ್ವೀಕರಿಸಿದ ಬಳಿಕ ಮೊದಲ ಬಾರಿಗೆ ತವರು ಕ್ಷೇತ ಕನಕಪುರಕ್ಕೆ ಡಿ.ಕೆ.ಶಿವಕುಮಾರ್ ಅವರು ಭಾನುವಾರ ಭೇಟಿ ನೀಡಲಿದ್ದು, ಅಭಿಮಾನಿಗಳು, ಕಾಂಗ್ರೆಸ್ ಕಾರ್ಯಕರ್ತರಲ್ಲಿ ಸಡಗರ, ಸಂಭ್ರಮ ಮನೆ ಮಾಡಿದೆ.

ಮನೆ ಬಾಗಿಲಿಗೆ ಮುಖ್ಯಮಂತ್ರಿ ಎಂಬ ಶೀರ್ಷಿಕೆಯಡಿ ಅದ್ದೂರಿ ಸ್ವಾಗತ ಕೋರಲು ಸಕಲ ರೀತಿಯಲ್ಲಿ ಸಿದ್ಧತೆ ಮಾಡಿಕೊಳ್ಳಲಾಗಿದೆ. ಬೆಂಗಳೂರಿನಿಂದ ಕನಕಪುರಕ್ಕೆ ರಸ್ತೆ ಮಾರ್ಗವಾಗಿ ಮುಖ್ಯಮಂತ್ರಿಗಳು ಆಗಮಿಸುವುದರಿಂದ ರಸ್ತೆ ಇಕ್ಕೆಲಗಳಲ್ಲಿ ಸ್ವಾಗತ, ಶುಭಾಶಯ ಕೋರುವ ಫ್ಲೆಕ್ಸ್, ಬ್ಯಾನರ್‌ಗಳು ರಾರಾಜಿಸುತ್ತಿವೆ. ಕನಕಪುರದಲ್ಲಿ ಹಬ್ಬದ ರೀತಿಯ ವಾತಾವರಣ ಉಂಟಾಗಿದ್ದು, ಸಂಭ್ರಮ ಮನೆ ಮಾಡಿದೆ. ಪಟ್ಟಣವನ್ನು ತಳಿರು, ತೋರಣಗಳಿಂದ ವಿಶೇಷವಾಗಿ ಅಲಂಕರಿಸಲಾಗಿದೆ. ಹಾರೋಹಳ್ಳಿ ವೃತ್ತ, ತುಂಗಣಿ, ಟಿ.ಬೇಕುಪ್ಪೆ ವೃತ್ತ, ನಾರಾಯಣಪುರ, ಕೋಡಿಹಳ್ಳಿ, ಹುಣಸನಹಳ್ಳಿ, ಹೊಸದುರ್ಗ, ಹುಟ್ಟೂರು ದೊಡ್ಡಾಲಹಳ್ಳಿ, ಸಾತನೂರು, ಕಬ್ಬಾಳು ಮೊದಲಾದ ಗ್ರಾಮಗಳಿಗೆ ಮುಖ್ಯಮಂತ್ರಿ ಭೇಟಿ ನೀಡಲಿದ್ದಾರೆ. ಮುಖ್ಯಮಂತ್ರಿಯನ್ನು ಅಭಿನಂದಿಸಲು ಗ್ರಾಮಗಳಲ್ಲಿ ಸಕಲ ರೀತಿಯಲ್ಲೂ ಸಿದ್ಧತೆ ಮಾಡಿಕೊಳ್ಳಲಾಗಿದೆ. ಜೊತೆಗೆ ಹಾರೋಹಳ್ಳಿ, ಕನಕಪುರ ತಾಲ್ಲೂಕಿನ ಕೃತಜ್ಞತಾ ಸಮರ್ಪಣಾ ಕಾರ್ಯಕ್ರಮವನ್ನು ಹಮಿಕೊಳ್ಳಲಾಗಿದೆ. ಕಾರ್ಯಕ್ರಮ ಮುಗಿದ ಬಳಿಕ ರಾತ್ರಿ ಬೆಂಗಳೂರಿಗೆ ಮುಖ್ಯಮಂತ್ರಿ ಮರಳುವ ಕಾರ್ಯಕ್ರಮವಿದೆ.ಕ್ಷೇತ್ರದ ಮತದಾರರು ಬೆಂಗಳೂರಿನ ವಿಧಾನಸೌಧಕ್ಕೆ ಬಂದು ನನ್ನನ್ನು ನೋಡಿ ಸಮಸ್ಯೆಗಳನ್ನು ಹೇಳಿಕೊಳ್ಳುವುದು ಕಷ್ಟವಾಗಿರುವ ಹಿನ್ನೆಲೆಯಲ್ಲಿ ನಾನೇ ಕ್ಷೇತ್ರದ ಮತದಾರರ ಬಳಿಗೆ ತೆರಳಿ ಅವರ ಅಹವಾಲುಗಳನ್ನು ಆಲಿಸುತ್ತೇನೆ ಎಂದು ಶಿವಕುಮಾರ್ ಹೇಳಿದ್ದಾರೆ.



# ಪ್ರಿಯಾಂಕ್ ಖರ್ಗೆ: ಗೆದ್ದಾಗೆಲ್ಲ ಒಲಿಯುವ ಸಚಿವ ಸ್ಥಾನ



**ಕಲಬುರಗಿ, ಜೂ. 6:** ಜಿಲ್ಲೆಯ ಚಿತ್ತಾಪುರ ವಿಧಾನಸಭಾ ಮೀಸಲು ಮತಕ್ಷೇತ್ರದಿಂದ ಮೂರನೇ ಸಲ ಶಾಸಕರಾಗಿರುವ ಪ್ರಿಯಾಂಕ್ ಖರ್ಗೆ ಅವರು ಮತ್ತೊಮ್ಮೆ ಸಚಿವರಾಗಿ ಆಯ್ಕೆಯಾಗಿದ್ದಾರೆ. ಪ್ರಿಯಾಂಕ್ ಖರ್ಗೆ ಅವರು 2013, 2018 ಹಾಗೂ 2023ರಲ್ಲಿ ಚಿತ್ತಾಪುರದಿಂದ ಮೂರು ಬಾರಿ ವಿಜೇತರಾಗಿ ವಿಧಾನಸಭೆ ಪ್ರವೇಶಿಸಿದ್ದಾರೆ.

ಗೆದ್ದಾಗೆಲ್ಲವೂ ಅವರಿಗೆ ಸಚಿವ ಸ್ಥಾನ ಒಲಿದಿದ್ದು ವಿಶೇಷ. 2023ರ ಚುನಾವಣೆಯಲ್ಲಿ 13,640 ಮತಗಳ ಅಂತರದಿಂದ ಗೆದ್ದಿದ್ದರು.

ತಂದೆ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ತಾಯಿ ರಾಧಾಬಾಯಿ ದಂಪತಿಯ ಮೂವರು ಪುತ್ರರಲ್ಲಿ ಪ್ರಿಯಾಂಕ್ ಅವರೂ ಒಬ್ಬರು.

1978ರ ನವೆಂಬರ್ 22ರಂದು ಜನಿಸಿದ ಪ್ರಿಯಾಂಕ್ ಖರ್ಗೆ, ಡಿಪ್ಲೊಮಾ ಇನ್ ಗ್ರಾಫಿಕ್ಸ್ ಮತ್ತು ಎನಿಮೇಷನ್ ಓದಿದ್ದಾರೆ. ದೇಶ ಹಾಗೂ ವಿದೇಶ ಕಾರ್ಪೊರೇಟ್ ಕಂಪನಿಗಳಲ್ಲಿ ಕೆಲಕಾಲ ಕೆಲಸ ಮಾಡಿದ್ದಾರೆ. ಪ್ರಿಯಾಂಕ್‌ಖರ್ಗೆ ಪತ್ನಿ ಶ್ರುತಿ ಈ ದಂಪತಿಗೆ ಅಮಿತಾವ್ ಹಾಗೂ ಆಕಾಂಕ್ಷ ಎಂಬ ಮಕ್ಕಳಿದ್ದಾರೆ.

**ಒಲಿದು ಬಂದ ಸಚಿವ ಸ್ಥಾನ:** 38ನೇ ವರ್ಷ ವಯಸ್ಸಿನಲ್ಲಿ 2016ರಲ್ಲಿ ಅಂದಿನ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಂಪುಟದಲ್ಲಿ ಐಟಿ, ಬಿಟಿ ಹಾಗೂ ಪ್ರವಾಸೋದ್ಯಮ ಖಾತೆ ಸಚಿವರಾಗಿದ್ದರು. ಬಳಿಕ 2018ರಲ್ಲಿ ಗೆದ್ದಾಗಲೂ ಕಾಂಗ್ರೆಸ್–ಜೆಡಿಎಸ್ ಸಮ್ಮಿಶ್ರ ಸರ್ಕಾರದಲ್ಲೂ ಸಚಿವರಾದರು. ಅಂದಿನ ಸಿ.ಎಂ. ಎಚ್.ಡಿ.ಕುಮಾರಸ್ವಾಮಿ ನೇತೃತ್ವದ ಸಂಪುಟದಲ್ಲಿ ಸಮಾಜ ಕಲ್ಯಾಣ ಸಚಿವರಾಗಿ ಸೇವೆ ಕೆಲಸ ಮಾಡಿದ್ದರು. ಆಗಲೇ ಕಲಬುರಗಿಯಲ್ಲಿ 'ಪ್ರಬುದ್ಧ ಅಕಾಡೆಮಿ' ಸ್ಥಾಪನೆಗೆ ಯೋಜನೆ ರೂಪಿಸಿದ್ದರು.

2023ರ ಮೇ 27ರಂದು ರಾಜ್ಯ ಮತ್ತೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂತು. ಸಿದ್ದರಾಮಯ್ಯ ಮತ್ತೆ ಸಿಎಂ ಆದರು. ಆಗಲೂ ಪ್ರಿಯಾಂಕ್ ಖರ್ಗೆ ಅವರು ಸಚಿವರಾದರು. ಸಿದ್ದರಾಮಯ್ಯ ಸಂಪುಟದಲ್ಲಿ ಪ್ರಿಯಾಂಕ್ ಖರ್ಗೆ ಅವರು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಖಾತೆ ಸಚಿವರಾದರು. 2023ರ ಜೂನ್ 1ರಿಂದ ಅವರು ಐಟಿಬಿಟಿ ಖಾತೆಯನ್ನು ಹೆಚ್ಚುವರಿ ಹೊಣೆಗಾರಿಕೆಯನ್ನೂ ನಿಭಾಯಿಸಿದ್ದಾರೆ.

ರಾಜಕೀಯ ಪ್ರವೇಶ: 1998ರಲ್ಲಿ ಎನ್‌ಎಸ್‌ಯುಐನ ಸದಸ್ಯರಾಗಿ ರಾಜಕೀಯ ಪ್ರವೇಶಿಸಿದ ಪ್ರಿಯಾಂಕ್ ಖರ್ಗೆ, 2001–2005ರ ತನಕ ಎನ್‌ಎಸ್‌ಯುಐ ಕಾಲೇಜು ಪ್ರಧಾನ ಕಾರ್ಯದರ್ಶಿಯಾಗಿದ್ದರು.

2005–2007ರ ತನಕ ಎನ್‌ಎಸ್‌ಯುಐ ರಾಜ್ಯ ಪ್ರಧಾನ ಕಾರ್ಯದರ್ಶಿಯಾಗಿ, 2007–2011ರ ವರೆಗೂ ರಾಜ್ಯ ಯುವಕಾಂಗ್ರೆಸ್ ಕಾರ್ಯದರ್ಶಿಯಾಗಿ, 2011–2014ರ ತನಕ ರಾಜ್ಯ ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ, ರಾಜ್ಯ ಯುವಕಾಂಗ್ರೆಸ್ ಉಪಾಧ್ಯಕ್ಷರಾಗಿ ನೇಮಕಗೊಂಡಿದ್ದರು.

ಮೊದಲ ಸೋಲು: 2009ರ ಉಪಚುನಾವಣೆಯಲ್ಲಿ ಚಿತ್ತಾಪುರ ಮೀಸಲು ಮತಕ್ಷೇತ್ರದಲ್ಲಿ ಸ್ಪರ್ಧಿಸಿದ್ದ ಪ್ರಿಯಾಂಕ್ ಖರ್ಗೆ ಸೋಲು ಕಂಡಿದ್ದರು.

ಅದಾದ ಬಳಿಕ 2013ರಿಂದ ಈತನಕ ಗೆಲುವಿನ ಕುದುರೆ ಏರಿ ಮುನ್ನಡೆಯುತ್ತಿದ್ದಾರೆ.

## ಪೋಕ್ಸೋ ಪ್ರಕರಣ: ವಚನಾನಂದ ಜಾಮೀನು ರದ್ದು ಕೋರಿದ್ದ ಅರ್ಜಿ ವಿಚಾರಣೆ ಜೂ.11ಕ್ಕೆ ಮುಂದೂಡಿಕೆ



**ದಾವಣಗೆರೆ, ಜೂ.6:** ಹರಿಹರದ ವೀರಶೈವ ಲಿಂಗಾಯತ ಪಂಚಮ ಸಾಲಿ ಗುರುಪೀಠದ ವಚನಾನಂದ ಸ್ವಾಮೀಜಿ ಯವರಿಗೆ ಪೋಕ್ಸೋ ಪ್ರಕರಣದಲ್ಲಿ ನೀಡಿರುವ ಜಾಮೀನು ರದ್ದುಗೊಳಿಸು ವಂತೆ ಕೋರಿ ಪೊಲೀಸರು ಸಲ್ಲಿಸಿದ ಅರ್ಜಿ ವಿಚಾರಣೆಯನ್ನು ಜಿಲ್ಲಾ ವಿಶೇಷ ಪೋಕ್ಸೋ ನ್ಯಾಯಾಲಯ ಜೂ. 11ಕ್ಕೆ ಮುಂದೂಡಿದೆ.

ಪೊಲೀಸರ ಅರ್ಜಿಗೆ ತಕರಾರು ಸಲ್ಲಿಸಿದ್ದ ಸ್ವಾಮೀಜಿ ಪರ ವಕೀಲ ಎಸ್.ವಿ. ಪಾಟೀಲ, ವಿಚಾರಣೆಗೆ ಹೆಚ್ಚಿನ ಕಾಲಾವಕಾಶ ನೀಡುವಂತೆ ಮನವಿ ಮಾಡಿದ್ದರು. ಈ ಕೋರಿಕೆ ಕುರಿತು ಶನಿವಾರ ವಿಚಾರಣೆ ನಡೆಯಬೇಕಿತ್ತು. ಸರ್ಕಾರಿ ಅಭಿಯೋಜಕರು ಇಲ್ಲದ ಕಾರಣ ನ್ಯಾಯಾಧೀಶರು ವಿಚಾರಣೆಯನ್ನು ಜೂ. 11ಕ್ಕೆ ಮುಂದೂಡಿದ್ದಾರೆ.

ಈ ಪ್ರಕರಣ ಕುರಿತು ಸ್ವಾಮೀಜಿ ಪರ ವಕೀಲ ಎಸ್.ವಿ. ಪಾಟೀಲ್ ಮಾತನಾಡಿ, ವಚನಾನಂದ ಸ್ವಾಮೀಜಿಯವರಿಗೆ ಜಿಲ್ಲೆಯ ವಿಶೇಷ ಪೋಕ್ಸೋ ನ್ಯಾಯಾಲಯ ನಿರೀಕ್ಷಣಾ ಜಾಮೀನು ನೀಡಿತ್ತು. ನಿರೀಕ್ಷಣಾ ಜಾಮೀನು ರದ್ದು ಕೋರಿ ತನಿಖಾಧಿಕಾರಿ ಹಾಗೂ ಸರ್ಕಾರಿ ಅಭಿಯೋಜಕರು ಅರ್ಜಿ ಸಲ್ಲಿಸಿದ್ದರು.

ಆ ಅರ್ಜಿಗೆ ಸ್ವಾಮೀಜಿ ಪರ ತಾವು ನ್ಯಾಯಾಲಯಕ್ಕೆ ಆಕ್ಷೇಪಣಾ ಅರ್ಜಿ ಸಲ್ಲಿಸಿದ್ದೇವೆ. ಸರ್ಕಾರಿ ಅಭಿಯೋಜಕರು ರಜೆಯಲ್ಲಿರುವ ಕಾರಣ ಅರ್ಜಿ ವಿಚಾರಣೆಯನ್ನು ನ್ಯಾಯಾಲಯ ಮುಂದೂಡಿದೆ ಎಂದರು.

ಸ್ವಾಮೀಜಿ ಮಠದ ವಸತಿ ಶಾಲೆಯ ಬಾಲಕರಿಂದ ಸ್ವಾಮೀಜಿ ಬಲವಂತವಾಗಿ ಮಸಾಜ್ ಮಾಡಿಸಿ ಕೊಳ್ಳುತ್ತಿದ್ದರು ಎಂದು ವಿದ್ಯಾರ್ಥಿ ಯೋರ್ವ ನೀಡಿದ ದೂರು ಆಧರಿಸಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಇದಕ್ಕೂ ಮುನ್ನವೇ ವಚನಾನಂದ ಸ್ವಾಮೀಜಿ ನಿರೀಕ್ಷಣಾ ಜಾಮೀನು ಪಡೆದಿದ್ದರು ಎಂಬುದು ಇಲ್ಲಿ ಉಲ್ಲೇಖನೀಯ.

## ಕೋಟ್ಯಂತರ ರೂ. ಮೌಲ್ಯದ ಆಸ್ತಿ ಸರ್ಕಾರದ ಸುಪರ್ದಿಗೆ

# ಮೆಸೋನಿಕ್ ಹಾಲ್ ಜಮೀನು ಜಿಲ್ಲಾಡಳಿತ ವಶಕ್ಕೆ



**ಬಳ್ಳಾರಿ,ಜೂ.06.**ನಗರದ ಪೋಲಾ ಹೋಟೆಲ್ ಎದುರಿನ ಮೆಸೋನಿಕ್ ಹಾಲ್‌ಗೆ ಸೇರಿದ ಕೋಟ್ಯಂತರ ರೂಪಾಯಿ ಮೌಲ್ಯದ ಜಮೀನನ್ನು ಜಿಲ್ಲಾಡಳಿತ ವಶಕ್ಕೆ ಪಡೆದುಕೊಂಡಿದೆ.

ಈ ಜಾಗದ ಕುರಿತು ಹಲವು ವರ್ಷಗಳಿಂದ ಆಡಳಿತಾತ್ಮಕ ಮತ್ತು ಕಾನೂನು ಪ್ರಕ್ರಿಯೆಗಳು ನಡೆಯುತ್ತಿದ್ದವು. ಸಂಬಂಧಪಟ್ಟ ದಾಖಲೆಗಳು ಹಾಗೂ ಆದೇಶಗಳ ಆಧಾರದ ಮೇಲೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಜಾಗವನ್ನು ಸರ್ಕಾರದ ಸುಪರ್ದಿಗೆ ತೆಗೆದುಕೊಂಡರು.

ಜಿಲ್ಲಾಡಳಿತದ ಅಧಿಕಾರಿಗಳು, ಕಂದಾಯ ಇಲಾಖೆ ಸಿಬ್ಬಂದಿ ಹಾಗೂ ಪೊಲೀಸ್ ಭದ್ರತೆಯೊಂದಿಗೆ ಕಾರ್ಯಾಚರಣೆ ನಡೆಸಲಾಯಿತು. ಜಾಗವನ್ನು ವಶಕ್ಕೆ ಪಡೆದ ಬಳಿಕ ಸರ್ಕಾರದ ಸ್ವತ್ತಾಗಿದೆ ಎಂಬ ಫಲಕವನ್ನು ಅಳವಡಿಸ'ಲಾಗಿದೆ.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್. ಝುಬೇರ್ ಅವರು ಮಾತನಾಡಿ, ಬಳ್ಳಾರಿಯ ಟಿ.ಎಸ್ ಸಂಖ್ಯೆ 102 ರಲ್ಲಿರುವ ಒಟ್ಟು 4 ಎಕರೆ 44 ಸೆಂಟ್ಸ್ ವಿಸ್ತೀರ್ಣದ ಜಾಗವನ್ನು ಜಿಲ್ಲಾಧಿಕಾರಿಗಳ ಆದೇಶದನ್ವಯ ಇಂದು ಕಂದಾಯ ಇಲಾಖೆ ಅಧಿಕಾರಿಗಳು ಸರ್ಕಾರದ ಸುಪರ್ದಿಗೆ ಪಡೆದಿದ್ದಾರೆ.

ಈ ಜಮೀನು 1884 ರಿಂದಲೂ ಮೆಸೋನಿಕ್ ಹಾಲ್' ಹೆಸರಿನಲ್ಲಿ ಖಾಸಗಿಯವರ ಬಳಕೆಯಲ್ಲಿ ಇತ್ತು. ಆದರೆ, ಈ ಆಸ್ತಿಗೆ ಸಂಬಂಧಿಸಿದಂತೆ ನಿಯಮಾನುಸಾರ ಯಾವುದೇ ರೀತಿಯ ಸದುಪಯೋಗ ಅಥವಾ ಅಗತ್ಯ ನವೀಕರಣಗಳು ಆಗಿರಲಿಲ್ಲ. ಈ ಹಿನ್ನೆಲೆಯಲ್ಲಿ ಜಾಗವನ್ನು ಪರಿಶೀಲನೆ ನಡೆಸಿದ ಜಿಲ್ಲಾಧಿಕಾರಿಗಳು, ಇದನ್ನು ಸರ್ಕಾರದ ವಶಕ್ಕೆ ಪಡೆಯುವಂತೆ ಕಂದಾಯ ಇಲಾಖೆಗೆ ಮಹತ್ವದ ಆದೇಶ ಹೊರಡಿಸಿದ್ದರು.

ಜಿಲ್ಲಾಧಿಕಾರಿಗಳ ಖಡಕ್ ಆದೇಶದ ಬೆನ್ನಲ್ಲೇ ಅಧಿಕಾರಿಗಳ ತಂಡ, ಶನಿವಾರ ಸ್ಥಳಕ್ಕೆ ಭೇಟಿ ನೀಡಿ ಕಾನೂನಾತ್ಮಕವಾಗಿ ಜಮೀನನ್ನು ಸರ್ಕಾರದ ವಶಕ್ಕೆ ಪಡೆದುಕೊಂಡಿದೆ ಎಂದು ಮಾಹಿತಿ ನೀಡಿದರು.

# ಕಸ ವಿಂಗಡಣೆ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಿದ ಅಧಿಕಾರಿ



**ಬಳ್ಳಾರಿ ಜೂ06.**ಬಳ್ಳಾರಿ ವಲಯ ಕಚೇರಿಯ –2ರ ವಾರ್ಡ್ ನಂಬರ್ 4,5,7,8 ರ್ ಪೌರಕಾರ್ಮಿಕರು ಸಮುದಾಯ ಸಂಘಟಕರು, ಆರೋಗ್ಯ ನಿರೀಕ್ಷಕರು, ಜೊತೆಗೂಡಿ 2026 ಘನತ್ಯಾಜ ನಿಯಮಗಳ ಬಗ್ಗೆ , (4 ವಿಧದ )ಕಸ ವಿಂಗಡಣೆ ಬಗ್ಗೆ ವಾರ್ಡ್ ಸಂಖ್ಯೆ 5 ರ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಯಿತು ಎಂದು ಮಹಾನಗರ ಪಾಲಿಕೆಯ ಅಧಿಕಾರಿ ಸುಮಾ ಅವರು

## ಅಹಿಂದಾ ಕೇವಲ ರಾಜಕೀಯ ಘೋಷಣೆಯಾಗಬಾರದು,

# ಸಮಾಜ ಪರಿವರ್ತನೆಯ ಮಹಾ ಚಳವಳಿಯಾಗಬೇಕು-ಹೊನ್ನೂರಸ್ವಾಮಿ ಕೆ.ಟಿ



**ಬಳ್ಳಾರಿ, ಜೂ.06:** ರಾಜಕೀಯದಲ್ಲಿ ಅಧಿಕಾರ ಗಳಿಸುವುದಕ್ಕಿಂತ ಸಮಾಜದಲ್ಲಿ ಶಾಶ್ವತ ಸ್ಥಾನ ಗಳಿಸುವುದು ದೊಡ್ಡ ಸಾಧನೆ. ಚುನಾವಣೆಗಳು ಐದು ವರ್ಷಕ್ಕೊಮ್ಮೆ ಬರುತ್ತವೆ, ಅಧಿಕಾರ ಬರುತ್ತದೆ–ಹೋಗುತ್ತದೆ; ಆದರೆ ಸಮಾಜದಲ್ಲಿ ನಿರ್ಮಾಣವಾಗುವ ಸಂಘಟನೆ, ಆರ್ಥಿಕ ಶಕ್ತಿ, ಶಿಕ್ಷಣದ ಪ್ರಭಾವ ಮತ್ತು ಸಾಂಸ್ಕೃತಿಕ ಅಸ್ತಿತ್ವ ಶತಮಾನಗಳವರೆಗೆ ಉಳಿಯುತ್ತದೆ. ಈ ಸತ್ಯವನ್ನು ಅಹಿಂದ ಪರಿಕಲ್ಪನೆ ಅರಿತುಕೊಳ್ಳಬೇಕಾದ ಕಾಲ ಈಗ ಬಂದಿದೆ ಎಂದು ಸಿಂಧೂರ ಭಾರತ ಪತ್ರಿಕೆಯ ಸಂಪಾದಕ ಹಾಗೂ ವರದಿಗಾರ ಹೊನ್ನೂರಸ್ವಾಮಿ ಕೆ.ಟಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅಹಿಂದ ಎಂದರೆ ಕೇವಲ ಒಂದು ರಾಜಕೀಯ ಪದವಲ್ಲ. ಅದು ಹಿಂದುಳಿದ ವರ್ಗಗಳು, ದಲಿತರು ಮತ್ತು ಅಲ್ಪಸಂಖ್ಯಾತರ ಕನಸು, ಆಶಯ ಮತ್ತು ಸಾಮಾಜಿಕ ನ್ಯಾಯದ ಸಂಕೇತ. ಆದರೆ ದುರದೃಷ್ಟವಶಾತ್ ಅಹಿಂದ ಎಂಬ ಪದ ಚುನಾವಣೆ ಬಂದಾಗ ಮಾತ್ರ ಹೆಚ್ಚು ಕೇಳಿಬರುತ್ತದೆ. ಚುನಾವಣೆ ಮುಗಿದ ನಂತರ ಅದು ಮತ್ತೆ ರಾಜಕೀಯ ಭಾಷಣಗಳ ಕಡತಗಳಲ್ಲಿ ಸಿಲುಕಿಕೊಳ್ಳುತ್ತದೆ.

ಒಂದು ಮರ ನೆರಳು ನೀಡಬೇಕಾದರೆ ಮೊದಲು ಅದರ ಬೇರುಗಳು ಆಳವಾಗಿ ಬೆಳೆಯಬೇಕು. ಅದೇ ರೀತಿ ಒಂದು ಸಮಾಜ ಬಲಿಷ್ಠವಾಗಬೇಕಾದರೆ ಅದರ ಆರ್ಥಿಕತೆ, ಶಿಕ್ಷಣ, ವ್ಯಾಪಾರ, ಉದ್ಯಮ, ಮಾಧ್ಯಮ, ಸಾಹಿತ್ಯ, ಸಂಸ್ಕೃತಿ ಮತ್ತು ಸೇವಾ ಚಟುವಟಿಕೆಗಳು ಬಲವಾಗಬೇಕು. ಕೇವಲ ರಾಜಕೀಯ ಅಧಿಕಾರದಿಂದ ಸಮಾಜದ ಸಂಪೂರ್ಣ ಅಭಿವೃದ್ಧಿ ಸಾಧ್ಯವಿಲ್ಲ. ಸಮಾಜದಲ್ಲಿ ಗೌರವ ಪಡೆಯಲು ಯಾರನ್ನೂ ವಿರೋಧಿಸುವ ಅಗತ್ಯವಿಲ್ಲ. ಸ್ವತಃ ಬೆಳೆಯುವುದು, ಸಾಧನೆ ಮಾಡುವುದು, ಸಮಾಜಕ್ಕೆ ಕೊಡುಗೆ ನೀಡುವುದು ಮತ್ತು ಸೇವೆಯ ಮೂಲಕ ಜನರ ವಿಶ್ವಾಸ ಗಳಿಸುವುದು ಹೆಚ್ಚು ಶಾಶ್ವತ ಮಾರ್ಗ. ದ್ವೇಷದಿಂದ ಸಂಘಟನೆಗಳು ಬೆಳೆಯುವುದಿಲ್ಲ; ಸೇವೆ, ಶಿಸ್ತು, ಸಂಘಟನೆ ಮತ್ತು ತ್ಯಾಗದಿಂದ ಮಾತ್ರ ಬೆಳೆಯುತ್ತವೆ.

ಅಹಿಂದ ಪರಿಕಲ್ಪನೆ ಕೇವಲ ಮತಗಳ ಲೆಕ್ಕಾಚಾರದಲ್ಲಿ ಸಿಲುಕಿಕೊಳ್ಳಬಾರದು. ಅದು ಜ್ಞಾನ, ಶಿಕ್ಷಣ, ಉದ್ಯಮ, ಸಂಸ್ಕೃತಿ, ಕಲೆ, ಸಾಹಿತ್ಯ, ವಿಜ್ಞಾನ ಮತ್ತು ಸಾಮಾಜಿಕ ಸೇವೆಯ ಕ್ಷೇತ್ರಗಳಲ್ಲೂ ತನ್ನದೇ ಆದ ಗುರುತು ಮೂಡಿಸಬೇಕು. ಅಹಿಂದದ ಯುವಕರು ವೈದ್ಯರಾಗಲಿ, ವಿಜ್ಞಾನಿಗಳಾಗಲಿ, ಉದ್ಯಮಿಗಳಾಗಲಿ, ಆಡಳಿತಗಾರರಾಗಲಿ, ಸಾಹಿತಿಗಳಾಗಲಿ, ಕ್ರೀಡಾಪಟುಗಳಾಗಲಿ ? ಪ್ರತಿಯೊಂದು ಕ್ಷೇತ್ರದಲ್ಲೂ ಮುಂಚೂಣಿಯಲ್ಲಿರಬೇಕು.

ಅಹಿಂದದ ಭವಿಷ್ಯ ಕೇವಲ ರಾಜಕೀಯ ಸಭೆಗಳಲ್ಲಿ ಇಲ್ಲ; ಅದು ಶಾಲೆಗಳ ತರಗತಿಗಳಲ್ಲಿ ಇದೆ. ಅದು ಯುವಕರ ಕನಸುಗಳಲ್ಲಿ ಇದೆ. ಅದು ರೈತರ ಹೊಲಗಳಲ್ಲಿ ಇದೆ. ಅದು ಕಾರ್ಮಿಕರ ಬೆವರಿನಲ್ಲಿ ಇದೆ. ಅದು ಮಹಿಳೆಯರ ಆತ್ಮವಿಶ್ವಾಸದಲ್ಲಿ ಇದೆ. ಅದು ಉದ್ಯಮಿಗಳ ಸಾಹಸದಲ್ಲಿ ಇದೆ. ಅದು ವಿದ್ಯಾರ್ಥಿಗಳ ಪುಸ್ತಕಗಳಲ್ಲಿ ಇದೆ. ಸಮಾಜದ ಪ್ರಗತಿ ಎಂದರೆ ಕೇವಲ ಅಧಿಕಾರದ ಕುರ್ಚಿ ಅಲ್ಲ; ಮುಂದಿನ ಪೀಳಿಗೆಗೆ ಅವಕಾಶಗಳ ಸಾಮ್ರಾಜ್ಯ ನಿರ್ಮಿಸುವುದು. ಅಹಿಂದ ಸಮುದಾಯಗಳು ಈ ದಿಕ್ಕಿನಲ್ಲಿ ಸಾಗಿದರೆ ಅದು ಕೇವಲ ಒಂದು ರಾಜಕೀಯ ಪರಿಕಲ್ಪನೆಯಾಗಿಯೇ ಉಳಿಯದೆ, ಕರ್ನಾಟಕದ ಸಾಮಾಜಿಕ ಇತಿಹಾಸದಲ್ಲಿ ಹೊಸ ಅಧ್ಯಾಯ ಬರೆಯುವ ಮಹಾ ಚಳವಳಿಯಾಗಿ ರೂಪುಗೊಳ್ಳಲಿದೆ.

ಈ ನಿಟ್ಟಿನಲ್ಲಿ ಅಹಿಂದದ ಎಲ್ಲ ಸಮುದಾಯಗಳ ಮುಖಂಡರು, ಯುವಕರು, ಮಹಿಳೆಯರು, ವಿದ್ಯಾರ್ಥಿಗಳು, ಉದ್ಯಮಿಗಳು, ರೈತರು ಮತ್ತು ಬುದ್ಧಿಜೀವಿಗಳು ಒಗ್ಗಟ್ಟಿನಿಂದ ಕಾರ್ಯನಿರ್ವಹಿಸಿ ಸ್ವಾಭಿಮಾನ, ಸ್ವಾವಲಂಬನೆ ಮತ್ತು ಸಾಮಾಜಿಕ ನ್ಯಾಯದ ಹೊಸ ಯುಗವನ್ನು ನಿರ್ಮಿಸಬೇಕಾಗಿದೆ ಎಂದು ಹೊನ್ನೂರ ಸ್ವಾಮಿ ಕೆ.ಟಿ ಕರೆ ನೀಡಿದ್ದಾರೆ.

## ಸಜ್ಜನರಿಗೆ ಬರುವ ಆಪತ್ತು ದುರ್ಜನರಿಗೆ ಬರುವ ಸಂಪತ್ತು ಶಾಶ್ವತವಲ್ಲ: ರಂಭಾಪುರಿ ಜಗದ್ಗುರುಗಳ ಅಭಿಮತ



**ಕುಂದಗೋಳ–ಜೂನ್–6.**

ಮನುಷ್ಯನಿಗೆ ಭಗವಂತ ಕೊಟ್ಟ ಕೊಡುಗೆ ಅಪಾರ. ಮನುಷ್ಯನ ನಡೆ ನುಡಿಗಳು ಯಾವಾಗಲೂ ಸತ್ಯದ ಪರವಾಗಿರಬೇಕು. ಸಜ್ಜನರಿಗೆ ಬರುವ ಆಪತ್ತು ಮತ್ತು ದುರ್ಜನರಿಗೆ ಬರುವ ಸಂಪತ್ತು ಬಹಳ ದಿನ ಉಳಿಯುವುದಿಲ್ಲವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಸತ್ಕಾರ್ಯಗಳಿಂದ ಸಮಾಜಕ್ಕೆ ಬಹುದೊಡ್ಡ ಶಕ್ತಿ ಪ್ರಾಪ್ತವಾಗುತ್ತದೆ. ವೀರಶೈವ ಧರ್ಮದಲ್ಲಿ ಉದಾತ್ತ ಆದರ್ಶ ಮೌಲ್ಯಗಳನ್ನು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ್ದಾರೆ. ಕೆಲಸ ಮಾಡಲು ಮನಸ್ಸಿದ್ದರೆ ಮಾರ್ಗಗಳು ಕಾಣುತ್ತವೆ. ಮನಸ್ಸಿಲ್ಲದಿದ್ದರೆ ನೆಪಗಳು ಮುಂದೆ ಬರುತ್ತವೆ. ದೀಪ ತನಗಾಗಿ ಉರಿಯುವುದಿಲ್ಲ. ಇತರರ ಯಶಸ್ಸನ್ನು ಕಂಡು ಉರಿಯುವುದಿಲ್ಲ. ಬೆಳಕು ನೀಡುವುದೊಂದೇ ದೀಪದ ಕೆಲಸ. ಸುಳ್ಳಿನ ಜೊತೆ ದುಷ್ಟಶಕ್ತಿ ಇದ್ದರೆ ಸತ್ಯದ ಜೊತೆಗೆ ದೈವಶಕ್ತಿ ಸದಾ ಇರುತ್ತದೆ. ಹುಡುಕುತ್ತ ಹೊರಟ ಧರ್ಮರಾಯನಿಗೆ ಕೆಟ್ಟವರು ಕಾಣಲಿಲ್ಲ. ಎಷ್ಟೇ ಹುಡುಕಿದರೂ ದುರ್ಯೋಧನನಿಗೆ ಒಳ್ಳೆಯವರು ಕಾಣಲಿಲ್ಲ. ನೋಡುವ ದೃಷ್ಟಿ ಬದಲಾದರೆ ಎಲ್ಲವೂ ಸರಿಯಾಗಿ ಕಾಣುತ್ತದೆ. ಬೆವರು ಸುರಿಸಿ ದುಡಿಯದ ಹೊರತು ಯಶಸ್ಸು ಸಿಗುವುದಿಲ್ಲ. ತುರ್ಲಘಟ್ಟ ಗ್ರಾಮದಲ್ಲಿ ಶ್ರೀ ಹಾದಿಬಸವೇಶ್ವರ ಸುಂದರ ದೇವಸ್ಥಾನ ನಿರ್ಮಿಸಿ ಇಂದು ಉದ್ಘಾಟನೆ–ಕಳಸಾರೋಹಣ ಸಮಾರಂಭ ಜರುಗುತ್ತಿರುವುದು ತಮಗೆ ಅಪಾರ ಸಂತೋಷ ತಂದಿದೆ ಎಂದರು.

ಸಮಾರಂಭ ಉದ್ಘಾಟಿಸಿದ ಮಾಜಿ ಶಾಸಕ ಎಂ.ಎಸ್.ಅಕ್ಕಿ ಅಶಾಂತಿಯಿಂದ ಬಳಲುತ್ತಿರುವ ಮನುಷ್ಯನಿಗೆ ಧರ್ಮದ ಅರಿವು ಆದರ್ಶಗಳ ಪ್ರಜ್ಞೆ ಅವಶ್ಯಕ. ದೇವರು ಧರ್ಮ ಮತ್ತು ಗುರುವಿನಲ್ಲಿ ನಮ್ಮ ನಂಬಿಗೆ ವಿಶ್ವಾಸಗಳು ಗಟ್ಟಿಯಾಗಿರ ಬೇಕೆಂದರು.

ನೇತೃತ್ವ ವಹಿಸಿದ ಸುಳ್ಳ ಪಂಚಗೃಹ ಹಿರೇಮಠದ ಶಿವಸಿದ್ಧರಮೇಶ್ವರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ನಾಲಿಗೆ ರುಚಿ ಬಿಟ್ಟರೆ ಆರೋಗ್ಯಕ್ಕೆ ಒಳ್ಳೆಯದು. ವಾದ ವಿವಾದಗಳನ್ನು ಬಿಟ್ಟರೆ ಸಂಬಂಧಗಳು ಹೆಚ್ಚು ಬೆಳೆಯುತ್ತವೆ. ವೀರಶೈವ ಧರ್ಮ ಸಕಲರಿಗೂ ಒಳಿತನ್ನೇ ಬಯಸುತ್ತಾ ಬಂದಿದೆ ಎಂದರು. ಕುಂದಗೋಳ ಶಿತಿಕಂಠೇಶ್ವರ ಶಿವಾಚಾರ್ಯರು, ಹಣ್ಣೇರಿ ರೇವಣಸಿದ್ಧ ಶಿವಾಚಾರ್ಯರು, ಹುಬ್ಬಳ್ಳಿ ಹನ್ನೆರಡು ಮಠದ ರೇವಣಸಿದ್ಧ ಶಿವಾಚಾರ್ಯರು,

ಕುಂದಗೋಳ ಕಲ್ಯಾಣಮಠದ ಅಭಿನವ ಬಸವಣ್ಣಜ್ಜನವರು ಸಮ್ಮುಖ ವಹಿಸಿದ್ದರು. ತಾಲೂಕ ಪಂಚಾಯತಿ ಮಾಜಿ ಅಧ್ಯಕ್ಷ ಆರ್.ಜಿ.ಪೋಲೀಸ್ ಪಾಟೀಲ ಅಧ್ಯಕ್ಷತೆ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಸಂಶಿ ಕೆ.ಎಲ್.ಇ.ಸಂಸ್ಥೆ ಅಧ್ಯಕ್ಷ ಎ.ಬಿ.ಉಪ್ಪಿನ, ಗದಗಿನ ವೀರೇಶ್ ಕೂಗು ಸೇರಿದಂತೆ ಹಲವಾರು ಗಣ್ಯರು ಪಾಲ್ಗೊಂಡು ರಂಭಾಪುರಿ ಜಗದ್ಗುರುಗಳಿಂದ ಆಶೀರ್ವಾದ ಪಡೆದರು.

ವಿವಿಧ ರಂಗಗಳಲ್ಲಿ ಸೇವೆ ಸಲ್ಲಿಸಿದ ಮಹನೀಯರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು. ಗ್ರಾಮ ಪಂಚಾಯತಿ ಮಾಜಿ ಸದಸ್ಯ ವೀರೇಶ ನಾಗಾವಿಮಠ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿ ದರು. ನಂತರ ಅನ್ನದಾಸೋಹ ಜರುಗಿತು.

# ಲೋಕಾ ಬಲೆಗೆ ಸಿಕ್ಕಿಬಿದ್ದ ಇಬ್ಬರು ಅಧಿಕಾರಿಗಳು

**ವಿಜಯಪುರ, ಜೂ.6:** ಲಂಚಕ್ಕೆ ಕೈಯೊಡ್ಡಿದ್ದ ಇಬ್ಬರು ಸರ್ಕಾರಿ ಅಧಿಕಾರಿಗಳನ್ನು ಲೋಕಾಯುಕ್ತ ಪೊಲೀಸರು ರೆಡ್ ಹ್ಯಾಂಡ್ ಆಗಿ ಹಿಡಿದಿದ್ದಾರೆ. ವಿಜಯಪುರದ ಸಾಲೋಟಗಿಯಲ್ಲಿ ಇಬ್ಬರು ಅಧಿಕಾರಿಗಳು ಲೋಕಾಯುಕ್ತ ಪೊಲೀಸರ ಬಲೆಗೆ ಬಿದ್ದಿದ್ದಾರೆ.

ಕೃಷ್ಣ ಭಾಗ್ಯ ಜಲ ನಿಗಮ ನಿಯಮಿತ) ಕೆನಾಲ್‌ನ 3,71,419 ರೂ. ಬಿಲ್ ಪಾವತಿಗಾಗಿ 18 ಸಾವಿರ ರೂಪಾಯಿ ಲಂಚಕ್ಕೆ ಏಃಎಓಐ ಉಪವಿಭಾಗ ನಂಬರ್ ಒಂದರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಸೇವುಲಾಲ್ ಚವ್ಹಾಣ 10 ಸಾವಿರ ರೂಪಾಯಿಗೆ ಹಾಗೂ ಉಪವಿಭಾಗದ ಕಿರಿಯ ಅಭಿಯಂತರ ಸಾತಲಿಂಗಪ್ಪ 8 ಸಾವಿರ ರೂ. ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಈ ಬಗ್ಗೆ ನಾನಾಸಾಹೇಬ್ ಎಂಬುವರು ಲೋಕಾಯುಕ್ತಕ್ಕೆ ದೂರು ನೀಡಿದ್ದರು.

ಈ ದೂರಿನ ಮೇರೆಗೆ ದಾಳಿ ನಡೆಸಿದ ಲೋಕಾಯುಕ್ತ ಅಧಿಕಾರಿಗಳು ಇಬ್ಬರು ಲಂಚಕೋರರನ್ನ ಬಂಧಿಸಿದ್ದಾರೆ. ಈ ಸಂಬಂಧ ವಿಜಯಪುರ ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ಕೇಸ್ ದಾಖಲಾಗಿದೆ. ಸದ್ಯ ಇಬ್ಬರನ್ನು ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

## ದಾರಿ ತಪ್ಪಿ ಗ್ರಾಮಕ್ಕೆ ನುಗ್ಗಿದ ಚಿರತೆ ದಾಳಿಯಿಂದ ಐವರಿಗೆ ಗಾಯ

**ಹಾಸನ, ಜೂ.6:** ಹಗಲು ಹೊತ್ತಿನಲ್ಲಿ ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಅಂಕವಳ್ಳಿ ಗ್ರಾಮಕ್ಕೆ ದಾರಿತಪ್ಪಿ ನುಗ್ಗಿದ ಚಿರತೆ ದಾಳಿ ನಡೆಸಿ ಐದು ರೈತರು ಗಾಯಗೊಂಡಿದ್ದಾರೆ. ಅರಣ್ಯ ಅಧಿಕಾರಿಗಳ ಪ್ರಕಾರ, ಚಿರತೆ ಶುಕ್ರವಾರ ಬೆಳಗಿನ ಜಾವ ಗ್ರಾಮಕ್ಕೆ ನುಗ್ಗಿ ದನದ ಕೊಟ್ಟಿಗೆಯಲ್ಲಿ ಅಡಗಿಕೊಂಡಿತ್ತು. ಗ್ರಾಮಸ್ಥರು ಶೆಡ್ ಸುತ್ತಲೂ ಜಮಾಯಿಸಿದಾಗ ಪರಿಸ್ಥಿತಿ ಉದ್ವಿಗ್ನಗೊಂಡು ಪ್ರಾಣಿಗೆ ತೊಂದರೆ ನೀಡಲಾಗಿದೆ ಎಂದು ವರದಿಯಾಗಿದೆ. ಚಿರತೆ ಇದ್ದಕ್ಕಿದ್ದಂತೆ ತನ್ನ ದನದ ಕೊಟ್ಟಿಗೆಯಿಂದ ಹೊರಬಂದು ಜನಸಮೂಹದ ಮೇಲೆ ದಾಳಿ ಮಾಡಿದೆ. ನವೀನ್, ನಾಗರಾಜ್, ಜಯಮ್ಮ, ವಸಂತಮ್ಮ ಮತ್ತು ಶ್ರೇಯಸ್ ಗೌಡ ಗಾಯಗೊಂಡಿದ್ದಾರೆ.

# ಹತ್ತು ಸಾವಿರ ಲಾರಿಗಳನ್ನು ಹೊಂದಿರುವ ಎಆರ್‌ಟಿಓ ಕಚೇರಿ: ಹಲವು ಸೌಲಭ್ಯಗಳ ಕೊರತೆ



**ಬಸವಕಲ್ಯಾಣ, ಜೂ. 6:** ರಾಷ್ಟ್ರೀಯ ಹೆದ್ದರಿಯಲ್ಲಿರುವ ಬಸವಣ್ಣವರ ಕರ್ಮಭೂಮಿ ಬಸವಕಲ್ಯಾಣ ಲಾರಿಗಳ ನಾಡು ಎಂದೇ ಪ್ರಸಿದ್ಧವಾಗಿದೆ. ಸುಮಾರು ಹತ್ತು ಸಾವಿರ ಲಾರಿಗಳನ್ನು ಹೊಂದಿರುವ ಈ ನಗರದಲ್ಲಿ ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿಯೊಂದಿದ್ದು, ನಿತ್ಯವೂ ಜನಜಂಗುಳಿ ಇರುತ್ತದೆ. ವಾಹನದ ಮಾಲೀಕರು, ಚಾಲಕರು ಮತ್ತಿತರೆ ಕಾರ್ಮಿಕರು ಬರುತ್ತಾರಾದರೂ ಅದಕ್ಕೆ ತಕ್ಕಂತೆ ಇಲ್ಲಿ ಸೌಲಭ್ಯಗಳು ಇಲ್ಲವಾದ್ದರಿಂದ ಅವರು ನಿತ್ಯ ಇನ್ನಿಲ್ಲದ ತೊಂದರೆ ಅನುಭವಿಸುವಂತಾಗಿದೆ.

ಈ ಕಚೇರಿ ನಗರದಿಂದ 8 ಕಿ.ಮೀ ದೂರದಲ್ಲಿದ್ದು, ಸುತ್ತಲಿನಲ್ಲಿ ಯಾವದೇ ಜನವಸತಿ ಇಲ್ಲ. ಇದು ರಾಷ್ಟ್ರೀಯ ಹೆದ್ದಾರಿಯ ಪಕ್ಕದಲ್ಲಿದ್ದು ಮಳೆ ಗಾಳಿಗೆ ನಿಂತುಕೊಳ್ಳುವುದಕ್ಕೆ ರಸ್ತೆ ಪಕ್ಕದಲ್ಲಿ ಪ್ರಯಾಣಿಕರ ತಂಗುದಾಣವಾಗಲಿ ಇತರೆ ಆಸರೆಯಾಗಲಿ ಇಲ್ಲವೇ ಇಲ್ಲ. ಸಾರಿಗೆ ಕಚೇರಿಯ ಆವರಣದೊಳಗೆ ರಸ್ತೆಗೆ ಹತ್ತಿಕೊಂಡು ಬಸ್ ನಿಲ್ದಾಣದಂಥ ಕಟ್ಟಡ ನಿರ್ಮಿಸಬೇಕು ಎಂದು ಕೆಲವರು ಮನವಿ ಸಲ್ಲಿಸಿದ್ದರೂ ಯಾರೂ ಸ್ಪಂದಿಸಿಲ್ಲ.

ಮಳೆಗಾಲದಲ್ಲಿ ದಾಖಲೆಗಳನ್ನು ತೆಗೆದುಕೊಂಡು ದ್ವಿಚಕ್ರ ವಾಹನಗಳ ಮೇಲೆ ಹೋಗಿ ಬರುವುದು ಕಷ್ಟವಾಗುತ್ತದೆ. ಬಸ್‌ಗಳಲ್ಲಿ ಪ್ರಯಾಣಿಸಬೇಕೆಂದರೆ ಕೆಲವೊಂದು ಬಸ್‌ಗಳು ಮಾತ್ರ ಇಲ್ಲಿ ನಿಲ್ಲುತ್ತವೆ. ಇಲ್ಲಿಂದ ಹಾದು ಹೋಗುವ ಎಲ್ಲ ಬಸ್‌ಗಳ ನಿಲುಗಡೆಗೆ ಕ್ರಮ ತೆಗೆದುಕೊಳ್ಳಬೇಕು ಎಂದು ಕೆಲ ಸಂಘ ಸಂಸ್ಥೆಯವರು ಹಲವಾರು ಸಲ ಮನವಿ ಸಲ್ಲಿಸಿದ್ದರೂ ಪ್ರಯೋಜನವಾಗಿಲ್ಲ. ಯಾವುದೇ ಕೆಲಸಕ್ಕೂ ಯಾರಿಗೂ ಹಣ ನೀಡಬಾರದು ಎಂದು ಅಲ್ಲಲ್ಲಿ ಫಲಕಗಳನ್ನು ಅಳವಡಿಸಿದ್ದರೂ ದಲ್ಲಾಳಿಗಳ ಹಾವಳಿ ಹೆಚ್ಚಾಗಿದೆ. ಇಂಥವರ ಮೂಲಕ ಕೆಲಸ ಮಾಡಿಸಿಕೊಂಡರೆ ಮಾತ್ರ ಚಾಲನಾ ಪರವಾನಗಿ ಮತ್ತು ಇತರೆ ದಾಖಲೆಗಳು ಸಕಾಲಕ್ಕೆ ದೊರಕುತ್ತವೆ. ಕಚೇರಿಯಲ್ಲಿನ ಸಾಲಿನಲ್ಲಿ ಗಂಟೆಗಟ್ಟಲೇ ನಿಂತರೂ ಕೆಲಸ ಆಗುವುದಿಲ್ಲ. ಆದರೆ, ಕೆಲ ಮಧ್ಯವರ್ತಿಗಳು ಕೊಠಡಿಗಳ ಒಳಗೆ ಹೋಗಿ ಆಗಿಂದಾಗಲೇ ಕೆಲಸ ಮಾಡಿಸಿಕೊಳ್ಳುತ್ತಾರೆ ಎಂದು ಲಾರಿ ಚಾಲಕ ಗಿರಿಮಲ್ಲಪ್ಪ ಮತ್ತು ಮುರ್ತುಜಾ ಹೇಳುತ್ತಾರೆ.

ಕಚೇರಿ ಕೆಲಸಕ್ಕೆ ಅನೇಕರು ಲಾರಿ ಮತ್ತಿತರೆ ವಾಹನಗಳೊಂದಿಗೆ ಇಲ್ಲಿಗೆ ಬರುತ್ತಾರೆ. ಆದ್ದರಿಂದ ಅಂಥ ವಾಹನಗಳ ದಟ್ಟಣೆ ಆಗದಂತೆ ನೋಡಿಕೊಂಡು ಅವುಗಳ ನಿಲುಗಡೆಗೆ ಪ್ರತ್ಯೇಕ ವ್ಯವಸ್ಥೆಗೈಯಬೇಕು. ಕಚೇರಿಯ ಆವರಣದಲ್ಲಿ ಕುಡಿಯುವ ನೀರಿನ ಹಾಗೂ ಕುಳಿತುಕೊಳ್ಳುವುದಕ್ಕೆ ಆಸನಗಳ ವ್ಯವಸ್ಥೆ ಕಲ್ಪಿಸಬೇಕು. ಗಿಡಗಳನ್ನು ಬೆಳೆಸಬೇಕು ಎಂದು ಗುರುಬಸವ ಯುವ ಸಂಸ್ಥೆಯ ರಾಜಪ್ಪ ಪಾಟೀಲ ಆಗ್ರಹಿಸಿದ್ದಾರೆ.

ದಲ್ಲಾಳಿಗಳ ಹಾವಳಿ ತಡೆಗೆ ಕ್ರಮ: ವಾಹನ ಚಾಲನಾ ಪರವಾನಗಿಗೆ ಅರ್ಜಿ ಸಲ್ಲಿಸುವುದು ಹಾಗೂ ಇತರೆ ಕೆಲಸ ಕಾರ್ಯಗಳು ಆನ್‌ಲೈನ್ ಮೂಲಕ ನಡೆಯುತ್ತಿರುವ ಕಾರಣ ಎಲ್ಲವೂ ಪಾರದರ್ಶಕವಾಗಿದೆ. ಅಲ್ಲದೆ ದಲ್ಲಾಳಿಗಳ ಹಾವಳಿ ತಡೆಗೆ ಇತರೆ ಕ್ರಮಗಳನ್ನೂ ಕೈಗೊಳ್ಳಲಾಗಿದೆ. ಒಂದು ವೇಳೆ ಯಾರಾದರೂ ಹಣ ಪಡೆದಿರುವುದು ಕಂಡು ಬಂದರೆ ದೂರು ಸಲ್ಲಿಸಬಹುದಾಗಿದೆ ಎಂದು ಸಾರಿಗೆ ನಿರೀಕ್ಷಕ ವಿಜಯಕುಮಾರ ಉಮರಗೆ ತಿಳಿಸಿದ್ದಾರೆ.

ತಾಲ್ಲೂಕಿನಲ್ಲಿ ಎಲ್ಲ ರೀತಿಯ ಒಟ್ಟು ಲಕ್ಷಕ್ಕೂ ಅಧಿಕ ವಾಹನಗಳಿದ್ದು ಇವುಗಳಲ್ಲಿ ಲಾರಿಗಳ ಸಂಖ್ಯೆ ಜಿಲ್ಲೆಯಲ್ಲಿಯೇ ಹೆಚ್ಚಾಗಿದೆ. ಮರಳು ತುಂಬಿದ ಓವರಲೋಡ್ ವಾಹನಗಳು ಸಂಚರಿಸುವುದು ಕಂಡು ಬಂದರೆ ದಂಡ ವಿಧಿಸಲಾಗುತ್ತದೆ ಎಂದೂ ಹೇಳಿದ್ದಾರೆ.

ಸಹಾಯಕ ಸಾರಿಗೆ ಕಚೇರಿಯು ರಾಷ್ಟ್ರೀಯ ಹೆದ್ದಾರಿ ಪಕ್ಕದಲಿದ್ದು, ನಗರದಿಂದ ಸುಮಾರು ಎಂಟು ಕಿಮೀ ದೂರದಲ್ಲಿದೆ. ಬಸವಕಲ್ಯಾಣ ತಾಲ್ಲೂಕಿನಲ್ಲಿ ಸುಮಾರು 10 ಸಾವಿರ ಲಾರಿಗಳಿದ್ದು, ಇವುಗಳ ಹೊರತಾಗಿ ಇತರ ಕಾರು, ದ್ವಿಚಕ್ರವಾಹನ ಮುಂತಾದವುಗಳು ಸೇರಿ ಸುಮಾರು ಐದು ಸಾವಿರಕ್ಕೂ ಹೆಚ್ಚಿವೆ. ಇವರೆಲ್ಲರೂ ನಿತ್ಯ ಇಲ್ಲಿಗೆ ಒಂದಲ್ಲೊಂದು ಕೆಲಸಕ್ಕಾಗಿ ಬರಲೇಬೇಕಾಗುತ್ತದೆ. ಬಂದವರು ನಿತ್ಯ ಇಲ್ಲಿ ಒಂದಿಲ್ಲೊಂದು ತೊಂದರೆಯನ್ನೂ ಅನುಭವಿಸುವಂತಾಗಿದೆ.

# ಕಿವುಡ–ಮೂಕರ ಶಾಲಾ ಮಕ್ಕಳಲ್ಲಿ ಆತ್ಮವಿಶ್ವಾಸ ಹೆಚ್ಚಳ: ಬೊಮ್ಮಾಯಿ



**ಹುಬ್ಬಳ್ಳಿ, ಜೂ.6–** ರೋಟರಿ ಕಿವುಡ ಮೂಗರ ಶಾಲೆ ಮಕ್ಕಳಲ್ಲಿ ಆತ್ಮವಿಶ್ವಾಸ ಅವರ ತಂದೆ ತಾಯಿಗಳಲ್ಲಿ ಆಸೆ ಹುಟ್ಟಿಸುವ ಕೆಲಸ ಮಾಡಿದೆ. ಇದಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

ಹುಬ್ಬಳ್ಳಿಯ ಭವಾನಿ ನಗರದಲ್ಲಿರುವ ಡಾ. ಪಿ.ವಿ.ದತ್ತಿ ರೋಟರಿ ಕಿವುಡ ಮಕ್ಕಳ ಶಾಲೆಯಲ್ಲಿ ದಿವಂಗತ ಎಸ್ ಆರ್ ಬೊಮ್ಮಾಯಿ ಅವರ 102 ನೇಯ ಜನ್ಮದಿನೋತ್ಸವದ ಅಂಗವಾಗಿ ಮಕ್ಕಳಿಗೆ ನೋಟ ಪುಸ್ತಕ ಹಾಗೂ ಸಿಹಿ ಹಂಚುವ ಮೂಲಕ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಮ್ಮ ತಂದೆ ಮಾಜಿ ಮುಖ್ಯಮಂತ್ರಿ, ಕೇಂದ್ರದ ಸಚಿವರಾಗಿಯೂ ಕೆಲಸ ಮಾಡಿದ್ದ ದಿ. ಎಸ್. ಆರ್. ಬೊಮ್ಮಾಯಿ ಅವರ 102 ಜನ್ಮ ದಿನಾಚರಣೆ ಅವರ ಹುಟ್ಟಿದ ಹಬ್ಬವನ್ನು ಯಾಕೆ ಆಚರಿಸುತ್ತಿದ್ದೇವೆ ಎಂದರೆ ಅವರು ರೋಟರಿ ಅಧ್ಯಕ್ಷರಾಗಿದ್ದಾಗ ಕಿವುಡ ಮೂಕರ ಶಾಲೆ ತೆರೆಯುವ ಯೋಜನೆಯನ್ನು ಜಾರಿಗೆ ತಂದರು. ಡಾ. ಪಿ.ವಿ. ದತ್ತಿ ಅವರು ಇದಕ್ಕೆ ಕಾರಣೀಭೂತರು, ಡಾ. ನಾಡಿಗ್ ಅವರು ಕಿವುಡ–ಮೂಕರ ಶಾಲೆ ತೆರೆಯೋಣ ಅಂತ ಸಲಹೆ ಕೊಟ್ಟರು. ಆಗ ಆರಂಭವಾದ ಶಾಲೆ ಈಗ ಬೃಹದಾಕಾರವಾಗಿ ಬೆಳೆದಿದೆ. ಈ ಥರದ ಒಂದು ಸಂಸ್ಥೆ ಬೇಕಿತ್ತು. ಹುಬ್ಬಳ್ಳಿಯಲ್ಲಿ ಇಷ್ಟು ಅಚ್ಚುಕಟ್ಟಾದ ಸಂಸ್ಥೆ ಇಲ್ಲ. ಈ ಸಂಸ್ಥೆ ಮೂಕ ಮತ್ತು ಕಿವುಡ ಮಕ್ಕಳಲ್ಲಿ ಆತ್ಮವಿಶ್ವಾಸ ಅವರ ತಂದೆ ತಾಯಿಗಳಲ್ಲಿ ಆಸೆ ಹುಟ್ಟಿಸುವ ಕೆಲಸ ಮಾಡಿದೆ. ಇದಕ್ಕೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಡಾ. ದತ್ತಿ ಅವರ ಆತ್ಮವಿಶ್ವಾಸ ಮತ್ತು ಉತ್ಸಾಹ ಈಗಲೂ ಇದೆ. ಅದು ನಮಗೆಲ್ಲರಿಗೂ ಸ್ಫೂರ್ತಿಯಾಗಿದೆ ಎಂದು ಹೇಳಿದರು.

ರಾಜಕಾರಣಿಗಳಲ್ಲಿ ಹುಟ್ಟು ಹಬ್ಬ ಸಂಭ್ರಮಾಚರಣೆ ಮಾಡುವುದು ಸಾಮಾನ್ಯ, ಆದರೆ, ಎಸ್.ಆರ್. ಬೊಮ್ಮಾಯಿಯವರಿಗೆ ಈ ಶಾಲೆ ಬಗ್ಗೆ ಅತ್ಯಂತ ಪ್ರೀತಿ ಇತ್ತು. ಬೊಮ್ಮಾಯಿಯವರು ಮಲಪ್ರಭಾ ನೀರು ತಂದಿದ್ದಾರೆ. ಅನೇಕ ಕೆಲಸ ಮಾಡಿದ್ದಾರೆ. ನಾನು ಮುಖ್ಯಮಂತ್ರಿ ಯಾಗಿದ್ದಾಗ ಸೇವೆ ಮಾಡುವ ಸೌಭಾಗ್ಯ ದೊರೆಯಿತು. ನಾವೆಲ್ಲರೂ ತಂದೆ–ತಾಯಿಯ ಮಕ್ಕಳಾದರೆ ಅವರೆಲ್ಲ ದೇವರ ಮಕ್ಕಳು ಅವರ ಸೇವೆ ಮಾಡುವುದರಿಂದ ಪುಣ್ಯ ಬರುತ್ತದೆ. ಅವಕಾಶ ಸಿಕ್ಕಾಗೆಲ್ಲ ಒಳ್ಳೆಯ ಕೆಲಸ ಮಾಡಬೇಕು. ನಾನು ಮುಖ್ಯಮಂತ್ರಿಯಾಗಿ ರಸ್ತೆ ಅಭಿವೃದ್ಧಿಗೆ ನೂರಾರು ಕೋಟಿ ಹಣ ಕೊಟ್ಟಿದ್ದೇನೆ. ಹುಬ್ಬಳ್ಳಿ ಧಾರವಾಡ ಅಭಿವೃದ್ಧಿಗೆ 500 ಕೋಟಿಗಿಂತ ಹೆಚ್ಚು ಕೊಟ್ಟಿದ್ದೇನೆ. ಕ್ಯಾನ್ಸರ್ ಆಸ್ಪತ್ರೆಗೆ 10 ಕೋಟಿ ಕೊಟ್ಟಿದ್ದೇನೆ. ಹಲವಾರು ಕೆಲಸಗಳನ್ನು ಮಾಡಿದ್ದೇನೆ. ಆದರೆ, ಈ ಶಾಲೆಗೆ ಸಹಾಯ ಮಾಡಿದ್ದು ಅತ್ಯಂತ ಹೃದಯಕ್ಕೆ ಹತ್ತಿರವಾಗಿರುವ ಕೆಲಸ. ಇಲ್ಲಿ ಸಂಪೂರ್ಣ ಹಣ ಬೇಕಾಗಿದೆ. ಮುಂದೆಯೂ ಕೂಡ ನಾನು ಸಹಾಯ ಮಾಡುತ್ತೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಹಿರಿಯರಾದ ಡಾ.ಪಿ.ವಿ ದತ್ತಿ ಎಂ.ಕೆ.ಪಾಟೀಲ್ ಸೇರಿದಂತೆ ಹಲವಾರು ಪ್ರಮುಖರು ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.




ಮಾಜಿ ಮುಖ್ಯಮಂತ್ರಿ ಎಸ್.ಆರ್ ಬೊಮ್ಮಾಯಿ ಅವರ 102 ನೇ ಜನ್ಮದಿನೋತ್ಸವದ ಅಂಗವಾಗಿ ಶನಿವಾರ ಹುಬ್ಬಳ್ಳಿಯ ಕಿತ್ತೂರು ರಾಣಿ ಚೆನ್ನಮ್ಮಾ ವೃತ್ತದ ಬಳಿ ಇರುವ (ಸಾಯಿಬಾಬಾ ದೇವಸ್ಥಾನದ ಎದುರು) ಪುತ್ಥಳಿಗೆ ಹಾವೇರಿ – ಗದಗ ಲೋಕಸಭಾ ಕ್ಷೇತ್ರದ ಸದಸ್ಯ ಬಸವರಾಜ ಬೊಮ್ಮಾಯಿ ಗೌರವ ಸಲ್ಲಿಸಿದರು. ಈ ಸಂದರ್ಭದಲ್ಲಿ ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷ ತಿಪ್ಪಣ್ಣ ಮಜ್ಜಿಗಿ, ಉಪಮಹಾಪೌರ ಸಂತೋಷ ಚವ್ಹಾಣ, ಸೇರಿದಂತೆ ಮಹಾನಗರ ಪಾಲಿಕೆಯ ಸದಸ್ಯರು ಹಾಗೂ ದಿವಂಗತ ಎಸ್.ಆರ್ ಬೊಮ್ಮಾಯಿರವರ ಅಭಿಮಾನಿಗಳು ಇದ್ದರು.

# ಕೈಗಾರಿಕಾ ಅಭಿವೃದ್ಧಿಗೆ ಒತ್ತು: ಎಫ್‌ಕೆಸಿಸಿಐ ಅಧ್ಯಕ್ಷರಿಗೆ ಮನವಿ ಸಲ್ಲಿಸಿದ ಬಳ್ಳಾರಿ ವಾಣಿಜ್ಯ, ಕೈಗಾರಿಕಾ ಸಂಸ್ಥೆ



**ತುಮಕೂರು, ಜೂ.6:** ತುಮಕೂರು ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಸಿಲ್ವರ್ ಜುಬ್ಲಿ ಸಂಭ್ರಮಾಚರಣೆ ಅಂಗವಾಗಿ ಹಾಗೂ ಕರ್ನಾಟಕ ವಾಣಿಜ್ಯ ಮತ್ತು ಕೈಗಾರಿಕಾ ಮಹಾಸಂಸ್ಥೆ (ಎಫ್‌ಕೆಸಿಸಿಐ) ಆಶ್ರಯದಲ್ಲಿ ಶನಿವಾರ ಚಾಲನೆಗೊಂಡ ಎರಡು ದಿನಗಳ ಜಿಲ್ಲಾ ಚೇಂಬರ್‌ಗಳ ರಾಜ್ಯಮಟ್ಟದ ಸಮ್ಮೇಳನದಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಪ್ರತಿನಿಧಿಗಳು ಸಕ್ರಿಯವಾಗಿ ಭಾಗವಹಿಸಿದರು.

ಸಮ್ಮೇಳನದ ವೇಳೆ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಹಾಗೂ ಗೌರವ ಕಾರ್ಯದರ್ಶಿ ಕೆ.ಸಿ. ಸುರೇಶಬಾಬು ಅವರು ಎಫ್‌ಕೆಸಿಸಿಐ ಅಧ್ಯಕ್ಷರಾದ ಉಮಾರೆಡ್ಡಿ ಅವರಿಗೆ ಬಳ್ಳಾರಿ ಜಿಲ್ಲೆಯ ಕೈಗಾರಿಕಾ ಮತ್ತು ವಾಣಿಜ್ಯ ಕ್ಷೇತ್ರಕ್ಕೆ ಸಂಬಂಧಿಸಿದ ಪ್ರಮುಖ ಸಮಸ್ಯೆಗಳ ಕುರಿತು ಮನವಿಪತ್ರ ಸಲ್ಲಿಸಿದರು. ಮನವಿಯಲ್ಲಿ ಕೈಗಾರಿಕಾ ಅಭಿವೃದ್ಧಿಗೆ ಅಗತ್ಯ ಮೂಲಸೌಕರ್ಯಗಳ ಕಲ್ಪನೆ, ರಸ್ತೆ ಮತ್ತು ಸಾರಿಗೆ ವ್ಯವಸ್ಥೆಯ ಸುಧಾರಣೆ, ಉದ್ಯಮಿಗಳಿಗೆ ಅಗತ್ಯವಾದ ಸೌಲಭ್ಯಗಳ ವಿಸ್ತರಣೆ ಹಾಗೂ ಜಿಲ್ಲೆಯ ಆರ್ಥಿಕ ಪ್ರಗತಿಗೆ ಪೂರಕವಾದ ಕ್ರಮಗಳನ್ನು ಕೈಗೊಳ್ಳುವಂತೆ ಒತ್ತಾಯಿಸಲಾಯಿತು.

ಇದೇ ಸಂದರ್ಭದಲ್ಲಿ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ಅಧ್ಯಕ್ಷರಾದ ಅವ್ವಾರು ಮಂಜುನಾಥ್ ಅವರ ಸೇವೆ ಮತ್ತು ನಾಯಕತ್ವವನ್ನು ಗುರುತಿಸಿ ಅವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಹ್ಯಾಲಿಸ್ ಬ್ಲೂ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕರಾಗಿರುವ ಹಾಗೂ ಬಳ್ಳಾರಿ ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಯ ವಿಶೇಷ ಆಹ್ವಾನಿತರಾದ ಕೆ.ಎಂ. ಶಿವಮೂರ್ತಿ ಅವರಿಗೆ ಕೈಗಾರಿಕಾ ಕ್ಷೇತ್ರದಲ್ಲಿ ಸಲ್ಲಿಸಿರುವ ಗಣನೀಯ ಸೇವೆ, ಉದ್ಯಮಶೀಲತೆ ಮತ್ತು ಉದ್ಯೋಗ ಸೃಷ್ಟಿಯಲ್ಲಿನ ಕೊಡುಗೆಯನ್ನು ಪರಿಗಣಿಸಿ ?ಉತ್ತಮ ಕೈಗಾರಿಕಾ ಉದ್ಯಮಿ? ಪ್ರಶಸ್ತಿಯನ್ನು ನೀಡಿ ಗೌರವಿಸಲಾಯಿತು.

ರಾಜ್ಯದ ವಿವಿಧ ಜಿಲ್ಲೆಗಳ ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆಗಳ ಪ್ರತಿನಿಧಿಗಳು ಪಾಲ್ಗೊಂಡಿದ್ದ ಈ ರಾಜ್ಯಮಟ್ಟದ ಸಮ್ಮೇಳನವು ಕೈಗಾರಿಕೆ, ವಾಣಿಜ್ಯ, ಹೂಡಿಕೆ, ಉದ್ಯಮಾಭಿವೃದ್ಧಿ ಹಾಗೂ ಉದ್ಯಮಿಗಳು ಎದುರಿಸುತ್ತಿರುವ ಸವಾಲುಗಳ ಕುರಿತು ಸಮಗ್ರ ಚರ್ಚೆಗೆ ವೇದಿಕೆಯಾಯಿತು. ಕೈಗಾರಿಕಾ ವಲಯದ ಬೆಳವಣಿಗೆಗೆ ಪೂರಕವಾದ ಹಲವು ಸಲಹೆಗಳು, ಶಿಫಾರಸುಗಳು ಹಾಗೂ ಅಭಿವೃದ್ಧಿ ಯೋಜನೆಗಳ ಕುರಿತು ಸುದೀರ್ಘ ಚರ್ಚೆ ನಡೆಯಿತು.

# ಸ್ವಚ್ಛತೆ ಪ್ರೇರಣೆಗಾಗಿ ಮಕ್ಕಳಿಗೆ ಶೈಕ್ಷಣಿಕ ಪ್ರವಾಸ ಅಗತ್ಯ: ನ್ಯಾ.ದೇವದಾಸ್



**ಕಲಬುರಗಿ, ಜೂ. 6:** ಪರಿಸರ ಸಂರಕ್ಷಣೆ ಕೇವಲ ಗಿಡ ನೆಡುವುದಕ್ಕೆ ಸೀಮಿತವಾಗಿಲ್ಲ. ಅದು ನಮ್ಮ ವೈಯಕ್ತಿಕ ಸ್ವಚ್ಛತೆ ಹಾಗೂ ನಿತ್ಯದ ನಡವಳಿಕೆಯಿಂದ ಆರಂಭವಾಗಬೇಕು. ಸ್ವಚ್ಛತೆ ಪ್ರೇರಣೆಗೆ ಮಕ್ಕಳಿಗೆ ಶೈಕ್ಷಣಿಕ ಪ್ರವಾಸ ಅಗತ್ಯ ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಾಧೀಶ ಆರ್.ದೇವದಾಸ್ ಹೇಳಿದರು.

ಶಾಲಾ ಆವರಣ ಸ್ವಚ್ಛವಾಗಿಟ್ಟುಕೊಳ್ಳಿ ಮೊದಲು ನಮ್ಮ ದೇಹ, ಮನೆ ಹಾಗೂ ಶಾಲಾ ಆವರಣ ಸ್ವಚ್ಛವಾಗಿಟ್ಟುಕೊಳ್ಳುವ ಜವಾಬ್ದಾರಿ ನಮ್ಮದಾಗಬೇಕು. ವಿವೇಕಾನಂದರ ಚಿಂತನೆಗಳನ್ನು ಸ್ಮರಿಸುತ್ತಾ, ಶಕ್ತಿಯುತ ದೇಹದಲ್ಲಿ ಶಕ್ತಿಯುತ ಮನಸ್ಸು ಇರುತ್ತದೆ. ಓದಿನ ಒತ್ತಡದ ನಡುವೆಯೂ ಮಕ್ಕಳಿಗೆ ಆಟ ಹಾಗೂ ವ್ಯಾಯಾಮ ಅತ್ಯಗತ್ಯ. ಮಕ್ಕಳಲ್ಲಿ ಸ್ವಚ್ಛತೆಯ ಪ್ರೇರಣೆ ಮೂಡಿಸಲು ಶೈಕ್ಷಣಿಕ ಪ್ರವಾಸದ ಅಗತ್ಯವಿದೆ ಎಂದರು.

ವಿದ್ಯಾರ್ಥಿಗಳನ್ನು ಬೇರೆ ನಗರಗಳಲ್ಲಿನ ಶಿಸ್ತು ಹಾಗೂ ಸ್ವಚ್ಛತೆಯುಳ್ಳ ಶಿಕ್ಷಣ ಸಂಸ್ಥೆಗಳಿಗೆ ಕರೆದೊಯ್ಯಬೇಕು. ಅಲ್ಲಿನ ಪರಿಸರ ನೋಡಿದಾಗ ಮಕ್ಕಳಲ್ಲಿ ತಮ್ಮ ಶಾಲೆಯನ್ನು ಸ್ವಚ್ಛವಾಗಿಟ್ಟುಕೊಳ್ಳುವ ಪ್ರೇರಣೆ ದೊರೆಯಲಿದೆ. ಅದಕ್ಕಾಗಿ ಗಿಡ ಮರಗಳ ಪೋಷಣೆ ಅಗತ್ಯ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷ, ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಜಿ.ಎಲ್.ಲಕ್ಷ್ಮೀ ನಾರಾಯಣ ಮಾತನಾಡಿ, ಪರಿಸರ ದಿನಾಚರಣೆಯನ್ನು ಕೇವಲ ಒಂದು ದಿನಕ್ಕೆ ಸೀಮಿತಗೊಳಿಸದೆ, ಹಸಿ ಕಸ–ಒಣ ಕಸದ ವಿಲೇವಾರಿ ಹಾಗೂ ಗಿಡಮರಗಳ ಪೋಷಣೆ ನಿರಂತರವಾಗಿ ಮಾಡುವುದು ಪ್ರತಿಯೊಬ್ಬರ ಸಂವಿಧಾನಬದ್ಧ ಕರ್ತವ್ಯ ಎಂದು ಹೇಳಿದರು.

> ಕಲಬುರಗಿ ಜಿಲ್ಲೆಯಲ್ಲಿ ಅರಣ್ಯ ಪ್ರದೇಶದ ಪ್ರಮಾಣ ಶೇ.5ಕ್ಕಿಂತಲೂ ಕಡಿಮೆಯಿದೆ. ಹಸಿರು ಕೊರತೆಯಿಂದಾಗಿ ಬಿಸಿಲಿನ ತಾಪ ಹೆಚ್ಚಾಗುತ್ತಿದೆ. ಗಿಡಗಳನ್ನು ನೆಟ್ಟು ಪೋಷಿಸುವ ಮೂಲಕ ಪರಿಸರ ರಕ್ಷಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ.
>
> – ಶ್ರೀನಿವಾಸ ನವಲೆ, ಸದಸ್ಯ ಕಾರ್ಯದರ್ಶಿ, ಕಾನೂನು ಸೇವೆಗಳ ಪ್ರಾಧಿಕಾರ.

ಕಣ್ಣಿನ ಆರೋಗ್ಯಕ್ಕೆ ಹಸಿರು ಹಿತಕರವಾಗಿದ್ದು, ಪ್ರತಿಯೊಬ್ಬರೂ ಕನಿಷ್ಠ ಒಂದು ಗಿಡ ಬೆಳೆಸಬೇಕು. ಪೋಷಕರ ಕನಸಿನಂತೆ ಕಷ್ಟಪಟ್ಟು ಓದಿ, ದೃಢವಾದ ಗುರಿಯೊಂದಿಗೆ ಉನ್ನತ ಹುದ್ದೆಗೇರುವುದೇ ಶಿಕ್ಷಕರಿಗೆ ನೀಡುವ ನಿಜವಾದ ಗುರುದಣೆ ಎಂದರು.

ಹಿರಿಯ ಸಿವಿಲ್ ನ್ಯಾಯಾಧೀಶ ಹಾಗೂ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಶ್ರೀನಿವಾಸ ನವಲೆ ಮಾತನಾಡಿ, ಕೇವಲ ಸಸಿ ನೆಡುವುದಷ್ಟೇ ಅಲ್ಲದೆ, ಸಾಲುಮರದ ತಿಮ್ಮಕ್ಕನವರಂತೆ ಗಿಡಗಳನ್ನು ನಿತ್ಯ ನೀರುಣಿಸಿ ಪೋಷಿಸುವುದು ಮುಖ್ಯ. ಭವಿಷ್ಯದ ಪೀಳಿಗೆಯ ಆರೋಗ್ಯಕರ ಜೀವನಕ್ಕಾಗಿ ಕಾನೂನು ಸೇವೆಗಳ ಪ್ರಾಧಿಕಾರವು ಒಟ್ಟು 5 ಕೋಟಿ ಸಸಿಗಳನ್ನು ನೆಡುವ ಬೃಹತ್ ಯೋಜನೆ ಹಮ್ಮಿಕೊಂಡಿದೆ ಎಂದು ತಿಳಿಸಿದರು.

ಸಾಲುಮರದ ತಿಮ್ಮಕ್ಕನ ಸ್ಮರಣೆ : ವಿಠ್ಠಲ್ ದೊಡ್ಡಮನಿ ಪ್ರಾಸ್ತಾವಿಕವಾಗಿ ಮಾತನಾಡಿ, 1972ರಿಂದ ವಿಶ್ವದಾದ್ಯಂತ ಪರಿಸರ ದಿನ ಆಚರಿಸಿಕೊಂಡು ಬರಲಾಗುತ್ತಿದೆ. ಪರಿಸರ ಸಂರಕ್ಷಣೆ ನಮ್ಮ ಆದ್ಯತೆಯಾಗಬೇಕು. ಇಂದಿನ ವಿದ್ಯಾರ್ಥಿ ಹಂತದಲ್ಲೇ ಪರಿಸರದ ಬಗ್ಗೆ ಕಾಳಜಿ ಮೂಡಿಸುವುದು ಅತ್ಯಂತ ಅವಶ್ಯಕ. ಪರಿಸರದ ರಕ್ಷಣೆಯಲ್ಲೇ ನಮ್ಮ ರಕ್ಷಣೆಯೂ ಅಡಗಿದೆ. ಇಂದಿನ ದಿನಗಳಲ್ಲಿ ಲಾಂತರ ಗಿಡಗಳನ್ನು ನೆಟ್ಟು ಬೆಳೆಸಿದ ಪರಿಸರಪ್ರೇಮಿ, ವೃಕ್ಷಮಾತೆ ಸಾಲುಮರದ ತಿಮ್ಮಕ್ಕ ಅವರ ಪರಿಸರ ಸೇವೆ ನಾವೆಲ್ಲರೂ ಸದಾ ನೆನಪಿನಲ್ಲಿಟ್ಟುಕೊಳ್ಳಬೇಕು ಎಂದು ಹೇಳಿದರು.

# ಮತದಾರರ ಪಟ್ಟಿ ಸಮಗ್ರ ಪರಿಷ್ಕರಣೆಗೆ ಚಾಲನೆ: ನಿಖರ, ದೋಷರಹಿತ ಪಾರದರ್ಶಕ: ಶಿಲ್ಪಾ ಶರ್ಮಾ

**ಬೀದರ್, ಜೂ. 6:** ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ–2026 ಹಮ್ಮಿಕೊಳ್ಳಲಾಗಿದ್ದು, ಮತದಾರರ ಪಟ್ಟಿಯನ್ನು ಇನ್ನಷ್ಟು ನಿಖರ, ದೋಷರಹಿತ ಹಾಗೂ ಪಾರದರ್ಶಕಗೊಳಿಸುವ ಉದ್ದೇಶ ಹೊಂದಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಹೇಳಿದರು.

ಸುದ್ದಿಗೋಷ್ಠಿಯಲ್ಲಿ , ಮತದಾರರ ಪಟ್ಟಿಯ ಪರಿಷ್ಕರಣೆ ಪ್ರಕ್ರಿಯೆಯ ಅಂಗವಾಗಿ ಮನೆ ಮನೆ ಸಮೀಕ್ಷೆ ನಡೆಸಲಾಗುವುದು. ಈ ವೇಳೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆಗಳಿಗೆ ಭೇಟಿ ನೀಡಿ ಮತದಾರರ ವಿವರಗಳನ್ನು ಸಂಗ್ರಹಿಸಿ ಪರಿಶೀಲಿಸಲಿದ್ದಾರೆ. ಸಂಗ್ರಹಿಸಲಾದ ಮಾಹಿತಿಯ ಆಧಾರದ ಮೇಲೆ ಮತದಾರರ ಪಟ್ಟಿಯ ಪರಿಷ್ಕರಣೆ, ತಿದ್ದುಪಡಿ ಹಾಗೂ ನವೀಕರಣ ಕಾರ್ಯ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

2026ರ ಅಕ್ಟೋಬರ್ 1 ಅನ್ನು ಅರ್ಹತಾ ದಿನಾಂಕವಾಗಿ ನಿಗದಿಪಡಿಸಲಾಗಿದೆ. ಜೂನ್ 20ರಿಂದ 29ರವರೆಗೆ ಸಿದ್ಧತೆ ಮತ್ತು ತರಬೇತಿ ಕಾರ್ಯಕ್ರಮ, ಜೂನ್ 30ರಿಂದ ಜುಲೈ 29ರವರೆಗೆ ಮನೆ ಮನೆ ಸಮೀಕ್ಷೆ, ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟಣೆ, ಆಗಸ್ಟ್ 5ರಿಂದ ಸೆಪ್ಟೆಂಬರ್ 4ರವರೆಗೆ ಹಕ್ಕು



ಮತ್ತು ಆಕ್ಷೇಪಣೆ ಸಲ್ಲಿಕೆ, ಅಕ್ಟೋಬರ್ 3ರವರೆಗೆ ಅವುಗಳ ವಿಲೇವಾರಿ ಹಾಗೂ ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸಲಾಗುವುದು ಎಂದು ಹೇಳಿದರು.

# ವಿಶ್ವ ಪರಿಸರ ದಿನ: ಚಿತ್ರಕಲಾ ಸ್ಪರ್ಧೆ

**ರಾಯಚೂರು, ಜೂ. 6:** ಮಹಾನಗರಪಾಲಿಕೆ ವತಿಯಿಂದ ವಿಶ್ವ ಪರಿಸರ ದಿನದ ಅಂಗವಾಗಿ ಪರಿಸರ ಸಂರಕ್ಷಣೆ, ಸ್ವಚ್ಛತೆ ಹಾಗೂ ಬೃಹತ್ ತ್ಯಾಜ್ಯ ನಿರ್ವಹಣೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವ ದಿಸೆಯಲ್ಲಿ ನಗರದಲ್ಲಿ ಶಾಲಾ ಮಕ್ಕಳಿಗಾಗಿ ವಿಶೇಷ ಚಿತ್ರಕಲಾ ಸ್ಪರ್ಧೆ ಏರ್ಪಡಿಸಲಾಗಿತ್ತು. ನಗರದ ಮಹಾತ್ಮ ಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಸ್ವಚ್ಛ ಭಾರತ ಮಿಷನ್ 2.0ರ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿ ಚಿತ್ರಕಲೆ ಸ್ಪರ್ಧೆಯನ್ನು ಆಯೋಜಿಸಲಾಗಿತ್ತು.



# ಚರ್ಮ ಕುಶಲಕರ್ಮಿಗಳ ಪ್ರತಿಭೆ ಗುರುತಿಸಲು ರಾಜ್ಯಮಟ್ಟದ ಪಾದರಕ್ಷೆ ತಯಾರಿಕಾ ಸ್ಪರ್ಧೆ: ಮುಂಡರಗಿ ನಾಗರಾಜ್



**ಬೆಂಗಳೂರು, ಜೂ.06:** ಚರ್ಮ ಕುಶಲಕರ್ಮಿಗಳಲ್ಲಿ ಅಡಗಿರುವ ಪ್ರತಿಭೆ ಮತ್ತು ವಿನೂತನ ವಿನ್ಯಾಸ ಕೌಶಲ್ಯವನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ರಾಜ್ಯ ಮಟ್ಟದ ಚರ್ಮ ಪಾದರಕ್ಷೆ ತಯಾರಿಕಾ ಸ್ಪರ್ಧೆಯನ್ನು ಹಮ್ಮಿಕೊಳ್ಳಲಾಗಿದೆ ಎಂದು ಡಾ. ಬಾಬು ಜಗಜೀವನರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ (ಲಿಡ್ಕರ್) ಅಧ್ಯಕ್ಷ ಮುಂಡರಗಿ ನಾಗರಾಜ್ ತಿಳಿಸಿದರು.

ಬೆಂಗಳೂರು ಉಳ್ಳಾಲ ಉಪನಗರದಲ್ಲಿರುವ ಕರ್ನಾಟಕ ಚರ್ಮ ಮತ್ತು ಫ್ಯಾಷನ್ ತಾಂತ್ರಿಕ ಸಂಸ್ಥೆಯಲ್ಲಿ ಲಿಡ್ಕರ್ ವತಿಯಿಂದ ಆಯೋಜಿಸಿದ್ದ ರಾಜ್ಯಮಟ್ಟದ ಚರ್ಮ ಪಾದರಕ್ಷೆ ತಯಾರಿಕಾ ಸ್ಪರ್ಧೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಲಿಡ್ಕರ್ ಸಂಸ್ಥೆಯು ಚರ್ಮ ಕುಶಲಕರ್ಮಿಗಳ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗಾಗಿ ವಿವಿಧ ಯೋಜನೆಗಳನ್ನು ಜಾರಿಗೊಳಿಸುತ್ತಿದ್ದು, ಇದೇ ಮೊದಲ ಬಾರಿಗೆ ರಾಜ್ಯ ಮಟ್ಟದಲ್ಲಿ ಚರ್ಮ ಪಾದರಕ್ಷೆ ತಯಾರಿಕಾ ಸ್ಪರ್ಧೆಯನ್ನು ಆಯೋಜಿಸಲಾಗಿದೆ. ಈ ಸ್ಪರ್ಧೆಯು ಕುಶಲಕರ್ಮಿಗಳಲ್ಲಿ ಅಡಗಿರುವ ವಿಶಿಷ್ಟ ಕೌಶಲ್ಯ, ಸೃಜನಶೀಲತೆ ಹಾಗೂ ಹೊಸ ವಿನ್ಯಾಸಗಳನ್ನು ಹೊರತರುವಲ್ಲಿ ಮಹತ್ವದ ಪಾತ್ರ ವಹಿಸಲಿದೆ ಎಂದು ಹೇಳಿದರು.

ಸ್ಪರ್ಧೆಯಲ್ಲಿ ಭಾಗವಹಿಸಿದ ಸ್ಪರ್ಧಿಗಳಿಗೆ ಬಹುಮಾನ ಹಾಗೂ ಪ್ರೋತ್ಸಾಹಧನ ನೀಡಲಾಗುವುದು. ಇದರಿಂದ ಚರ್ಮ ಕುಶಲಕರ್ಮಿಗಳಲ್ಲಿ ಹೊಸ ಮಾದರಿಯ ಉತ್ಪನ್ನಗಳನ್ನು ತಯಾರಿಸುವ ಆತ್ಮವಿಶ್ವಾಸ ಹೆಚ್ಚಲಿದ್ದು, ಅವರ ವೃತ್ತಿಜೀವನಕ್ಕೆ ಮತ್ತಷ್ಟು ಉತ್ತೇಜನ ಸಿಗಲಿದೆ ಎಂದು ತಿಳಿಸಿದರು.

ಮುಂಬರುವ ದಿನಗಳಲ್ಲಿ ಈ ಸ್ಪರ್ಧೆಯನ್ನು ಇನ್ನಷ್ಟು ದೊಡ್ಡ ಮಟ್ಟದಲ್ಲಿ ಆಯೋಜಿಸುವ ಉದ್ದೇಶವಿದ್ದು, ರಾಜ್ಯದ ಹೆಚ್ಚಿನ ಸಂಖ್ಯೆಯ ಕುಶಲಕರ್ಮಿಗಳನ್ನು ಇದರೊಂದಿಗೆ ಸಂಪರ್ಕಿಸುವ ಪ್ರಯತ್ನ ಮಾಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಆಯೋಜಿಸಿದ್ದ ಲಿಡ್ಕರ್ ಸಂಸ್ಥೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯ ಕಾರ್ಯವನ್ನು ಮುಂಡರಗಿ ನಾಗರಾಜ್ ಶ್ಲಾಘಿಸಿದರು.

# ಮೇಲ್ವಿಚಾರಣಾ ಸಮಿತಿ ಸಭೆ, ಕಾಳಸಂತೆಯಲ್ಲಿ ಸಿಲಿಂಡರ್ ಮಾರಾಟದ ವಿರುದ್ಧ ಕ್ರಮ: ಡಿಸಿ ಎಚ್ಚರಿಕೆ

**ಕಲಬುರಗಿ, ಜೂ. 6:** ಮದ್ಯ ಪ್ರಾಚ್ಯ ದೇಶದಲ್ಲಿನ ಯುದ್ಧದ ಬಿಕ್ಕಟ್ಟಿನ ನಡುವೆ ಕೊರತೆ ಉಂಟಾಗಿರುವ ಅಡುಗೆ ಅನಿಲ, ಜಿಲ್ಲೆಯಲ್ಲಿ ಕಾಳಸಂತೆಯಲ್ಲಿ ಮಾರಾಟ ಮಾಡಿದರೆ ಗ್ಯಾಸ್ ಏಜೆನ್ಸಿ (ಡಿಸ್ಟ್ರಿಬ್ಯೂಟರ್) ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಎಚ್ಚರಿಕೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ವಾಣಿಜ್ಯ/ಗೃಹ ಬಳಕೆ ಎಲ್‌ಪಿಜಿ ಸಿಲಿಂಡರ್ ಪೂರೈಕೆಯಲ್ಲಿ ನಿಯಂತ್ರಣ ಮತ್ತು ಮೇಲ್ವಿಚಾರಣೆಗಾಗಿ ಜಿಲ್ಲಾ ಮಟ್ಟದ ಮೇಲ್ವಿಚಾರಣಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಗೃಹ ಬಳಕೆದಾರರಿಗೆ ಫಿಫೋ ಆಧಾರದ ಮೇಲೆ (ಮೊದಲು ನೋಂದಾಯಿಸಿದವರಿಗೆ ಮೊದಲು ವಿತರಣೆ) ಸಿಲಿಂಡರ್ ಪೂರೈಸಬೇಕು. ಅನಧಿಕೃತ ದಾಸ್ತಾನು, ರಿಫಿಲ್ಲಿಂಗ್ ಮಾಡುವುದು ಕಂಡಬಂದಲ್ಲಿ ಅಂತಹವರ ವಿರುದ್ಧ ಅಗತ್ಯ ವಸ್ತುಗಳ ಕಾಯ್ದೆಯಡಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ತಕೀತು ಮಾಡಿದರು.

ಗೃಹ ಬಳಕೆ ಸಿಲಿಂಡರ್‌ಗಳು ಯಾವುದೇ ಕಾರಣಕ್ಕೂ ವಾಣಿಜ್ಯ ಉದ್ದೇಶಕ್ಕೆ ಹೋಟೆಲ್‌ಗಳು ಬಳಸುವಂತಿಲ್ಲ. ಅಹಾರ ಇಲಾಖೆ ಅಧಿಕಾರಿಗಳು ಇದನ್ನು ತಪಾಸಣೆ ಮಾಡಬೇಕು. 25ನೇ ದಿನಕ್ಕೆ ಸಿಲಿಂಡರ್ ಕೊಡಿ. ಸಿಲಿಂಡರ್ ಬುಕ್ಕಿಂಗ್ ಮಾಡಲು ನಗರ ಪ್ರದೇಶದ ಗ್ರಾಹಕರು 25 ದಿನ ಮತ್ತು ಗ್ರಾಮೀಣ ಭಾಗದ ಗ್ರಾಹಕರು 45 ದಿನಗಳ ಅಂತವಿರಬೇಕು. ಆದರೆ



ಹೆಚ್‌ಪಿಸಿಎಲ್ ಕಂಪನಿಯವರು ನಗರದ ಗ್ರಾಹಕರಿಗೆ 45 ದಿನಗಳ ಕಾಲಮಿತಿ ಹೇರಿರುವುದರಿಂದ ಗ್ರಾಹಕರಿಗೆ ತೊಂದರೆಯಾಗುತ್ತಿದೆ ಎಂದು ಅಹಾರ ಇಲಾಖೆ ಪ್ರಭಾರಿ ಉಪನಿರ್ದೇಶಕ ಮುನಾವರ ದೌಲಾ ಡಿಸಿ ಗಮನಕ್ಕೆ ತಂದರು.

ಡಿ.ಸಿ.ಇಕ್ರಮ್ ಶರೀಫ್ ಮಾತನಾಡಿ, ಐಓಸಿಎಲ್, ಬಿಪಿಸಿಎಲ್‌ನವರು 25ನೇ ದಿನಕ್ಕೆ ಸಿಲಿಂಡರ್ ನೀಡುವಾಗ ನಿಮಗೇನು ತೊಂದರೆ ಎಂದು ಅಸಮಾಧಾನ ವ್ಯಕ್ತಪಡಿಸಿ, ನಿಮ್ಮ ಹಂತದಲ್ಲಿ ಈ ರೀತಿಯಾಗಿ ನಿರ್ಧಾರ ತೆಗೆದುಕೊಳ್ಳುವಂತಿಲ್ಲ. 25ನೇ ದಿನಕ್ಕೆ ಇಳಿಸುವಂತೆ ಕಂಪನಿ ಪ್ರತಿನಿಧಿ ಪೃಥ್ವಿ ಅವರಿಗೆ ಖಡಕ್ ಸೂಚನೆ ನೀಡಿದರು.

ಜಿಲ್ಲಾಡಳಿತದ ನಿರ್ದೇಶನ ಪಾಲಿಸಿಜಿಲ್ಲೆಯ ಯಾವುದೇ ಆರೋಗ್ಯ ಸಂಸ್ಥೆಗಳಿಗೆ, ಶಾಲೆ, ವಸತಿ ನಿಲಯ, ಕ್ಯಾಂಟೀನ್‌ಗಳಿಗೆ ಸಿಲಿಂಡರ್ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಎಚ್ಚರಿಕೆ ವಹಿಸಬೇಕು. ಅಗತ್ಯ ಪ್ರಮಾಣದಲ್ಲಿ ದಾಸ್ತಾನಿದ್ದರೂ ಜನ ಆತಂಕಗೊಂಡಿದ್ದು, ಇಂತಹ ಒಂದು ಬಿಕ್ಕಟ್ಟು ಪರಿಸ್ಥಿತಿಯಲ್ಲಿ ಗ್ಯಾಸ್ ಎಜೆನ್ಸಿಗಳು ಜಿಲ್ಲಾಡಳಿತ ನೀಡುವ ನಿರ್ದೇಶನ ಪಾಲಿಸುವ ಮೂಲಕ ಸಹಕಾರ ನೀಡಬೇಕು. ಏಜೆನ್ಸಿಗಳು ಸಾರ್ವಜನಿಕರಿಗೆ ಸಿಲಿಂಡರ್ ಸಮಸ್ಯೆ ಇಲ್ಲ ಎಂಬುದನ್ನು ಖಾತ್ರಿಪಡಿಸಬೇಕ. ಕೂಡಲೆ ಸಹಾಯವಾಣಿ ಸಕ್ರಿಯಗೊಳಿಸಿ ಗ್ರಾಹಕರ ಸಮಸ್ಯೆಗಳಿಗೆ ಕಿವಿಯಾಗಬೇಕು ಎಂದು ಆಹಾರ ಇಲಾಖೆಗೆ ಡಿಸಿ ಸೂಚಿಸಿದರು.

ಆಹಾರ ಇಲಾಖೆಯ ಪ್ರಭಾರಿ ಉಪನಿರ್ದೇಶಕ ಮುನಾವರ್ ದೌಲಾ ಮಾತನಾಡಿ, ಪ್ರಸ್ತುತ ಜಿಲ್ಲೆಯಲ್ಲಿ 47 ಗ್ಯಾಸ್ ಡೀಲರ್‌ಗಳಿದ್ದು, ಇದರಲ್ಲಿ 3,29,674 ಸಿಂಗಲ್ ಸಿಲಿಂಡರ್ ಮತ್ತು 2,32,294 ಡಬಲ್ ಸಿಲಿಂಡರ್ ಗ್ರಾಹಕರಿದ್ದಾರೆ. ಇದಲ್ಲದೆ 10,372 ವಾಣಿಜ್ಯ ಸಿಲಿಂಡರ್ ಗ್ರಾಹಕರಿದ್ದು, 2,68,399 ಪ್ರಧಾನಮಂತ್ರಿ ಉಜ್ವಲ ಯೋಜನೆಯ ಫಲಾನುಭವಿಗಳಿದ್ದಾರೆ. ಪಿ.ಎಂ.ಉಜ್ವಲ್ ಯೋಜನೆಯ ಗ್ರಾಹಕರಿಗೆ 45 ದಿನಕ್ಕೆ ಮತ್ತು ನಗರ ಗ್ರಾಹಕರಿಗೆ ಸಿಲಿಂಡರ್ ಬುಕ್ ಮಾಡಲು ಹಿಂದಿನ ಪೂರೈಕೆಗೆ ಕನಿಷ್ಠ 25 ದಿನ ಅಂತರವಿರಬೇಕು ಎಂದು ಸಭೆಗೆ ಮಾಹಿತಿ ನೀಡಿ, ಗುರುವಾರಕ್ಕೆ 19,158 ಗೃಹ ಬಳಕೆ ಸಿಲಿಂಡರ್ ಮತ್ತು 1,761 ವಾಣಿಜ್ಯ ಸಿಲಿಂಡರ್ ಜಿಲ್ಲೆಯಲ್ಲಿ ದಾಸ್ತಾನು ಇದ್ದು, ಸಿಲಿಂಡರ್ ಸಮಸ್ಯೆ ಇಲ್ಲ. ಸಿಲಿಂಡರ್ ಲಭ್ಯ, ಆತಂಕ ಬೇಡ: ಜಿಲ್ಲೆಯಲ್ಲಿ ಯಾವುದೇ ರೀತಿಯಲ್ಲಿ ಸಿಲಿಂಡರ್ ಕೊರತೆ ಇಲ್ಲ. ನಿತ್ಯ ಬೇಡಿಕೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಕಂಪನಿಗಳು ಸಿಲಿಂಡರ್ ಪೂರೈಸುತ್ತಿವೆ. ಸಾರ್ವಜನಿಕರು ಆತಂಕಗೊಳ್ಳಬಾರದು. ನಗರದ ನಿವಾಸಿಗಳು 25 ದಿನ ಮತ್ತು ಗ್ರಾಮೀಣ ಭಾಗದ ಜನರು 45 ದಿನ ಅವಧಿ ಮೀರಿದ ನಂತರವೇ ಸಿಲಿಂಡರ್ ಬುಕ್ ಮಾಡಬೇಕೆಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಜಿಲ್ಲೆಯ ಜನತೆಯಲ್ಲಿ ಮನವಿ ಮಾಡಿದರು.

**ಸಾರಿಗೆ ವೆಚ್ಚ ಹೆಚ್ಚಳಕ್ಕೆ ಮನವಿ:** ಎಲ್.ಪಿ.ಜಿ. ವಿತರಕರು ಮಾತನಾಡಿ, 2002&03ನೇ ಸಾಲಿನಿಂದ ಅಕ್ಷರ ದಾಸೋಹ ಯೋಜನೆಯಡಿ ಶಾಲೆಗಳಿಗೆ ಸಿಲಿಂಡರ್ ಪೂರೈಕೆ ಮಾಡುತ್ತಿದ್ದು, ಜಿಲ್ಲೆಯಲ್ಲಿ ಪ್ರತಿ ಕಿಮೀಗೆ ಕೇವಲ 1.60 ರೂ. ಸಾರಿಗೆ ವೆಚ್ಚ ನೀಡಲಾಗುತ್ತಿದ್ದು, ಇದು ಇಂದಿನ ದುಬಾರಿ ದಿನದಲ್ಲಿ ನಮಗೆ ಅರ್ಥಿಕ ಹೊರೆಯಾಗಿ ಪರಿಣಮಿಸಿದೆ. ಡೀಸೆಲ್ ಅಂದು 30 ರೂ. ಲೀಟರ್ ಇತ್ತು, ಇಂದು 90 ರೂ.ಗೆ ಏರಿಕೆಯಾಗಿದೆ. ಹೀಗಾಗಿ ಸಾರಿಗೆ ವೆಚ್ಚ ಪ್ರತಿ ಕಿ.ಮೀ 3 ರೂ.ಗಳಿಗೆ ಹೆಚ್ಚಿಸಬೇಕೆಂದು ಡಿಸಿಗೆ ಮನವಿ ಮಾಡಿದರು.

# ಮುಂಗಾರು ಹಂಗಾಮಿನಲ್ಲಿ 4.12 ಲಕ್ಷ ಹೆಕ್ಟೇರ್ ಬಿತ್ತನೆ ಗುರಿ: ದೇವಿಕಾ

**ಬೀದರ್, ಜೂ. 6:** ಈ ವರ್ಷದ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯಲ್ಲಿ 4.12 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಗಿದೆ. ಈಗಾಗಲೇ ಮುಂಗಾರು ಬಿತ್ತನೆಯ ಸಿದ್ಧತೆಗಳು ನಡೆಯುತ್ತಿದ್ದು, ಪೂರ್ಣ ಪ್ರಮಾಣದಲ್ಲಿ ತೇವಾಂಶದ ನಂತರ ಬಿತ್ತನೆ ಆರಂಭಿಸುವಂತೆ ರೈತರಿಗೆ ಸೂಚನೆ ನೀಡಲಾಗಿದೆ ಎಂದು ಜಿಲ್ಲಾ ಜಮಟಿ ಕೃಷಿ ನಿರ್ದೇಶಕಿ ದೇವಿಕಾ ಆರ್. ತಿಳಿಸಿದರು.

ಸುದ್ದಿಗಾರ ರೊಂದಿಗೆ ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಸಮರ್ಪಕ ದಾಸ್ತಾನು ಇದೆ. ಜಿಲ್ಲೆಯ 93 ಪಿಕೆಪಿಎಸ್‌ಗಳಿಗೆ ರಸಗೊಬ್ಬರ ಸರಬರಾಜು ಮಾಡ`ಲಾಗಿದ್ದು, ಉಳಿದ ಪಿಕೆಪಿಎಸ್‌ಗಳಿಗೂ ಆದ್ಯತೆ ಮೇರೆಗೆ ಪೂರೈಕೆ ಮಾಡಲಾಗುವುದು ಹೀಗಾಗಿ ರೈತರು ಆತಂಕಕ್ಕೆ ಒಳಗಾಗಿ ಅಗತ್ಯಕ್ಕಿಂತ ಹೆಚ್ಚು ರಸ ಗೊಬ್ಬರ ಖರೀದಿಸದಂತೆ ರೈತರಲ್ಲಿ ಮನವಿ ಮಾಡಿದರು.

ಜಿಲ್ಲೆಯ ಪಾಲಿನ ರಸಗೊಬ್ಬರ ವನ್ನು ಬೇರೆ ಜಿಲ್ಲೆಗಳಿಗೆ ಮಾರಾಟ ಮಾಡದಂತೆ ಜಿಲ್ಲೆಯ ರಸಗೊಬ್ಬರ ಮಾರಾಟಗಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಅಂತರರಾಜ್ಯ ಗಡಿಯಲ್ಲಿನ ಚೆಕ್ ಪೋಸ್ಟ್‌ಗಳ ಮೂಲಕ ಬೀಜ ಹಾಗೂ ರಸಗೊಬ್ಬರ ಸಾಗಾಣಿಕೆ ಮೇಲೆ ತೀವ್ರ ನಿಗಾ ವಹಿಸಲಾಗಿದೆ.



ನಿಯಮ ಉಲ್ಲಂಘಿಸು ವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದ ಅವರು, ರೈತರು ಡಿಎಪಿ ಗೊಬ್ಬರವನ್ನೇ ಅವಲಂಬಿಸದೆ 20:20:0:13, 12:32:16, 15:15:15 ಸೇರಿದಂತೆ ಇತರ ಸಂಯುಕ್ತ ರಸಗೊಬ್ಬರಗಳನ್ನು ಪರ್ಯಾಯವಾಗಿ ಬಳಸಬೇಕು ಎಂದು ಸಲಹೆ ಮಾಡಿದರು.

30 ರೈತ ಸಂಪರ್ಕ ಕೇಂದ್ರ, 127 ಹೆಚ್ಚುವರಿ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ ಬೀಜ ವಿತರಿಸಲಾಗುತ್ತಿದೆ. ಈವರೆಗೆ 37,800 ಕ್ವಿಂಟಲ್ ಬೀಜ ವಿತರಿಸಲಾಗಿದೆ ಎಂದರು.

# ಮಧ್ಯಪ್ರಾಚ್ಯ ಮತ್ತೊಮ್ಮೆ ಉದ್ವಿಗ್ನ: ಹಾರ್ಮುಜ್‌ಗೆ ಸಾಗುತ್ತಿದ್ದ ಇರಾನ್ ಡ್ರೋನ್ ಉಡಾಯಿಸಿದ ಅಮೆರಿಕ

**ಚಿಪೆವಾ ಫಾಲ್ಸ್, ಜೂ.6:** ಹಾರ್ಮುಜ್ ಜಲಸಂಧಿಯತ್ತ ಸಾಗುತ್ತಿದ್ದ ನಾಲ್ಕು ಇರಾನ್ ಡ್ರೋನ್‌ಗಳನ್ನು ಅಮೆರಿಕ ಸೇನೆ ಹೊಡೆದುರುಳಿಸಿದ್ದು, ಜೊತೆಗೆ ಹಲವು ರಾಡಾರ್ ಕೇಂದ್ರ್ರಗಳ ಮೇಲೆ ವೈಮಾನಿಕ ದಾಳಿ ನಡೆಸಿದೆ.

ಇದರೊಂದಿಗೆ ಮಧ್ಯಪ್ರಾಚ್ಯದಲ್ಲಿ ಮತ್ತೊಮ್ಮೆ ಉದ್ವಿಗ್ನ ಪರಿಸ್ಥಿತಿ ನಿರ್ಮಾಣವಾಗಿದೆ. ಈ ಬೆಳವಣಿಗೆ ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಕದನ ವಿರಾಮ ಒಪ್ಪಂದಕ್ಕೆ ಹೊಸ ಸವಾಲು ಎದುರು ಮಾಡಿದೆ.

ಅಮೆರಿಕದ ಸೆಂಟ್ರಲ್ ಕಮಾಂಡ್ ನೀಡಿರುವ ಮಾಹಿತಿಯ ಪ್ರಕಾರ, ಇರಾನ್‌ನಿಂದ ಉಡಾಯಿಸಲಾದ ಡ್ರೋನ್‌ಗಳು ಹಾರ್ಮುಜ್ ಜಲಸಂಧಿಯಲ್ಲಿ ಸಂಚರಿಸುತ್ತಿದ್ದ ಹಡಗುಗಳಿಗೆ ಹಾಗೂ ಅಂತರರಾಷ್ಟ್ರೀಯ ಸಾಗರ ಸಂಚಾರಕ್ಕೆ ತಕ್ಷಣದ ಅಪಾಯವನ್ನು ಉಂಟುಮಾಡಿದ್ದವು. ಈ ಹಿನ್ನೆಲೆಯಲ್ಲಿ ಅವುಗಳನ್ನು ಗುರಿಯಾಗಿಸಿ ಹೊಡೆದುರುಳಿಸಲಾಗಿದೆ ಎಂದು ತಿಳಿಸಿದೆ. ಹಾರ್ಮುಜ್ ಜಲಸಂಧಿ ಜಾಗತಿಕ ತೈಲ ಮತ್ತು ನೈಸರ್ಗಿಕ ಅನಿಲ ಸಾಗಣೆಗೆ ಅತ್ಯಂತ ಪ್ರಮುಖ ಮಾರ್ಗವಾಗಿದೆ. ವಿಶ್ವದ ಬಹುಪಾಲು ತೈಲ ರಫ್ತು ಇದೇ ಮಾರ್ಗದ ಮೂಲಕ ಸಾಗುತ್ತದೆ. ಇತ್ತೀಚಿನ ದಿನಗಳಲ್ಲಿ ಈ ಪ್ರದೇಶದಲ್ಲಿ ಇರಾನ್ ತನ್ನ ಪ್ರಭಾವವನ್ನು ಹೆಚ್ಚಿಸಲು ಪ್ರಯತ್ನಿಸುತ್ತಿದೆ ಎಂದು ಅಮೆರಿಕಾ ಆರೋಪಿಸಿದ್ದು, ಇದರಿಂದ ಜಾಗತಿಕ ಇಂಧನ ಮಾರುಕಟ್ಟೆಯಲ್ಲಿ ಬೆಲೆ ಏರಿಕೆಯೂ ಕಂಡುಬಂದಿದೆ. ಇರಾನ್‌ನ ಬಂದರುಗಳ ವಿರುದ್ಧ ಅಮೆರಿಕಾ ಈಗಾಗಲೇ ನಿರ್ಬಂಧ ಕ್ರಮಗಳನ್ನು ಜಾರಿಗೆ ತಂದಿದ್ದು, ಈ ಹಿನ್ನೆಲೆಯಲ್ಲಿ ಎರಡೂ ರಾಷ್ಟ್ರಗಳ ನಡುವಿನ ಸಂಘರ್ಷ ಮತ್ತಷ್ಟು ತೀವ್ರವಾಗುವ ಸಾಧ್ಯತೆ ಹೆಚ್ಚಾಗಿದೆ.

**ರಾಡಾರ್ ಕೇಂದ್ರ್ರಗಳ ಮೇಲೆ ಅಮೆರಿಕಾ ದಾಳಿ:** ಡ್ರೋನ್ ದಾಳಿಯ ಬಳಿಕ ಅಮೆರಿಕ ಸೇನೆ ಇರಾನ್‌ನ ರಾಡಾರ್ ಕೇಂದ್ರ್ರಗಳ ಮೇಲೆ ಕ್ಷಿಪಣಿ ದಾಳಿ ನಡೆಸಿದೆ. ಹಾರ್ಮುಜ್ ಜಲಸಂಧಿಯಲ್ಲಿರುವ ಒಂದು ದ್ವೀಪದ ಮೇಲಿನ ರಡಾರ್ ವ್ಯವಸ್ಥೆಯನ್ನೂ ಗುರಿಯಾಗಿಸಲಾಗಿದೆ. ಮುಂದಿನ ದಾಳಿಗಳನ್ನು ತಡೆಯಲು ಮತ್ತು ಸಮುದ್ರ ಭದ್ರತೆಯನ್ನು ಕಾಪಾಡಲು ಈ ಕ್ರಮ ಕೈಗೊಳ್ಳಲಾಗಿದೆ ಎಂದು ಅಮೆರಿಕ ಸ್ಪಷ್ಟಪಡಿಸಿದೆ.

**ಕುವೈತ್ ವಿಮಾನ ನಿಲ್ದಾಣದ ಮೇಲೆ ಡ್ರೋನ್ ದಾಳಿ:** ಈ ವಾರದ ಆರಂಭದಲ್ಲಿ ಇರಾನ್ ಬೆಂಬಲಿತ ಡ್ರೋನ್‌ಗಳು ಕುವೈತ್‌ನ ಪ್ರಮುಖ ವಿಮಾನ ನಿಲ್ದಾಣದ ಪ್ರಯಾಣಿಕರ ಟರ್ಮಿನಲ್ ಮೇಲೆ ದಾಳಿ ನಡೆಸಿದ್ದವು. ಈ ಘಟನೆಯಲ್ಲಿ ಒಬ್ಬರು ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದರು. ಅಲ್ಲದೆ, ಕೆಲಕಾಲ ವಿಮಾನ ಸಂಚಾರವೂ ಸ್ಥಗಿತಗೊಂಡಿತ್ತು.



ಈ ಘಟನೆಯ ಬಳಿಕ ಮಧ್ಯಪ್ರಾಚ್ಯದ ಭದ್ರತಾ ಪರಿಸ್ಥಿತಿ ಬಗ್ಗೆ ಜಾಗತಿಕ ಮಟ್ಟದಲ್ಲಿ ಕಳವಳ ವ್ಯಕ್ತವಾಗಿದೆ. ಈ ಬೆಳವಣಿಗೆಗಳ ನಡುವೆಯೂ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪರಿಸ್ಥಿತಿ ನಿಯಂತ್ರಣದಲ್ಲಿದೆ ಎಂದು ತಿಳಿಸಿದ್ದಾರೆ. ವಿಸ್ಕಾನ್ಸಿನ್‌ನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, "ಇರಾನ್ ವಿಚಾರದಲ್ಲಿ ಪರಿಸ್ಥಿತಿ ಉತ್ತಮವಾಗಿ ಸಾಗುತ್ತಿದೆ. ಒಪ್ಪಂದದ ಮೂಲಕವಾಗಲಿ ಅಥವಾ ಕಠಿಣ ಕ್ರಮಗಳ ಮೂಲಕವಾಗಲಿ ನಾವು ಬಲಿಷ್ಠ ಫಲಿತಾಂಶದೊಂದಿಗೆ ಹೊರಬರುತ್ತೇವೆ ಎಂದು ಹೇಳಿದ್ದಾರೆ. ಇರಾನ್‌ನ ಕ್ಷಿಪಣಿ ಸಾಮರ್ಥ್ಯ ಈಗಾಗಲೇ ಬಹಳ ಮಟ್ಟಿಗೆ ಕುಗ್ಗಿದ್ದು, ಅವರ ಬಳಿ 21ರಿಂದ 22 ಶೇಕಡಾ ಕ್ಷಿಪಣಿಗಳು ಮಾತ್ರ ಉಳಿದಿವೆ ಎಂದು ಟ್ರಂಪ್ ಹೇಳಿದ್ದಾರೆ.

**ಅಣು ಕಾರ್ಯಕ್ರಮದ ಮಾತುಕತೆ ಅಸ್ಪಷ್ಟ:** ಅಮೆರಿಕಾ ಮತ್ತು ಇರಾನ್ ನಡುವೆ ಒಂದು ವಾರದ ಹಿಂದೆ 60 ದಿನಗಳ ಕದನ ವಿರಾಮ ವಿಸ್ತರಣೆ ಹಾಗೂ ಇರಾನ್‌ನ ಅಣ್ವಸ್ತ್ರ ಹೊಂದುವ ಯೋಜನೆ ಕುರಿತು ಮತ್ತೊಂದು ಸುತ್ತಿನ ಮಾತುಕತೆ ಆರಂಭಿಸುವ ಬಗ್ಗೆ ತಾತ್ಕಾಲಿಕ ಒಪ್ಪಂದ ಮೂಡಿತ್ತು. ಆದರೆ, ಟ್ರಂಪ್ ಆಡಳಿತ ಕೆಲವು ಹೊಸ ಷರತ್ತುಗಳನ್ನು ಮುಂದಿಟ್ಟಿರುವ ಕಾರಣ ಒಪ್ಪಂದ ಅಂತಿಮಗೊಳ್ಳುವುದು ವಿಳಂಬವಾಗುತ್ತಿದೆ. ಇರಾನ್ ತನ್ನ ಸ್ವಾಯತ್ತತೆ ಮತ್ತು ರಾಷ್ಟ್ರೀಯ ಗೌರವಕ್ಕೆ ಧಕ್ಕೆಯಾಗುವ ಯಾವುದೇ ಷರತ್ತುಗಳನ್ನು ಒಪ್ಪಿಕೊಳ್ಳಲು ಸಿದ್ಧವಿಲ್ಲ ಎಂಬ ಸಂದೇಶವನ್ನು ನೀಡುತ್ತಿರುವುದರಿಂದ ಮಾತುಕತೆಗಳು ಸಂಕೀರ್ಣ ಹಂತ ತಲುಪಿವೆ.

**ಲೆಬನಾನ್‌ನಲ್ಲಿ ಮತ್ತೆ ಉಲ್ಬಣಗೊಂಡ ಪರಿಸ್ಥಿತಿ:** ಇದರ ನಡುವೆ ಅಮೆರಿಕಾ ಮಧ್ಯಸ್ಥಿಕೆಯಲ್ಲಿ ಇಸ್ರೇಲ್ ಮತ್ತು ಲೆಬನಾನ್ ನಡುವೆ ಕದನ ವಿರಾಮ ಒಪ್ಪಂದವಾಗಿದ್ದರೂ, ಇರಾನ್ ಬೆಂಬಲಿತ ಹಿಜ್ಬುಲ್ಲಾ ಅದನ್ನು ತಿರಸ್ಕರಿಸಿದೆ. ಶುಕ್ರವಾರ ದಕ್ಷಿಣ ಲೆಬನಾನ್‌ನ ಹಲವು ಪ್ರದೇಶಗಳ ಮೇಲೆ ಇಸ್ರೇಲ್ ಸೇನೆ ವೈಮಾನಿಕ ದಾಳಿ ನಡೆಸಿದ್ದು, ಕನಿಷ್ಠ ಒಂಬತ್ತು ಮಂದಿ ಸಾವನ್ನಪ್ಪಿದ್ದಾರೆ. ಹಲವಾರು ಗ್ರಾಮಗಳಿಗೆ ಸ್ಥಳಾಂತರಗೊಳ್ಳುವಂತೆ ಎಚ್ಚರಿಕೆಯನ್ನೂ ನೀಡಲಾಗಿದೆ.

**ಹೊಸ ನಿರ್ಬಂಧಗಳು:** ಇದರ ಜೊತೆಗೆ ಹಿಂದೂ ಮಹಾಸಾಗರದಲ್ಲಿ ಇರಾನ್‌ಗೆ ಸಂಬಂಧಿಸಿದ ನಿರ್ಬಂಧಿತ ತೈಲ ಟ್ಯಾಂಕರ್‌ವೊಂದನ್ನು ಅಮೆರಿಕ ಪಡೆ ವಶಪಡಿಸಿಕೊಂಡಿದೆ. ಇರಾನ್ ತನ್ನ ತೈಲ ಮಾರಾಟದಿಂದ ಆದಾಯ ಗಳಿಸುವುದನ್ನು ತಡೆಯಲು ಅಮೆರಿಕಾ ಹೊಸ ಆರ್ಥಿಕ ನಿರ್ಬಂಧಗಳನ್ನು ಘೋಷಿಸಿದ್ದು, ಹಲವಾರು ಕಂಪನಿಗಳು, ವ್ಯಕ್ತಿಗಳು ಮತ್ತು ಹಡಗುಗಳ ಮೇಲೆ ಕ್ರಮ ಕೈಗೊಂಡಿದೆ. ಹಾರ್ಮುಜ್ ಜಲಸಂಧಿಯಲ್ಲಿ ನಡೆದ ಈ ಹೊಸ ಘರ್ಷಣೆ ಮಧ್ಯಪ್ರಾಚ್ಯದ ಭದ್ರತಾ ಪರಿಸ್ಥಿತಿ ಯನ್ನು ಮತ್ತಷ್ಟು ಸಂಕೀರ್ಣಗೊಳಿಸಿದೆ.

# ಪಾಕ್ ಆರೋಪ ಆಧಾರರಹಿತ: ಭಾರತ



**ನ್ಯೂಯಾರ್ಕ್, ಜೂ.6:** ಜಮ್ಮು–ಕಾಶ್ಮೀರ ವಿಚಾರವನ್ನು ಮತ್ತೆ ವಿಶ್ವಸಂಸ್ಥೆಯ ವೇದಿಕೆಯಲ್ಲಿ ಪ್ರಸ್ತಾಪಿಸಿದ ಪಾಕಿಸ್ತಾನಕ್ಕೆ ಭಾರತ ತಿರುಗೇಟು ನೀಡಿದೆ. ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ನಡೆದ ಚರ್ಚೆಯ ವೇಳೆ ಪಾಕಿಸ್ತಾನದ ಪ್ರತಿನಿಧಿಗಳು ಜಮ್ಮು–ಕಾಶ್ಮೀರ ಕುರಿತು ಉಲ್ಲೇಖ ಮಾಡುತ್ತಿದ್ದಂತೆ, ಭಾರತದ ಕಾಯಂ ಪ್ರತಿನಿಧಿ ಪಿ. ಹರೀಶ್ ಅವರು ಭಾರತದ ನಿಲುವನ್ನು ಸ್ಪಷ್ಟಪಡಿಸಿದರು.

ಜಮ್ಮು–ಕಾಶ್ಮೀರವು ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗವಾಗಿದ್ದು, ಅದು ಯಾವಾಗಲೂ ಭಾರತದ ಭಾಗವಾಗಿತ್ತು. ಮುಂದೆಯೂ ಭಾರತದ ಭಾಗವಾಗಿಯೇ ಉಳಿಯಲಿದೆ ಎಂದು ಹೇಳಿದರು.

ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ವಾರ್ಷಿಕ ವರದಿ ಕುರಿತ ಚರ್ಚೆಯಲ್ಲಿ ಪಾಕಿಸ್ತಾನದ ಶಾಶ್ವತ ಪ್ರತಿನಿಧಿ ಆಸಿಂ ಇಫ್ತಿಖಾರ್ ಅಹ್ಮದ್ ಅವರು ಕಾಶ್ಮೀರ ವಿಷಯವನ್ನು ಪ್ರಸ್ತಾಪಿಸಿದ್ದರು. ಇದಕ್ಕೆ ಪ್ರತಿಕ್ರಿಯಿಸಿದ ಭಾರತ, ಕಾಶ್ಮೀರಕ್ಕೆ ಸಂಬಂಧಿಸಿದ ಎಲ್ಲ ವಿಚಾರಗಳೂ ಭಾರತದ ಆಂತರಿಕ ವಿಷಯಗಳಾಗಿದ್ದು, ಈ ಕುರಿತು ಪಾಕಿಸ್ತಾನ ಮಾಡುತ್ತಿರುವ ಆರೋಪಗಳು ಮತ್ತು ಹೇಳಿಕೆಗಳು ಸಂಪೂರ್ಣವಾಗಿ ಆಧಾರರಹಿತವಾಗಿವೆ ಎಂದು ತಿಳಿಸಿತು. ಪಿ. ಹರೀಶ್ ಅವರು ತಮ್ಮ ಉತ್ತರದಲ್ಲಿ, ಕಾಶ್ಮೀರ ಕುರಿತು ಪಾಕಿಸ್ತಾನ ಹರಡುತ್ತಿರುವ ಕಥನಗಳು ಐತಿಹಾಸಿಕ ಸತ್ಯಗಳಿಗೆ ವಿರುದ್ಧವಾಗಿವೆ. ಖಾಲಿ ಭಾಷಣಗಳು, ರಾಜಕೀಯ ಪ್ರೇರಿತ ಆರೋಪಗಳು ಮತ್ತು ಸುಳ್ಳು ಪ್ರಚಾರಗಳಿಂದ ವಾಸ್ತವವನ್ನು ಬದಲಾಯಿಸಲು ಸಾಧ್ಯವಿಲ್ಲ. ಜಮ್ಮು–ಕಾಶ್ಮೀರ ಭಾರತದ ಭಾಗ ಎಂಬುದೇ ಸತ್ಯ ಎಂದು ಒತ್ತಿ ಹೇಳಿದರು.

ಇದೇ ವೇಳೆ ಪಾಕಿಸ್ತಾನ ಪ್ರಸ್ತುತ ವಿಶ್ವಸಂಸ್ಥೆಯ ಭದ್ರತಾ ಮಂಡಳಿಯ ತಾತ್ಕಾಲಿಕ ಸದಸ್ಯ ರಾಷ್ಟ್ರವಾಗಿರುವುದನ್ನು ಉಲ್ಲೇಖಿಸಿದ ಅವರು, ಅಂತಹ ಸ್ಥಾನಮಾನ ಹೊಂದಿರುವ ದೇಶಗಳು ಹೆಚ್ಚು ಜವಾಬ್ದಾರಿಯಿಂದ ವರ್ತಿಸಬೇಕು. ಆದರೆ, ಪಾಕಿಸ್ತಾನ ವಿಶ್ವಸಂಸ್ಥೆಯಂತಹ ಗೌರವಾನ್ವಿತ ವೇದಿಕೆಗಳನ್ನೇ ತನ್ನ ರಾಜಕೀಯ ಉದ್ದೇಶಗಳಿಗಾಗಿ ಬಳಸಿಕೊಳ್ಳುತ್ತಿದೆ ಎಂದು ಟೀಕಿಸಿದರು. ಭದ್ರತಾ ಮಂಡಳಿಯ ಸದಸ್ಯತ್ವದೊಂದಿಗೆ ಬರುವ ಜವಾಬ್ದಾರಿಯನ್ನು ಪಾಕಿಸ್ತಾನ ಅರಿತುಕೊಳ್ಳಬೇಕು ಎಂದೂ ತಿರುಗೇಟು ನೀಡಿದರು. ಈ ಬೆಳವಣಿಗೆಯ ನಡುವೆಯೇ ಗಿಲ್ಗಿಟ್–ಬಾಲ್ಟಿಸ್ತಾನ್ ಪ್ರದೇಶದಲ್ಲಿ ಜೂನ್ 7ರಂದು ನಡೆಯಲಿರುವ ವಿಧಾನಸಭಾ ಚುನಾವಣೆಗಳ ವಿಚಾರದಲ್ಲಿಯೂ ಭಾರತ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ.

ಭಾರತದ ವಿದೇಶಾಂಗ ಸಚಿವಾಲಯ, ಗಿಲ್ಗಿಟ್–ಬಾಲ್ಟಿಸ್ತಾನ್ ಭಾರತದ ಭೂಭಾಗವಾಗಿದ್ದು, ಅದನ್ನು ಪಾಕಿಸ್ತಾನ ಅಕ್ರಮವಾಗಿ ಮತ್ತು ಬಲವಂತವಾಗಿ ತನ್ನ ವಶದಲ್ಲಿಟ್ಟುಕೊಂಡಿದೆ. ಅಂತಹ ಪ್ರದೇಶದಲ್ಲಿ ಚುನಾವಣೆಗಳನ್ನು ನಡೆಸುವುದು ಕಾನೂನುಬಾಹಿರ ಕ್ರಮವಾಗಿದ್ದು, ಭಾರತದ ಸಾರ್ವಭೌಮತ್ವಕ್ಕೆ ವಿರುದ್ಧವಾಗಿದೆ ಎಂದು ಹೇಳಿದೆ. ಗಿಲ್ಗಿಟ್–ಬಾಲ್ಟಿಸ್ತಾನ್ ಮತ್ತು ಪಾಕಿಸ್ತಾನದ ನಿಯಂತ್ರಣದಲ್ಲಿರುವ ಇತರ ಪ್ರದೇಶಗಳಲ್ಲಿ ಮಾನವ ಹಕ್ಕುಗಳ ಉಲ್ಲಂಘನೆ, ರಾಜಕೀಯ ದಮನ, ಆರ್ಥಿಕ ಶೋಷಣೆ ಮತ್ತು ನಾಗರಿಕ ಸ್ವಾತಂತ್ರ್ಯದ ಕೊರತೆಯಂತಹ ಸಮಸ್ಯೆಗಳಿವೆ. ಚುನಾವಣೆಗಳನ್ನು ನಡೆಸುವ ಮೂಲಕ ಈ ವಾಸ್ತವಗಳನ್ನು ಮರೆಮಾಚಲು ಸಾಧ್ಯವಿಲ್ಲ ಎಂದು ಅಭಿಪ್ರಾಯಪಟ್ಟಿದೆ.

# ಇರಾನ್ ಜೊತೆ ಅಮೆರಿಕ ಇನ್ನೂ ಒಪ್ಪಂದಕ್ಕೆ ಬರಬೇಕಿದೆ: ಟ್ರಂಪ್

**ಚಿಪ್ಪೆವಾ ಜಲಪಾತ, ಜೂ.6:** ನಡೆಯುತ್ತಿರುವ ಯುದ್ಧವನ್ನು ಕೊನೆಗೊಳಿಸಲು ಇರಾನ್ ನಾಯಕತ್ವವು ವಾಷಿಂಗ್ಟನ್ ಜೊತೆ ಇನ್ನೂ ಒಪ್ಪಂದಕ್ಕೆ ಬರಬೇಕಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶುಕ್ರವಾರ ಹೇಳಿದ್ದಾರೆ ಏಕೆಂದರೆ ಅವರು "ಬಲವಾದ" ಮತ್ತು "ಹೆಮ್ಮೆ" ಹೊಂದಿದ್ದಾರೆ, ಕೊನೆಯಲ್ಲಿ "ಅವರಿಗೆ ಒಪ್ಪಂದ ಮಾಡಿಕೊಳ್ಳುವುದನ್ನು ಬಿಟ್ಟು ಬೇರೆ ದಾರಿಯಿಲ್ಲ" ಎಂದು ಟೀಕಿಸಿದರು.

"ಅವರು ಬಲಿಷ್ಠರು, ಅವರು ಹೆಮ್ಮೆಪಡುತ್ತಾರೆ, ಅವರು ಎಂದಿಗೂ ಯೋಚಿಸದ ಕೆಲಸಗಳನ್ನು ಅವರು ಮಾಡಬೇಕಾಗುತ್ತದೆ. ಅವರಿಗೆ ಯಾವುದೇ ಆಯ್ಕೆ ಇಲ್ಲ, ಮತ್ತು ಇದು ಸ್ವಲ್ಪ ಸಮಯ ತೆಗೆದುಕೊಳ್ಳುತ್ತದೆ" ಎಂದು ಟ್ರಂಪ್ ಹೇಳಿದರು. ಯುದ್ಧವನ್ನು ಕೊನೆಗೊಳಿಸಲು ಟೆಹಾನ್ ಮತ್ತು ವಾಷಿಂಗ್ಟನ್ ನಡುವಿನ ಮಾತುಕತೆಗಳು ಕಳೆದ ವಾರ ನಾಲ್ಕನೇ ತಿಂಗಳಿಗೆ ತಲುಪಿರುವಾಗ ಅಮೆರಿಕ ನಾಯಕನ ಹೇಳಿಕೆಗಳು ಬಂದಿವೆ, ಆದರೂ ಯಾವುದೇ ಅಂತ್ಯವಿಲ್ಲ ಎಂದು ತೋರುತ್ತದೆ, ಏಪ್ರಿಲ್‌ನಲ್ಲಿ ಕದನ ವಿರಾಮವನ್ನು ತಲುಪಿದ ನಂತರ ಎರಡೂ ರಾಷ್ಟ್ರಗಳು ರಾಜತಾಂತ್ರಿಕ ಬಿಕ್ಕಟ್ಟಿನಲ್ಲಿ ಸಿಲುಕಿವೆ. ದುರ್ಬಲವಾದ ಕದನ ವಿರಾಮಕ್ಕೆ ಮತ್ತಷ್ಟು ಬೆದರಿಕೆ ಹಾಕುತ್ತಾ, ಇತ್ತೀಚಿನ ದಿನಗಳಲ್ಲಿ ಎರಡೂ ಕಡೆಯವರು ಹಾರ್ಮುಜ್ ಜಲಸಂಧಿಯ ಬಳಿ ದಾಳಿ ಮಾಡಿದಾಗ ಎರಡೂ ಕಡೆಯವರ ನಡುವೆ ಉದ್ವಿಗ್ನತೆ ಭುಗಿಲೆದ್ದಿತು. ಟೆಹ್ರಾನ್‌ನ ಪರಮಾಣು ಮತ್ತು ಕ್ಷಿಪಣಿ ಕಾರ್ಯಕ್ರಮವು ಗಣನೀಯ ಹಾನಿಯನ್ನು ಎದುರಿಸಿದ್ದರೂ, ವಾಷಿಂಗ್ಟನ್ ಮತ್ತು ಜೆರುಸಲೆಮ್ ನಿರೀಕ್ಷಿಸಿದ್ದಕ್ಕಿಂತ ಪರಿಣಾಮವು ತುಂಬಾ ಕಡಿಮೆಯಾಗಿದೆ, ಏಕೆಂದರೆ ಅದು ತನ್ನ ಅಪಾರ ಸಮೃದ್ಧ ಯುರೇನಿಯಂ ಸಂಗ್ರಹವನ್ನು ಉಳಿಸಿಕೊಂಡಿದೆ ಮತ್ತು ಅದರ ಮಿಲಿಟರಿ ಮೂಲಸೌಕರ್ಯಕ್ಕೆ ಭಾರೀ ಹಾನಿಯ ಹೊರತಾಗಿಯೂ ಸಾವಿರಾರು ಡ್ರೋನ್ ಮತ್ತು ಕ್ಷಿಪಣಿಗಳನ್ನು ಹೊಂದಿದೆ. ಇರಾನ್ ಪ್ರಮುಖ ಜಲಮಾರ್ಗವನ್ನು ಮುಚ್ಚಿದ ನಂತರ, ಯುಎಸ್ ಮತ್ತು ಪ್ರಪಂಚದಾದ್ಯಂತ ತೈಲ ಮತ್ತು ಅನಿಲ ಬೆಲೆಗಳು ಗಗನಕ್ಕೇರುತ್ತಿರುವ ನಡುವೆ, ಪರಿಣಾಮವಾಗಿ ದೇಶೀಯ ಮತ್ತು ಜಾಗತಿಕ ಒತ್ತಡವನ್ನು ಕಡಿಮೆ ಮಾಡಲು ಸಂಘರ್ಷವನ್ನು ನಿಲ್ಲಿಸಲು ವಾಷಿಂಗ್ಟನ್ ಹೆಚ್ಚಿನ ಒತ್ತಡವನ್ನು ಎದುರಿಸುತ್ತಿದೆ.

# ಅಮೆರಿಕದಿಂದ 4,600 ಭಾರತೀಯರ ಗಡಿಪಾರು

**ವಾಷಿಂಗ್ಟನ್, ಜೂ. 6:** 2025ರ ಜನವರಿಯಲ್ಲಿ ಅಮೆರಿಕ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಅಧಿಕಾರ ವಹಿಸಿಕೊಂಡಾಗಿನಿಂದ ಈವರೆಗೆ 4,600ಕ್ಕೂ ಹೆಚ್ಚು ಭಾರತೀಯರನ್ನು ಅಮೆರಿಕದಿಂದ ಗಡಿಪಾರು ಮಾಡಲಾಗಿದೆ. ಈ ಬಗ್ಗೆ ಸ್ವತಃ ಭಾರತೀಯ ವಿದೇಶಾಂಗ ವ್ಯವಹಾರಗಳ ಸಚಿವಾಲಯವೇ ಮಾಹಿತಿ ನೀಡಿದೆ.

ಸಚಿವಾಲಯದ ಅಧಿಕೃತ ವಕ್ತಾರ ರಣಧೀರ್ ಜೈಸ್ವಾಲ್ ಅವರು ಸುದ್ದಿಗಾರರ ಪ್ರಶ್ನೆಗಳಿಗೆ ಉತ್ತರ ನೀಡಿದ್ದು, 2025ರಲ್ಲಿ ಒಟ್ಟು 3,567 ಭಾರತೀಯ ಪ್ರಜೆಗಳನ್ನು ಅಮೆರಿಕದಿಂದ ಭಾರತಕ್ಕೆ ಗಡಿಪಾರು ಮಾಡಲಾಗಿತ್ತು. ಈ ವರ್ಷದಲ್ಲಿ (2026) ಇದುವರೆಗೆ ಒಟ್ಟು 1,076 ಮಂದಿ ಗಡಿಪಾರು ಮಾಡಲಾಗಿದೆ ಎಂದು ತಿಳಿಸಿದ್ದಾರೆ.




ನ್ಯೂ ಚಂಡೀಗಢದ ಮುಲ್ಲನ್‌ಪುರದಲ್ಲಿ ಶನಿವಾರ ಭಾರತ ಮತ್ತು ಅಫ್ಘಾನಿಸ್ತಾನ ನಡುವಿನ ಟೆಸ್ಟ್ ಕ್ರಿಕೆಟ್ ಪಂದ್ಯಕ್ಕೂ ಮುನ್ನ ಟ್ರೋಫಿಯೊಂದಿಗೆ ಛಾಯಾಚಿತ್ರಗಳಿಗೆ ಪೋಸ್ ನೀಡಿದ ಭಾರತದ ನಾಯಕ ಶುಭಮನ್ ಗಿಲ್ ಮತ್ತು ಅಫ್ಘಾನಿಸ್ತಾನ ನಾಯಕ ಹಶ್ಮತ್‌ಉಲ್ಲಾ ಶಾಹಿದಿ.

# ಸಚಿನ್ ದಾಖಲೆ ಮುರಿದ ವೈಭವ್ ಸೂರ್ಯವಂಶಿ

**ನವದೆಹಲಿ, ಜೂ.6:** ಐಪಿಎಲ್ 2026ರಲ್ಲಿ ಅದ್ಭುತ ಪ್ರದರ್ಶನ ನೀಡಿ ಎಲ್ಲರ ಗಮನ ಸೆಳೆದಿರುವ ಬಿಹಾರದ 15 ವರ್ಷದ ಕ್ರಿಕೆಟ್ ಪ್ರತಿಭೆ ವೈಭವ್ ಸೂರ್ಯವಂಶಿಗೆ ಈಗ ಭಾರತ ತಂಡದಿಂದ ಕರೆ ಬಂದಿದ್ದು, ಆ ಮೂಲಕ 37 ವರ್ಷಗಳ ಹಳೆಯ ಸಚಿನ್ ತೆಂಡೂಲ್ಕರ್ ದಾಖಲೆ ಮುರಿದಂತಾಗಿದೆ.



ಭಾರತೀಯ ಕ್ರಿಕೆಟ್‌ನಲ್ಲಿ ಮತ್ತೊಂದು ಐತಿಹಾಸಿಕ ಕ್ಷಣಕ್ಕೆ 15 ವರ್ಷದ ವೈಭವ್ ಸೂರ್ಯವಂಶಿ ಸಾಕ್ಷಿಯಾಗಿದ್ದಾರೆ. ಐಪಿಎಲ್ 2026ರಲ್ಲಿ ಆರೆಂಜ್ ಕ್ಯಾಪ್ ಗೆದ್ದು ಸಂಚಲನ ಮೂಡಿಸಿದ್ದ ಈ ಯುವ ಬ್ಯಾಟರ್, ಇದೀಗ ಕ್ರಿಕೆಟ್ ದಿಗ್ಗಜ ಸಚಿನ್ ತೆಂಡೂಲ್ಕರ್ ಅವರ ಹೆಸರಿನಲ್ಲಿದ್ದ ವಿಶೇಷ ದಾಖಲೆಯನ್ನು ಮುರಿದು ಹೊಸ ಇತಿಹಾಸ ಬರೆದಿದ್ದಾರೆ.

ಐರ್ಲೆಂಡ್ ಮತ್ತು ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಗೆ ಭಾರತ ತಂಡದಲ್ಲಿ ಸ್ಥಾನ ಪಡೆದಿರುವ ವೈಭವ್, ಕೇವಲ 15ನೇ ವಯಸ್ಸಿನಲ್ಲಿ ರಾಷ್ಟ್ರೀಯ ತಂಡಕ್ಕೆ ಆಯ್ಕೆಯಾಗುವ ಮೂಲಕ, ಅತಿ ಕಿರಿಯ ವಯಸ್ಸಿನಲ್ಲಿ ಭಾರತದ ಹಿರಿಯ ಪುರುಷರ ತಂಡಕ್ಕೆ ಆಯ್ಕೆಯಾದ ಆಟಗಾರರ ಪಟ್ಟಿಯಲ್ಲಿ ಸಚಿನ್ ತೆಂಡೂಲ್ಕರ್ ಅವರ ದಾಖಲೆಯನ್ನು ಹಿಂದಿಕ್ಕಿದ್ದಾರೆ. ಅಂತೆಯೇ ಚಿಕ್ಕ ವಯಸ್ಸಿನಲ್ಲೇ ರಾಷ್ಟ್ರೀಯ ತಂಡಕ್ಕೆ ಆಯ್ಕೆಯಾದ ಭಾರತದ ಮೊದಲ ಆಟಗಾರ ಎಂಬ ಕೀರ್ತಿಗೂ ಭಾಜನರಾಗಿದ್ದಾರೆ.

ಐಪಿಎಲ್ 2026ರಲ್ಲಿ ವೈಭವ್ ಸೂರ್ಯವಂಶಿ ಅಬ್ಬರದ ಬ್ಯಾಟಿಂಗ್ ಪ್ರದರ್ಶನ ನೀಡಿದ್ದರು. 16 ಇನ್ನಿಂಗ್ಸ್‌ಗಳಲ್ಲಿ 776 ರನ್‌ಗಳನ್ನು 237.30ರ ಸ್ಟ್ರೈಕ್ ರೇಟ್‌ನಲ್ಲಿ ಕಲೆಹಾಕಿದ್ದ ಅವರು, ದಾಖಲೆಯ 72 ಸಿಕ್ಸರ್‌ಗಳನ್ನು ಸಿಡಿಸಿ ಆರೆಂಜ್ ಕ್ಯಾಪ್ ತಮ್ಮದಾಗಿಸಿಕೊಂಡಿದ್ದರು. ಅವರ ಸ್ಫೋಟಕ ಪ್ರದರ್ಶನವೇ ರಾಷ್ಟ್ರೀಯ ಆಯ್ಕೆದಾರರ ಗಮನ ಸೆಳೆದಿತ್ತು.

**ಏಕ್ ಬಿಹಾರಿ, ಸಬ್ ಪೇ ಭಾರಿ**

ವೈಭವ್ ಅವರ ಈ ಸಾಧನೆ ಕೇವಲ ವೈಯಕ್ತಿಕ ಯಶಸ್ಸಲ್ಲ, ಬಿಹಾರ ರಾಜ್ಯದ ಕ್ರಿಕೆಟ್ ಇತಿಹಾಸದಲ್ಲಿಯೂ ಹೊಸ ಅಧ್ಯಾಯವನ್ನು ಬರೆದಿದೆ. ಸಾಮಾಜಿಕ ಜಾಲತಾಣಗಳಲ್ಲಿ ಅಭಿಮಾನಿಗಳು "ಏಕ್ ಬಿಹಾರಿ, ಸಬ್ ಪೇ ಭಾರಿ" ಎಂಬ ಘೋಷಣೆಯೊಂದಿಗೆ ಯುವ ಪ್ರತಿಭೆಗೆ ಅಭಿನಂದನೆ ಸಲ್ಲಿಸುತ್ತಿದ್ದಾರೆ. ಕ್ರಿಕೆಟ್ ತಜ್ಞರ ಅಭಿಪ್ರಾಯದಂತೆ, ವೈಭವ್ ಸೂರ್ಯವಂಶಿಯಲ್ಲಿರುವ ಆಕ್ರಮಣಕಾರಿ ಆಟ, ಆತ್ಮವಿಶ್ವಾಸ ಮತ್ತು ಒತ್ತಡದ ಸಂದರ್ಭದಲ್ಲೂ ಉತ್ತಮ ಪ್ರದರ್ಶನ ನೀಡುವ ಸಾಮರ್ಥ್ಯ ಅವರನ್ನು ಭಾರತದ ಮುಂದಿನ ತಲೆಮಾರಿನ ಪ್ರಮುಖ ಬ್ಯಾಟರ್‌ಗಳಲ್ಲಿ ಒಬ್ಬರನ್ನಾಗಿ ರೂಪಿಸುವ ಸಾಧ್ಯತೆ ಇದೆ. ಇದೀಗ ಎಲ್ಲರ ಚಿತ್ತ ಐರ್ಲೆಂಡ್ ಮತ್ತು ಇಂಗ್ಲೆಂಡ್ ವಿರುದ್ಧದ ಟಿ20 ಸರಣಿಯತ್ತ ನೆಟ್ಟಿದ್ದು, ಭಾರತದ ನೀಲಿ ಜೆರ್ಸಿಯಲ್ಲಿ ವೈಭವ್ ಸೂರ್ಯವಂಶಿ ಯಾವ ರೀತಿಯ ಆರಂಭ ಮಾಡಲಿದ್ದಾರೆ ಎಂಬ ಕುತೂಹಲ ಕ್ರಿಕೆಟ್ ಅಭಿಮಾನಿಗಳಲ್ಲಿ ಮನೆ ಮಾಡಿದೆ.

# 18 ವರ್ಷದೊಳಗಿನ ಹಾಕಿ ಏಷ್ಯಾ ಕಪ್ ಸಾಧನೆಗೆ ಮೋದಿ ಶ್ಲಾಘನೆ

**ನವದೆಹಲಿ, ಜೂ.6:** ಜಪಾನ್‌ನ ಕಾಕಮಿಗಹರಾದಲ್ಲಿ ನಡೆದ 18 ವರ್ಷದೊಳಗಿನ ಏಷ್ಯಾ ಕಪ್ 2026ರಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿದ ಭಾರತದ ಪುರುಷರ ಮತ್ತು ಮಹಿಳೆಯರ ಹಾಕಿ ತಂಡಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರು ಶನಿವಾರ ಅಭಿನಂದಿಸಿದ್ದಾರೆ. ದೇಶಕ್ಕೆ ಕೀರ್ತಿ ತಂದ ಯುವ ಆಟಗಾರರನ್ನು ಶ್ಲಾಘಿಸಿದ ಅವರು, ಭಾರತೀಯ ಹಾಕಿಯ ಸಾಮರ್ಥ್ಯ ತಳಮಟ್ಟದಲ್ಲಿ ಬೆಳೆಯುತ್ತಿರುವುದನ್ನು ಇದು ಎತ್ತಿತೋರಿಸುತ್ತದೆ ಎಂದು ಹೇಳಿದ್ದಾರೆ.

ಫೈನಲ್ ಪಂದ್ಯದಲ್ಲಿ ಆತಿಥೇಯ ಜಪಾನ್ ವಿರುದ್ಧ 4–1 ಅಂತರದ ಭರ್ಜರಿ ಜಯ ಸಾಧಿಸುವ ಮೂಲಕ ಭಾರತೀಯ ಪುರುಷರ ಯು–18 ಹಾಕಿ ತಂಡವು ಖಂಡಾಂತರ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡರೆ, ಭಾರತೀಯ ಮಹಿಳಾ ಯು–18 ಹಾಕಿ ತಂಡವು ಮೂರನೇ ಸ್ಥಾನಕ್ಕಾಗಿ ನಡೆದ ಪಂದ್ಯದಲ್ಲಿ ಕೊರಿಯಾವನ್ನು 3–0 ಯಿಂದ ಸೋಲಿಸಿ ಕಂಚಿನ ಪದಕವನ್ನು ತನ್ನದಾಗಿಸಿಕೊಂಡ ಬೆನ್ನಲ್ಲೇ ಪ್ರಧಾನಿಯವರಿಂದ ಈ ಪ್ರಶಂಸೆ ವ್ಯಕ್ತವಾಗಿದೆ.

ಸಾಮಾಜಿಕ ಮಾಧ್ಯಮದಲ್ಲಿ ಹೇಳಿಕೆ ಹಾಕಿರುವ ಮೋದಿ, ಪುರುಷರ ತಂಡದ ಪ್ರಶಸ್ತಿ ವಿಜೇತ ಅಭಿಯಾನವನ್ನು ಶ್ಲಾಘಿಸಿದ್ದು, ಈ ಗೆಲುವು ಆಟಗಾರರ ಪ್ರತಿಭೆ ಮತ್ತು ಯುವ ಭಾರತೀಯರಲ್ಲಿ ಹಾಕಿಗೆ ಹೆಚ್ಚುತ್ತಿರುವ ಜನಪ್ರಿಯತೆ ಎರಡನ್ನೂ ಪ್ರತಿಬಿಂಬಿಸುತ್ತದೆ ಎಂದು ಹೇಳಿದ್ದಾರೆ.



"ನಮ್ಮ ಯುವ ಹಾಕಿ ಆಟಗಾರರಿಂದ ಅದ್ಭುತ ಸಾಧನೆ! ಪುರುಷರ ಯು–18 ಏಷ್ಯಾ ಕಪ್ 2026 ಅನ್ನು ಗೆದ್ದ ಭಾರತೀಯ ಪುರುಷರ ಯು–18 ಹಾಕಿ ತಂಡಕ್ಕೆ ಅಭಿನಂದನೆಗಳು. ತಂಡವು ಪಂದ್ಯಾವಳಿಯುದ್ದಕ್ಕೂ ಅಸಾಧಾರಣ ಕೌಶಲ್ಯ ಮತ್ತು ಸಂಘಟಿತ ಪ್ರದರ್ಶನವನ್ನು ಪ್ರದರ್ಶಿಸಿತು, ಇದು ಫೈನಲ್‌ನಲ್ಲಿ ಸ್ಮರಣೀಯ ಗೆಲುವಿಗೆ ಕಾರಣವಾಯಿತು.

ಈ ಗೆಲುವು ನಮ್ಮ ಯುವಕರಲ್ಲಿ ಹಾಕಿಗೆ ಹೆಚ್ಚುತ್ತಿರುವ ಜನಪ್ರಿಯತೆಯನ್ನು ಪ್ರತಿಬಿಂಬಿಸುತ್ತದೆ. ತಂಡದ ಮುಂದಿನ ಪ್ರಯತ್ನಗಳಿಗೆ ನನ್ನ ಶುಭ ಹಾರೈಕೆಗಳು" ಎಂದು ಪ್ರಧಾನಿ ತಿಳಿಸಿದ್ದಾರೆ.

ಜೂನ್ 6 ರಂದು ಕಾಕಮಿಗಹರಾದ ಕವಾಸಕಿ ಹೆವಿ ಇಂಡಸ್ಟ್ರೀಸ್ ಹಾಕಿ ಸ್ಟೇಡಿಯಂನಲ್ಲಿ ನಡೆದ ಪ್ರಶಸ್ತಿ ಪಂದ್ಯದಲ್ಲಿ ಭಾರತದ ಪುರುಷರ ತಂಡವು ಜಪಾನ್ ವಿರುದ್ಧ ಭರ್ಜರಿ ಪ್ರದರ್ಶನ ನೀಡಿತು. ಆತಿಥೇಯರನ್ನು 4–1 ಗೋಲುಗಳಿಂದ ಮಣಿಸಿ ಟ್ರೋಫಿ ಎತ್ತಿಹಿಡಿಯಿತು. ಪಂದ್ಯಾವಳಿಯುದ್ದಕ್ಕೂ ಆಕ್ರಮಣಕಾರಿ ಶೈಲಿ, ಶಿಸ್ತುಬದ್ಧ ರಕ್ಷಣೆ ಮತ್ತು ಬಲವಾದ ಸಂಘಟಿತ ಕೆಲಸವನ್ನು ಪ್ರದರ್ಶಿಸಿದ ಯುವ ಭಾರತೀಯ ತಂಡದ ಅದ್ಭುತ ಅಭಿಯಾನಕ್ಕೆ ಈ ಗೆಲುವು ಕಿರೀಟ ಪ್ರಾಯವಾಗಿತ್ತು.

ಮಹಿಳಾ ತಂಡವು ಶನಿವಾರ ನಡೆದ ಕಂಚಿನ ಪದಕದ ಪಂದ್ಯದಲ್ಲಿ ಕೊರಿಯಾ ವಿರುದ್ಧ 3–0 ಅಂತರದ ಮನಮುಟ್ಟುವ ಗೆಲುವಿನೊಂದಿಗೆ ತನ್ನ ಅಭಿಯಾನವನ್ನು ಯಶಸ್ವಿಯಾಗಿ ಕೊನೆಗೊಳಿಸಿತು. ಈ ಗೆಲುವು ಭಾರತವು ಪುರುಷರ ಮತ್ತು ಮಹಿಳೆಯರ ಎರಡೂ ವಿಭಾಗಗಳಲ್ಲಿ ಪದಕಗಳೊಂದಿಗೆ ಪಂದ್ಯಾವಳಿಯನ್ನು ಮುಗಿಸುವುದನ್ನು ಖಚಿತಪಡಿಸಿತು. ಇದು ವಯೋಮಿತಿ ಹಾಕಿಯಲ್ಲಿ ದೇಶದ ಬೆಳೆಯುತ್ತಿರುವ ಪ್ರತಿಭೆಯ ಆಳವನ್ನು ಒತ್ತಿಹೇಳುತ್ತದೆ.

ಪ್ರಧಾನಮಂತ್ರಿಯವರ ಅಭಿನಂದನಾ ಸಂದೇಶಗಳು ತಂಡಗಳ ಪ್ರದರ್ಶನದಿಂದ ಮೂಡಿಬಂದ ರಾಷ್ಟ್ರೀಯ ಹೆಮ್ಮೆಯನ್ನು ಪ್ರತಿಬಿಂಬಿಸಿವೆ ಮತ್ತು ದೇಶಾದ್ಯಂತ ಯುವ ಕ್ರೀಡಾಪಟುಗಳಲ್ಲಿ ಹಾಕಿಯ ಹೆಚ್ಚುತ್ತಿರುವ ಜನಪ್ರಿಯತೆಯನ್ನು ಎತ್ತಿ ತೋರಿಸಿವೆ.

ಎರಡೂ ತಂಡಗಳು ಪದಕಗಳೊಂದಿಗೆ ತಾಯ್ನಾಡಿಗೆ ಮರಳುತ್ತಿರುವುದರಿಂದ, ಯು–18 ಏಷ್ಯಾ ಕಪ್ 2026 ರಲ್ಲಿ ಭಾರತದ ಅಭಿಯಾನವು ಕ್ರೀಡೆಗೆ ಬಲವಾದ ಭವಿಷ್ಯವನ್ನು ನಿರ್ಮಿಸಲು ದೇಶವು ನಡೆಸುತ್ತಿರುವ ಪ್ರಯತ್ನಗಳಲ್ಲಿ ಒಂದು ಯಶಸ್ವಿ ಅಧ್ಯಾಯವೆಂದು ವ್ಯಾಪಕವಾಗಿ ಪರಿಗಣಿಸಲ್ಪಟ್ಟಿದೆ.

